ಮೈಸೂರು ಮಿತ್ರ

ಮೈಸೂರು–ಮಂಡ್ಯ–ಚಾಮರಾಜನಗರ–ಕೊಡಗು–ಹಾಸನ

ಬೆಳಗಿನ ಪ್ರಾದೇಶಿಕ ದಿನಪತ್ರಿಕೆ

ಏಪ್ರಿಲ್ 23 ಬುಧವಾರ 2025

ಮೈಸೂರು ಸುದ್ದಿ: ದೂರವಾಣಿ: 2496520/21/26/27/28 ಜಾಹೀರಾತು: 2496522/23
ನಗರ ಕಚೇರಿಗಳು: ಕೆ.ಆರ್.ಸರ್ಕಲ್, ವಿಶ್ವೇಶ್ವರಯ್ಯ ಕಟ್ಟಡ Ph: 2431774, ಡಿ.ದೇವರಾಜ ಅರಸು ರಸ್ತೆ, Ph: 2428695
ಸುದ್ದಿ ಜಾಹೀರಾತಿಗಾಗಿ–ಮಂಡ್ಯ: 8762960325, ಚಾಮರಾಜನಗರ: 9242265657, ಕೊಡಗು: 9731469871

ಸಂಪುಟ: 46 | ಸಂಚಿಕೆ: 8 | ಪುಟಗಳು: 12

ಸುದ್ದಿ, ಫೋಟೋಗೆ: news@mysurumithra.com
ಜಾಹೀರಾತು: ad@mysurumithra.com, website: www.mysurumithra.com

₹4

ಜಮ್ಮು-ಕಾಶ್ಮೀರದಲ್ಲಿ ಉಗ್ರರ ಅಟ್ಟಹಾಸ

ನಿಮ್ಮದು ಯಾವ ಧರ್ಮ ಅಂತಾ ಪ್ರತಿಯೊಬ್ಬರನ್ನ ಕೇಳಿ ಕೇಳಿ ಹಿಂದೂ ಪ್ರವಾಸಿಗರ ಮೇಲೆ ಮಾತ್ರ ಗುಂಡಿನ ದಾಳಿ

ಕರ್ನಾಟಕದ ಇಬ್ಬರು ಸೇರಿ 30ಕ್ಕೂ ಅಧಿಕ ಪ್ರವಾಸಿಗರು ಬಲಿ



ಉಗ್ರರ ವಿರುದ್ಧ ಕಾರ್ಯಾಚರಣೆಗಿಳಿದಿರುವ ಭಾರತೀಯ ಸೇನಾ ಯೋಧರು.

ಪಹಲ್ಗಾಮ್(ಜಮ್ಮು–ಕಾಶ್ಮೀರ್), ಏ.22–ಜಮ್ಮು–ಕಾಶ್ಮೀರದ ಪಹಲ್ಗಾಮ್‌ನಲ್ಲಿ ಉಗ್ರರು ಅತ್ಯಂತ ಘೋರ ಪೈಶಾಚಿಕ ಕೃತ್ಯ ನಡೆಸಿದ್ದಾರೆ. ಅದೂ ಬರೀ ಹಿಂದೂ ಪ್ರವಾಸಿಗರನ್ನು ಗುರಿಯಾಗಿಸಿಕೊಂಡು ನಡೆಸಿದ ಈ ದಾಳಿಯಲ್ಲಿ ಕರ್ನಾಟಕದ ಇಬ್ಬರು ಸೇರಿದಂತೆ 30ಕ್ಕೂ ಅಧಿಕ ಪ್ರವಾಸಿಗರು ಗುಂಡಿಗೆ ಬಲಿಯಾಗಿದ್ದಾರೆ.

ಮಿನಿ ಸ್ವಿಟ್ಜರ್‌ಲ್ಯಾಂಡ್ ಎಂದೇ ಹೆಸರುವಾಸಿಯಾಗಿರುವ ಪಹಲ್ಗಾವ್‌ನ ಬೈಸರನ್ ಕಣಿವೆಯಲ್ಲಿ ಟ್ರೆಕ್ಕಿಂಗ್‌ಗೆ ತೆರಳಿದ್ದ ಪ್ರವಾಸಿಗರ ಮೇಲೆ ಉಗ್ರರು ಇಂದು ಮಧ್ಯಾಹ್ನ 1.30ರ ವೇಳೆಗೆ ನಿಮ್ಮದು ಯಾವ ಧರ್ಮ ಎಂದು ಕೇಳಿ, ಕೆಲವರ ಪ್ಯಾಂಟ್ ಬಿಚ್ಚಿಸಿ ನೋಡಿ ಹಿಂದೂ ಪ್ರವಾಸಿಗರ ಮೇಲೆ ಮಾತ್ರ ಮನಬಂದಂತೆ



ಭರತ್ ಭೂಷಣ್

ಗುಂಡಿನ ದಾಳಿ ನಡೆಸಿದ್ದಾರೆ ಎಂದು ಕೆಲ ಮಾಧ್ಯಮಗಳಲ್ಲಿ ವರದಿಯಾಗಿದೆ.

6 ರಿಂದ 7 ಮಂದಿ ಇದ್ದ ಭಾರಿ ಶಸ್ತ್ರಾಸ್ತ್ರ ಹೊಂದಿದ್ದ ಉಗ್ರರು, ಪ್ರವಾಸಿಗರ ಬಳಿ ಬಂದು ದಾಳಿಗೂ ಮುನ್ನ ನಿಮ್ಮದು ಯಾವ ಧರ್ಮ... ಎಂದು ಪ್ರಶ್ನಿಸಿದ್ದು, ಹಿಂದೂ ಎಂಬುದನ್ನು ಖಚಿತಪಡಿಸಿಕೊಂಡ ಬಳಿಕ ಸಮೀಪದಿಂದಲೇ ಕೇವಲ ಪುರುಷರ ತಲೆಗೆ ಗುಂಡು ಹಾರಿಸಿ ಕೊಂದಿದ್ದಾರೆ. ■ 6ನೇ ಪುಟಕ್ಕೆ



ಕೊಚ್ಚಿಯಲ್ಲಿ ನೌಕಾಪಡೆ ಲೆಫ್ಟಿನೆಂಟ್ ಆಗಿರುವ ವಿನಯ್ ನರ್ವಾಲ್ ಏ.16ರಂದು ವಿವಾಹವಾಗಿದ್ದು, ಹನಿಮೂನ್‌ಗೆ ಬಂದಿದ್ದ ಅವರನ್ನು ಉಗ್ರರು ಬಲಿ ಪಡೆದಿದ್ದಾರೆ. ಅವರ ಶವದ ಪಕ್ಕ ದುಃಖತಪ್ತ ಪತ್ನಿಯನ್ನು ಕಾಣಬಹುದು.

ಮೈಸೂರಿಗರು ಜಮ್ಮು–ಕಾಶ್ಮೀರಕ್ಕೆ ಹೋಗಿದ್ದರೆ ಮಾಹಿತಿ ನೀಡಿ...

ಮೈಸೂರು, ಏ.22– ಮೈಸೂರು ಜಿಲ್ಲೆಯಿಂದ ಜಮ್ಮು–ಕಾಶ್ಮೀರಕ್ಕೆ ಪ್ರವಾಸಕ್ಕೆ ತೆರಳಿ, ಭಯೋತ್ಪಾದಕರ ದಾಳಿ ನಡೆದ ಸ್ಥಳದಲ್ಲಿ ಸಮಸ್ಯೆಗೆ ಸಿಲುಕಿರುವವರು ಅಥವಾ ಸಂಬಂಧಿಸಿದವರು ಜಿಲ್ಲಾ ವಿಪತ್ತು ನಿಯಂತ್ರಣ ಕೊಠಡಿಗೆ (ದೂ.ಸಂ.0821–2423800, 1077) ಕರೆ ಮಾಡಿ ಮಾಹಿತಿ ನೀಡಲು ಜಿಲ್ಲಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.



ದುರ್ಘಟನೆಗೆ ಮುನ್ನ ಮಂಜುನಾಥ ರಾವ್ ಹಾಗೂ ಪತ್ನಿ ಪಲ್ಲವಿ ಜಮ್ಮು–ಕಾಶ್ಮೀರದಲ್ಲಿ ದೋಣಿ ವಿಹಾರ.

ನಿಮ್ಮನ್ನ ಕೊಲ್ಲಲ್ಲ... ಹೋಗಿ ಮೋದಿಗೆ ಹೇಳು...!

ಪಹಲ್ಗಾಮ್, ಏ. 22– ಪಹಲ್ಗಾಮ್‌ನಲ್ಲಿ ಇಂದು ಮಧ್ಯಾಹ್ನ ನಡೆದ ಉಗ್ರರ ಗುಂಡಿನ ದಾಳಿಯ ಭೀಕರತೆಯನ್ನು ಶಿವಮೊಗ್ಗದ ರಿಯಲ್ ಎಸ್ಟೇಟ್ ಉದ್ಯಮಿ ಮಂಜುನಾಥ್ ರಾವ್ ಅವರ ಪತ್ನಿ ಪಲ್ಲವಿ ಬಿಚ್ಚಿಟ್ಟಿದ್ದಾರೆ.

ಏಪ್ರಿಲ್ 19ರಂದು ನಾನು ಹಾಗೂ ನನ್ನ ಪತಿ, ಪುತ್ರ ಜಮ್ಮು–ಕಾಶ್ಮೀರ ಪ್ರವಾಸ ಕೈಗೊಂಡಿದ್ದು, 24ರಂದು ಶಿವಮೊಗ್ಗಕ್ಕೆ ವಾಪಸ್ ಆಗಬೇಕಿತ್ತು. ಇಂದು ಮಧ್ಯಾಹ್ನ ಪಹಲ್ಗಾಮ್‌ನ ಅತೀ ರಮಣೀಯ ಸ್ಥಳ ಬೈಸಾರನ್ ಕಣಿವೆಗೆ ಭೇಟಿ ನೀಡಲು ನಿರ್ಧರಿಸಿದ್ದೆವು. ಅದರಂತೆ ಕುದುರೆಗಳ ಮೂಲಕ ಅತೀ ಕಡಿದಾದ ಈ ಕಣಿವೆ ತಲುಪಿದೆವು. 500ಕ್ಕೂ ಅಧಿಕ ಸಂಖ್ಯೆಯ ಪ್ರವಾಸಿಗರಿದ್ದ ಸ್ಥಳದಲ್ಲಿ ಗುಂಡಿನ ಸದ್ದು ಕೇಳಿತು. ಅದರ ಬಗ್ಗೆ ನಾವು ಅಷ್ಟಾಗಿ ಗಮನಹರಿಸಲಿಲ್ಲ. ಕೆಲವೇ ಕ್ಷಣದಲ್ಲಿ ನಮ್ಮ ಬಳಿ ಬಂದ ಉಗ್ರರು, ನಿಮ್ಮದು ಯಾವ ಧರ್ಮ ಎಂದು ಪ್ರಶ್ನಿಸಿ, ಏಕಾಏಕಿ ನನ್ನ ಪತಿಯ ತಲೆಗೆ ಗುಂಡಿನ ದಾಳಿ ನಡೆಸಿಯೇ ಬಿಟ್ಟ, ತೀವ್ರ ಆಘಾತಕ್ಕೊಳಗಾದ ನಾನು ಮತ್ತು ನನ್ನ ಮಗ ರೋದಿಸುತ್ತಾ, ನಮ್ಮನ್ನೂ ಕೊಂದು ಬಿಡು ಎಂದು ಅಂಗಲಾಚಿದಾಗ, 'ನಿಮ್ಮನ್ನು ಕೊಲ್ಲಲ್ಲ... ಹೋಗಿ ಮೋದಿಗೆ ಹೇಳು....' ಎಂದು ಹೇಳಿ ಅಲ್ಲಿಂದ ಪರಾರಿಯಾದರು. ನನ್ನ ಪಕ್ಕದಲ್ಲಿಯೇ ನಿಂತಿದ್ದ ಒಬ್ಬ ಉಗ್ರ, ನಾವು ಏನೇ ಪ್ರಶ್ನಿಸಿದರೂ. ಯಾವುದಕ್ಕೂ ಉತ್ತರಿಸದೆ ಸ್ಥಳದಿಂದ ಪರಾರಿಯಾದನು. ನಂತರ ಸುತ್ತಮುತ್ತ ಇದ್ದಂತಹ ವ್ಯಾಪಾರಿಗಳು ನಮ್ಮ ನೆರವಿಗೆ ಬಂದರು. ನಾನು, ನನ್ನ ಪತಿಯ ದೇಹವನ್ನು ತೆಗೆದುಕೊಂಡೇ ಶಿವಮೊಗ್ಗಕ್ಕೆ ಬರುವುದು ಎಂದು ತಮ್ಮ ಅಚಲ ನಿರ್ಧಾರವನ್ನು ಮಾಧ್ಯಮದ ಮುಂದೆ ತಿಳಿಸಿದ್ದಾರೆ.

ಪಹಲ್ಗಾಮ್‌ನಲ್ಲಿ ಉಗ್ರರ ಗುಂಡಿನ ದಾಳಿಗೆ ಬಲಿಯಾದ ರಾಜ್ಯದ ಮತ್ತೊಬ್ಬ ಪ್ರವಾಸಿಗ, ಹಾವೇರಿ ಮೂಲದ ಭರತ್ ಭೂಷಣ್. ಇವರು ಬೆಂಗಳೂರಿನಲ್ಲಿ ನೆಲೆಸಿದ್ದು, ಹೆಚ್ಚಿನ ಮಾಹಿತಿ ಲಭ್ಯವಾಗಿಲ್ಲ ಶಿವಮೊಗ್ಗದ ಮಂಜುನಾಥ ರಾವ್ ರಿಯಲ್ ಎಸ್ಟೇಟ್ ಉದ್ಯಮಿಯಾಗಿದ್ದು, ಅವರ ಪತ್ನಿ ಪಲ್ಲವಿ ಮಲ್ನಾಡ್ ಅಡಕೆ ಮಾರ್ಕೆಟಿಂಗ್ ಕೋ–ಆಪರೇಟಿವ್ ಸೊಸೈಟಿ ಲಿಮಿಟೆಡ್‌ನ ಬೀರೂರು ಬ್ರಾಂಚ್‌ನ ಮ್ಯಾನೇಜರ್ ಆಗಿದ್ದಾರೆ. ಮಂಜುನಾಥ್‌ರಾವ್ ಸಾವಿನ ಸುದ್ದಿ ತಿಳಿಯುತ್ತಿದ್ದಂತೆ ಶಿವಮೊಗ್ಗದ ಅವರ ನಿವಾಸದಲ್ಲಿ ಕುಟುಂಬದವರ ಆಕ್ರಂದನ ಮುಗಿಲುಮುಟ್ಟಿದೆ. ಇವರ ವಿಜಯನಗರದ ನಿವಾಸಕ್ಕೆ ಸಂಸದ ರಾಘವೇಂದ್ರ ಸೇರಿದಂತೆ ಹಲವು ಗಣ್ಯರು ಭೇಟಿ ನೀಡಿ ಕುಟುಂಬ ಸದಸ್ಯರಿಗೆ ಸಾಂತ್ವನ ಹೇಳುತ್ತಿದ್ದಾರೆ.

ಯಾರನ್ನೂ ಬಿಡುವ ಪ್ರಶ್ನೆಯೇ ಇಲ್ಲ

ಪ್ರಧಾನಿ ಮೋದಿ ಉಗ್ರರ ಸಂಹರಿಸುವ ಶಪಥ

ನವದೆಹಲಿ, ಏ.22–ಪಹಲ್ಗಾವ್‌ನಲ್ಲಿ ಉಗ್ರರು ಗುಂಡಿನ ದಾಳಿ ನಡೆಸಿ 30ಕ್ಕೂ ಅಧಿಕ ಪ್ರವಾಸಿಗರನ್ನು ಬಲಿ ಪಡೆದಿರುವುದನ್ನು



ಖಂಡಿಸಿರುವ ಪ್ರಧಾನ ಮಂತ್ರಿ ನರೇಂದ್ರ ಮೋದಿ, ಯಾರನ್ನೂ ಸುಮ್ಮನೇ ಬಿಡುವ ಪ್ರಶ್ನೆಯೇ ಇಲ್ಲ ಎಂದು ಅಬ್ಬರಿಸಿದ್ದಾರೆ.

ಸೌದಿ–ಅರೇಬಿಯಾ ಪ್ರವಾಸದಲ್ಲಿರುವ ಪ್ರಧಾನಿ ಮೋದಿ, ಘಟನೆ ಮಾಹಿತಿ ದೊರಕುತ್ತಿದ್ದಂತೆ ಗೃಹ ಸಚಿವ ಅಮಿತ್ ಶಾ ಅವರಿಗೆ ತಕ್ಷಣವೇ ಘಟನಾ ಸ್ಥಳಕ್ಕೆ ತೆರಳುವಂತೆ ಸೂಚನೆ ನೀಡಿದ್ದಾರೆ.

ಘಟನೆಯನ್ನು ಖಂಡಿಸಿ ಟ್ವೀಟ್ ಮಾಡಿರುವ ಪ್ರಧಾನಿ, ಈ ಪೈಶಾಚಿಕ ಕೃತ್ಯ ನಡೆಸಿದ ಯಾರನ್ನೂ ಕೂಡ ಸುಮ್ಮನೆ ಬಿಡುವುದಿಲ್ಲ. ಎಲ್ಲರನ್ನೂ ಕಟಕಟೆಗೆ ತಂದು ನಿಲ್ಲಿಸುತ್ತೇವೆ. ಘಟನೆಯನ್ನು ನಾನು ಬಲವಾಗಿ ಖಂಡಿಸುತ್ತೇನೆ. ತಮ್ಮ ಪ್ರೀತಿ–ಪಾತ್ರರನ್ನು ಕಳೆದುಕೊಂಡವರಿಗೆ ಸಂತಾಪ ಸೂಚಿಸುತ್ತೇನೆ. ಗಾಯಗೊಂಡವರು ಆದಷ್ಟು ಬೇಗ ಚೇತರಿಸಿಕೊಳ್ಳಲಿ ಎಂದು ಪ್ರಾರ್ಥಿಸುತ್ತೇನೆ. ಬಾಧಿತರಿಗೆ ಸಾಧ್ಯವಿರುವ ಎಲ್ಲಾ ಸಹಾಯವನ್ನು ಒದಗಿಸಲಾಗುತ್ತಿದೆ. ಈ ಹೇಯ ಕೃತ್ಯದ ಹಿಂದಿರುವವರನ್ನು ನ್ಯಾಯಾಲಯದ ಕಟಕಟಗೆ ತರಲಾಗುವುದು. ಅವರನ್ನು ಬಿಡುವುದು ಸಾಧ್ಯವೇ ಇಲ್ಲ. ಅವರ ದುಷ್ಟ ಕಾರ್ಯಸೂಚಿ ಎಂದಿಗೂ ಯಶಸ್ವಿಯಾಗುವುದಿಲ್ಲ. ಭಯೋತ್ಪಾನೆಯ ವಿರುದ್ಧ ಹೋರಾಡುವ ನಮ್ಮ ಸಂಕಲ್ಪ ಅಚಲ ಹಾಗೂ ಅದು ಮತ್ತಷ್ಟು ಬಲಗೊಳ್ಳುತ್ತದೆ ಎಂದು ಬರೆದಿದ್ದಾರೆ.

ಪ್ರಧಾನಿ ವಿದೇಶಿ ಪ್ರವಾಸ ಮೊಟಕು; ಮಧ್ಯರಾತ್ರಿ ಸ್ವದೇಶಕ್ಕೆ ವಾಪಸ್

ನವದೆಹಲಿ, ಏ.22– ಸೌದಿ ಅರೇಬಿಯಾ ಪ್ರವಾಸದಲ್ಲಿರುವ ಪ್ರಧಾನಮಂತ್ರಿ ನರೇಂದ್ರ ಮೋದಿ, ಜಮ್ಮು–ಕಾಶ್ಮೀರದ ಪಹಲ್ಗಾಮ್‌ನಲ್ಲಿ ಪ್ರವಾಸಿಗರ ಮೇಲೆ ಉಗ್ರರ ದಾಳಿ ಹಿನ್ನೆಲೆಯಲ್ಲಿ ತಮ್ಮ ಪ್ರವಾಸವನ್ನು ಮೊಟಕುಗೊಳಿಸಿ ಇಂದು ರಾತ್ರಿ ನವದೆಹಲಿಗೆ ವಾಪಸ್ಸಾಗುತ್ತಿದ್ದಾರೆ ಎಂದು ಸುದ್ದಿ ಸಂಸ್ಥೆಗಳು ವರದಿ ಮಾಡಿವೆ.

ಇದೊಂದು ಅತ್ಯಂತ ಸಂದಿಗ್ಧ ಹಾಗೂ ಆಘಾತಕಾರಿ ವಿಷಯವಾಗಿದ್ದು, ಇಂತಹ ಸಂದರ್ಭದಲ್ಲಿ ದೇಶದ ಪ್ರಧಾನಿ ವಿದೇಶಿ ಪ್ರವಾಸ ಮುಂದುವರೆಸುವುದು ಔಚಿತ್ಯವಲ್ಲ ಎಂಬ ಪರಿಸ್ಥಿತಿಯನ್ನು ಮನವರಿಕೆ ಮಾಡಿಕೊಂಡು ಪ್ರಧಾನಿ ಮೋದಿ, ಇಂದು ಮಧ್ಯರಾತ್ರಿ ಸ್ವದೇಶಕ್ಕೆ ವಾಪಸ್ಸಾಗುತ್ತಿದ್ದಾರೆ. ನಾಳೆ ಉನ್ನತ ಮಟ್ಟದ ಸಭೆ ಕರೆದು ಉಗ್ರರ ಮಟ್ಟಹಾಕಲು ಕಾರ್ಯತಂತ್ರ ರೂಪಿಸುವ ಸಾಧ್ಯತೆಗಳಿವೆ ಎಂದು ಮೂಲಗಳು ಅಭಿಪ್ರಾಯಪಟ್ಟಿವೆ.

ನಿವೃತ್ತ ಡಿಜಿಪಿ ಓಂ ಪ್ರಕಾಶ್ ಹತ್ಯೆ: ಪತ್ನಿ ಪಲ್ಲವಿ ತಪ್ಪೊಪ್ಪಿಗೆ

ಮುಂದುವರಿದ ಸಿಸಿಬಿ ತನಿಖೆ; ಜಿ.ಪರಮೇಶ್ವರ್

ಬೆಂಗಳೂರು, ಏ.22– ರಾಜ್ಯದ ನಿವೃತ್ತ ಪೊಲೀಸ್ ಮಹಾನಿರ್ದೇಶಕ (DGP) ಓಂ ಪ್ರಕಾಶ್ ಅವರ ಹತ್ಯೆಯ ಹಿಂದಿನ ಉದ್ದೇಶ ಮತ್ತು ಇತರ ವಿವರಗಳನ್ನು ಕೇಂದ್ರ ಅಪರಾಧ ವಿಭಾಗ (ಸಿಸಿಬಿ) ತನಿಖೆ ನಡೆಸುತ್ತಿದೆ ಎಂದು ಗೃಹ ಸಚಿವ ಜಿ. ಪರಮೇಶ್ವರ ಮಂಗಳವಾರ ಹೇಳಿದ್ದಾರೆ.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕೊಲೆಗೆ ಸಂಬಂಧಿಸಿದಂತೆ ಅವರ ಪತ್ನಿ ಪಲ್ಲವಿಯನ್ನು ಪೊಲೀಸರು ಈಗಾಗಲೇ ಬಂಧಿಸಿದ್ದಾರೆ ಮತ್ತು ಅವರು ಅಪರಾಧವನ್ನು ಒಪ್ಪಿ ಕೊಂಡಿದ್ದಾರೆ ಎಂದು. ತನಿಖೆಯನ್ನು ಸಿಸಿಬಿಗೆ ಹಸ್ತಾಂತರಿಸಲಾಗಿದೆ. ಏಕೆಂದರೆ, ಅವರು (ಓಂ ಪ್ರಕಾಶ್) ಹಿರಿಯ ಅಧಿಕಾರಿಯಾಗಿದ್ದರು. ಸದ್ಯ ತನಿಖೆ ನಡೆಯುತ್ತಿದೆ ಎಂದು ಪರಮೇಶ್ವರ ಪ್ರಶ್ನೆಯೊಂದಕ್ಕೆ ಉತ್ತರಿಸಿದರು.



ಪಲ್ಲವಿ

ಮೊಬೈಲ್ ಫೋನ್‌ನಿಂದ ಯಾವುದೇ ಮಾಹಿತಿ ಲಭ್ಯವಾಗಿದೆಯೇ ಎಂದು ಕೇಳಿದಾಗ, ನನಗೆ ಗೊತ್ತಿಲ್ಲ. ತನಿಖೆಯ ಸಮಯದಲ್ಲಿ ಆ ಎಲ್ಲಾ ವಿಷಯಗಳನ್ನು ಪರಿಶೀಲಿಸಲಾಗುವುದು ಎಂದು ಹೇಳಿದರು. 1981ರ ಬ್ಯಾಚ್ ಐಪಿಎಸ್ ಅಧಿಕಾರಿಯಾಗಿದ್ದ, ಬಿಹಾರ ಮೂಲದವ ರಾದ ಕರ್ನಾಟಕದ ಮಾಜಿ ಪೊಲೀಸ್ ಮುಖ್ಯಸ್ಥರ ಮೃತದೇಹ ಭಾನುವಾರ ನಗರದ ಎಚ್‌ಎಸ್‌ಆರ್ ಲೇಔಟ್‌ನಲ್ಲಿರುವ ಅವರ ಮೂರು ಅಂತಸ್ತಿನ ಮನೆಯ ನೆಲ ಮಹಡಿಯಲ್ಲಿ ರಕ್ತದ ಮಡುವಿನಲ್ಲಿ ಪತ್ತೆಯಾಗಿತ್ತು. ■ 6ನೇ ಪುಟಕ್ಕೆ

ವರಿಷ್ಠರಿಗೇ ರಾಜಣ್ಣ ಠಕ್ಕರ್!: ಮೇ 13ಕ್ಕೆ ಬೃಹತ್ ಸಮಾವೇಶ

- ಪ್ರಸಕ್ತ ರಾಜಕೀಯ ಬೆಳವಣಿಗೆ ಹಿನ್ನೆಲೆಯಲ್ಲಿ ತೀವ್ರ ಕುತೂಹಲ
- ಹನಿಟ್ರ್ಯಾಪ್ ಪ್ರಕರಣದಲ್ಲಿ ವರಿಷ್ಠರಿಂದ ಮುಜುಗರಕ್ಕೀಡಾಗಿದ್ದ ರಾಜಣ್ಣ

ಬೆಂಗಳೂರು, ಏ.22(ಕೆಎಂಶಿ)– ಕಾಂಗ್ರೆಸ್ ವರಿಷ್ಠರಿಗೇ ಠಕ್ಕರ್ ಕೊಡಲು ಮುಂದಾಗಿರುವ ಸಹಕಾರಿ ಸಚಿವ ಕೆ.ಎನ್. ರಾಜಣ್ಣ, ಮೇ 13ರಂದು ವಾಲ್ಮೀಕಿ ಸಮುದಾಯ ಹಾಗೂ ತಮ್ಮ ಬೆಂಬಲಿಗರ ಬೃಹತ್ ಸಮಾವೇಶ ನಡೆಸುತ್ತಿದ್ದಾರೆ.

ಈ ಹಿಂದೆ ಮುಖ್ಯಮಂತ್ರಿ ಸಿದ್ದರಾಮಯ್ಯ ಬೆಂಬಲಿತ ಪರಿಶಿಷ್ಟ ಜಾತಿ, ವರ್ಗದ ಸಚಿವರು ತಮ್ಮ ಸಮುದಾಯದ ಬೃಹತ್ ಸಮಾವೇಶ ನಡೆಸಲು ಮುಂದಾಗಿದ್ದರು.

ಆದರೆ, ಕೆಪಿಸಿಸಿ ಅಧ್ಯಕ್ಷರೂ ಆದ ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಸಮುದಾಯದ ಸಮಾವೇಶಗಳನ್ನು ಪಕ್ಷದ ಚೌಕಟ್ಟಿನಿಂದ ಹೊರಗೆ ನಮ್ಮವರೇ ಮಾಡಿದರೆ, ಸಾರ್ವಜನಿಕವಾಗಿ ತಪ್ಪು ಸಂದೇಶ ಹೋಗುತ್ತದೆ ಎಂಬ ಕಾರಣ ನೀಡಿ ವರಿಷ್ಠರ ಮೂಲಕ ತಡೆದರು. ನಂತರ ರಾಜಣ್ಣ ತಮ್ಮ ಸಮುದಾಯದ ಮಠಾಧೀಶರ ಮೂಲಕ ಸಮಾವೇಶ ಮಾಡಲು ಚಿಂತನೆ ನಡೆಸಿದ್ದರಾದರೂ ಅದೂ ಸಹ ಸಾಧ್ಯವಾಗಲಿಲ್ಲ.

ಈ ಮಧ್ಯೆ ಹನಿಟ್ರ್ಯಾಪ್ ಪ್ರಕರಣ ರಾಜ್ಯ ಮತ್ತು ರಾಷ್ಟ್ರ ಮಟ್ಟದಲ್ಲಿ ದೊಡ್ಡ ಸದ್ದು ಮಾಡಿ



ರಾಜಣ್ಣ ವಿರುದ್ಧ ವರಿಷ್ಠರು ಗರಂ ಆದರು. ಒಂದು ಹಂತದಲ್ಲಿ ರಾಜಣ್ಣ ಅವರನ್ನು ಸಂಪುಟದಿಂದ ವಜಾ ಮಾಡಿ ಶಿಸ್ತು ಕ್ರಮ ಜರುಗಿಸುವಂತೆಯೂ ವರಿಷ್ಠರಿಂದ ರಾಜ್ಯ ನಾಯಕರಿಗೆ ಸಂದೇಶ ರವಾನೆಯಾಗಿತ್ತು.

ಮುಖ್ಯಮಂತ್ರಿ ಅವರು ರಾಜಣ್ಣ ಬೆನ್ನಿಗೆ ನಿಂತಿದ್ದರಿಂದ ತಾತ್ಕಾಲಿಕವಾಗಿ ಶಿಸ್ತು ಕ್ರಮಕ್ಕೆ ತಡೆಯಾಯಿತು. ಈ ಎಲ್ಲಾ ಬೆಳವಣಿಗೆ ಹಾಗೂ ಹನಿಟ್ರ್ಯಾಪ್ ಪ್ರಕರಣ ಮರೆಮಾಚಲು ಹಾಗೂ ತಮ್ಮ ಶಕ್ತಿ ಪ್ರದರ್ಶನ ಮಾಡುವ ಉದ್ದೇಶದಿಂದ ರಾಜಣ್ಣ ಬೃಹತ್ ಸಮಾವೇಶಕ್ಕೆ ಮತ್ತೆ ಸಜ್ಜಾಗಿದ್ದಾರೆ.

ಮೇ 13ರಂದು ರಾಜಣ್ಣ ಅವರಿಗೆ 75 ವರ್ಷ ತುಂಬಲಿದೆ. ಅದನ್ನೇ ಮುಂದಿಟ್ಟುಕೊಂಡು ಅಭಿಮಾನಿಗಳು ಮತ್ತು ಸಮುದಾಯದ ಮುಖಂಡರ ನಾಯಕತ್ವದಲ್ಲಿ ತುಮಕೂರಿನಲ್ಲಿ ಬೃಹತ್ ಅಭಿನಂದನಾ ಸಮಾವೇಶ ನಡೆಯಲಿದೆ. ಈ ಸಮಾವೇಶದಲ್ಲಿ ಪಾಲ್ಗೊಳ್ಳಲು ಮಲ್ಲಿಕಾರ್ಜುನ ಖರ್ಗೆ ಅವರಿಗೆ ಮಾತ್ರ ಆಹ್ವಾನ ನೀಡಿದ್ದಾರೆ. ಉಳಿದಂತೆ ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಸಚಿವ ಹಾಗೂ ಶಾಸಕರಿಗೂ ಆಹ್ವಾನ ನೀಡಲಾಗಿದೆ.

ರಾಜಣ್ಣ ಪುತ್ರ ಹಾಗೂ ವಿಧಾನಪರಿಷತ್ ಸದಸ್ಯ ರಾಜೇಂದ್ರ, ಸಮಾವೇಶದ ಉಸ್ತುವಾರಿ ವಹಿಸಿಕೊಂಡಿದ್ದು, ಸಮುದಾಯದ ಸುಮಾರು 2 ಲಕ್ಷಕ್ಕೂ ಹೆಚ್ಚು ಮಂದಿಯನ್ನು ಸೇರಿಸುವ ಗುರಿ ಹೊಂದಿದ್ದಾರೆ. ರಾಜಣ್ಣ ಹುಟ್ಟುಹಬ್ಬದ ಅಮೃತ ಮಹೋತ್ಸವ ನೆಪದಲ್ಲಿ ಪರಿಶಿಷ್ಟ ಜಾತಿ, ವರ್ಗ ಸಮುದಾಯದ ಬೃಹತ್ ಸಮಾವೇಶ ನಡೆಸಲು ಮುಂದಾಗಿದ್ದಾರೆ.

ಸಿಇಟಿ ವೇಳೆ ಜನಿವಾರ ತೆಗೆಸಿದ್ದನ್ನು ಖಂಡಿಸಿ ಹವ್ಯಕ ಮಹಾಮಂಡಲದಿಂದ ಡಿಸಿಗೆ ಮನವಿ



ಸಿಇಟಿ ವೇಳೆ ಬ್ರಾಹ್ಮಣ ವಿದ್ಯಾರ್ಥಿಗಳ ಜನಿವಾರ ತೆಗೆಸಿದ್ದನ್ನು ಖಂಡಿಸಿ, ಶ್ರೀರಾಮಚಂದ್ರಾಪುರ ಮಠದ ಮೈಸೂರು ವಲಯ ಹವ್ಯಕ ಮಹಾಮಂಡಲದ ವತಿಯಿಂದ ಮೈಸೂರು ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ಮನವಿ ಸಲ್ಲಿಸಲಾಯಿತು.

ಮೈಸೂರು,ಏ.22–ಸಾಮಾನ್ಯ ಪ್ರವೇಶ ಪರೀಕ್ಷಾ ವೇಳೆ ಬ್ರಾಹ್ಮಣ ವಿದ್ಯಾರ್ಥಿಗಳ ಜನಿವಾರ ತೆಗೆಸಿದ ಪ್ರಸಂಗ ರಾಜ್ಯಾದ್ಯಂತ ಅನೇಕ ಕಡೆಗಳಲ್ಲಿ ನಡೆದಿದೆ. ಅಧಿಕಾರಿಗಳ ಈ ದುಷ್ಕೃತ್ಯವನ್ನು ಖಂಡಿಸಿ, ಶ್ರೀರಾಮಚಂದ್ರಾಪುರ ಮಠದ ಮೈಸೂರು ವಲಯ ಹವ್ಯಕ ಮಹಾಮಂಡಲದ ವತಿಯಿಂದ ಮೈಸೂರು ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ಮನವಿ ಸಲ್ಲಿಸಲಾಯಿತು.

ಜನಿವಾರ ತೆಗೆಸಿರುವುದರ ಹಿಂದೆ ಹಿಂದೂ ವಿರೋಧಿ ಮನಸ್ಥಿತಿ, ಅದರಲ್ಲಿಯೂ ಬ್ರಾಹ್ಮಣರನ್ನು ಜಾತಿ ಆಧಾರಿತವಾಗಿ ದ್ವೇಷಿಸುವ, ಅಪಮಾನ ಮಾಡುವ ಉದ್ದೇಶವಿದೆ. ರಾಜ್ಯ ಸರ್ಕಾರ ಈಗ ಕೆಲವರ ಮೇಲೆ ಕ್ರಮ ಕೈಗೊಂಡಿರುವುದಾಗಿ ತಿಳಿಸಿದೆ. ಆದರೆ, ಅಧಿಕಾರಿಗಳಿಗೆ ಈ ರೀತಿ ನಿರ್ದೇಶನ ನೀಡಿದವರು ಯಾರು ಎಂಬುದು ಸಾರ್ವಜನಿಕರಿಗೆ ತಿಳಿಯಬೇಕಿದೆ. ಜೊತೆಗೆ ಅವರ ವಿರುದ್ಧವೂ ಕ್ರಮವಾಗಬೇಕಿದೆ.

ಭಾರತ, ತನ್ನದೇ ಸಂವಿಧಾನ ಹೊಂದಿದೆ. ಇಲ್ಲಿ ಎಲ್ಲರೂ ಸಮಾನರು. ಜನಿವಾರ, ಮಾಂಗಲ್ಯ, ಕುಂಕುಮ ಧರಿಸುವುದು ಧಾರ್ಮಿಕ ಆಚರಣೆ. ಸಂವಿಧಾನದತ್ತ ಹಕ್ಕು ಎಂಬುದನ್ನು ಬ್ರಾಹ್ಮಣರನ್ನು ಕೇವಲ ಜಾತಿ ಆಧಾರಿತವಾಗಿ ದ್ವೇಷಿಸುವ ಜನ ಅರಿಯಬೇಕಿದೆ. ಪರೀಕ್ಷೆ ವೇಳೆ ಅಪಮಾನ ಮಾಡಿ, ಮಾನಸಿಕ ಹಿಂಸೆ ನೀಡಲಾಗಿದೆ ರಾಜ್ಯ ಸರ್ಕಾರ ಕಠಿಣ ಕ್ರಮಕ್ಕೆ ಮುಂದಾದರೆ ಇನ್ನು ಯಾವುದೇ ಅಧಿಕಾರಿಗಳು ಜಾತಿ ಆಧಾರಿತವಾಗಿ ಶೋಷಿಸಲು ಮುಂದಾಗುವುದಿಲ್ಲ ಎಂದು ಒತ್ತಾಯಿಸಲಾಯಿತು.

ಅಖಿಲ ಕರ್ನಾಟಕ ಬ್ರಾಹ್ಮಣ ಮಹಾಸಭಾ ರಾಜ್ಯ ಉಪಾಧ್ಯಕ್ಷ ನಂ.ಶ್ರೀಕಂಠ ಕುಮಾರ್, ಹವ್ಯಕ ಮಹಾಮಂಡಲದ ಮೈಸೂರು ವಲಯದ ಉಪಾಧ್ಯಕ್ಷ ಶಂಕರ ನಾರಾಯಣ ಶಾಸ್ತ್ರಿ, ಪ್ರಧಾನ ಕಾರ್ಯದರ್ಶಿ ರಾಕೇಶ್ ಭಟ್, ಸಂಘಟನಾ ಕಾರ್ಯದರ್ಶಿ ಸಂಪ ಕೃಷ್ಣಮೂರ್ತಿ, ಹಿರಿಯ ಮುಖಂಡರಾದ ಬೇತ ಕೃಷ್ಣಭಟ್, ಕೃಷ್ಣ ಹೆಗಡೆ, ಗಿರಿಜಾ ಶಂಕರ್, ವಿಘ್ನೇಶ್ವರ ಭಟ್, ನಾಗರಾಜ್ ಹೆಗಡೆ, ಹಿರಿಯಣ್ಣ, ಶ್ರೀನಿವಾಸ್‌ಪ್ರಸಾದ್, ರಾಘವೇಂದ್ರ, ಸಂಜಯ್ ಪ್ರಸನ್ನ, ನಾರಾಯಣ ಶರ್ಮಾ, ಕೊಕ್ಕಡ ವೆಂಕಟರಮಣ ಭಟ್, ಮಾತೃ ಪ್ರಧಾನರಾದ ಶ್ರೀಕಲಾ, ಸುಜಾತ, ಹೇಮಲತಾ, ರಾಧಾ ಮುತಾಲಿಕ್, ಅನುಪಮಾ, ಬಾಲಕೃಷ್ಣ, ಗಣಪತಿ, ಶ್ರೀಧರ ಹೆಗಡೆ, ವಿಕಾಸ್, ಗಣೇಶ್ ಮತ್ತಿತರರು ಉಪಸ್ಥಿತರಿದ್ದರು.

ಮರಗಳ ಬುಡದ ಸುತ್ತ ಹಾಕಿದ್ದ ಸಿಮೆಂಟ್ ಗಾರೆ, ಕಾಂಕ್ರೀಟ್ ಬ್ಲಾಕ್, ಡಾಂಬರ್ ತೆರವು

ರೈತ ಸಂಘ, ಹಸಿರು ಸೇನೆಯಿಂದ ವಿನೂತನ ರೀತಿ ವಿಶ್ವ ಭೂ ದಿನಾಚರಣೆ

ಮೈಸೂರು, ಏ.22(ಬಿಎಲ್‌ಯು)– ಮರಗಳ ಬುಡದ ಸುತ್ತ ಹಾಕಲಾಗಿದ್ದ ಸಿಮೆಂಟ್ ಕಾಂಕ್ರೀಟ್ ಬ್ಲಾಕ್ ಹಾಗೂ ಡಾಂಬರ್ ಅನ್ನು ತೆರವು ಮಾಡುವ ಮೂಲಕ ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆಯು ವಿಶ್ವ ಭೂ ದಿನ ಆಚರಿಸಿತು.

ಮೈಸೂರಿನ ಸಿದ್ಧಾರ್ಥನಗರದ ಜಿಲ್ಲಾಧಿಕಾರಿ ಕಚೇರಿ ಬಳಿ ಮರಗಳ ಬುಡವನ್ನು ಆವರಿಸಿಕೊಂಡಿದ್ದ ಸಿಮೆಂಟ್ ಗಾರೆ, ಕಾಂಕ್ರೀಟ್ ಬ್ಲಾಕ್ ಹಾಗೂ ಡಾಂಬರ್ ಅನ್ನು ತೆರವುಗೊಳಿಸಿ, ಮರಗಳ ಅಡಿಯನ್ನು ಮುಕ್ತಗೊಳಿಸಲಾಯಿತು.

ಮೈಸೂರು ಪಾಲಿಕೆ ಇನ್ನು ಮುಂದೆ ರಸ್ತೆಗಳ ಡಾಂಬರೀಕರಣ ಹಾಗೂ ಕಾಂಕ್ರೀಟ್ ರಸ್ತೆ ನಿರ್ಮಿಸುವ ಸಂದರ್ಭದಲ್ಲಿ ಮರಗಳ ಸುತ್ತ ಎರಡರಿಂದ ಮೂರು ಅಡಿ ಜಾಗ ಬಿಡಬೇಕು. ಇದರಿಂದ ಮರಗಳ ಬುಡಕ್ಕೆ ಮಳೆ ನೀರು ತಲುಪಿ, ಅವುಗಳು ಹೆಚ್ಚು ಸಮೃದ್ಧವಾಗಿ ಬೆಳವಣಿಗೆಯಾಗುತ್ತವೆ ಎಂದು ಸಂದೇಶ ಸಾರಲಾಯಿತು.

ಮಳೆಗಾಲ ಆರಂಭವಾಗುತ್ತಿದ್ದು, ಇನ್ನು 15 ದಿನದಲ್ಲಿ ನಗರಪಾಲಿಕೆಯವರು ಮರಗಳ ಬುಡ ಮುಚ್ಚಿರುವ ಸಿಮೆಂಟ್ ಗಾರೆ, ಕಾಂಕ್ರೀಟ್ ಬ್ಲಾಕ್ ಹಾಗೂ ಡಾಂಬರ್ ಅನ್ನು ತೆರವು ಮಾಡಬೇಕು. ಇಲ್ಲದಿದ್ದರೆ ಸಿದ್ಧಾರ್ಥನಗರದಲ್ಲಿ ಪ್ರತಿ ಭಾನುವಾರ ಬೆಳಿಗ್ಗೆ 6.30ರಿಂದ 8.30ರವರೆಗೆ ಮರಗಳನ್ನು ಆವರಿಸಿರುವ ಗಾರೆ, ಡಾಂಬರ್ ಅನ್ನು ನಾವೇ ತೆರವು ಮಾಡುವುದಾಗಿ ಹೇಳಿದರು.

ಮೈಸೂರಿನ ಮರಗಳ ಬುಡದ ಸುತ್ತ ಇರುವ ಇಂತಹ ಅಡೆತಡೆಯನ್ನು ತೆರವು ಮಾಡುವ ಕಾರ್ಯಕ್ಕೆ ಬಡಾವಣೆಯ ಜನರೇ ಮುಂದಾಗಬೇಕು. ಇದರಿಂದ ಹಳೆಯ ಮರಗಳನ್ನು ಉಳಿಸಿ ಪರಿಸರ ಸಂರಕ್ಷಿಸಬಹುದು ಎಂದು ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆಯ ರಾಜ್ಯ ಕಾರ್ಯದರ್ಶಿ ಮಂಜು ಕಿರಣ್ ಮನವಿ ಮಾಡಿದರು.

ರೈತ ಮುಖಂಡರಾದ ಸಿದ್ದಲಿಂಗಪುರ ಮೋಹನ್ ಕುಮಾರ್, ಗಳಿಗರಹುಂಡಿಯ ವೆಂಕಟೇಶ್, ಸಿದ್ದಲಿಂಗಪುರ ಯುವಶಕ್ತಿ ಪಡೆಯ ಕಾರ್ತಿಕ್, ಕಿರಣ್, ಶಿವು, ಮಾಲಿಂಗ, ಅಭಿಷೇಕ್, ಶಶಾಂಕ್, ನಾಗೇಂದ್ರ, ಹಿನಕಲ್ ಮೋಹನ್ ಹಾಗೂ ಪರಿಸರ ಬಳಗದಿಂದ ಶೈಲಜೇಶ್, ಲೀಲಾ ಶಿವಕುಮಾರ್, ಕಾವೇರಮ್ಮ ಹಾಜರಿದ್ದರು.



ಮೈಸೂರಿನ ಸಿದ್ಧಾರ್ಥನಗರದ ಜಿಲ್ಲಾಧಿಕಾರಿ ಕಚೇರಿ ಬಳಿ ಮರಗಳ ಬುಡದ ಸುತ್ತ ಇದ್ದ ಸಿಮೆಂಟ್ ಗಾರೆ, ಕಾಂಕ್ರೀಟ್ ಬ್ಲಾಕ್ ಹಾಗೂ ಡಾಂಬರ್ ಅನ್ನು ತೆರವು ಮಾಡುವ ಮೂಲಕ ರೈತ ಸಂಘ ಹಾಗೂ ಹಸಿರು ಸೇನೆ, ವಿಶ್ವ ಭೂ ದಿನವನ್ನು ವಿಶಿಷ್ಟ ರೀತಿ ಆಚರಿಸಲಾಯಿತು.

ಕನ್ನಡ ಕ್ರೈಸ್ತರ ರಕ್ಷಣಾ ವೇದಿಕೆಯಿಂದ ರಕ್ತದಾನ ಶಿಬಿರ



ಮೈಸೂರು ಜಿಲ್ಲೆ ಕನ್ನಡ ಕ್ರೈಸ್ತರ ರಕ್ಷಣಾ ವೇದಿಕೆಯಿಂದ ರಕ್ತದಾನ ಶಿಬಿರ ನಡೆಯಿತು.

ಮೈಸೂರು, ಏ.22–ಮೈಸೂರು ಜಿಲ್ಲೆ ಕನ್ನಡ ಕ್ರೈಸ್ತರ ರಕ್ಷಣಾ ವೇದಿಕೆಯಿಂದ ಮೈಸೂರಿನ ಜೆ.ಪಿ.ನಗರದ ಕೊನೆ ಬಸ್ ನಿಲ್ದಾಣದ ಎನ್.ಎಸ್.ಡಿ ಶಾಲೆಯಲ್ಲಿ ಬೃಹತ್ ರಕ್ತದಾನ ಶಿಬಿರ ಆಯೋಜಿಸಲಾಗಿತ್ತು.

ಶಿಬಿರವನ್ನು ಮಾಜಿ ಶಾಸಕ ಎಂ.ಕೆ ಸೋಮಶೇಖರ್ ಉದ್ಘಾಟಿಸಿದರು. ಈ ವೇಳೆ ಸಂಘಟಕರಾದ ಜೋಸೆಫ್ ಸ್ಟೀಫನ್, ಟೋನಿ ಪಿಯರ್ಸನ್, ಸುಜಿತ್ ಕುಮಾರ್, ಅಂತೋಣಿ ದಾಸ್, ನಾರಾಯಣ್, ಮೆಸೇಕ್, ರವಿ, ಮನೋಜ್, ಸಿಂಗರ್ ಬರ್ನಾಡ್, ರೇಜಿ ಪಾರ್ಲ, ರವಿರಾಜ್,ಪ್ಲಾಸ್ಟರ್ ಜಯಕುಮಾರ್ ದುಬಾಲ, ಜಗನ್ನಾಥ ಭೋವಿ, ಆಶ್ರಯ ಸಮಿತಿ ಸದಸ್ಯರಾದ ಸೋಮು ಕುರುಬಾರಳ್ಳಿ, ಗುಣಶೇಖರ್, ಕೃಷ್ಣ ರಾಜೇಂದ್ರ ಆಸ್ಪತ್ರೆಯ ರಕ್ತನಿಧಿ ಕೇಂದ್ರದ ಮುಖ್ಯಸ್ಥರಾದ ಡಾ.ಕುಸುಮಾ, ಡಾ.ಅಮ್ಮು, ದಾದಿಯರಾದ ಸವಿತಾ, ತಾರಾ ಮತ್ತಿತರರು ಉಪಸ್ಥಿತರಿದ್ದರು.

ಒಳ ಮೀಸಲಾತಿ ಜಾರಿಯಾಗುವವರೆಗೂ ಬಡ್ತಿಯನ್ನು ತಡೆ ಹಿಡಿಯಲು ಆಗ್ರಹ

ಮೈಸೂರು, ಏ.22(ಜಿಎ)–ಒಳಮೀಸಲಾತಿ ಜಾರಿಯಾಗುವವರೆಗೂ ವಿವಿಧ ಇಲಾಖೆಗಳಲ್ಲಿ ನೀಡುತ್ತಿರುವ ಬಡ್ತಿಯನ್ನು ಸರ್ಕಾರ ತಡೆಹಿಡಿಯಬೇಕು ಎಂದು ಸಾಮಾಜಿಕ ನ್ಯಾಯಪರ ವೇದಿಕೆ ಅಧ್ಯಕ್ಷ ಮರಡಿಪುರ ರವಿಕುಮಾರ್ ಒತ್ತಾಯಿಸಿದರು.

ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಕೂಡಲೇ ನಾಗಮೋಹನ್‌ದಾಸ್ ಆಯೋಗದ ಸಲಹೆಯಂತೆ ಪರಿಶಿಷ್ಟ ಜಾತಿ ಸಮೀಕ್ಷೆಯನ್ನು ಮುಗಿಸಬೇಕು, ಪರಿಶಿಷ್ಟ ಜಾತಿಯಲ್ಲಿ 101 ಉಪಜಾತಿಗಳಲ್ಲಿದ್ದು, ಅವುಗಳಿಗೆ ಸೂಕ್ತ ಪ್ರಾತಿನಿಧ್ಯ ದೊರೆಯಬೇಕು. ಜೂನ್ ಮೊದಲ ವಾರದಲ್ಲಿ ಒಳಮೀಸಲಾತಿ ಜಾರಿಮಾಡಬೇಕು ಎಂದು ಆಗ್ರಹಿಸಿದರು.

ವರುಣ ಕ್ಷೇತ್ರದ ವಾಜಮಂಗಲ ಗ್ರಾಮದಲ್ಲಿ ಬಿ.ಆರ್.ಅಂಬೇಡ್ಕರ್ ಭಾವಚಿತ್ರಕ್ಕೆ ಅಪಮಾನ ಮಾಡಿದವರನ್ನು ಕೂಡಲೇ ಬಂಧಿಸಿ ಸೂಕ್ತ ಶಿಕ್ಷೆ ವಿಧಿಸಬೇಕು. ಇನ್ನೂ ಮುಂದೆ ಇಂಥ ಘಟನೆಗಳು ರಾಜ್ಯದಲ್ಲಿ ನಡೆಯದಂತೆ ಸರ್ಕಾರ ಕ್ರಮವಹಿಸಬೇಕು ಎಂದು ಒತ್ತಾಯಿಸಿದರು. ಸುದ್ದಿಗೋಷ್ಠಿಯಲ್ಲಿ ಸಾಮಾಜಿಕ ಹೋರಾಟಗಾರರಾದ ಮಂಜುನಾಥ್ ಗೋಪಾಲಪುರ, ರಾಯನಹಳ್ಳಿ ಪ್ರಭು, ಈರಯ್ಯ, ದಸಂಸ ಚಾಮರಾಜನಗರ ಸಂಚಾಲಕ ಬೆಳ್ಳಿಯಪ್ಪ, ಆರುಂಧತಿ ಸಹಕಾರ ಸಂಘದ ಅಧ್ಯಕ್ಷ ಕೆಂಚಯ್ಯ ಉಪಸ್ಥಿತರಿದ್ದರು.


ಮಹಾಭಾರತದ ರಸಪ್ರಶ್ನೆ, ಭಗವದ್ಗೀತೆ ಕಂಠಪಾಠ ಸ್ಪರ್ಧೆ

ಮೈಸೂರು,ಏ.22–ಮೈಸೂರಿನ ಸಖಿ ಫೌಂಡೇಶನ್ ಮತ್ತು ಸೂರ್ಯ ಚಾರಿಟೆಬಲ್ ಟ್ರಸ್ಟ್ ಮಕ್ಕಳಿಗಾಗಿ ಮಹಾಭಾರತದ ರಸಪ್ರಶ್ನೆ ಹಾಗೂ ಭಗವದ್ಗೀತೆ ಕಂಠಪಾಠ ಸ್ಪರ್ಧೆಯನ್ನು ಆಯೋಜಿಸಿದೆ.

5ನೇ ತರಗತಿಯಿಂದ 9ನೇ ತರಗತಿಯವರೆಗಿನ ಮಕ್ಕಳಿಗಾಗಿ ಮಹಾಭಾರತದ 30 ಲಿಖಿತ ರಸಪ್ರಶ್ನೆ ಸ್ಪರ್ಧೆಗಳಿರಲಿದ್ದು ಪ್ರಶ್ನೆ ಪತ್ರಿಕೆಯು ಕನ್ನಡ ಮತ್ತು ಆಂಗ್ಲಭಾಷೆ ಎರಡರಲ್ಲೂ ಲಭ್ಯವಿದ್ದು ಒಟ್ಟು 50 ಅಂಕಗಳದ್ದಾಗಿರುತ್ತದೆ. ಭಗವದ್ಗೀತೆ ಕಂಠಪಾಠ ಸ್ಪರ್ಧೆಗೆ 1ರಿಂದ 4ನೇ ತರಗತಿ ಮಕ್ಕಳು ಅರ್ಹರಾಗಿರುತ್ತಾರೆ. ಅದಕ್ಕಿಂತಲೂ ಕಡಿಮೆ ವಯಸ್ಸಿನ ಮಕ್ಕಳು ಸ್ಪರ್ಧೆಗೆ ಭಾಗವಹಿಸಲು ಆಸಕ್ತಿ ತೋರಿಸಿದಲ್ಲಿ ವಿಶೇಷ ಸ್ಪರ್ಧೆಗಳನ್ನು ಏರ್ಪಡಿಸಲಾಗುತ್ತದೆ. ಸ್ಪರ್ಧಿಗಳು ಯಾವುದೇ ಅಧ್ಯಾಯದ ಕನಿಷ್ಠ 3 ಹಾಗೂ ಗರಿಷ್ಠ 5 ಶ್ಲೋಕಗಳನ್ನು ಮಾತ್ರ ಹೇಳಬಹುದು. ಸ್ಪರ್ಧೆಯಲ್ಲಿ ಭಾಗವಹಿಸುವ ಎಲ್ಲಾ ಮಕ್ಕಳಿಗೂ ಪ್ರಶಂಸನಾಪತ್ರ ನೀಡಲಾಗುವುದು. ಸ್ಪರ್ಧೆಗಳು ಮೇ 11ರ ಬೆಳಗ್ಗೆ 10.30ಕ್ಕೆ ಜಯಲಕ್ಷ್ಮಿ ದೇವಿ ಪದವಿಪೂರ್ವ ಕಾಲೇಜಿನಲ್ಲಿ ನಡೆಯಲಿದೆ. ಹೆಚ್ಚಿನ ಮಾಹಿತಿಗೆ 8310306882, 9964790442.

ನಿಧನ

ಕಂದ್ರತಂಡ ಮಿಟ್ಟು ಪೂಣಚ್ಚ



ಮೈಸೂರು, ಏ. 22– ಮೈಸೂರಿನ ಒಂಟಿಕೊಪ್ಪಲಿನ ಬ್ರಿಗೇಡ್ ಪಾರ್ಕ್‌ವೇನ 102 ಮನೆ ನಿವಾಸಿ ಕಂದ್ರತಂಡ ಮಿಟ್ಟು ಪೂಣಚ್ಚ (82) ಮಂಗಳವಾರ ಬೆಳಗ್ಗೆ ನಿಧನರಾದರು. ಮೃತರು ಸಹೋದರ ಕಂದ್ರತಂಡ ಸನ್ನಿ ಮುತ್ತಪ್ಪ, ಸಹೋದರಿ ಪದ್ಮಶ್ರೀ ಪುರಸ್ಕೃತರಾದ ಇಮುಡಿಯಾಂಡ ರಾಣಿ ಮಾಚಯ್ಯ ಸೇರಿದಂತೆ ಅಪಾರ ಬಂಧು–ಮಿತ್ರರನ್ನು ಅಗಲಿದ್ದಾರೆ. ಅಂತ್ಯಕ್ರಿಯೆ ವಿಜಯನಗರ 4ನೇ ಹಂತದಲ್ಲಿರುವ ಮುಕ್ತಿಧಾಮದಲ್ಲಿ ನೆರವೇರಿಸಲಾಯಿತು ಎಂದು ಕುಟುಂಬದ ಮೂಲಗಳು ತಿಳಿಸಿವೆ.

ಎಂ.ಕೆ.ವಾಸುದೇವರಾವ್



ಶ್ರೀರಂಗಪಟ್ಟಣ ತಾಲೂಕು ಎಂ.ಶೆಟ್ಟಹಳ್ಳಿ ಗ್ರಾಮದ ನಿವಾಸಿ, ನಿವೃತ್ತ ಸಬ್ ಪೋಸ್ಟ್ ಮಾಸ್ಟರ್ ಎಂ.ಕೆ.ವಾಸುದೇವರಾವ್ (84) ವಯೋಸಹಜ ಖಾಯಿಲೆಯಿಂದ ಸೋಮವಾರ ಮಧ್ಯಾಹ್ನ ನಿಧನರಾದರು. ಮೃತರು ಪತ್ನಿ ನಾಗಲಕ್ಷ್ಮಿ, ಮಗ ಮಂಜುನಾಥ್, ಮಗಳು ಪೂರ್ಣಿಮಾ, ಅಳಿಯ ಮಂಜುನಾಥ್ ಕಚ್ಚಿಗೆರೆ, ಸೊಸೆ ಉಷಾ ಹಾಗೂ ಅಪಾರ ಬಂಧು–ಬಳಗವನ್ನು ಅಗಲಿದ್ದಾರೆ. ಅಂತ್ಯಕ್ರಿಯೆ ಸ್ವಗ್ರಾಮ ಎಂ.ಶೆಟ್ಟಹಳ್ಳಿಯಲ್ಲಿ ಮಂಗಳವಾರ ನೆರವೇರಿತು ಎಂದು ಕುಟುಂಬದ ಮೂಲಗಳು ತಿಳಿಸಿವೆ.

ಆನ್‌ಲೈನ್ ಗೇಮಿಂಗ್, ಬೆಟ್ಟಿಂಗ್ ದಂಧೆಗೆ ಕಡಿವಾಣ ಹಾಕಿ

ನಗರಪಾಲಿಕೆ ಮಾಜಿ ಸದಸ್ಯ ಎಸ್‌ಬಿಎಂ ಮಂಜು ಆಗ್ರಹ

ಮೈಸೂರು,ಏ.22(ಜಿಎ)–ಎಲ್ಲಾ ವಯೋಮಾನದವರು ಆನ್‌ಲೈನ್ ಗೇಮ್ ಚಟಕ್ಕೆ ಬಿದ್ದು, ಅಪಾರ ಪ್ರಮಾಣದಲ್ಲಿ ಹಣ ಕಳೆದುಕೊಳ್ಳುತ್ತಿದ್ದಾರೆ. ಬಹಳಷ್ಟು ಮಂದಿ ಆತ್ಮಹತ್ಯೆ ಮಾಡಿಕೊಂಡಿರುವುದೂ ಉಂಟು. ಹೀಗಾಗಿ ಸರ್ಕಾರ ಕೂಡಲೇ ಆನ್‌ಲೈನ್ ಗೇಮಿಂಗ್ ಹಾಗೂ ಬೆಟ್ಟಿಂಗ್ ದಂಧೆಗೆ ಕಡಿವಾಣ ಹಾಕಬೇಕೆಂದು ನಗರಪಾಲಿಕೆ ಮಾಜಿ ಸದಸ್ಯ ಎಸ್.ಬಿ.ಎಂ.ಮಂಜು ಆಗ್ರಹಿಸಿದರು.

ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಕ್ರಿಕೆಟ್ ಬೆಟ್ಟಿಂಗ್‌ನಲ್ಲಿ ಜನರು ಹಣ ಕಳೆದುಕೊಳ್ಳುತ್ತಿದ್ದಾರೆ. ಖ್ಯಾತ ನಟ, ನಟಿಯರು ಇದಕ್ಕೆ ಪ್ರಚಾರ ನೀಡುವುದು ಪ್ರಮುಖ ಕಾರಣವಾಗಿದೆ. ಜಾಹೀರಾತುಗಳು ಸಹಾ ಬೆಟ್ಟಿಂಗ್‌ಗೆ ಪ್ರೇರೇಪಿಸುತ್ತಿವೆ. ಆದ್ದರಿಂದ ಬೆಟ್ಟಿಂಗ್ ಪ್ರಚಾರ ಮಾಡುವವರ ವಿರುದ್ಧ ಕ್ರಿಮಿನಲ್ ಪ್ರಕರಣ ದಾಖಲಿಸಬೇಕು. ಮತ್ತೊಂದೆಡೆ ಕ್ಯಾಸಿನೋಗಳು ಆಟ ಆಡಲು ಪ್ರೋತ್ಸಾಹ ನೀಡುವವರಿಗೆ ಶೇ.30 ಕಮಿಷನ್ ಆಮಿಷ ಒಡ್ಡುತ್ತಿವೆ. ಹೀಗಾಗಿ ಸುಲಭವಾಗಿ ಹಣ ಕಳೆದುಕೊಳ್ಳುವವರ ಸಂಖ್ಯೆ ಹೆಚ್ಚಾಗಿದೆ ಎಂದು ಬೇಸರಿಸಿದರು.



ಎಸ್‌ಬಿಎಂ ಮಂಜು

ಈ ಕಾರಣದಿಂದಾಗಿ ಮಾಹಿತಿ ತಂತ್ರಜ್ಞಾನ ಬಳಸಿಕೊಂಡು ಸರ್ಕಾರ ಈ ಆ್ಯಪ್‌ಗಳು ಓಪನ್ ಆಗದಂತೆ ಕ್ರಮ ವಹಿಸಬೇಕು. ಬೆಟ್ಟಿಂಗ್ ದಂಧೆಗೆ ಪ್ರೋತ್ಸಾಹ ನೀಡುವವರಿಗೂ ಶಿಕ್ಷೆ ವಿಧಿಸಬೇಕೆಂದು ಒತ್ತಾಯಿಸಿ, ಈ ಹಿಂದೆ ಮಾಜಿ ಸಿಎಂ ಹೆಚ್.ಡಿ.ಕುಮಾರಸ್ವಾಮಿ ರಾಜ್ಯದಲ್ಲಿ ಸಿಂಗಲ್ ನಂಬರ್ ಲಾಟರಿ, ಫ್ಲೇವಿನ್ ಸೇರಿದಂತೆ ಇತರೆ ಜೂಜಾಟವನ್ನು ನಿಷೇಧಗೊಳಿಸಿದರು. ಹಾಗೇ ತೆಲಂಗಾಣದಲ್ಲಿ ಬೆಟ್ಟಿಂಗ್ ಆ್ಯಪ್‌ಗಳನ್ನು ನಿಷೇಧಿಸಿದ್ದಾರೆ. ಅದರಂತೆ ಕರ್ನಾಟಕದಲ್ಲಿಯೂ ನಿಷೇಧಿಸಬೇಕು ಎಂದು ಆಗ್ರಹಿಸಿದರು. ಸುದ್ದಿಗೋಷ್ಠಿಯಲ್ಲಿ ಮುಖಂಡರಾದ ಪ್ರಕಾಶ್ ಎಸ್.ಪ್ರಿಯದರ್ಶನ್, ದಿನೇಶ್‌ಗೌಡ, ನರಸಿಂಹೇಗೌಡ, ರಾಮಕೃಷ್ಣೇಗೌಡ ಉಪಸ್ಥಿತರಿದ್ದರು.

ಜೆಎಸ್‌ಎಸ್ ಪದವಿ ಕಾಲೇಜು ಬಾಲ್ ಬ್ಯಾಡ್ಮಿಂಟನ್ ತಂಡಕ್ಕೆ ದ್ವಿತೀಯ ಬಹುಮಾನ



ಮೈಸೂರು,ಏ.22–ಮೈಸೂರು ವಿಶ್ವವಿದ್ಯಾನಿಲಯ ದೈಹಿಕ ಶಿಕ್ಷಣ ವಿಭಾಗದ ವತಿಯಿಂದ ಆಯೋಜಿಸಿದ್ದ 2024–25ನೇ ಸಾಲಿನ ಅಂತರ ವಲಯ ಅಂತರ ಕಾಲೇಜುಗಳ ಮಹಿಳೆಯರ ಬಾಲ್ ಬ್ಯಾಡ್ಮಿಂಟನ್ ಸ್ಪರ್ಧೆಯಲ್ಲಿ ಮೈಸೂರಿನ ಜೆಎಸ್‌ಎಸ್ ಕಲಾ, ವಾಣಿಜ್ಯ ಮತ್ತು ವಿಜ್ಞಾನ ಕಾಲೇಜಿನ ಬಾಲ್ ಬ್ಯಾಡ್ಮಿಂಟನ್ ತಂಡ ದ್ವಿತೀಯ ಬಹುಮಾನ ಪಡೆದುಕೊಂಡಿದೆ. ವಿಜೇತರನ್ನು ಕಾಲೇಜಿನ ಮುಖ್ಯ ಕಾರ್ಯನಿರ್ವಾಹಕ ಪ್ರೊ.ಬಿ.ವಿ.ಸಾಂಬಶಿವಯ್ಯ, ಪ್ರಾಂಶುಪಾಲ ಡಾ.ಪ್ರಭು, ದೈಹಿಕ ಶಿಕ್ಷಣ ನಿರ್ದೇಶಕರಾದ ಕಾರ್ತಿಕ್, ನಿರಂಜನ್ ಅಭಿನಂದಿಸಿದ್ದಾರೆ.

ಸಿಇಟಿ ವೇಳೆ ಜನಿವಾರ ತೆಗೆಸಿದ ಸಿಬ್ಬಂದಿಯನ್ನು ಶಾಶ್ವತವಾಗಿ ಸೇವೆಯಿಂದ ವಜಾ ಮಾಡಲಿ

ಅಸಂಘಟಿತ ಪುರೋಹಿತ ಕಾರ್ಮಿಕ ಫೆಡರೇಷನ್ ಆಗ್ರಹ

ಮೈಸೂರು, ಏ.22(ಜಿಎ)–ಪರೀಕ್ಷೆಗೆ ಹಾಜರಾದ ವಿದ್ಯಾರ್ಥಿಯ ಜನಿವಾರ ತೆಗೆಸಿ, ಪರೀಕ್ಷೆ ಬರೆಯಲು ಅವಕಾಶ ನೀಡದ ಘಟನೆ ತೀವ್ರ ಖಂಡನೀಯವಾಗಿದೆ. ಹೀಗಾಗಿ ಇದಕ್ಕೆ ಕಾರಣರಾದವರನ್ನು ಶಾಶ್ವತವಾಗಿ ಸೇವೆಯಿಂದ ಬಿಡುಗಡೆಗೊಳಿಸಬೇಕು ಎಂದು ಅಖಿಲ ಭಾರತ ಅಸಂಘಟಿತ ಪುರೋಹಿತ ಕಾರ್ಮಿಕ ಫೆಡರೇಷನ್ ಒತ್ತಾಯಿಸಿದೆ.

ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಜಿಲ್ಲಾಧ್ಯಕ್ಷ ಸಂತೋಷ್‌ಕುಮಾರ್ ಎಸ್.ದೇಶಿಕ್ ಈ ವಿಷಯ ತಿಳಿಸಿ, ಇದು ಕೇವಲ ಓರ್ವ ವಿದ್ಯಾರ್ಥಿಗೆ ಮಾಡಿದ ಅಪಮಾನವಲ್ಲ, ಬದಲಾಗಿ ಇಡೀ ಬ್ರಾಹ್ಮಣ ಸಮುದಾಯವನ್ನು ಅವಮಾನಿಸಿದಂತದ್ದಾಗಿದೆ. ಇದೇ ವೇಳೆ ಚಿತ್ರರಂಗದ ಅನುರಾಗ್ ಕಶ್ಯಪ್ ಬ್ರಾಹ್ಮಣರ ಮೇಲೆ ಮೂತ್ರ ವಿಸರ್ಜನೆ ಮಾಡುವುದಾಗಿ ಹೇಳಿರುವುದು ಸಹ ಅಕ್ಷಮ್ಯ. ಹೀಗಾಗಿ ಇವರು ಸಾರ್ವಜನಿಕವಾಗಿ ವಿಪ್ರರ ಕ್ಷಮೆ ಯಾಚಿಸಬೇಕು ಎಂದು ಆಗ್ರಹಿಸಿದರು. ಜಾತಿಗಣತಿಯಲ್ಲಿ ಬ್ರಾಹ್ಮಣ ಸಮುದಾಯದ ಸಂಖ್ಯೆ ಕಡಿಮೆ ನಮೂದಿಸಲಾಗಿದೆ. ಇದು ಸರಿಯಲ್ಲ. ಸರ್ಕಾರ ಸಮರ್ಪಕ ರೀತಿಯಲ್ಲಿ ಜಾತಿಗಣತಿ ನಡೆಸಬೇಕು. ಬ್ರಾಹ್ಮಣ ಮಹಾಸಭಾ ಬಿಡುಗಡೆ ಮಾಡಿದ ವರದಿಯಲ್ಲಿ ರಾಜ್ಯದಲ್ಲಿ ಬ್ರಾಹ್ಮಣರ ಸಂಖ್ಯೆ ಸುಮಾರು 49 ಲಕ್ಷ ಎಂದು ತಿಳಿಸಿದೆ. ಆದರೆ ವರದಿ ಕೇವಲ 17 ಲಕ್ಷ ತೋರಿಸಿದೆ. ಹೀಗಾಗಿ ಅವೈಜ್ಞಾನಿಕವಾಗಿ ಗಣತಿ ನಡೆದಿದೆ ಎಂದು ಬೇಸರಿಸಿದರು.

ಸುದ್ದಿಗೋಷ್ಠಿಯಲ್ಲಿ ಎಂ.ವಿ.ಗಣೇಶ್, ರವಿಶಂಕರ್, ಎನ್.ಲಕ್ಷ್ಮೀಶ್, ಮನೋಹರ್, ಬಿ.ಕೆ.ಗುರುರಾಜ್, ಕೆ.ಎಲ್.ವಿ.ಶರ್ಮ ಉಪಸ್ಥಿತರಿದ್ದರು.

ಮೈಸೂರಲ್ಲಿ ಇಳಯರಾಜ



ಮಂಗಳವಾರ ಮೈಸೂರಿನ ಕಾಳಿದಾಸ ರಸ್ತೆಯಲ್ಲಿರುವ ಶ್ರೀ ಲಕ್ಷ್ಮಿನರಸಿಂಹ ಸ್ವಾಮಿ ದೇವಸ್ಥಾನಕ್ಕೆ ಭೇಟಿ ನೀಡಿದ್ದ ವಿಶ್ವವಿಖ್ಯಾತ ಸಂಗೀತ ನಿರ್ದೇಶಕ ಇಳಯರಾಜ ಅವರನ್ನು ಖ್ಯಾತ ವ್ಯಂಗ್ಯಚಿತ್ರಕಾರ ಎಂ.ವಿ.ನಾಗೇಂದ್ರ ಬಾಬು ಅವರು ತಾವು ರಚಿಸಿರುವ ಎರಡು ವ್ಯಂಗ್ಯ ಚಿತ್ರಗಳ ಕೃತಿಗಳನ್ನು ಕೊಡುಗೆಯಾಗಿ ನೀಡಿದರು.

ಚಿತ್ರ ಬಿಡಿಸುವ ಸ್ಪರ್ಧೆ ವಿಜೇತರು



ನೈರುತ್ಯ ರೈಲ್ವೆ, ಮೈಸೂರು ವಿಭಾಗವು ರೈಲ್ ಮ್ಯೂಸಿಯಂನಲ್ಲಿ ವಿಶ್ವ ಪರಂಪರೆ ದಿನದ ಅಂಗವಾಗಿ ಆಯೋಜಿಸಿದ್ದ ಚಿತ್ರ ಬಿಡಿಸುವ ಸ್ಪರ್ಧೆಯಲ್ಲಿ 10ರಿಂದ 13 ವರ್ಷದೊಳಗಿನ ವಿಭಾಗದಲ್ಲಿ ವಿಜಯನಗರದ ಸಂತ ಜೋಸೆಫರ ಸೆಂಟ್ರಲ್ ಶಾಲೆಯ 8ನೇ ತರಗತಿ ವಿದ್ಯಾರ್ಥಿನಿ ವೇದಶ್ರೀ ವಾಲಿಂಬೆ (ಪ್ರಥಮ), ಜಯಲಕ್ಷ್ಮೀಪುರಂ ಸಂತ ಜೋಸೆಫರ ಶಾಲೆಯ ಎಂ.ಪಿ. ದ್ರುವನ್ (ತೃತೀಯ) ಬಹುಮಾನ ಗಳಿಸಿದ್ದಾರೆ.

ಮೈಸೂರು ಹಾಗೂ ಸುತ್ತಮುತ್ತ ಇಂದು...



ಇಂದಿನ ಪಂಚಾಂಗ

23.04.2025 ಬುಧವಾರ, ಮಳೆ ನಕ್ಷತ್ರ: ಅಶ್ವಿನಿ 13.04.2025 ರಿಂದ 26.04.2025
ವಿಶ್ವವಸು ನಾಮ ಸಂವತ್ಸರ, ಉತ್ತರಾಯಣ, ವಸಂತ ಋತು, ಚೈತ್ರ ಮಾಸ, ಕೃಷ್ಣ ಪಕ್ಷ,
ತಿಥಿ: ದಶಮಿ, ನಕ್ಷತ್ರ: ಧನಿಷ್ಠ, ರಾಹುಕಾಲ: ಮಧ್ಯಾಹ್ನ 12 ರಿಂದ 1.30ರವರೆಗೆ

■ **ಜೆಎಸ್‌ಎಸ್ ಆಯುರ್ವೇದ ಆಸ್ಪತ್ರೆ:** ಯಕೃತ್ತಿನ ಸಮಸ್ಯೆಗೆ ಚಿಕಿತ್ಸಾ ಶಿಬಿರ, ಕುತ್ತಿಗೆ ಮತ್ತು ಬೆನ್ನು ನೋವಿಗೆ ಆಕ್ಯೂಪಂಕ್ಚರ್ ಮತ್ತು ಯೋಗ ಶಿಬಿರ, ಬೊಜ್ಜು ನಿವಾರಣಾ ಚಿಕಿತ್ಸಾ ಶಿಬಿರ, ಸ್ಥಳ: ಜೆಎಸ್‌ಎಸ್ ಆಯುರ್ವೇದ ಆಸ್ಪತ್ರೆ ಆವರಣ, ಲಲಿತಾದ್ರಿ ರಸ್ತೆ, ಆಲನಹಳ್ಳಿ, ಬೆಳಗ್ಗೆ 9 ರಿಂದ

■ **ಕಾವೇರಿ ಆಯುರ್ವೇದ ಆಸ್ಪತ್ರೆ :** ಮಕ್ಕಳ ಆರೋಗ್ಯ ತಪಾಸಣೆ ಮತ್ತು ಚಿಕಿತ್ಸಾ ಶಿಬಿರ, ಚರ್ಮರೋಗ ಕುರಿತು ಚಿಕಿತ್ಸೆ ಹಾಗೂ ಪುನಶ್ಚೇತನ (ರೆಜುವಿನೇಷನ್) ಚಿಕಿತ್ಸಾ ಶಿಬಿರ, ಸ್ಥಳ: ಕಾವೇರಿ ಆಯುರ್ವೇದ ಆಸ್ಪತ್ರೆ, ದೇವೇಗೌಡ ಸರ್ಕಲ್ ಹತ್ತಿರ, ಕೆಬಿಎಲ್ ಲೇಔಟ್, ಬೆಳಗ್ಗೆ 10 ರಿಂದ.

■ **ಜೆಎಸ್‌ಎಸ್ ಆಯುರ್ವೇದ ಆಸ್ಪತ್ರೆ:** ಆಸ್ಪತ್ರೆಯ ಶಾಲಾಕ್ಯತಂತ್ರ ಸ್ನಾತಕೋತ್ತರ ವಿಭಾಗದ ವತಿಯಿಂದ ನೇತ್ರ, ಕಿವಿ, ಮೂಗು, ಗಂಟಲು ಮತ್ತು ಶಿರೋರೋಗಗಳ ತಪಾಸಣೆ ಹಾಗೂ ಚಿಕಿತ್ಸಾ ಶಿಬಿರ, ಸ್ಥಳ: ಜೆಎಸ್‌ಎಸ್ ಕಾನೂನು ಮಹಾವಿದ್ಯಾಲಯ, ಕುವೆಂಪುನಗರ, ಬೆಳಗ್ಗೆ 10 ರಿಂದ.

■ **ಚಿಂತನ ಚಿತ್ತಾರ :** ವಿಶ್ವ ಪುಸ್ತಕ ದಿನಾಚರಣೆ ಪ್ರಯುಕ್ತ ವಿಶೇಷ ಉಪನ್ಯಾಸ ಕಾರ್ಯಕ್ರಮ, ಉದ್ಘಾಟನೆ : ಸಾಹಿತಿ ಪ್ರೊ.ಎಸ್.ಜಿ. ಸಿದ್ದರಾಮಯ್ಯ, ಪುಸ್ತಕ ಪರಿಕಲ್ಪನೆ ಕುರಿತು ಮಾತನಾಡುವವರು: ಪ್ರಾಧ್ಯಾಪಕ ಪ್ರೊ. ಪಿ. ಬೆಟ್ಟೇಗೌಡ, ಲೇಖಕ ಡಾ. ಮಹೇಂದ್ರಮೂರ್ತಿ ದೇವನೂರು, ಸಾಮಾಜಿಕ ಹೋರಾಟಗಾರ್ತಿ ಸವಿತಾ ಪ. ಮಲ್ಲೇಶ್, ಅಧ್ಯಕ್ಷತೆ : ಸಾಹಿತಿ ಡಾ. ಕಾಳೇಗೌಡ ನಾಗವಾರ, ಸ್ಥಳ: ಕನ್ನಡ ಪುಸ್ತಕ ಪ್ರಾಧಿಕಾರ ಮಳಿಗೆ ಆವರಣ, ರಾಮಕೃಷ್ಣನಗರ, ಬೆಳಗ್ಗೆ 10ಕ್ಕೆ.

■ **ಅರಳಿಕಟ್ಟೆ ಶ್ರೀರಾಮ ದೇವಸ್ಥಾನ ಧಾರ್ಮಿಕ ಮತ್ತು ದಾನದತ್ತಿ :** ಶ್ರೀರಾಮನವಮಿ, ಚಾಮರಾಜಪುರಂ ಬೆಟ್ಟದಮ್ಮ ಗಾನಲಹರಿ ತಂಡದಿಂದ ಭಜನೆ, ಸ್ಥಳ:ದೇವಸ್ಥಾನದ ಆವರಣ, ಸಂಜೆ

■ **ಶ್ರೀ ವಿಜಯ ಮಹಾಗಣಪತಿ ದೇವಸ್ಥಾನ :** ಶ್ರೀ ವಿಜಯ ಮಹಾಗಣಪತಿ ಸ್ವಾಮಿ ಜಾತ್ರಾ ಮಹೋತ್ಸವ, ಬೆಳಗ್ಗೆ 7 ಗಂಟೆಗೆ ಯಾಗಶಾಲಾ ಪ್ರವೇಶ ಸ್ವಸ್ತಿವಾಚನ, ಗಣಪತಿ ಪೂಜೆ, ಪುಣ್ಯಾಹ, ದೇವನಾಂದಿ, ರಕ್ಷಾಸೂತ್ರ ಧಾರಣೆ, ಪಂಚಗ್ಯ ಪ್ರೋಕ್ಷಣೆ, ಮಹಾಗಣಪತಿ ಹೋಮ, ನವಗ್ರಹ ಹೋಮ, ಸುಬ್ರಹ್ಮಣ್ಯ ಹೋಮ, ಮೃತ್ಯುಂಜಯ ಹೋಮ, ಚತುರ್‌ದ್ರವ್ಯ ಶ್ರೀ ಮಹಾಗಣಪತಿ ಹೋಮ, ಫಲಪೂಜೆ, ಆರತಿ, ತೀರ್ಥಪ್ರಸಾದ ವಿನಿಯೋಗ, ಮಧ್ಯಾಹ್ನ 1 ಗಂಟೆಗೆ ಅನ್ನಸಂತರ್ಪಣೆ, ಸ್ಥಳ: ದೇವಸ್ಥಾನ, ವಿಜಯನಗರ 3ನೇ ಹಂತ.

ಮೈಸೂರು ಆಕಾಶವಾಣಿ



ಬೆಳಗ್ಗೆ: 6.10 ಚಿಂತನ, 6.15 ಗೀತಾರಾಧನ, 6.35 ಮತ್ತು ಸಂಜೆ 6.10 ರಂಗ ದಿಗ್ಗಜರು–ಮೈಸೂರು, ಮಂಡ್ಯ, ಚಾಮರಾಜನಗರ ಜಿಲ್ಲೆಯ ಮರೆಯಬಾರದ ಮಹನೀಯರು, ಲೇಖನ–ಎಸ್.ರಾಮನಾಥ್, ನಿರೂಪಣೆ ಮತ್ತು ನಿರ್ಮಾಣ–ಪ್ರಭುಸ್ವಾಮಿ ಮಳಿಮಠ್, 6.40 ಅರಿವಿನ ಶಿಖರ : ಸರ್ವಜ್ಞನ ತ್ರಿಪದಿಗಳನ್ನಾಧರಿಸಿದ ಬಾನುಲಿಸರಣಿ, 6.50 ರೈತರಿಗೆ ಸಲಹೆ, 7.15 ಭಾವಗೀತೆಗಳು, 8.30 ಯೋಗ ಕುರಿತ ವಿಶೇಷ ಸರಣಿ ಮಹಾಯೋಗ, 8.35 ಚಿತ್ರಗೀತೆಗಳು, 9.00 ವೃತ್ತಿಮಾರ್ಗದರ್ಶನ: ವಿಶೇಷ ಚೇತನ ವಿದ್ಯಾರ್ಥಿಗಳಿಂದ ತಾಂತ್ರಿಕ ಶಿಕ್ಷಣದಲ್ಲಿ ಇರುವ ಅಧ್ಯಯನ ಮತ್ತು ವೃತ್ತಿಪರ ಅವಕಾಶಗಳು ಕುರಿತು ಮೈಸೂರಿನ ಜೆಎಸ್‌ಎಸ್ ವಿಶೇಷ ಚೇತನರ ಪಾಲಿಟೆಕ್ನಿಕ್‌ನ ಪ್ರಾಂಶುಪಾಲರಾದ ಬಿ. ಇಲಂಗೋವನ್ ಅವರೊಂದಿಗೆ ಮಾತುಕತೆ. ಇವರೊಂದಿಗೆ ಭಾಗವಹಿಸುತ್ತಾರೆ –ಬೇದ್ರೆ ಮಂಜುನಾಥ್, 10.00 ಕರ್ನಾಟಕ ಶಾಸ್ತ್ರೀಯ ಸಂಗೀತ : ಗೀತಾ. ವೈ. ಪುಟ್ಟಿ – ಹಾಡುಗಾರಿಕೆ, 10.30 ಹಿಂದಿ ಚಿತ್ರಗೀತೆಗಳು, 11.00 ನಿಮ್ಮೊಂದಿಗೆ ಮೈಸೂರು ಆಕಾಶವಾಣಿ ಹಾಗೂ ಪತ್ರೋತ್ತರ

ಮಧ್ಯಾಹ್ನ: 12.05 ವನಿತಾ ವಿಹಾರ, 12.35 ದೇವರನಾಮ, 12.45 ಜನಪದ ಸಂಗೀತ:ಟಿ. ನರಸೀಪುರ ತಾಲೂಕು ಸೋಸಲೆ ಹೋಬಳಿ ಬೆನಕನಹಳ್ಳಿ ಗ್ರಾಮದ ಗಿರಿಜಮ್ಮ ಮತ್ತು ಸಂಗಡಿಗರಿಂದ ಕಾಲಭೈರವೇಶ್ವರನ ಹಾಡು, 1.00 ಪ್ರಗತಿ ಪಥ – ಕೇಂದ್ರ ಸರ್ಕಾರದ ವಿವಿಧ ಅಭಿವೃದ್ಧಿ ಯೋಜನೆಗಳ ಕುರಿತು ಸರಣಿ, 1.20 ಭಾವಗೀತೆಗಳು, 2.40 ಚಿತ್ರಗೀತೆಗಳು, 3.00 ಕರ್ನಾಟಕ ಶಾಸ್ತ್ರೀಯ ಸಂಗೀತ :ಯು. ಶ್ರೀನಿವಾಸ್–ಮ್ಯಾಂಡೋಲಿನ್ ವಾದನ, 4.00 ಮಹಿಳಾರಂಗ, 4.45 ಹಿಂದಿ ಪಾಠ, 5.05 ಸಂದೇಶ ಆಧಾರಿತ ಶ್ರೋತೃಗಳ ಮೆಚ್ಚಿನ ಚಿತ್ರಗೀತೆಗಳ ಕಾರ್ಯಕ್ರಮ, 6.50 ಕೃಷಿರಂಗ–ಮೇವು ಮೆಲುಕು–ಮೇವಿನ ಬೆಳೆಗಳ ಬೇಸಾಯ ತಾಂತ್ರಿಕತೆಗಳನ್ನು ಕುರಿತ ಬಾನುಲಿ ಸರಣಿ ಕುರಿ ಮೇಕೆ ಸಾಕಾಣಿಕೆ ಕುರಿತು ಪಶುಪಾಲನೆ ಹಾಗೂ ಪಶುವೈದ್ಯಕೀಯ ಸೇವಾ ಇಲಾಖೆಯ ಉಪನಿರ್ದೇಶಕರಾದ ಡಾ. ಸಿ.ಪಿ.ತಿಮ್ಮಯ್ಯ ಅವರೊಂದಿಗೆ ಸಂದರ್ಶನ. ಸಂದರ್ಶಕರು : ಎನ್. ಕೇಶವಮೂರ್ತಿ, 7.45 ಚಿತ್ರಗೀತೆಗಳು, 8.00 ಕರ್ನಾಟಕ ಶಾಸ್ತ್ರೀಯ ಸಂಗೀತ : ಎಂ.ಎ. ಸುಂದರೇಶ್ವರನ್ ಮತ್ತು ಎಂ. ಎ. ಕೃಷ್ಣಸ್ವಾಮಿ –ಯುಗಳ ವೈಯೋಲಿನ್ ವಾದನ, 9.30 ಕ್ರೀಡಾಲೋಕ, 10.00 ಹಳ್ಳಿ ಹಾಡು, 10.30 ಸವಿನೆನಪು–ಹಳೆಯ ಕನ್ನಡ ಚಿತ್ರಗೀತೆಗಳು

■ **ಬಿಎಸ್‌ಎಸ್ ವಿದ್ಯೋದಯ :** ಭಗಿನಿ ಸಂಗೀತೋತ್ಸವ, ಪೇಜಾವರ ಮಠದ ವಿಶ್ವಪ್ರಸನ್ನ ತೀರ್ಥ ಸ್ವಾಮೀಜಿ ಅವರಿಂದ ಶಾಲೆಯಲ್ಲಿ ನಿರ್ಮಿಸಲಾದ ಪದ್ಮಜಾ ಶ್ರೀನಿವಾಸ್ ಸಭಾಂಗಣ, ಗಣಿತ ಮತ್ತು ಕಂಪ್ಯೂಟರ್ ಪ್ರಯೋಗಾಲಯ, ವರ್ಡ್ಸ್ ವರ್ಲ್ಡ್ ಗ್ರಂಥಾಲಯ, ಚೆಸ್ ಕೊಠಡಿ, ಆನಂದ ಕಕ್ಷದ ಉದ್ಘಾಟನೆ, ವಿದ್ವಾನ್ ಬಾಲು ಮಸ್ತಿ, ವಿದ್ವಾನ್ ಕೇಶವಚಂದ್ರ ಮತ್ತು ವಿದ್ವಾನ್ ಎಂ.ಶ್ರೀನಿಧಿ ಅವರಿಂದ ವೀಣಾ, ವೇಣು, ವಯೋಲಿನ್ ವಾದನ, ಸ್ಥಳ: ಬಿಎಸ್‌ಎಸ್ ವಿದ್ಯೋದಯ ಶಾಲೆ ಸಭಾಂಗಣ, ಕೃಷ್ಣಮೂರ್ತಿಪುರಂ, ಸಂಜೆ 6 ರಿಂದ.

■ **ಜೆಎಸ್‌ಎಸ್ ಮಹಿಳಾ ಕಾಲೇಜು :** ಕೃಷ್ಣರಾಜ ಒಡೆಯರ್ III ಅವರ ಸಾಂಸ್ಕೃತಿಕ ಕೊಡುಗೆ ಕುರಿತು ವಿಚಾರ ಸಂಕಿರಣ, ಸಾನ್ನಿಧ್ಯ : ಸುತ್ತೂರು ಶ್ರೀ ಶಿವರಾತ್ರಿ ದೇಶಿಕೇಂದ್ರ ಸ್ವಾಮೀಜಿ, ಉದ್ಘಾಟನೆ : ಮೈಸೂರು ವಿವಿ ಕುಲಪತಿ ಪ್ರೊ.ಎನ್.ಕೆ. ಲೋಕನಾಥ್, ಅಧ್ಯಕ್ಷತೆ : ಕಾಲೇಜು ಶಿಕ್ಷಣ ವಿಭಾಗದ ಸಹಾಯಕ ನಿರ್ದೇಶಕ ಬಿ. ನಿರಂಜನಮೂರ್ತಿ, ಪ್ರಾಸ್ತಾವಿಕ ನುಡಿ : ಓರಿಯೆಂಟಲ್ ರಿಸರ್ಚ್ ಇನ್‌ಸ್ಟಿಟ್ಯೂಟ್ ನಿರ್ದೇಶಕ ಡಾ. ಡಿ.ಪಿ. ಮಧುಸೂದನಾಚಾರ್ಯ, ಸ್ಥಳ: ನವಜ್ಯೋತಿ ಸಭಾಂಗಣ, ಸರಸ್ವತಿಪುರಂ, ಬೆಳಗ್ಗೆ 10.30ಕ್ಕೆ.

ಯುಪಿಎಸ್‌ಸಿ ಪರೀಕ್ಷೆಯಲ್ಲಿ ಮೈಸೂರು ಜಿಲ್ಲೆಯ ಮೂವರ ಸಾಧನೆ



ಎ.ಸಿ.ಪ್ರೀತಿ



ಭಾನುಪ್ರಕಾಶ್



ಜಿ.ರಶ್ಮಿ

ಮೈಸೂರು, ಏ.22 (ಎಸ್‌ಬಿಡಿ)– ಕೇಂದ್ರ ಲೋಕಸೇವಾ ಆಯೋಗ (ಯುಪಿಎಸ್‌ಸಿ) 2014ರಲ್ಲಿ ನಡೆಸಿದ ಪರೀಕ್ಷೆ ಫಲಿತಾಂಶ ಪ್ರಕಟವಾಗಿದ್ದು, ಮೈಸೂರು ಜಿಲ್ಲೆಯ ಮೂವರು ಉತ್ತಮ ರ್‍ಯಾಂಕ್ ಪಡೆದಿದ್ದಾರೆ.

ಸಾಲಿಗ್ರಾಮ ತಾಲೂಕಿನ ಎ.ಸಿ.ಪ್ರೀತಿ 263ನೇ ರ್‍ಯಾಂಕ್ ಪಡೆದಿದ್ದು, ಐಎಎಸ್ ಹುದ್ದೆಯ ನಿರೀಕ್ಷೆಯಲ್ಲಿದ್ದಾರೆ. ಇನ್ನು ಈ ಹಿಂದೆಯೇ ಯುಪಿಎಸ್‌ಸಿ ಪರೀಕ್ಷೆಯಲ್ಲಿ ಯಶಸ್ವಿಯಾಗಿ ಐಪಿಎಸ್ ತರಬೇತಿ ಪೂರೈಸಿರುವ ಭಾನುಪ್ರಕಾಶ್‌ಗೆ 523 ಹಾಗೂ ಐಎಫ್‌ಎಸ್ ಅಧಿಕಾರಿಯಾಗಿರುವ ಜಿ.ರಶ್ಮಿಗೆ 976ನೇ ರ್‍ಯಾಂಕ್ ಸಿಕ್ಕಿದೆ.

ರೈತಪುತ್ರಿ ಸಾಧನೆ: ಸಾಲಿಗ್ರಾಮ ತಾಲೂಕು, ಅಂಕನಹಳ್ಳಿ ಗ್ರಾಮದ ಚನ್ನಬಸಪ್ಪ ಹಾಗೂ ನೇತ್ರಾವತಿ ರೈತ ದಂಪತಿಯ ಪುತ್ರಿ ಎ.ಸಿ.ಪ್ರೀತಿ ಮೂರನೇ ಪ್ರಯತ್ನದಲ್ಲಿ ಯುಪಿಎಸ್‌ಸಿ ಪರೀಕ್ಷೆಯಲ್ಲಿ ಉತ್ತಮ ಸಾಧನೆ ಮಾಡಿದ್ದಾರೆ. ಗ್ರಾಮದ ಸರ್ಕಾರಿ ಶಾಲೆಯಲ್ಲೇ ಕನ್ನಡ ಮಾಧ್ಯಮದಲ್ಲಿ ಹತ್ತನೇ ತರಗತಿವರೆಗೆ ಓದಿದ ನಂತರ ಕೆ.ಆರ್.ನಗರ ಸರ್ಕಾರಿ ಮಹಿಳಾ ಪದವಿ ಪೂರ್ವ ಕಾಲೇಜಿನಲ್ಲಿ ಪಿಯುಸಿ ಮುಗಿಸಿ, ಮಂಡ್ಯದ ವಿಸಿ ಫಾರಂನಲ್ಲಿ ಕೃಷಿಯಲ್ಲಿ ಬಿಎಸ್ಸಿ ಹಾಗೂ ಉತ್ತರಪ್ರದೇಶದ ವಾರಣಾಸಿಯ ಬನಾರಸ್ ಯೂನಿವರ್ಸಿಟಿಯಲ್ಲಿ ಎಂಎಸ್ಸಿ ಪದವಿ ಪೂರೈಸಿದ್ದಾರೆ.

'ಮೈಸೂರು ಮಿತ್ರ'ನೊಂದಿಗೆ ಸಂತಸ ಹಂಚಿಕೊಂಡ ಎ.ಸಿ.ಪ್ರೀತಿ, ಕೃಷಿಯಲ್ಲಿ ಎಂಎಸ್ಸಿ ಪದವಿ ಪಡೆದ ಬಳಿಕ ಕೃಷಿ ವಿಜ್ಞಾನಿ ಆಗಬೇಕೆಂದು ಕೊಂಡಿದ್ದೆ. ಆದರೆ ತಂದೆಯೊಂದಿಗೆ ಮಾತನಾಡುವಾಗ ಯುಪಿಎಸ್‌ಸಿ ಪರೀಕ್ಷೆ ತೆಗೆದುಕೊಳ್ಳಲು ನಿರ್ಧರಿಸಿದೆ. ಹೈದರಾಬಾದ್‌ನ ಅಕಾಡೆಮಿಯೊಂದರಲ್ಲಿ ಐಚ್ಛಿಕ ಆಂತ್ರೋಪಾಲಜಿ ವಿಷಯಕ್ಕೆ ಮಾತ್ರ ತರಬೇತಿ ಪಡೆದು, ಉಳಿದಂತೆ ಸ್ವಯಂ ಅಧ್ಯಯನ ನಡೆಸಿದೆ. ಮೊದಲೆರಡು ಪ್ರಯತ್ನದಲ್ಲಿ ಪ್ರಿಲಿಮ್ಸ್ ಪರೀಕ್ಷೆಯೇ ಪಾಸ್ ಆಗಲಿಲ್ಲ. ಆಗ ಪ್ರಯತ್ನ ಮುಂದುವರೆಸುವುದು ಬೇಡವೆಂದು ನಿರ್ಧರಿಸಿದ್ದೆ. ಆದರೆ ನನ್ನ ತಂದೆ ನನಗೋಸ್ಕರ ಇದೊಂದು ಬಾರಿ ಪರೀಕ್ಷೆ ಬರೆ ಎಂದರು. ಅವರಿಂದಾಗಿ ನಾನು ಪರೀಕ್ಷೆಯಲ್ಲಿ ಯಶಸ್ವಿಯಾಗಲು ಸಾಧ್ಯವಾಗಿದೆ. ಸತತ ಪ್ರಯತ್ನಕ್ಕೆ ಪ್ರತಿಫಲ ಸಿಕ್ಕೇ ಸಿಗುತ್ತದೆ. ನಿನ್ನೆವರೆಗೆ ನನಗೂ ಹತಾಶೆ ಇತ್ತು. ಆದರೆ ಉತ್ತಮ ಫಲಿತಾಂಶ ಬಂದಿದೆ. ಆದ್ದರಿಂದ ಪ್ರಯತ್ನದಿಂದ ಯಾರೂ ಹಿಂದೆ ಸರಿಯಬಾರದು. ವಿಳಂಬವಾದರೂ ಪ್ರಯತ್ನ ವಿಫಲವಾಗುವುದಿಲ್ಲ ಎಂದು ತಿಳಿಸಿದ್ದಾರೆ.

ಜವಾಬ್ದಾರಿ ಜೊತೆಗೆ ಪರೀಕ್ಷೆ: ಕರ್ನಾಟಕ ಕೇಡರ್‌ನಲ್ಲಿ ಐಪಿಎಸ್ ಹುದ್ದೆಗೆ ಹೈದರಾಬಾದ್‌ನಲ್ಲಿ ತರಬೇತಿ ಪಡೆಯುತ್ತಿರುವ ಭಾನುಪ್ರಕಾಶ್, ಈ ಬಾರಿ 523ನೇ ರ್‍ಯಾಂಕ್ ಪಡೆದಿದ್ದಾರೆ. 2022ರಲ್ಲಿ 448ನೇ ರ್‍ಯಾಂಕ್ ಪಡೆದು ಭಾರತೀಯ ಪೊಲೀಸ್ ಸೇವೆ ತರಬೇತಿಯ ಅಂತಿಮ ಹಂತದಲ್ಲಿದ್ದೇನೆ. ಐಎಎಸ್ ಹುದ್ದೆಗಾಗಿ ಪ್ರಯತ್ನ ಮುಂದುವರೆಸಿದ್ದು, 2023ರ ಪರೀಕ್ಷೆಯಲ್ಲಿ 600ನೇ ರ್‍ಯಾಂಕ್, ಈ ಬಾರಿ 523ನೇ ರ್‍ಯಾಂಕ್ ಬಂದಿದೆ. ಆದರೆ ಐಎಎಸ್ ಆಸೆ ಈಡೇರಲಿಲ್ಲ. ಆದರೆ ಜವಾಬ್ದಾರಿಗಳ ಜೊತೆಗೆ ಪರೀಕ್ಷೆ ಬರೆದು ಮೂರನೇ ಬಾರಿ ಆಯ್ಕೆ ಪಟ್ಟಿಯಲ್ಲಿ ಸ್ಥಾನ ಪಡೆದಿರುವ ತೃಪ್ತಿ ಇದೆ ಎಂದು ಭಾನುಪ್ರಕಾಶ್ ಹೇಳಿದ್ದಾರೆ.

ಇವರು ಮೈಸೂರಿನ ಕೃಷಿಕರಾದ ಜಯರಾಮೇಗೌಡ ಹಾಗೂ ಅಂಗನವಾಡಿ ಶಿಕ್ಷಕಿ ಗಿರಿಜಮ್ಮ ದಂಪತಿ ಪುತ್ರ. ಬೆಳವಾಡಿಯ ಸರ್ಕಾರಿ ಶಾಲೆಯಲ್ಲಿ 5ನೇ ತರಗತಿವರೆಗೆ, ಚಾಮರಾಜನಗರದ ಹೊಂಡರಬಾಳಿನ ಜವಾಹರ್ ನವೋದಯ ವಿದ್ಯಾಲಯದಲ್ಲಿ 6ರಿಂದ 12ನೇ ತರಗತಿವರೆಗೆ ಶಿಕ್ಷಣ ಪಡೆದರು. ಬಳಿಕ ಮಂಡ್ಯ ಇನ್‌ಸ್ಟಿಟ್ಯೂಟ್ ಆಫ್ ಮೆಡಿಕಲ್ ಸೈನ್ಸ್‌ನಲ್ಲಿ ಎಂಬಿಬಿಎಸ್ ಹಾಗೂ ಹುಬ್ಬಳ್ಳಿಯ ಕಿಮ್ಸ್‌ನಲ್ಲಿ ಎಂ.ಡಿ ಪಿಡಿಯಾಟ್ರಿಕ್ಸ್ ಪದವಿ ಪಡೆದಿದ್ದಾರೆ.

ಅರಣ್ಯಾಧಿಕಾರಿ ಸಾಧನೆ: ಕನಕದಾಸನಗರದ ಗಂಗರಾಮ್ ಹಾಗೂ ರತ್ನಮ್ಮ ದಂಪತಿ ಪುತ್ರಿ ಜಿ.ರಶ್ಮಿ 976ನೇ ರ್‍ಯಾಂಕ್ ಪಡೆದಿದ್ದಾರೆ. ಪದವಿ ವಿದ್ಯಾರ್ಥಿನಿಯಾಗಿದ್ದಾಗಿನಿಂದಲೂ ನಾಗರಿಕ ಸೇವಾ ಪರೀಕ್ಷೆಗಳಿಗೆ ತಯಾರಿ ನಡೆಸಿದ್ದೇನೆ. 2022ರಲ್ಲಿ ಐಎಫ್‌ಎಸ್ ಪರೀಕ್ಷೆಯಲ್ಲಿ ಯಶಸ್ವಿಯಾಗಿ ಸದ್ಯ ಒಡಿಶಾ ರಾಜ್ಯದ ಖೊರ್ದಾ ಜಿಲ್ಲೆಯಲ್ಲಿ ಉಪ ಅರಣ್ಯ ಸಂರಕ್ಷಣಾಧಿಕಾರಿಯಾಗಿ ಕಾರ್ಯ ನಿರ್ವಹಿಸುತ್ತಿದ್ದೇನೆ. ಇದೀಗ ಸಿವಿಲ್ ಸರ್ವೀಸ್ ಪರೀಕ್ಷೆಯಲ್ಲಿ 976ನೇ ರ್‍ಯಾಂಕ್ ಬಂದಿದ್ದು, ಐಎಫ್‌ಎಸ್ ಹುದ್ದೆಯಲ್ಲೇ ಮುಂದುವರಿಯುತ್ತೇನೆ ಎಂದು ಅವರು ತಿಳಿಸಿದ್ದಾರೆ.

ಕುವೆಂಪುನಗರದ ಬಿಜಿಎಸ್ ಬಾಲಜಗತ್ ಶಾಲೆಯಲ್ಲಿ ಪ್ರಾಥಮಿಕ ಹಾಗೂ ಪ್ರೌಢಶಾಲಾ ಶಿಕ್ಷಣ ಪಡೆದು, ಮರಿಮಲ್ಲಪ್ಪ ಕಾಲೇಜಿನಲ್ಲಿ ಪಿಯುಸಿ ಹಾಗೂ ಜಯಚಾಮರಾಜೇಂದ್ರ ಎಂಜಿನಿಯರಿಂಗ್ ಕಾಲೇಜಿನಲ್ಲಿ ಬಿ.ಇ ಸಿವಿಲ್ ಪದವಿ ಪಡೆದಿದ್ದಾರೆ.

ಶಿವಮೊಗ್ಗ ಮೂಲದ ಮೈಸೂರು ವಿದ್ಯಾರ್ಥಿಗೆ 288ನೇ ರ್‍ಯಾಂಕ್



ಮೈಸೂರು: ಮೈಸೂರಿನಲ್ಲಿ ಇಂಜಿನಿಯರಿಂಗ್ ಪದವಿ ಪಡೆದ ಶಿವಮೊಗ್ಗ ಮೂಲದ ವಿ.ವಿಕಾಸ್ ಯುಪಿಎಸ್‌ಸಿಯಲ್ಲಿ 288ನೇ ರ್‍ಯಾಂಕ್ ಪಡೆದಿದ್ದಾರೆ.

ಸಾಗರದ ಅಣಲೆಕೊಪ್ಪ ಬಡಾವಣೆ ನಿವಾಸಿ, ಸರ್ಕಾರಿ ಪದವಿಪೂರ್ವ ಕಾಲೇಜಿನ ಉಪನ್ಯಾಸಕ ವಿಜಯೇಂದ್ರ ಸಿ.ಪಾಟೀಲ್ ಹಾಗೂ ಶಿಕ್ಷಕಿ ಮಹಾಲಕ್ಷ್ಮಿ ಹೆಗಡೆ ದಂಪತಿ ಪುತ್ರ ವಿ.ವಿಕಾಸ್, 27ನೇ ವಯಸ್ಸಿಗೆ ಮೊದಲ ಪ್ರಯತ್ನದಲ್ಲೇ ಯಶಸ್ಸು ಪಡೆದಿದ್ದಾರೆ. ಸಾಗರ ಹಾಗೂ ಶಿವಮೊಗ್ಗದಲ್ಲಿ ಪಿಯುಸಿವರೆಗೆ ಓದಿದ್ದ ಇವರು, ಮೈಸೂರಿನ ಎನ್‌ಐಇಯಲ್ಲಿ ಇ ಅಂಡ್ ಇ ವಿಷಯದಲ್ಲಿ ಎಂಜಿನಿಯರಿಂಗ್ ಪದವಿ ಪಡೆದಿದ್ದಾರೆ. ನಂತರ ಐಐಟಿ ರೂರ್ಕಿಯಲ್ಲಿ ಎಂಟೆಕ್ ಪದವಿಯನ್ನೂ ಪೂರೈಸಿದ್ದಾರೆ.

ಶಿಕ್ಷಣ, ಉದ್ಯೋಗಗಳಲ್ಲಿ ಮೀಸಲಾತಿಗಾಗಿ

ಒಂದು ಜಾತಿಯನ್ನು ವಿವಿಧ ಗುಂಪುಗಳಾಗಿ ವರ್ಗೀಕರಿಸೋದು ಸರಿಯಲ್ಲ: ಹೈ ತೀರ್ಪು



ಬೆಂಗಳೂರು, ಏ.22– ಶಿಕ್ಷಣ ಮತ್ತು ಉದ್ಯೋಗಕ್ಕಾಗಿ ಒಂದೇ ಸಮುದಾಯವನ್ನು ಎರಡು ವಿಭಿನ್ನ ಮೀಸಲಾತಿ ವರ್ಗಗಳ ಅಡಿಯಲ್ಲಿ ವರ್ಗೀಕರಿಸುವುದು ಸರಿಯಲ್ಲ ಎಂದು ಕರ್ನಾಟಕ ಹೈಕೋರ್ಟ್ ಮಹತ್ವದ ತೀರ್ಪು ನೀಡಿದೆ.

ಬಲಜಿಗ/ಬಣಜಿಗ ಸಮುದಾಯದ ರಾಜ್ಯದ ವರ್ಗೀಕರಣವನ್ನು ಪ್ರಶ್ನಿಸಿ ಮೈಸೂರು ಜಿಲ್ಲೆಯ ಕೊಳ್ಳೇಗಾಲ ತಾಲೂಕಿನ ನಿವಾಸಿ ವಿ.ಸುಮಿತ್ರಾ ಸಲ್ಲಿಸಿದ ಅರ್ಜಿಗೆ ಪ್ರತಿಕ್ರಿಯೆಯಾಗಿ ಈ ಹೈಕೋರ್ಟ್ ಈ ತೀರ್ಪು ನೀಡಿದೆ. ಇತ್ತೀಚೆಗೆ ತೀರ್ಪು ನೀಡಿದ ನ್ಯಾಯಮೂರ್ತಿ ಸೂರಜ್ ಗೋವಿಂದರಾಜ್, ಶಿಕ್ಷಣ ಮತ್ತು ಉದ್ಯೋಗ ಉದ್ದೇಶಗಳಿಗಾಗಿ ಬಲಜಿಗ/ಬಣಜಿಗ ಸಮುದಾಯವನ್ನು ಗುಂಪು 'ಬಿ' ಅಡಿಯಲ್ಲಿ ಏಕರೂಪವಾಗಿ ವರ್ಗೀಕರಿಸಲು ಕರ್ನಾಟಕ ಸರ್ಕಾರಕ್ಕೆ ನಿರ್ದೇಶನ ನೀಡಿದರು.

ಶಿಕ್ಷಣಕ್ಕಾಗಿ ವರ್ಗ 'ಬಿ' ಅಡಿಯಲ್ಲಿ (ಆರ್ಟಿಕಲ್ 15(4) ಅಡಿಯಲ್ಲಿ) ಮತ್ತು ಉದ್ಯೋಗಕ್ಕಾಗಿ ವರ್ಗ 'ಡಿ' ಅಡಿಯಲ್ಲಿ (ಆರ್ಟಿಕಲ್ 16(4) ಅಡಿಯಲ್ಲಿ) ಸಮುದಾಯವನ್ನು ಇರಿಸುವ ರಾಜ್ಯದ ಅಸ್ತಿತ್ವದಲ್ಲಿರುವ ವರ್ಗೀಕರಣವು ತಾರತಮ್ಯ ಮತ್ತು ಸಂವಿಧಾನಬಾಹಿರವಾಗಿದೆ ಎಂಬುದನ್ನು ನ್ಯಾಯಾಲಯ ಗಮನಿಸಿದೆ. ಸುಮಿತ್ರಾ ಅವರು ತಮ್ಮ ಜಾತಿ 'ಬಿ' ವರ್ಗಕ್ಕೆ ಸೇರಿದೆ ಎಂದು ಹೇಳಿಕೊಂಡ ಕಾರಣ 1993ರಲ್ಲಿ ಒಬಿಸಿ ಕೋಟಾದಡಿಯಲ್ಲಿ ಪ್ರಾಥಮಿಕ ಶಾಲಾ ಶಿಕ್ಷಕಿಯಾಗಿ ನೇಮಕಗೊಂಡರು. ಆದಾಗ್ಯೂ, 1996ರಲ್ಲಿ ಉದ್ಯೋಗಕ್ಕಾಗಿ ತಮ್ಮ ಸಮುದಾಯವನ್ನು 'ಡಿ' ವರ್ಗದ ಅಡಿಯಲ್ಲಿ ವರ್ಗೀಕರಿಸಲಾಗಿದೆ ಎಂದು ತಿಳಿಸುವ ನೋಟಿಸ್ ಅವರಿಗೆ ಬಂದಿತು. ಇದರಿಂದಾಗಿ ಅವರ ಜಾತಿ ಪ್ರಮಾಣಪತ್ರವು ಉದ್ಯೋಗ–ಸಂಬಂಧಿತ ಮೀಸಲಾತಿಗೆ ಅಮಾನ್ಯವಾಗಿತ್ತು.

ಇಲಾಖಾ ಮೇಲ್ಮನವಿಗಳು ಮತ್ತು ಕರ್ನಾಟಕ ಆಡಳಿತ ನ್ಯಾಯಮಂಡಳಿಯ ಮೂಲಕ ಪರಿಹಾರಕ್ಕಾಗಿ ಹಲವು ಬಾರಿ ಯತ್ನಿಸಿದರೂ ಪ್ರಯೋಜನವಾಗಲಿಲ್ಲ. ನಂತರ ಸುಮಿತ್ರಾ ಈ ದ್ವಂದ್ವ ವರ್ಗೀಕರಣವನ್ನು ತೋರಿಸುವ 1986ರ ಸರ್ಕಾರಿ ಅಧಿಸೂಚನೆಯನ್ನು ಪತ್ತೆಹಚ್ಚಿದರು. ಆರ್ಟಿಕಲ್ 15(4) ಮತ್ತು 16(4) ವಿಧಿಗಳ ಹಿಂದಿನ ಸಾಂವಿಧಾನಿಕ ಉದ್ದೇಶವು ಸ್ಥಿರವಾಗಿದೆ. ಅದೇ ಅನಾನುಕೂಲಕರ ವರ್ಗಗಳಿಗೆ ಸಾಮಾಜಿಕ ನ್ಯಾಯವನ್ನು ಖಚಿತಪಡಿಸುವ ಗುರಿಯನ್ನು ಹೊಂದಿದೆ ಎಂದು ವಾದಿಸಿದ ಅವರು, ರಾಜ್ಯದ ವರ್ಗೀಕರಣವನ್ನು ಪ್ರಶ್ನಿಸಿದರು.

ನ್ಯಾಯಮೂರ್ತಿ ಗೋವಿಂದರಾಜ್ ಅವರು ಈ ವಾದವನ್ನು ಎತ್ತಿಹಿಡಿದು, 14ನೇ ವಿಧಿಯ ಅಡಿಯಲ್ಲಿ ಕಾನೂನಿನ ಮುಂದೆ ಸಮಾನತೆಯ ತತ್ವವು ಮೀಸಲಾತಿಯ ವಿಷಯದಲ್ಲೂ ಸಮಾನ ವ್ಯವಸ್ಥೆಯನ್ನು ಒಳಗೊಂಡಿದೆ. ಸಂದರ್ಭವನ್ನು ಅವಲಂಬಿಸಿ ಒಂದೇ ಸಮುದಾಯವನ್ನು ವಿಭಿನ್ನ ವರ್ಗಗಳಲ್ಲಿ ಇರಿಸಲಾಗುವುದಿಲ್ಲ ಅಂತಹ ವಿಭಾಗವು ಅಂತರ್ಗತವಾಗಿ ತಾರತಮ್ಯದಿಂದ ಕೂಡಿದೆ ಎಂದು ಕೋರ್ಟ್ ಅಭಿಪ್ರಾಯಪಟ್ಟಿದೆ. ಅಂತಹ ಯಾವುದೇ ವಿಭಿನ್ನ ನಡವಳಿಕೆ ಸಾಂವಿಧಾನಿಕ ರಕ್ಷಣೆಗಳನ್ನು ಉಲ್ಲಂಘಿಸುತ್ತದೆ ಎಂದು ನ್ಯಾಯಾಲಯ ಅಭಿಪ್ರಾಯಪಟ್ಟಿದೆ.

ಶಿಕ್ಷಣಕ್ಕಾಗಿ ಹಿಂದುಳಿದ ಸಮುದಾಯವನ್ನು ಗುರುತಿಸಿದರೆ, ಉದ್ಯೋಗಕ್ಕೆ ಬಂದಾಗ ಅದನ್ನು ವಿಭಿನ್ನವಾಗಿ ಪರಿಗಣಿಸಲಾಗುವುದಿಲ್ಲ ಎಂದು ನ್ಯಾಯಾಧೀಶರು ಹೇಳಿದರು. ಅಲ್ಲದೆ ಉದ್ಯೋಗದಲ್ಲಿ ಸುಮಿತ್ರಾ ಅವರ ಗ್ರೂಪ್ 'ಬಿ' ಮೀಸಲಾತಿ ಹಕ್ಕನ್ನು ತಿರಸ್ಕರಿಸಿದ ಆದೇಶಗಳನ್ನು ರದ್ದುಗೊಳಿಸಿ, ಮೀಸಲಾತಿ ವರ್ಗ 'ಬಿ' ಅಡಿಯಲ್ಲಿ ಅವರ ಅರ್ಹತೆಯನ್ನು ಒಪ್ಪಿಕೊಂಡು, ಪ್ರಾಥಮಿಕ ಶಾಲಾ ಶಿಕ್ಷಕಿಯಾಗಿ ಅವರ ಉದ್ಯೋಗವನ್ನು ಪುನರ್ ಕಲ್ಪಿಸಿ ಎಂದು ರಾಜ್ಯಕ್ಕೆ ನಿರ್ದೇಶನ ನೀಡಿದೆ.

ರಿಕ್ಕಿ ರೈ ಶೂಟೌಟ್ ಪ್ರಕರಣ

ಮುತ್ತಪ್ಪ ರೈ ಎರಡನೇ ಪತ್ನಿಗೆ ಹೈಕೋರ್ಟ್‌ನಿಂದ ರಿಲೀಫ್!



ಬೆಂಗಳೂರು, ಏ.22– ಭೂಗತ ಲೋಕದ ಮಾಜಿ ಡಾನ್ ಮುತ್ತಪ್ಪ ರೈ ಪುತ್ರ ರಿಕ್ಕಿ ರೈ ಮೇಲೆ ರಾಮನಗರ ತಾಲೂಕಿನ ಬಿಡದಿ ಬಳಿ ನಡೆದ ಗುಂಡಿನ ದಾಳಿಗೆ ಸಂಬಂಧಿಸಿದಂತೆ, ಕರ್ನಾಟಕ ಹೈಕೋರ್ಟ್ ಮಂಗಳವಾರ ಮುತ್ತಪ್ಪ ರೈ ಅವರ ಎರಡನೇ ಪತ್ನಿ ಅನುರಾಧ ಅವರಿಗೆ ರಿಲೀಫ್ ನೀಡಿದೆ.

ನ್ಯಾಯಮೂರ್ತಿ ಹೇಮಂತ್ ಚಂದನಗೌಡರ್ ಪೀಠವು, ಅನುರಾಧ ಅವರ ವಿರುದ್ಧ ಯಾವುದೇ ಬಲವಂತದ ಕ್ರಮ ಕೈಗೊಳ್ಳದಂತೆ ಪೊಲೀಸರಿಗೆ ನಿರ್ದೇಶನ ನೀಡಿದೆ.

ಪ್ರಕರಣದಲ್ಲಿ ತಮ್ಮ ವಿರುದ್ಧ ದಾಖಲಾಗಿರುವ ಎಫ್‌ಐಆರ್ ರದ್ದುಗೊಳಿಸುವಂತೆ ಕೋರಿ ಅನುರಾಧ ಸಲ್ಲಿಸಿದ್ದ ಅರ್ಜಿಯ ವಿಚಾರಣೆಯ ಸಂದರ್ಭದಲ್ಲಿ ನ್ಯಾಯಾಲಯ ಈ ಆದೇಶ ಹೊರಡಿಸಿದೆ.

ಏಪ್ರಿಲ್ 18 ಮತ್ತು 19ರ ಮಧ್ಯ ರಾತ್ರಿ ಬೆಂಗಳೂರಿನ ಹೊರವಲಯದ ಬಿಡದಿಯಲ್ಲಿರುವ ರಿಕ್ಕಿ ರೈ ಅವರ ಫಾರ್ಮ್‌ಹೌಸ್ ಹೊರಗೆ ಅಪರಿಚಿತ ದುಷ್ಕರ್ಮಿಗಳು ಗುಂಡು ಹಾರಿಸಿದ ಘಟನೆಯಲ್ಲಿ ಅನುರಾಧ ಅವರನ್ನು ಆರೋಪಿಯನ್ನಾಗಿ ಹೆಸರಿಸಲಾಗಿದೆ.

ರಿಕ್ಕಿ ಅವರ ಕಾರು ಚಾಲಕ ಬಸವರಾಜ್ ಅವರು ಸಲ್ಲಿಸಿದ ದೂರಿನ ಆಧಾರದ ಮೇಲೆ ಬಿಡದಿ ಪೊಲೀಸರು ಅನುರಾಧ ಸೇರಿದಂತೆ ನಾಲ್ವರ ವಿರುದ್ಧ ಎಫ್‌ಐಆರ್ ದಾಖಲಿಸಿದ್ದಾರೆ.

ಅನುರಾಧ ಪರ ವಾದ ಮಂಡಿಸಿದ ಹಿರಿಯ ವಕೀಲ ವೆಂಕಟೇಶ್ ಆರಂಬಟ್ಟಿ, ಪ್ರಕರಣದಲ್ಲಿ ಅವರ ಹೆಸರನ್ನು ಅನಗತ್ಯವಾಗಿ ಎಳೆದು ತರಲಾಗಿದೆ ಎಂದರು.

ಅನುರಾಧಾ ಮತ್ತು ರಿಕ್ಕಿ ರೈ ನಡುವಿನ ಎಲ್ಲ ವಿವಾದಗಳು ಆರು ತಿಂಗಳ ಹಿಂದೆಯೇ ಬಗೆಹರಿದಿವೆ. ಅನುರಾಧಾ ಏ.14 ರಂದು ತನ್ನ ಮಗಳೊಂದಿಗೆ ಯುರೋಪ್‌ಗೆ ಪ್ರಯಾಣ ಬೆಳೆಸಿದ್ದಾರೆ ಮತ್ತು ಕೊಲೆ ಯತ್ನಕ್ಕೂ ಆಕೆಗೂ ಯಾವುದೇ ಸಂಬಂಧವಿಲ್ಲ ಎಂದು ಅವರು ನ್ಯಾಯಾಲಯಕ್ಕೆ ತಿಳಿಸಿದರು. ಈ ಸಲ್ಲಿಕೆಗಳನ್ನು ಪರಿಗಣಿಸಿದ ಹೈಕೋರ್ಟ್ ಅನುರಾಧಾ ಅವರಿಗೆ ಮಧ್ಯಂತರ ಪರಿಹಾರ ನೀಡಿತು.

ಕನ್ನಡಿಗ ವಿಕಾಸ್ ಕುಮಾರ್ ಮೇಲೆ ಹಲ್ಲೆ

ವಿಂಗ್ ಕಮಾಂಡರ್ ಶಿಲಾದಿತ್ಯ ಬೋಸ್ ವಿರುದ್ಧ ಸೂಕ್ತ ಕಾನೂನು ಕ್ರಮ

- ಬೆಂಗಳೂರು ಪೊಲೀಸ್ ಆಯುಕ್ತರಿಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಸೂಚನೆ
- ವಿಕಾಸ್‌ಕುಮಾರ್ ಬೆನ್ನಿಗೆ ನಿಂತ ಜೆಡಿಎಸ್ ಯುವ ನಾಯಕ ನಿಖಿಲ್ ಕುಮಾರಸ್ವಾಮಿ



ಬೆಂಗಳೂರು, ಏ.22(ಕೆಎಂಶಿ)– ಕನ್ನಡಿಗ ವಿಕಾಸ್ ಕುಮಾರ್ ಮೇಲೆ ಹಲ್ಲೆ ನಡೆಸಿರುವ ಐಎಎಫ್ ವಿಂಗ್ ಕಮಾಂಡರ್ ಶಿಲಾದಿತ್ಯ ಬೋಸ್ ವಿರುದ್ಧ ಸೂಕ್ತ ಕಾನೂನು ಕ್ರಮ ಜರುಗಿಸುವಂತೆ ನಗರ ಪೊಲೀಸ್ ಕಮಿಷನರ್‌ಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಇಂದಿಲ್ಲಿ ಆದೇಶಿಸಿದ್ದಾರೆ. ನಿನ್ನೆಯ ಘಟನೆಗೆ ಸಂಬಂಧಿಸಿದಂತೆ ತಪ್ಪಿತಸ್ಥರು ಯಾರೇ ಆಗಿರಲಿ, ಯಾವ ಹುದ್ದೆಯಲ್ಲೇ ಇರಲಿ, ಅವರ ವಿರುದ್ಧ ಸೂಕ್ತ ಕಾನೂನು ಕ್ರಮ ಜರುಗಿಸುವಂತೆ ಸೂಚಿಸಿದ್ದಾರೆ.

ಹಲ್ಲೆ ಪ್ರಕರಣವನ್ನು ರಾಜ್ಯ ಸರ್ಕಾರ ಅತ್ಯಂತ ಗಂಭೀರವಾಗಿ ಪರಿಗಣಿಸಿದ್ದು ಅನ್ಯಾಯಕ್ಕೊಳಗಾದ ವ್ಯಕ್ತಿಗೆ ನ್ಯಾಯ ಕೊಡಿಸಲು ಬದ್ಧ ಎಂದಿದ್ದಾರೆ.

ವಾಹನಕ್ಕೆ ತಾಗಿದ ವಿಚಾರಕ್ಕೆ ಸಂಬಂಧಿಸಿದಂತೆ ವಿಕಾಸ್ ಕುಮಾರ್ ಅವರ ಮೇಲೆ ಹಲ್ಲೆ ನಡೆಸಿದ ವಿಂಗ್ ಕಮಾಂಡರ್, ನಂತರ ಸಾಮಾಜಿಕ ಜಾಲತಾಣದಲ್ಲಿ ಕರ್ನಾಟಕ ಮತ್ತು ಕನ್ನಡಿಗರ ಬಗ್ಗೆ ಇಲ್ಲ ಸಲ್ಲದ ಆರೋಪ ಹೊರಿಸಿ, ಕನ್ನಡಿಗರ ಸ್ವಾಭಿಮಾನ ಕೆಣಕುವ ದುಷ್ಟತನ ಮೆರೆದಿದ್ದಾರೆ.

ಕನ್ನಡಿಗರು ಮಾತ್ರ ಭಾಷೆ ಬಗ್ಗೆ ಅಭಿಮಾನ ಹೊಂದಿರುವವರೇ ಹೊರತು ದುರಭಿಮಾನಿಗಳಲ್ಲ. ಭಾಷೆಯ ವಿಚಾರದಲ್ಲಿ ವಿನಾಕಾರಣ ಇತರರ ಮೇಲೆ ಹಲ್ಲೆ ಮಾಡುವ ಅಥವಾ ನಿಂದಿಸುವ ಸಣ್ಣತನ ಕನ್ನಡಿಗರದಲ್ಲ.

ರಾಷ್ಟ್ರದ ವಿವಿಧ ಮೂಲೆಗಳಿಂದ ಬಂದು ಇಲ್ಲಿ ನೆಲೆಸಿರುವ ಪ್ರತಿಯೊಬ್ಬರನ್ನೂ ಗೌರವದಿಂದ ಕಾಣುತ್ತಿರುವ, ಅವರನ್ನೂ ಕನ್ನಡಿಗರೇ ಎಂದು ಪ್ರೀತಿಸುವ ಸಂಸ್ಕೃತಿ ಕನ್ನಡ ಮಣ್ಣಿನದು. ಇದಕ್ಕೆ ಇತಿಹಾಸ ಸಾಕ್ಷಿ ಎಂದಿದ್ದಾರೆ.

ರಾಷ್ಟ್ರೀಯ ಮಾಧ್ಯಮಗಳು ತಮ್ಮ ಜವಾಬ್ದಾರಿ ಮತ್ತು ವೃತ್ತಿ ಧರ್ಮ ಮರೆತು, ಯಾರೋ ಒಬ್ಬ ಮಾಡಿದ ಆಧಾರ ರಹಿತ ಆರೋಪವನ್ನು ಹಿಡಿದುಕೊಂಡು ಇಡೀ ಕರ್ನಾಟಕದ ಜನತೆಗೆ ಮಸಿ ಬಳಿಯುವ ಕೆಲಸವನ್ನು ಮಾಡಿದ್ದು ನಿಜಕ್ಕೂ ವಿಷಾದನೀಯ.

ಕನ್ನಡಿಗರಿಂದ ಆಯ್ಕೆಯಾದ ಕನ್ನಡದ್ದೇ ಸರ್ಕಾರ ಕರ್ನಾಟಕದಲ್ಲಿದೆ. ತಾನು ಮಾಡಿದ ಹಲ್ಲೆಯನ್ನು ವಿರೋಧಿಗಳ ಮೇಲೆ ಹೊರಿಸಿದವರನ್ನು ಸುಮ್ಮನೇ ಬಿಡುವುದಿಲ್ಲ ಎಂದಿದ್ದಾರೆ.

ಮುಖ್ಯಮಂತ್ರಿ ಹೇಳಿಕೆಗೂ ಮುನ್ನ ಜೆಡಿಎಸ್‌ನ ಯುಜನತಾದಳ ಅಧ್ಯಕ್ಷ ನಿಖಿಲ್ ಕುಮಾರಸ್ವಾಮಿ ಘಟನೆ ಸಂಬಂಧ ಟ್ವೀಟ್ ಮಾಡಿ, ಬೆಂಗಳೂರಿನಲ್ಲಿ ಐಎಎಫ್ ವಿಂಗ್ ಕಮಾಂಡರ್ ಕನ್ನಡಿಗ ವಿಕಾಸ್ ಕುಮಾರ್ ಮೇಲೆ ಹಲ್ಲೆ ನಡೆಸಿರುವುದು ಸ್ವೀಕಾರಾರ್ಹವಲ್ಲ, ಖಂಡನೀಯ ಎಂದಿದ್ದಾರೆ.

ಇಂತಹ ಅಧಿಕಾರ ದುರುಪಯೋಗ ನಿರ್ಲಕ್ಷಿಸಲಾಗದು. ನಾವು ವಿಕಾಸ್ ಜೊತೆ ದೃಢವಾಗಿ ನಿಲ್ಲುತ್ತೇವೆ. ನ್ಯಾಯಯುತ ಮತ್ತು ಪಾರದರ್ಶಕ ತನಿಖೆ ಮೂಲಕ ನ್ಯಾಯ ಕೋರುತ್ತೇವೆ.

ವಿಕಾಸ್ ಕುಮಾರ್ ಅಥವಾ ಅವರ ಕುಟುಂಬದೊಂದಿಗೆ ನನ್ನನ್ನು ಸಂಪರ್ಕಿಸಲು ಯಾರಾದರೂ ಸಹಾಯ ಮಾಡಬಹುದಾದರೆ, ದಯವಿಟ್ಟು ಮೆಸೇಜ್ ಮಾಡಿ, ನಾನು ಸಹಾಯ ಮಾಡಲು ಬಯಸುತ್ತೇನೆ ಎಂದಿದ್ದಾರೆ.

ಉಗ್ರರ ದಾಳಿ ಖಂಡಿಸಿ ಬೀದಿಗಿಳಿದ ಜಮ್ಮು–ಕಾಶ್ಮೀರದ ವಿವಿಧ ಸಂಘಟನೆಗಳು

ಶ್ರೀನಗರ, ಏ.22–ಪಹಲ್ಗಾಮ್‌ನಲ್ಲಿ ಪ್ರವಾಸಿಗರ ಮೇಲೆ ಉಗ್ರರ ದಾಳಿಯನ್ನು ಖಂಡಿಸಿ ಜಮ್ಮು–ಕಾಶ್ಮೀರದ ವಿವಿಧ ಸಂಘಟನೆಗಳು ಬೀದಿಗಿಳಿದು ಹೋರಾಟ ನಡೆಸಿವೆ. ಜಮ್ಮು–ಕಾಶ್ಮೀರದಲ್ಲಿ ಶಾಂತಿ ನೆಲೆಗೊಳ್ಳುತ್ತಿರುವ ಸಂದರ್ಭದಲ್ಲಿ ಪ್ರವಾಸಿಗರ ಮೇಲೆ ನಡೆದಂತಹ ದಾಳಿ ರಾಜ್ಯದ ಪ್ರವಾಸೋದ್ಯಮದ ಮೇಲೆ ಪ್ರತಿಕೂಲ ಪರಿಣಾಮವನ್ನುಂಟು ಮಾಡುವುದರ ಜೊತೆಗೆ ಆರ್ಥಿಕವಾಗಿಯೂ ಹಾನಿಕಾರಕ. ಈ ಮಧ್ಯೆ ಉಗ್ರರು ಪ್ರವಾಸಿಗರನ್ನು ಗುರಿಯಾಗಿಸಿಕೊಂಡು ದಾಳಿ ನಡೆಸಿರುವುದು ಆಘಾತಕಾರಿ ಮತ್ತು ಜನ ಜೀವನದ ಮೇಲೆ ಭಾರೀ ಪರಿಣಾಮವನ್ನು ಉಂಟು ಮಾಡುತ್ತದೆ ಎಂದು ಆಕ್ರೋಶ ವ್ಯಕ್ತಪಡಿಸಿದ ಜನತೆ, ಪೈಶಾಚಿಕ ಕೃತ್ಯ ಖಂಡಿಸಿ ಜಮ್ಮು–ಕಾಶ್ಮೀರ್ ಬಂದ್‌ಗೂ ಕರೆ ನೀಡಲು ನಿರ್ಧರಿಸಿವೆ.

ನಕ್ಕರೆ ಅದೇ ಸ್ವರ್ಗ

ಗಂಡ : ಏನೇ ನಾನು ಎರಡು ನಿಮಿಷಕ್ಕೆ ರೆಡಿಯಾದೆ. ನೀನಿನ್ನು ರೆಡಿಯಾಗಿಲ್ಲ?

ಹೆಂಡ್ತಿ : ವ್ಯಾಗಿ ರೆಡಿಯಾಗೋದಿಕ್ಕೂ ಬಿರಿಯಾನಿ ರೆಡಿಯಾಗೋದಿಕ್ಕೂ ವ್ಯತ್ಯಾಸ ಇಲ್ವ?

ಮೈಸೂರು ಮಿತ್ರ

ಬುಧವಾರ, 23 ಏಪ್ರಿಲ್ 2025

ಸತ್ಯೇನೋತ್ತಭಿತಾ ಭೂಮಿಃ ನ ಹಿ ಸತ್ಯಾತ್ಪರೋ ಧರ್ಮಃ
(ಭೂಮಿಯು ಸತ್ಯದ ಮೇಲೆ ನಿಂತಿದೆ, ಸತ್ಯಕ್ಕಿಂತ ಮಿಗಿಲಾದ ಧರ್ಮವಿಲ್ಲ)

ಸಂಪಾದಕ: ಎಂ.ಗೋವಿಂದೇಗೌಡ M.A.

ಅಮೃತ ವಾಹಿನಿ..........

ದುಡ್ಡು ಎಲ್ಲರಿಗೂ ಸಿಗುತ್ತೆ.
ಆದರೆ 'ಒಳ್ಳೆಯವರು' ದುಡ್ಡಿಗೆ ಸಿಗುವುದಿಲ್ಲ. –ನುಡಿಮುತ್ತು

ವೇದ ಸುಳ್ಳಾದರೂ ಗಾದೆ ಸುಳ್ಳಾಗದು { ದಕ್ಷಿಣೆಗಾದರೆ ಮಾತು ಹಿಡಿದಾನು,
ಮಂತ್ರಕ್ಕಾದರೆ ಬೆನ್ನು ತೋರ್ಸಿಯಾನು.

ನಿಮ್ಮ ಪತ್ರಗಳು

■ ಶಾಸ್ತ್ರೀಯ ಕನ್ನಡ ಭಾಷಾ ಕೇಂದ್ರಕ್ಕೆ ಕೇಂದ್ರ ಸರ್ಕಾರ ಅನುಮತಿ ನೀಡಲಿ

ಮಾನ್ಯರೆ,

ಮೈಸೂರು ವಿಶ್ವವಿದ್ಯಾನಿಲಯ ಕರ್ನಾಟಕ ಸರ್ಕಾರದ ಆದೇಶ ಪಡೆದು ಮಾನಸ ಗಂಗೋತ್ರಿಯಲ್ಲಿ ಶಾಸ್ತ್ರೀಯ ಕನ್ನಡ ಭಾಷಾ ಕೇಂದ್ರ ನಿರ್ಮಾಣಕ್ಕೆ ನಾಲ್ಕೂವರೆ ಎಕರೆ ಜಾಗವನ್ನು ಮೂವತ್ತು ವರ್ಷಗಳ ಗುತ್ತಿಗೆಗೆ ಕೊಟ್ಟು ಕರಾರು ಮಾಡಿಕೊಳ್ಳಬೇಕೆಂದು ಕೋರಿ ತಮಗೆ ಕರಡು ಪ್ರತಿಯನ್ನು ಕಳಿಸಿ ಸಾಕಷ್ಟು ಕಾಲಾವಕಾಶ ಆಗಿರುವುದನ್ನು ತಮ್ಮ ಗಮನಕ್ಕೆ ತರಬಯಸುತ್ತೇವೆ.

ಭಾರತ ಸರ್ಕಾರವು ತೆಲುಗು ಶಾಸ್ತ್ರೀಯ ಭಾಷೆ ಕೇಂದ್ರಕ್ಕೆ ಕಟ್ಟಡ ನಿರ್ಮಿಸಲು ಐವತ್ತು ಕೋಟಿ ರೂಪಾಯಿಗಳನ್ನು ನೀಡಿರುವುದಾಗಿ ನಮಗೆ ತಿಳಿದು ಬಂದಿದೆ. ಇದು ತೆಲುಗು ಶಾಸ್ತ್ರೀಯ ಭಾಷಾ ಕೇಂದ್ರಕ್ಕೆ ಸ್ವಾಯತ್ತೆ ಸಿಗಲು ಮೊದಲ ಹೆಜ್ಜೆಯಾಗಲಿದೆ. ಅದೇ ರೀತಿ ಶಾಸ್ತ್ರೀಯ ಭಾಷಾ ಕನ್ನಡ ಕೇಂದ್ರಕ್ಕೆ ಜಾಗವನ್ನು ತೋರಿಸಿದರೆ ಕಟ್ಟಡ ನಿರ್ಮಾಣಕ್ಕೆ 50 ಕೋಟಿ ರೂ. ಅನುದಾನ ಲಭಿಸುತ್ತದೆ ಎಂದು ಹೇಳಲಾಗಿದೆ.

ಈ ವಿಷಯದಲ್ಲಿ ಮೈಸೂರು ವಿಶ್ವವಿದ್ಯಾನಿಲಯ ಅತ್ಯಂತ ಉದಾರವಾಗಿ ವರ್ತಿಸಿ, ಕನ್ನಡದ ಏಳಿಗೆಗಾಗಿ ಮಾನಸಗಂಗೋತ್ರಿಯಲ್ಲಿ ನಾಲ್ಕೂವರೆ ಎಕರೆ ಜಾಗವನ್ನು ನೀಡಲು ಮುಂದಾಗಿದ್ದು, ಅದಕ್ಕೆ ಸಿಂಡಿಕೇಟ್ ಒಪ್ಪಿಗೆಯು ದೊರೆತಿರುವುದು ಸಂತಸದ ವಿಷಯ. ಅದಕ್ಕಾಗಿ ಕನ್ನಡ ಕ್ರಿಯಾ ಸಮಿತಿ, ಶಾಸ್ತ್ರೀಯ ಕನ್ನಡ ಭಾಷಾ ಹೋರಾಟ ಸಮಿತಿ ವಿಶ್ವವಿದ್ಯಾನಿಲಯಕ್ಕೆ ಕೃತಜ್ಞತೆ ಸಲ್ಲಿಸುತ್ತದೆ.

ಈ ನಿರ್ಧಾರಕ್ಕೆ ಅನುಗುಣವಾಗಿ ಜಾಗದ ಹಸ್ತಾಂತರ ಮಾಡಲು ಸರ್ಕಾರದ ಕಾರ್ಯದರ್ಶಿ ಒಪ್ಪಿಗೆ ಕೊಟ್ಟಿರುತ್ತಾರೆ. ಈ ಆದೇಶವನ್ನು ಅನುಸರಿಸಿ ವಿಶ್ವವಿದ್ಯಾನಿಲಯದ ಕುಲಸಚಿವರು ಗುತ್ತಿಗೆಯ ಕರಾರು ಪತ್ರದ ಕರಡು ಪ್ರತಿಯೊಂದಿಗೆ ಮುಂದಿನ ಕ್ರಮ ಕೈಗೊಳ್ಳಬೇಕೆಂದು ಕೋರಿದ್ದರೂ ಕೇಂದ್ರೀಯ ಭಾಷಾ ಸಂಸ್ಥಾನದ ನಿರ್ದೇಶಕರು ಈವರೆಗೆ ಯಾವುದೇ ಕ್ರಮವನ್ನು ಕೈಗೊಳ್ಳದಿರುವುದು ಅಚ್ಚರಿ ತಂದಿದೆ.

ಈ ಕೂಡಲೇ ವಿಶ್ವವಿದ್ಯಾನಿಲಯದ ಜೊತೆ ಕರಾರು ಮಾಡಿಕೊಂಡು, ಕೇಂದ್ರ ಸರ್ಕಾರದ ಅನುದಾನ ಪಡೆದು ಶಾಸ್ತ್ರೀಯ ಕನ್ನಡ ಭಾಷಾ ಕೇಂದ್ರಕ್ಕೆ ಸುಸಜ್ಜಿತವಾದ ಕಟ್ಟಡವನ್ನು ನಿರ್ಮಿಸಿ, ಅದಕ್ಕೆ ಸ್ವಾಯತ್ತೆ ದೊರಕಲು ಬುನಾದಿ ಹಾಕಬೇಕೆಂದು ಕನ್ನಡಿಗರ ಪರವಾಗಿ ವಿಶ್ವಾಸಪೂರ್ವಕವಾಗಿ ಕನ್ನಡ ಕ್ರಿಯಾ ಸಮಿತಿ ಮತ್ತು ಶಾಸ್ತ್ರೀಯ ಕನ್ನಡ ಭಾಷಾ ಹೋರಾಟ ಸಮಿತಿ ಪರವಾಗಿ ಒತ್ತಾಯಿಸುತ್ತೇವೆ.

–ಸ.ರ.ಸುದರ್ಶನ, ಕಾರ್ಯದರ್ಶಿ, ಶಾಸ್ತ್ರೀಯ ಕನ್ನಡ ಭಾಷಾ ಹೋರಾಟ ಸಮಿತಿ, ಮೈಸೂರು.

■ ಹಿರಿಯ ನಾಗರಿಕರ ಕಾಯ್ದೆ ಹೆಚ್ಚು ಪ್ರಚಾರವಾಗಲಿ

ಮಾನ್ಯರೆ,

ತಂದೆ ತಾಯಿಯನ್ನು ವೃದ್ಧಾಪ್ಯದಲ್ಲಿ ಆರೈಕೆ ಮಾಡುವುದು ತಮ್ಮ ಕರ್ತವ್ಯ ಎಂಬುದನ್ನು ಎಷ್ಟೋ ಮಕ್ಕಳು ಮರೆತುಬಿಟ್ಟಿದ್ದಾರೆ. ಹೆತ್ತವರನ್ನು ದೊಡ್ಡ ದೊಡ್ಡ ನಗರಗಳಲ್ಲಿ ವೃದ್ಧಾಶ್ರಮಗಳಿಗೆ ಸೇರಿಸುವುದನ್ನು ಕಾಣುತ್ತೇವೆ. ಅಷ್ಟೇ ಅಲ್ಲದೆ ತಂದೆ –ತಾಯಿ ಗಳಿಸಿದ ಆಸ್ತಿಯನ್ನು ಮಕ್ಕಳು ಮತ್ತು ಸಂಬಂಧಿಕರು ತಮ್ಮ ಹೆಸರಿಗೆ "ವಿಲ್" ಮಾಡಿಸಿಕೊಂಡು ನಂತರ ಅವರನ್ನು ನಿರ್ಲಕ್ಷಿಸುವ ನಿದರ್ಶನಗಳನ್ನು ಕಾಣುತ್ತೇವೆ. ಇಂಥ ವ್ಯವಸ್ಥೆಯನ್ನು ತಡೆಯಲು ಕೇಂದ್ರ ಸರ್ಕಾರವು ಪೋಷಕರು ಮತ್ತು ಹಿರಿಯ ನಾಗರಿಕರ ನಿರ್ವಹಣೆ ಹಾಗೂ ಕಲ್ಯಾಣ ಕಾಯ್ದೆ ಜಾರಿಗೆ ತಂದಿರುವುದನ್ನು "ರಾಜ್ಯ ಕಂದಾಯ ಸಚಿವ ಕೃಷ್ಣ ಬೈರೇಗೌಡರು" ವಿಧಾನಪರಿಷತ್‌ನಲ್ಲಿ ಪ್ರಶ್ನೆ ಒಂದಕ್ಕೆ ಉತ್ತರ ನೀಡುವ ಸಂದರ್ಭದಲ್ಲಿ ಪ್ರಸ್ತಾಪಿಸಿದ್ದಾರೆ. ತಂದೆ ತಾಯಿಯಿಂದ ಆಸ್ತಿ ಪಡೆದು ಅವರ ಆರೈಕೆ ಮಾಡದಿದ್ದರೆ ಅವರಿಂದ ಬರೆಸಿಕೊಂಡ ವಿಲ್ ಅಥವಾ ದಾನಪತ್ರವನ್ನು ರದ್ದುಗೊಳಿಸಿ ಮತ್ತೆ ಹಿರಿಯ ನಾಗರಿಕರ ಹೆಸರಿಗೆ ವರ್ಗಾಯಿಸಲು ಕಾನೂನಿನಲ್ಲಿ ಅವಕಾಶವಿದೆ. ಆದರೆ ಇಂತಹ ಅದ್ಭುತವಾದ ಕಾಯ್ದೆಯ ಬಗ್ಗೆ ಹೆಚ್ಚಿನವರಿಗೆ ಸರಿಯಾದ ಮಾಹಿತಿ ಇಲ್ಲ. ಸರ್ಕಾರ ಜಾಹೀರಾತುಗಳ ಮೂಲಕ ಈ ಕಾಯ್ದೆ ಬಗ್ಗೆ ಹೆಚ್ಚೆಚ್ಚು ಪ್ರಚಾರ ಮಾಡಿ ಹಿರಿಯ ನಾಗರಿಕರಿಗೆ ಶಕ್ತಿ ತುಂಬುವ ಕೆಲಸವನ್ನು ಮಾಡಬೇಕು. ಇದರಿಂದ ಎಷ್ಟೋ ಮಕ್ಕಳು ಹೆತ್ತವರನ್ನು ನಿರ್ಲಕ್ಷಿಸುವುದನ್ನು ತಪ್ಪಿಸಬಹುದು ಅಥವಾ ಶೋಷಣೆಗೆ ಒಳಪಡಿಸುವುದನ್ನು ತಡೆಗಟ್ಟಬಹುದು.

–ಸಿದ್ದಲಿಂಗೇಗೌಡ, ಹೈರಿಗೆ ಗ್ರಾಮ, ಹೆಚ್.ಡಿ.ಕೋಟೆ ತಾ.

■ ಜನಮಿಡಿತ

ಮಾನ್ಯರೆ,

ಸಿಇಟಿ ಪರೀಕ್ಷಾ ಕೊಠಡಿಗೆ ಹೋಗುವ ಮುನ್ನ ಇಬ್ಬರು ಬ್ರಾಹ್ಮಣ ಮಕ್ಕಳ ಜನಿವಾರ ತೆಗೆಸಿದ್ದು, ಸದ್ಯ ರಾಜ್ಯದಲ್ಲಿ ಗುಲ್ಲೆಬ್ಬಿಸುತ್ತಿರುವಾಗ ಮುಖ್ಯಮಂತ್ರಿ ಸಿದ್ದರಾಮಯ್ಯನವರು, ಪರೀಕ್ಷೆ ಬರೆಯಲು ಅವಕಾಶ ನೀಡದ ಸಿಬ್ಬಂದಿ ಮತ್ತು ಅಧಿಕಾರಿಗಳ ವಿರುದ್ಧ ಶಿಸ್ತು ಕ್ರಮ ಕೈಗೊಳ್ಳಲಾಗುತ್ತದೆ ಎಂದಿದ್ದಾರೆ. ಜನಿವಾರ ತೆಗೆಸುವ ಕ್ರಮ ನಿಯಮ ಬಾಹಿರವಾದದ್ದು ಎಂಬುದನ್ನೂ ಒಪ್ಪಿಕೊಂಡಿದ್ದಾರೆ.

ಆದರೆ, ಸಹಕಾರ ಸಚಿವ ಕೆ.ಎನ್.ರಾಜಣ್ಣ, ಈ ಘಟನೆಗೆ ಹೊಸ ತಿರುವ ಕೊಡುವ ಪ್ರಯತ್ನ ಮಾಡಿದ್ದಾರೆ ಎಂಬುದೂ ಮಹತ್ವ ಪಡೆಯುತ್ತದೆ. ಜನಿವಾರ ತೆಗೆಸಿದ್ದನ್ನು ಒಪ್ಪುವುದಿಲ್ಲ. ಆದರೆ ಒಂದು ಶೂದ್ರ ಹೆಣ್ಣು ಮಗಳ ತಾಳಿಯನ್ನು ತೆಗಿಸಿದ್ರಲ್ಲಾ ಅದು ಮಾಧ್ಯಮದವರ ದೃಷ್ಟಿಗೇಕೆ ಬಿದ್ದಿಲ್ಲ ಎಂಬ ಸವಾಲು ಹಾಕಿದ್ದಾರೆ. ಜನಿವಾರ ತೆಗೆಸಿದಷ್ಟು ಸುದ್ದಿ, ತಾಳಿ ತೆಗೆಸಿದಾಗ ಆಗಿಲ್ಲ ಅನ್ನುವುದರ ಉದ್ದೇಶವಾದರೂ ಏನಿದ್ದಿರಬಹುದು? ಜನಿವಾರ ಎಷ್ಟು ಮಹತ್ವವೊ, ತಾಳಿಯೂ ಅಷ್ಟೇ ಮಹತ್ವದ್ದಲ್ಲವೆ ಎಂಬ ಅವರ ಮಾತಿನಲ್ಲೂ ಅರ್ಥವಿದೆ. ಆದರೆ, ಅವರ ಮಾತು ಅಷ್ಟಕ್ಕೇ ಮುಗಿಯದೇ, ಒಬ್ಬ ಶೂದ್ರಳ ತಾಳಿ ತೆಗೆಸಿದ್ದು ಮುಖ್ಯವಾಗಿಲ್ಲ. ಆದರೆ ಬ್ರಾಹ್ಮಣರ ಜನಿವಾರ ತೆಗೆಸಿದ್ದು ಸುದ್ದಿಯಾಗುತ್ತಿದೆ ಎಂಬುದು ಮಾತ್ರ ಉತ್ತಮ ಅಭಿರುಚಿಯ ಮಾತಲ್ಲ. ಶೋಷಿತರ ಮೇಲೆ ದಬ್ಬಾಳಿಕೆ ಸಹ್ಯ. ಅದೇ ಮುಂದುವರಿದ ಜನಾಂಗದವರ ಮೇಲಿನ ದಬ್ಬಾಳಿಕೆ ಅಸಹ್ಯ ಎನ್ನುವುದು, ಪ್ರಕರಣಕ್ಕೆ ಹುಳಿ ಹಿಂಡುವ ಪ್ರಯತ್ನವಲ್ಲವೆ? ರಾಜಣ್ಣ ಅವರಿಗೆ ನಿಜವಾಗಿಯೂ ಆ ಹೆಣ್ಣು ಮಗಳ ಮೇಲೆ ಕನಿಕರ, ಕಾಳಜಿ, ಕಳಕಳಿ ಇದ್ದಿದ್ದರೆ, ಅಂದೇ ಆ ಪ್ರಕರಣವನ್ನು ಪ್ರಸ್ತಾಪಿಸಿ ಸೂಕ್ತ ಪರಿಹಾರ ಕೊಡಿಸಬಹುದಿತ್ತಲ್ಲ. ವಿಷಯ ಅದಲ್ಲವೇ ಅಲ್ಲ. ಬ್ರಾಹ್ಮಣರು, ಯಾವುದೇ ಸರಕಾರಿ ಲಾಭಕ್ಕೆ ಹಾತೊರೆಯದೇ, ತಮ್ಮಷ್ಟಕ್ಕೆ ತಾವು ತಮ್ಮ ಕರ್ತವ್ಯ ನಿಭಾಯಿಸುತ್ತ ಸಾಗುತ್ತಾರಲ್ಲ, ಅದು ಬೇಕಾಗಿಲ್ಲ. ಧರ್ಮದ,ಜಾತಿಯ, ಲಿಂಗದ ಹೆಸರಿನಲ್ಲಿ ಏನಾದರೂ ನಡೆಯುತ್ತಿದ್ದು, ಅದು ತಮಗೆ ಅನುಕೂಲವಾಗುವಂತಿರಬೇಕು ಎಂಬುದೇ ಬಹುತೇಕ ರಾಜಕಾರಣಿಗಳ ಲೆಕ್ಕಾಚಾರ. ಹಾಗೆ ನೋಡಿದರೆ ಅವರಿಗೆ ಬ್ರಾಹ್ಮಣರೂ ಒಂದೇ ಶೂದ್ರರೂ ಒಂದೇ. ಈ ನಿಟ್ಟಿನಲ್ಲಿ ಸಮ ಭಾವ ! ಏನೇ ಆಗಲಿ, ಪರೀಕ್ಷೆಗೆ ಬಂದ ವಿದ್ಯಾರ್ಥಿಗಳ ಜನಿವಾರ,ತಾಳಿ, ಓಲೆ ಯಾರೂ ಮುಟ್ಟಬಾರದು ಎಂಬ ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರ ಹೇಳಿಕೆ ಒಪ್ಪುವಂತಹುದು. ಸರಕಾರ ಧಾರ್ಮಿಕ ವಿಷಯಗಳ ಮೇಲೆ ಹಸ್ತಕ್ಷೇಪ ಮಾಡಬಾರದು ಎಂಬುದೂ ಸ್ವಾಗತಾರ್ಹ.


–ಶಂಕರನಾರಾಯಣ ಭಟ್, ಜಯಲಕ್ಷ್ಮಿಪುರಂ, ಮೈಸೂರು



ಡಾ. ಹೆಚ್.ವಿ. ನಾಗರಾಜ ರಾವ್
ಮೈಸೂರು.

ಸಂಸ್ಕೃತಿ ಚಿಂತನಾ

ರಾಮಾಯಣ ಮತ್ತು ಮಹಾಭಾರತ





ಭಾರತೀಯ ಸಂಸ್ಕೃತಿಯ ಎರಡು ಆಧಾರಸ್ತಂಭಗಳೆಂದರೆ ವಾಲ್ಮೀಕಿ ವಿರಚಿತ ರಾಮಾಯಣ ಮತ್ತು ವ್ಯಾಸ ವಿರಚಿತ ಮಹಾಭಾರತ. ನಮ್ಮ ದೇಶದ ಎಲ್ಲಾ ಭಾಷೆಗಳಲ್ಲಿ ಇವೆರಡರ ಅನುವಾದಗಳೂ ರೂಪಾಂತರಗಳೂ ಇವೆ. ಸಂಗೀತದಲ್ಲಿ ಇವುಗಳಿಗೆ ಸಂಬಂಧಿಸಿದ ಕೃತಿಗಳೇ ಅಧಿಕ ನಾಟಕಗಳಲ್ಲಿ, ಸಿನಿಮಾಗಳಲ್ಲಿ, ಧಾರಾವಾಹಿಗಳಲ್ಲಿ ಈ ಎರಡು ಗ್ರಂಥಗಳ ಘಟನೆಗಳು ಹಾಸು ಹೊಕ್ಕಾಗಿವೆ. ಚಿತ್ರಕಲೆಗೆ, ಶಿಲ್ಪಕಲೆಗೆ ಈ ಎರಡು ಸ್ಫೂರ್ತಿಯನ್ನು ನೀಡಿವೆ. ಇವೆರಡರ ಸಾದೃಶ್ಯ–ವೈಸಾದೃಶ್ಯಗಳನ್ನು ಸ್ವಲ್ಪ ಚಿಂತಿಸೋಣ.

ರಾಮಾಯಣವೂ ಮಹಾಭಾರತವೂ ವಿಷ್ಣುವಿನ ಅವತಾರಗಳನ್ನು ವರ್ಣಿಸುವ ಗ್ರಂಥಗಳು. ಏಳನೆಯ ಅವತಾರ ಶ್ರೀರಾಮ. ಎಂಟನೆಯ ಅವತಾರ ಶ್ರೀಕೃಷ್ಣ. ಇಬ್ಬರೂ ಭಾರತೀಯರ ಆರಾಧ್ಯ ದೈವರು. ರಾಮಾಯಣದಲ್ಲಿ ಪೂರ್ಣವಾಗಿ ರಾಮನ ಕಥೆಯನ್ನೇ ಹೇಳಲಾಗಿದೆ. ಮಹಾಭಾರತದಲ್ಲಿ ಪಾಂಡವರ ಮತ್ತು ಕೌರವರ ಕಥೆ ಮುಖ್ಯವಾದರೂ ಅದರ ಸೂತ್ರಧಾರನು ಶ್ರೀ ಕೃಷ್ಣನೇ. ಮಹಾಭಾರತದ ಅನುಕ್ರಮಣಿಯಲ್ಲಿ 'ಭಗವಾನ್ ವಾಸುದೇವಶ್ಚ ಕೀರ್ತ್ಯತೇತ್ರ ಸನಾತನ್' ಎಂಬ ವಾಕ್ಯದಿಂದ ಇದನ್ನು ಸೂಚಿಸಲಾಗಿದೆ. ಎರಡು ಗ್ರಂಥಗಳೂ ಸಂಸ್ಕೃತದಲ್ಲಿ ರಚಿತವಾಗಿ ಸಮಸ್ತ ಭಾರತದ ಪ್ರತಿನಿಧಿಗಳಾಗಿರುವುದು ಇನ್ನೊಂದು ಸಮಾನಾಂಶ. ಎರಡೂ ರಾಜ ಧರ್ಮವನ್ನು ಸಮರ್ಥಿಸುತ್ತವೆ ಮತ್ತು ವೇದೋಕ್ತವಾದ ಜೀವನ ರೀತಿಯನ್ನು ಪ್ರತಿಪಾದಿಸುತ್ತವೆ. ರಾಮೋ ವಿಗ್ರಹವಾನ್ ಧರ್ಮಃ ಎಂದು ರಾಮಾಯಣದಲ್ಲಿ ಧರ್ಮಕ್ಕೆ ಪ್ರಥಮ ಸ್ಥಾನ. ಮಹಾಭಾರತದಲ್ಲಿ ಯುಧಿಷ್ಠಿರನ ಇನ್ನೊಂದು ಹೆಸರೇ ಧರ್ಮರಾಜ. ರಾಮಾಯಣದಲ್ಲಿ ಅಣ್ಣ ರಾಮನಿಗೆ ಅವನ ತಮ್ಮಂದಿರೆಲ್ಲ ವಿಧೇಯರು. ಅವನ ಆಜ್ಞೆಯನ್ನು ಅವರೆಂದೂ ಉಲ್ಲಂಘಿಸಲಿಲ್ಲ. ಮಹಾಭಾರತದಲ್ಲೂ ಯುಧಿಷ್ಠಿರನಿಗೆ ಅವನ ತಮ್ಮಂದಿರೆಲ್ಲ ಆಜ್ಞಾಧಾರಕರು. ಜೂಜಿನಲ್ಲಿ ಅವನು ಸರ್ವಸ್ವವನ್ನು ಕಳೆದುಕೊಂಡಾಗಲೂ ಅವರು ಅವನನ್ನು ನಿಂದಿಸಲಿಲ್ಲ. ಇದೂ ಈ ಗ್ರಂಥಗಳ ಸಾದೃಶ್ಯವನ್ನು ತೋರಿಸುವ ಅಂಶ.

ಇನ್ನು ವೈಸಾದೃಶ್ಯಗಳ ಕಡೆಗೆ ನೋಡುವುದಾದರೆ ರಾಮಾಯಣವು ಅವರ ಹೆಸರೇ ಹೇಳುವಂತೆ ಏಕವ್ಯಕ್ತಿ ಕೇಂದ್ರಿತವಾದ ಕಥೆ. ರಾಮನ ಅಯನ ರಾಮಾಯಣ. ಆದರೆ ಮಹಾಭಾರತ ಹಾಗಿಲ್ಲ. ರಾಮಾಯಣಕ್ಕೆ ರಾಮನು ನಾಯಕ ಎಂದು ನಿರ್ವಿವಾದವಾಗಿ ಹೇಳಬಹುದು. ಆದರೆ ಮಹಾಭಾರತದ ನಾಯಕನು ಯಾರು? ಅದು ಹಲವು ತಲೆಮಾರುಗಳ ಕಥೆ. ರಾಮಾಯಣ ಒಂದು ಚಿತ್ರದಂತೆ ರಾಮನು ಪ್ರಧಾನವಾಗಿ ಕಂಡರೆ ಉಳಿದವರೆಲ್ಲರೂ ಅವನ ಸುತ್ತಲೂ ನಿಂತಿರುತ್ತಾರೆ. ಮಹಾಭಾರತವಾದರೋ ಒಂದು ಚಿತ್ರಶಾಲೆ. ಅದರಲ್ಲಿ ನೂರಾರು ಚಿತ್ರಗಳಿವೆ. ಯಾವುದು ಮುಖ್ಯ, ಯಾವುದು ಗೌಣ ಎಂಬ ಪ್ರಶ್ನೆಗೆ ಉತ್ತರ ಸುಲಭವಲ್ಲ.

ರಾಮಾಯಣವು ಆದಿ ಕಾವ್ಯ, ಆದರ್ಶ ಕಾವ್ಯ ಜಗತ್ತು, ಅದರಲ್ಲಿರುವ ವ್ಯಕ್ತಿಗಳು ಹೇಗಿದ್ದರೆ ಚೆನ್ನ ಎಂದು ಅದು ತೋರಿಸುತ್ತದೆ. ಮಗನಿದ್ದರೆ ರಾಮನಂತಹ ಪಿತೃವಾಕ್ಯ ಪರಿಪಾಲಕನಾದ ಮಗನಿರಬೇಕು. ತಮ್ಮನಿದ್ದರೆ ಲಕ್ಷ್ಮಣನಂತಹ, ಅಣ್ಣನ ಯೋಗಕ್ಷೇಮಕ್ಕಾಗಿ ಸರ್ವಸ್ವವನ್ನೂ ತ್ಯಾಗ ಮಾಡುವ ತಮ್ಮನಿರಬೇಕು. ಹೆಂಡತಿಯಿದ್ದರೆ ಸೀತೆಯಂತಹ ಪತಿವ್ರತೆ ಹೆಂಡತಿಯಿರಬೇಕು ಎಂದು ಆದರ್ಶ ವ್ಯಕ್ತಿಗಳನ್ನು ರಾಮಾಯಣ ಎತ್ತಿ ತೋರಿಸುತ್ತದೆ. ಮಹಾಭಾರತವು ವಾಸ್ತವದಲ್ಲಿ ಜಗತ್ತು ಹೇಗೆ ಇದೆ, ಜನರು ಸ್ವಾರ್ಥಪ್ರೇರಿತರಾಗಿ ಹೇಗೆ ನಡೆದುಕೊಳ್ಳುತ್ತಾರೆ ಎಂಬ ವಾಸ್ತವವನ್ನು ಚಿತ್ರಿಸುತ್ತದೆ. ಅರಗಿನ ಮನೆಯನ್ನು ಕಟ್ಟಿಸಿ, ಅಲಂಕರಿಸಿ, ಅಲ್ಲಿಗೆ ಪಾಂಡವರು ವಿಹಾರಕ್ಕಾಗಿ ಹೋಗುವಂತೆ ಪ್ರೇರೇಪಿಸಿ ಅಲ್ಲೇ ಅವರನ್ನು ಸುಟ್ಟು ಬೂದಿಯಾಗುವಂತೆ ಮಾಡಿಸುವ ವಂಚನೆಗೆ ದುರ್ಯೋಧನನು ಮುಂದಾಗುತ್ತಾರೆ. ಇದು ಮಹಾಭಾರತದ ನೀತಿ. ರಾಮಾಯಣದಲ್ಲಿ ರಾವಣನು ಸೀತೆಯನ್ನು ಅಪಹರಿಸಿಕೊಂಡು ಹೋದರೂ ಅವಳನ್ನು ಸಭೆಯಲ್ಲೋ ಜನಸಮಕ್ಷಮದಲ್ಲೋ ಅಪಮಾನಿಸುವ ಪ್ರಯತ್ನವನ್ನು ಮಾಡುವುದಿಲ್ಲ. ಆದರೆ ಮಹಾಭಾರತದಲ್ಲಿ ದುರ್ಯೋಧನ ಪಾಂಡವರು ದ್ಯೂತದಲ್ಲಿ ಸೋತಾಗ ದ್ರೌಪದಿಯನ್ನು ಸಭೆಗೆ ಎಳೆದು ತರಿಸಿ ಅವಳ ವಸ್ತ್ರಗಳನ್ನು ಎಲ್ಲರ ಎದುರಿಗೆ ಸೆಳೆಯುವಂತೆ ಆಜ್ಞೆಯನ್ನು ಮಾಡಿ ಅವಮಾನಿಸುವ ಪ್ರಸಂಗವಿದೆ. ರಾಮಾಯಣದಲ್ಲಿ ರಾಮನು ರಾವಣನೊಡನೆ ಯುದ್ಧ ಮಾಡುವಾಗಲೂ ಶೌರ್ಯದಿಂದ ಹೋರಾಡುವವನೇ ಹೊರತು ಮೋಸವನ್ನು ಮಾಡಿ ಗೆಲ್ಲಲು ಯತ್ನಿಸುವುದಿಲ್ಲ. ಒಮ್ಮೆ ರಾಮ–ರಾವಣರ ಯುದ್ಧದಲ್ಲಿ ರಾವಣನು ರಾಮಬಾಣಾಘಾತವನ್ನು ತಡೆಲಾರದೆ ಕಂಗೆಡುತ್ತಾನೆ. ಬಿಲ್ಲು ಜಾರಿ ಬೀಳುತ್ತದೆ. ರಾಮನ ಅರ್ಧ ಚಂದ್ರ ಬಾಣವು ರಾವಣನ ಕಿರೀಟವನ್ನು ಕೆಡವುತ್ತದೆ. ವಿಷವಿಲ್ಲದ ಹಾವಿನಂತೆ, ಪ್ರಕಾಶವನ್ನು ಕಳೆದುಕೊಂಡು ಮಂಕಾದ ಸೂರ್ಯನಂತೆ ಅಸಹಾಯಕನಾಗಿ ರಾವಣ ನಿಲ್ಲುತ್ತಾನೆ. ರಾಮನು ಆ ಕ್ಷಣದಲ್ಲಿ ರಾವಣನನ್ನು ಕೊಂದು ಬಿಡಬಹುದಾಗಿತ್ತು. ಆದರೆ ರಾಮನ ಉದಾತ್ತಭಾವ ಅದಕ್ಕೆ ಅವಕಾಶ ಕೊಡುವುದಿಲ್ಲ. ಅವನು ರಾವಣನಿಗೆ ಹೇಳುತ್ತಾನೆ –

ಕೃತಂ ತ್ವಯಾ ಕರ್ಮ ಮಹತ್ ಸುಭೀಮಂ
ಹತಪ್ರವೀರಶ್ಚ ಕೃತಸ್ತ್ವಯಾಹಮ್ ।
ತಸ್ಮಾತ್ ಪರಿಶ್ರಾಂತ ಇತಿ ವ್ಯವಸ್ಯ
ನತ್ವಾಂ ಶರೈರ್ಮೃತ್ಯುವಶಂ ನಯಾಮಿ ॥

ನೀನಿಂದು ಭಯಂಕರವಾದ ಕೆಲಸಗಳನ್ನು ಮಾಡಿರುವೆ. ನನ್ನ ಕಡೆಯ ಕೆಲವರು ವೀರರನ್ನು ನೀನು ಕೊಂದಿರುವೆ. ಆದ್ದರಿಂದ ನೀನು ತುಂಬಾ ಬಳಲಿರುವೆ. ಈಗ ನಾನು ನಿನ್ನನ್ನು ಬಾಣಗಳಿಂದ ಕೊಲ್ಲುವುದಿಲ್ಲ.

ಪ್ರಯಾಹಿ ಜಾನಾಮಿ ರಣಾರ್ದಿತಸ್ತ್ವಂ
ಪ್ರವಿಶ್ಯ ನಕ್ತಂಚರರಾಜ ಲಂಕಾಮ್ ।
ಆಶ್ವಸ್ಯ ನಿರ್ಯಾಹಿ ರಥೀ ಚ ಧನ್ವೀ
ತದಾ ಬಲಂ ದ್ರಕ್ಷ್ಯಸಿ ಮೇ ರಥಸ್ಥಃ॥

(ರಾಕ್ಷಸರಾಜ, ಈಗ ನೀನು ಯೋಗು, ಏಕೆಂದರೆ ನೀನು ಯುದ್ಧದಿಂದ ಬಳಲಿರುವೆಯೆಂದು ನನಗೆ ಗೊತ್ತು. ನೀನು ಲಂಕೆಗೆ ಹೋಗಿ ಬಳಲಿಕೆಯನ್ನು ನಿವಾರಿಸಿಕೊಂಡು ಹೊಸ ರಥವನ್ನೇರಿ ಬಿಲ್ಲನ್ನು ಹಿಡಿದು ಯುದ್ಧಕ್ಕೆ ಬಾ. ಆಗ ನನ್ನ ಶಕ್ತಿ ಎಷ್ಟಿದೆಯೆಂದು ನೀನೇ ನೋಡುವೆ)

ಇದು ರಾಮಾಯಣದ ಆದರ್ಶ ಯುದ್ಧ. ಆದರೆ ಮಹಾಭಾರತದಲ್ಲಿ ಭೀಷ್ಮರನ್ನು ಕೊಲ್ಲಲು ಹಿಂದಿನ ಜನ್ಮದಲ್ಲಿ ಹೆಣ್ಣಾಗಿದ್ದ ಶಿಖಂಡಿಯನ್ನು ಮುಂದೆ ನಿಲ್ಲಿಸಿ, ಅವರು ಶಸ್ತ್ರ ಸಂನ್ಯಾಸ ಮಾಡುವಂತೆ ಮಾಡಿ ಅವರನ್ನು ಕೆಡುವುವುದು ದ್ರೋಣರಿಗೆ 'ಅಶ್ವತ್ಥಾಮಾ ಹತಃ' ಎಂದು ಸುಳ್ಳು ಹೇಳಿ ಅವರನ್ನು ಕೊಲ್ಲಿಸುವುದು, ಕರ್ಣನ ರಥದ ಚಕ್ರ ಕೆಸರಿನಲ್ಲಿ ಹೂತು ಹೋದಾಗ ಅದನ್ನು ಮೇಲೆತ್ತಲೂ ಅವನು ನಿರಾಯುಧನಾಗಿ ಕೆಳಗೆ ಇಳಿದಾಗ ಅವನನ್ನು ಕೊಲ್ಲುವುದು – ಇವು ಯಾವುವೂ ಆದರ್ಶ ಅಲ್ಲ. ರಾವಣನು ಯುದ್ಧದಲ್ಲಿ ಮಡಿದಾಗಲೂ ರಾಮನು ಅವನಿಗೆ ಗೌರವವನ್ನು ಸೂಚಿಸುತ್ತಾನೆ. ಅವನ ಉತ್ತರ ಕ್ರಿಯೆಗಳನ್ನು ಶಾಸ್ತ್ರೋಕ್ತವಾಗಿ ಮಾಡಬೇಕೆಂದು ವಿಭೀಷಣನಿಗೆ ಹೇಳುತ್ತಾನೆ.

ಮರಣಾಂತಾನಿ ವೈರಾಣಿ ನಿರ್ವೃತ್ತಂ ನಃ ಪ್ರಯೋಜನಮ್ ।
ಕ್ರಿಯತಾಮಸ್ಯ ಸಂಸ್ಕಾರೋ ಮಮಾಪ್ಯೇಷ ಯಥಾ ತವ॥

(ಸಾವು ಬಂದಾಗ ವೈರಗಳು ಕೊನೆಗೊಳ್ಳುತ್ತವೆ. ನಾವು ಏತಕ್ಕಾಗಿ ಯುದ್ಧವನ್ನು ಮಾಡಿದೆವೋ ಅದು ಆಯಿತು. ಈಗ ರಾವಣನ ಸಂಸ್ಕಾರಗಳು ನಡೆಯಲಿ. ನಿನಗೆ ರಾವಣನು ಹೇಗೆ ಹಿರಿಯನೋ ಹಾಗೆ ಅವನು ನನಗೂ ಹಿರಿಯನೇ) ರಾಮಾಯಣದಲ್ಲಿರುವ ಉತ್ತಮ ಆದರ್ಶಗಳು ಈ ರೀತಿಯವು. ಮಹಾಭಾರತದ ಪಾತ್ರಗಳು ಈ ಎತ್ತರಕ್ಕೆ ಏರುವುದು ವಿರಳ.

ರಾಮಾಯಣಕ್ಕೂ ಮಹಾಭಾರತಕ್ಕೂ ಇರುವ ಇನ್ನೊಂದು ಅಂತರವೇನೆಂದರೆ ರಾಮಾಯಣದಲ್ಲಿ ರಾಮನು ಎಲ್ಲೂ ನಾನೇ ದೇವರು, ನಾನು ಜಗತ್ತಿಗೆಲ್ಲ ಮೂಲ ಕಾರಣ ಎಂದು ಹೇಳಿಕೊಳ್ಳುವುದಿಲ್ಲ. ಯುದ್ಧ ಕಾಂಡದ ನೂರ ಹದಿನೇಳನೆಯ ಸರ್ಗದಲ್ಲಿ ಬ್ರಹ್ಮನು ಅವನನ್ನು ಹೊಗಳುವಾಗ "ನೀನೇ ನಾರಾಯಣ, ಮೂರು ಲೋಕಗಳನ್ನು ಸೃಷ್ಟಿಸಿದವನು ನೀನೇ" ಇತ್ಯಾದಿ ನುಡಿಯುತ್ತಾನೆ. ಆದರೆ ಆಗಲೂ ರಾಮನು ವಿನಯದಿಂದ ಆಡುವ ಮಾತು ಹೀಗಿದೆ–

"ಆತ್ಮಾನಂ ಮಾನುಷಂ ಮನ್ಯೇ ರಾಮಾ ದಶರಥಾತ್ಮಜಮ್"

(ನಾನು ದಶರಥನ ಮಗ, ಒಬ್ಬ ಮನುಷ್ಯ ಎಂದು ತಿಳಿದಿದ್ದೇನೆ ಮಾತ್ರ).

ಆದರೆ ಮಹಾಭಾರತದ ಭಾಗವಾಗಿರುವ ಭಗವದ್ಗೀತೆಯಲ್ಲಿ ಶ್ರೀ ಕೃಷ್ಣನು ತಾನೇ ಜಗತ್ಕಾರಣನೆಂದು ಹೇಳುತ್ತಾನೆ–

ಪಿತಾಹಮಸ್ಯ ಜಗತೋ ಮಾತಾ ಧಾತಾ ಪಿತಾಮಹಃ।
ವೇದ್ಯಂ ಪವಿತ್ರ ಮೋಂಕಾರ ಋಕ್‌ಸಾಮಯಜುರೇವ ಚ॥

(ಈ ಜಗತ್ತಿಗೆ ತಂದೆಯೂ, ತಾಯಿಯೂ, ಪಿತಾಮಹ (ಅಜ್ಜ)ನೂ ಜಗತ್ತನ್ನು ನಿಲ್ಲಿಸಿರುವವನು, ತಿಳಿಯಲ್ಪಡಬೇಕಾದ ಪವಿತ್ರ ಶಕ್ತಿಯೂ, ಓಂಕಾರ, ಋಗ್‌ಯಜು ಸಾಮರೂಪವಾದ ವೇದಗಳೂ ನಾನೇ) ಇತ್ಯಾದಿ (ಒಂಬತ್ತನೆಯ ಅಧ್ಯಾಯದಲ್ಲಿ ಹೇಳಲಾಗಿದೆ).

ತ್ರೇತಾಯುಗಕ್ಕೆ ಯೋಗ್ಯವಾದುದನ್ನು ಶ್ರೀರಾಮನು, ದ್ವಾಪರ ಯುಗಕ್ಕೆ ಉಚಿತವಾದುದನ್ನು ಶ್ರೀ ಕೃಷ್ಣನು ಹೇಳಿದ್ದಾರೆ ಎಂದು ಕೊಳ್ಳೋಣ. ನನ್ನ ಭಕ್ತನಾಗು, ನಾನು ನಿನ್ನನ್ನು ಉದ್ಧರಿಸುತ್ತೇನೆ ಎಂದೂ ರಾಮಾಯಣದಲ್ಲಿ ರಾಮನು ಯಾರಿಗೂ ಹೇಳಿಲ್ಲ. ಭಗವದ್ಗೀತೆಯಲ್ಲಿ ಶ್ರೀ ಕೃಷ್ಣನು ಹಾಗೆ ಹೇಳಿದ್ದಾನೆ –

ಮನ್ಮನಾ ಭವ ಮದ್ಭಕ್ತೋ ಮದ್ಯಾಜೀ ಮಾಂ ನಮಸ್ಕುರು।
ಮಾಮೇವೈಷ್ಯಸಿ ಸತ್ಯಂ ತೇ ಪ್ರತಿಜಾನೇ ಪ್ರಿಯೋಽಸಿಮೇ॥

(ನಿನ್ನ ಮನಸ್ಸು ನನ್ನಲ್ಲೇ ಇರಲಿ. ನನ್ನ ಭಕ್ತನಾಗು, ನನ್ನನ್ನೇ ಪೂಜಿಸು. ನಮಗೆ ನಮಸ್ಕಾರ ಮಾಡು. ಹಾಗೆ ಮಾಡಿದರೆ ನನ್ನನ್ನೇ ಪಡೆಯುವೆ. ನನಗೆ ನೀನು ಇಷ್ಟವಾಗಿರುವೆಯೆಂದು ಪ್ರತಿಜ್ಞೆ ಮಾಡಿ ಹೇಳುವೆನು) ಶ್ರೀ ಕೃಷ್ಣನು ಪೂರ್ಣಾವತಾರವೂ ಸಾಕ್ಷಾತ್ ಭಗವಂತನೂ ಆಗಿರುವುದರಿಂದ ಹೀಗೆ ಆಶ್ವಾಸನೆ ಕೊಡುವನೆಂದು ಅನೇಕ ಜನರ ನಂಬಿಕೆ. ಹೀಗೆ ರಾಮಾಯಣ ಮತ್ತು ಮಹಾಭಾರತಗಳ ದೃಷ್ಟಿಕೋನ ಬಹುಧಾ ಭಿನ್ನವಾಗಿರುವುದೂ ಓದುಗರಿಗೆ ಗೋಚರವಾಗುತ್ತದೆ. ಹಲವು ವಿಷಯಗಳಲ್ಲಿ ಎರಡೂ ಸಮಾನದೃಷ್ಟಿ ಹೊಂದಿರುವುದೂ ಉಂಟು. ಆದರ್ಶ ಮತ್ತು ವಾಸ್ತವಗಳಲ್ಲಿ ಇದು ಅನಿವಾರ್ಯ.

ಟಾಲಿವುಡ್ ಸೂಪರ್‌ಸ್ಟಾರ್ ಮಹೇಶ್‌ಬಾಬುಗೆ ಸಂಕಷ್ಟ, ಇಡಿ ನೋಟಿಸ್!

ಹೈದರಾಬಾದ್, ಏ.22– ಟಾಲಿವುಡ್ ಸೂಪರ್‌ಸ್ಟಾರ್ ಮಹೇಶ್‌ಬಾಬುಗೆ ಜಾರಿ ನಿರ್ದೇಶನಾಲಯ ಶಾಕ್ ನೀಡಿದ್ದು, ವಿಚಾರಣೆಗೆ ಹಾಜರಾಗುವಂತೆ ನೋಟಿಸ್ ನೀಡಿದೆ.

ಮನಿಲಾಂಡರಿಂಗ್ ಪ್ರಕರಣಕ್ಕೆ ಸಂಬಂಧಿಸಿದಂತೆ ಟಾಲಿವುಡ್‌ನ ಸ್ಟಾರ್ ನಟ ಮಹೇಶ್ ಬಾಬುಗೆ ಜಾರಿ ನಿರ್ದೇಶನಾಲಯ (ಇಡಿ) ನೋಟಿಸ್ ಕೊಟ್ಟಿದೆ ಎಂದು ತಿಳಿದುಬಂದಿದೆ.

ಮೂಲಗಳ ಪ್ರಕಾರ ಸುರಾನ ಗ್ರೂಪ್ ಮತ್ತು ಸಾಯಿಸೂರ್ಯ ಡೆವಲಪರ್ಸ್ ಪ್ರಕರಣದಲ್ಲಿ ಇದೇ 28ರಂದು ವಿಚಾರಣೆಗೆ ಹಾಜರಾಗುವಂತೆ ನೋಟಿಸ್‌ನಲ್ಲಿ ತಿಳಿಸಲಾಗಿದೆ. ಈ ಸಂಸ್ಥೆಯ ಪ್ರಚಾರಕ್ಕಾಗಿ ಮಹೇಶ್‌ಬಾಬು 3.4 ಕೋಟಿ ರೂ.ಗಳನ್ನು ತೆಗೆದುಕೊಂಡಿದ್ದರು ಎನ್ನಲಾಗಿದೆ. ಆಂಗ್ಲ ಪತ್ರಿಕೆಯೊಂದು ವರದಿ ಮಾಡಿರುವಂತೆ, ಸಾಯಿ ಸೂರ್ಯ ಡೆವಲಪರ್ಸ್ ಮತ್ತು ಸುರಾನಾ ಗ್ರೂಪ್ ಪ್ರಾರಂಭಿಸಿದ ರಿಯಲ್ ಎಸ್ಟೇಟ್ ಯೋಜನೆಗಳನ್ನು ಪ್ರಚಾರ ಮಾಡಲು ಮಹೇಶ್ ಅನುಮೋದನೆ ನೀಡಿದ್ದರು.



ಮಹೇಶ್‌ಬಾಬು ಈ ಜಾಹೀರಾತು ಒಪ್ಪಂದಕ್ಕಾಗಿ 5.9 ಕೋಟಿ ರೂ.ಗಳನ್ನು ಪಡೆದಿದ್ದು, ಈ ಪೈಕಿ ಚೆಕ್ ಮೂಲಕ 3.4 ಕೋಟಿ ರೂ.ಗಳು ಮತ್ತು ನಗದು ಮೂಲಕ 2.5 ಕೋಟಿ ರೂ.ಗಳನ್ನು ಪಡೆದಿದ್ದಾರೆ. ಈಗ, ನಗದು ಪಾವತಿ ಇಡಿ ಪರಿಶೀಲನೆಗೆ ಒಳಪಟ್ಟಿದೆ.

ವಂಚನೆ ಆರೋಪ: ಸುರಾನ ಗ್ರೂಪ್ ಮತ್ತು ಸಾಯಿಸೂರ್ಯ ಡೆವಲಪರ್ಸ್ ಸಂಸ್ಥೆಗಳ ವಿರುದ್ಧ ಇದೀಗ ವಂಚನೆ ಆರೋಪ ಕೇಳಿಬಂದಿದ್ದು, ತೆಲಂಗಾಣ ಪೊಲೀಸರು ಭಾಗ್ಯನಗರ ಪ್ರಾಪರ್ಟೀಸ್ ಲಿಮಿಟೆಡ್‌ನ ನರೇಂದ್ರ ಸುರಾನ ಮತ್ತು ಸಾಯಿಸೂರ್ಯ ಡೆವಲಪರ್ಸ್‌ನ ಸತೀಶ್ ಚಂದ್ರ ಗುಪ್ತಾ ವಿರುದ್ಧ ಹಲವು ಎಫ್‌ಐಆರ್‌ಗಳನ್ನು ದಾಖಲಿಸಿದ್ದಾರೆ. ಈ ಇಬ್ಬರು ಅನಧಿಕೃತ ಲೇಔಟ್‌ಗಳಲ್ಲಿ ಪ್ಲಾಟ್‌ಗಳನ್ನು ಮಾರಾಟ ಮಾಡುವ ಮೂಲಕ, ಒಂದೇ ಪ್ಲಾಟ್‌ಗಳನ್ನು ಹಲವು ಬಾರಿ ಮರುಮಾರಾಟ ಮಾಡುವ ಮೂಲಕ ಮತ್ತು ನೋಂದಣಿಗಳ ಬಗ್ಗೆ ಸುಳ್ಳು ಭರವಸೆಗಳನ್ನು ನೀಡುವ ಮೂಲಕ ಖರೀದಿದಾರರನ್ನು ವಂಚಿಸಿದ್ದಾರೆ ಎಂಬ ಆರೋಪವಿದೆ.

ಇಡಿ ಶೋಧ: ಏ.16ರಂದು ಇಡಿ ಅಧಿಕಾರಿಗಳು ಹೈದರಾಬಾದ್‌ನಲ್ಲಿ ಶೋಧ ನಡೆಸಿದ್ದರು. ಸುರಾನ ಗ್ರೂಪ್ ಮತ್ತು ಸಾಯಿಸೂರ್ಯ ಡೆವಲಪರ್ಸ್ ಕಚೇರಿಗಳು ಹಾಗೂ ಈ ಕಂಪನಿಗಳ ಮುಖ್ಯಸ್ಥರ ಮನೆಗಳ ಮೇಲೆ ದಾಳಿ ನಡೆಸಿತ್ತು. ಇದಾದ ಬೆನ್ನಲ್ಲೇ ಇಡಿ ಅಧಿಕಾರಿಗಳು ಮಹೇಶ್ ಬಾಬುಗೆ ನೋಟಿಸ್ ಜಾರಿ ಮಾಡಿದ್ದು, ಏ.28ರ ಬೆಳಗ್ಗೆ 10.30ಕ್ಕೆ ಮಹೇಶ್‌ಬಾಬು ಹೈದರಾಬಾದ್‌ನಲ್ಲಿ ವಿಚಾರಣೆಗೆ ಹಾಜರಾಗಬೇಕಿದೆ.

ಸಂಕಷ್ಟ ತಂದ ಜಾಹೀರಾತು: ಮಹೇಶ್ ಬಾಬು ತಮ್ಮ ಪತ್ನಿ ಮತ್ತು ಮಕ್ಕಳೊಂದಿಗೆ ಸಾಯಿ ಸೂರ್ಯ ಡೆವಲಪರ್ಸ್ ಜಾಹೀರಾತಿನಲ್ಲಿ ನಟಿಸಿದ್ದರು. ಇದೇ ಜಾಹೀರಾತು ವಿಚಾರವಾಗಿ ಇದೀಗ ಮಹೇಶ್‌ಬಾಬು ಅವರಿಗೆ ಸಂಕಷ್ಟ ಎದುರಾಗಿದೆ.

ಬಿವಿಎ ಪದವಿಗೆ ಅರ್ಜಿ ಆಹ್ವಾನ

ಮೈಸೂರು,ಏ.22– ಮೈಸೂರು ವಿಶ್ವವಿದ್ಯಾನಿಲಯಕ್ಕೆ ಸಂಯೋಜನೆಗೊಂಡಿರುವ ಚಾಮರಾಜೇಂದ್ರ ಸರ್ಕಾರಿ ದೃಶ್ಯಕಲಾ ಕಾಲೇಜು (ಕಾವಾ), ಸಿದ್ಧಾರ್ಥನಗರ, ಮೈಸೂರು ಸಂಸ್ಥೆಯಲ್ಲಿ ಬ್ಯಾಚುಲರ್ ಆಫ್ ವಿಜ್ಯುಯಲ್ ಆರ್ಟ್ಸ್ (ಬಿ.ವಿ.ಎ) (ನಾಲ್ಕು ವರ್ಷದ ಎಂಟು ಸೆಮಿಸ್ಟರ್ ಎನ್.ಇ.ಪಿ ಪದ್ಧತಿ) ದೃಶ್ಯ ಕಲೆಯಲ್ಲಿ 2025–26ನೇ ಶೈಕ್ಷಣಿಕ ಸಾಲಿಗೆ ಪ್ರಥಮ ಬಿಬಿಎ ಪದವಿ ಪ್ರವೇಶಾತಿಗೆ ಆನ್‌ಲೈನ್ ಮೂಲಕ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಸದರಿ ಪದವಿಯಲ್ಲಿ ಮೂರನೇ ಸೆಮಿಸ್ಟರ್‌ನಿಂದ ಚಿತ್ರಕಲೆ, ಶಿಲ್ಪಕಲೆ, ಗ್ರಾಫಿಕ್ಸ್ ಕಲೆ (ಅಚ್ಚು ಕಲೆ), ಅನ್ವಯ ಕಲೆ, ಕಲಾ ಇತಿಹಾಸ ಹಾಗೂ ಛಾಯಾಚಿತ್ರ ಮತ್ತು ಛಾಯಾಚಿತ್ರ ಪತ್ರಿಕೋದ್ಯಮ ವಿಭಾಗಗಳಲ್ಲಿ ವಿಶೇಷ ಅಧ್ಯಯನದ ಸ್ನಾತಕ ಪದವಿಯಾಗಿರುತ್ತದೆ.

ಆಸಕ್ತ ಅಭ್ಯರ್ಥಿಗಳು ಅಂತರ್ಜಾಲ ವಿಳಾಸ htts;/ /uucms.karanataka.gov.in ಅಥವಾ https;// www.cavamysore.karntaka.gov.in ಅಂತರ್ಜಾಲದ ಮೂಲಕವೇ ಅರ್ಜಿ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ ದೂ.0821–2438931 ಸಂಪರ್ಕಿಸಬಹುದು.

ಅಮೆರಿಕಾದಲ್ಲಿ ಭಾರತದ ಬಗ್ಗೆ ಅವಹೇಳನಕಾರಿ ಹೇಳಿಕೆ

ರಾಹುಲ್ ಗಾಂಧಿ ವಿರುದ್ಧ ವಿಜಯೇಂದ್ರ ಕಟು ಟೀಕೆ

ಬೆಂಗಳೂರು,ಏ.22(ಕೆಎಂಶಿ)–ಕಾಂಗ್ರೆಸ್ ಅಧಿನಾಯಕ ರಾಹುಲ್ ಗಾಂಧಿಗೆ ವಿದೇಶದಲ್ಲಿ ಭಾರತದ ಗೌರವಕ್ಕೆ ಧಕ್ಕೆ ಆಗದಂತೆ ನಡೆದುಕೊಳ್ಳುವ ಕನಿಷ್ಠ ಸೌಜನ್ಯವೂ ಇಲ್ಲದಿರುವುದು ದುರ್ದೈವದ ಸಂಗತಿ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಇಂದಿಲ್ಲಿ ಟೀಕಿಸಿದ್ದಾರೆ.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ರಾಹುಲ್ ಗಾಂಧಿ ಅಮೆರಿಕ ಪ್ರವಾಸ ಸಂದರ್ಭದಲ್ಲಿ ಪುನಃ ಭಾರತಕ್ಕೆ ಅಪಮಾನ ಮಾಡುವಂತೆ ಮಾತನಾಡಿದ್ದಾರೆ. ಈ ಪುಣ್ಯಾತ್ಮ ಹೊರದೇಶಕ್ಕೆ ಹೋದಾಗ ದೇಶದ ಬಗ್ಗೆ ಹೇಗೆ ನಡೆದುಕೊಳ್ಳಬೇಕೆಂಬುದನ್ನೇ ಕಲಿತಿಲ್ಲ ಎಂದರು. ಭಾರತದ ಸಂವಿಧಾನಾತ್ಮಕ ಸಂಸ್ಥೆಯಾದ ಚುನಾವಣಾ ಆಯೋಗದ ಕಾರ್ಯ ಕುರಿತು ಅಮೆರಿಕದಲ್ಲಿ ಅವಹೇಳನಕಾರಿಯಾಗಿ ಮಾತನಾಡಿದ್ದಾರೆ.

ಅಮೆರಿಕದಲ್ಲಿ ಭಾರತದ ಸಂವಿಧಾನಾತ್ಮಕ ಸಂಸ್ಥೆ ಕುರಿತು ಅನಗತ್ಯ ಟೀಕೆ ಮಾಡುವುದು ಮೂರ್ಖತನದ ಪರಮಾವಧಿ. ಇದು ಲೋಕಸಭೆಯ ವಿರೋಧ ಪಕ್ಷದ ನಾಯಕನ ಬೇಜವಾಬ್ದಾರಿ ನಡೆ. ಕಾಂಗ್ರೆಸ್ ಗೆದ್ದಾಗ ಒಂದು ಮಾನದಂಡ, ಸೋತಾಗ ಒಂದು ಮಾನದಂಡ ಇಟ್ಟುಕೊಂಡು ಮಾತನಾಡುತ್ತದೆ. ರಾಹುಲ್ ಗಾಂಧಿಗೆ ಮಹಾರಾಷ್ಟ್ರದಲ್ಲಿ ಹಿನ್ನಡೆ ಆಗಿದ್ದರೆ ಲೋಕಸಭೆಯಲ್ಲಿ ವಿಷಯ ಪ್ರಸ್ತಾಪಿಸಬಹುದಿತ್ತು. ಮಹಾರಾಷ್ಟ್ರದಲ್ಲಿ ಚುನಾವಣಾ ಆಯೋಗ ಬಿಜೆಪಿಗೆ ಸಹಕರಿಸಿದ್ದರೆ, ಕಾಂಗ್ರೆಸ್‌ಗೆ ಮೋಸ ಆಗಿದ್ದರೆ, ತೆಲಂಗಾಣ ವಿಷಯದಲ್ಲೂ ಹಾಗೆಯೇ ಮಾಡಬಹುದಿತ್ತಲ್ಲವೇ.



ರಾಹುಲ್ ಗಾಂಧಿ



ವಿಜಯೇಂದ್ರ

ಹಿಮಾಚಲ ಪ್ರದೇಶದಲ್ಲಿ ಕಾಂಗ್ರೆಸ್ ಸರ್ಕಾರ ಇದೆ. ಚುನಾವಣಾ ಆಯೋಗ ಬಿಜೆಪಿಗೆ ಸಹಕರಿಸಿದ್ದರೆ, ಅಲ್ಲಿಯೂ ಅಧಿಕಾರಕ್ಕೆ ಬರಬಹುದಿತ್ತು. ತೆಲಂಗಾಣದಲ್ಲಿ ಗೆದ್ದಾಗ ಒಂದು ಮಾನದಂಡ, ಒಂದು ರೀತಿ ಹೇಳಿಕೆ, ಮಹಾರಾಷ್ಟ್ರದಲ್ಲಿ ಸೋತಾಗ ಇನ್ನೊಂದು ರೀತಿ ಹೇಳಿಕೆ ಎಂದು ಟೀಕಿಸಿದರು. ರಾಜ್ಯ ಕಾಂಗ್ರೆಸ್ ಸರ್ಕಾರದ ದರ ಏರಿಕೆಯ ಜನವಿರೋಧಿ ನೀತಿ ಖಂಡಿಸಿ ಬಿಜೆಪಿ ನಡೆಸುತ್ತಿರುವ ಜನಾಕ್ರೋಶ ಯಾತ್ರೆ ಎರಡು ಹಂತಗಳನ್ನು ಮುಗಿಸಿ, ಮೂರನೇ ಹಂತ ಗದಗದಿಂದ ಆರಂಭವಾಗಿದೆ. ಜನಾಕ್ರೋಶ ಯಾತ್ರೆಗೆ ಎಲ್ಲ ಜಿಲ್ಲೆಗಳಲ್ಲಿ ಉತ್ತಮ ಪ್ರತಿಕ್ರಿಯೆ ಸಿಗುತ್ತಿದೆ. ದೊಡ್ಡ ಸಂಖ್ಯೆಯಲ್ಲಿ ಜನರು ಪಾಲ್ಗೊಳ್ಳುತ್ತಿದ್ದಾರೆ. ಜನವಿರೋಧಿ ಕಾಂಗ್ರೆಸ್ ಸರ್ಕಾರದ ವಿರುದ್ಧ ಬೀದಿಗಿಳಿದು ಹೋರಾಡುತ್ತಿದ್ದಾರೆ.

ಮುಖ್ಯಮಂತ್ರಿ ಸಿದ್ದರಾಮಯ್ಯ ನೇತೃತ್ವದ ಕಾಂಗ್ರೆಸ್ ಸರ್ಕಾರ ನಿರಂತರವಾಗಿ ಬೆಲೆ ಏರಿಕೆ ಮಾಡುತ್ತಿದೆ. ಇದರ ಪರಿಣಾಮ ಕರ್ನಾಟಕ ಅತ್ಯಂತ ದುಬಾರಿ ಜೀವನ ನಿರ್ವಹಣೆ ರಾಜ್ಯ ಎಂಬ ಸ್ಥಿತಿಗೆ ತಲುಪಿದೆ.

ರಾಜ್ಯದಲ್ಲಿ ಭ್ರಷ್ಟಾಚಾರ ಮಿತಿ ಮೀರಿದೆ. ವಾಲ್ಮೀಕಿ ನಿಗಮ ಹಗರಣ ಸಂಬಂಧ ಬಿಜೆಪಿ ಹೋರಾಟ ಕೈಗೆತ್ತಿಕೊಂಡ ಪರಿಣಾಮ ಸಚಿವರೊಬ್ಬರು ರಾಜೀನಾಮೆ ಕೊಡಬೇಕಾಯಿತು. ಮೈಸೂರಿನ ಮುಡಾ ಹಗರಣದಲ್ಲಿ ತಪ್ಪೆಸಗಿಲ್ಲ, ತಮ್ಮ ತೇಜೋವಧೆ ಮಾಡಲಾಗುತ್ತಿದೆ ಎಂಬುದಾಗಿ ಸಿದ್ದರಾಮಯ್ಯ ಪ್ರತಿಪಾದಿಸುತ್ತಿದ್ದರು. ಆದರೆ, ಅವರ ಕುಟುಂಬ 62 ಕೋಟಿ ರೂ. ಮೌಲ್ಯದ 14 ಬಿಡಿ ನಿವೇಶನಗಳನ್ನು ಯಾವುದೇ ಷರತ್ತಿಲ್ಲದೆ ವಾಪಸ್ ಮಾಡಿದೆ. ಇದರರ್ಥ ಸಿದ್ದರಾಮಯ್ಯ ಕ್ಲೀನ್ ರಾಜಕಾರಣಿ ಅಲ್ಲ, ಭ್ರಷ್ಟ ರಾಜಕಾರಣಿ ಎಂಬುದು ಸಾಬೀತಾಗಿದೆ. ಕಾಂಗ್ರೆಸ್ ಆಡಳಿತದಲ್ಲಿ ರಾಜ್ಯ ಅಭಿವೃದ್ಧಿ ಶೂನ್ಯವಾಗಿದೆ ಎಂದರು.

Printed by T.S. Gopinath, Published by M. Govinde Gowda on behalf of Academy Newspapers Private Limited, 15-C Industrial 'A' Layout, Bannimantap, Mysore-570 015 and Printed at Academy Newspapers Private Limited, 15-C Industrial 'A' Layout, Bannimantap, Mysore-570 015 and Published at 15-C Industrial 'A' Layout, Bannimantap, Mysore-570 015, Editor: M. Govinde Gowda Ph: 2496520 / 2496521 / 2496526 / 2496527 / 2496528. Fax: 0821-2496525. CITY OFFICES: Visveswaraya Building, III Floor, K.R. CIRCLE, MYSORE-570 001, Ph: 2431774 and No. 114, D. DEVARAJ URS ROAD (Opposite Big Bus), MYSORE-570 001. Ph: 2428695. RNI Reg. No. 36581 / 1980 E-mail address: mysoorumithra@gmail.com For advertisements: mysoorumithra@gmail.com

ಪರಿಸರ ಮಾಲಿನ್ಯ, ಕಳಪೆ ಆಹಾರ, ಜೀವನ ಶೈಲಿ ಬದಲಾವಣೆಯಿಂದ ಮನುಷ್ಯನ ಆಯಸ್ಸು ಕ್ಷೀಣ!

● ಪರಿಸರ ತಜ್ಞ ಡಾ.ಹರ್ಷ ಮಾಹಿತಿ ● ಅಭಿವೃದ್ಧಿ ಪಥದಲ್ಲಿ ಮರಗಳ ತಿಥಿ ● ಪ್ಲಾಸ್ಟಿಕ್ ನೀರಿನ ಬಾಟಲ್ ಮೇಲೆ ಅವಲಂಬಿತ ● ಹಳ್ಳಿಗಳು ಈಗ ನಗರಗಳಾಗಿ ಮಾರ್ಪಟ್ಟಿವೆ ● ಫಿನ್‌ಲ್ಯಾಂಡ್, ಭೂತಾನ್ ಹ್ಯಾಪಿಯೆಸ್ಟ್ ಕಂಟ್ರಿ



ಮರಗಳ ಮಾರಣಹೋಮವಾಗಿರುವ ಮೈಸೂರಿನ ಹೈದರಾಲಿ ರಸ್ತೆಯಲ್ಲಿ ಆಯೋಜಿಸಿದ್ದ ವಿಶ್ವ ಭೂ ದಿನಾಚರಣೆ ಕಾರ್ಯಕ್ರಮದಲ್ಲಿ ರಾಜ್ಯ ಮುಕ್ತ ವಿವಿ ಪರಿಸರ ವಿಜ್ಞಾನ ಅಧ್ಯಯನ ಮತ್ತು ಸಂಶೋಧನಾ ವಿಭಾಗದ ಅಧ್ಯಕ್ಷ ಡಾ.ಟಿ.ಎಸ್.ಹರ್ಷ ಮಾತನಾಡಿದರು.

ಮೈಸೂರು, ಏ.22(ಬಿಎಲ್‌ಯು)– ವ್ಯಾಪಕ ಪರಿಸರ ಮಾಲಿನ್ಯ, ಕಳಪೆ ಗುಣಮಟ್ಟದ ಆಹಾರ, ಜೀವನ ಶೈಲಿ ಬದಲಾವಣೆ ಸೇರಿದಂತೆ ಹಲವು ಕಾರಣಗಳಿಂದ ಮನುಷ್ಯನ ಗರಿಷ್ಟ ಆಯಸ್ಸು 60 ವರ್ಷವಾಗುತ್ತಿದೆ ಎಂದು ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯದ ಪರಿಸರ ವಿಜ್ಞಾನ ಅಧ್ಯಯನ ಮತ್ತು ಸಂಶೋಧನಾ ವಿಭಾಗದ ಅಧ್ಯಕ್ಷ ಡಾ.ಟಿ.ಎಸ್. ಹರ್ಷ ಎಚ್ಚರಿಸಿದರು.

ವಿಶ್ವ ಭೂ ದಿನಾಚರಣೆ ಅಂಗವಾಗಿ ಹೈದರಾಲಿ ರಸ್ತೆಯಲ್ಲಿ ಇಂದು ಆಯೋಜಿಸಿದ್ದ ಮರವಿಲ್ಲದೆ ನರನಿರಬಲ್ಲನೇ ಎಂಬ ವಿಚಾರದ ಬಗ್ಗೆ ವಿಶ್ಲೇಷಣೆ ಮಾಡಿದ ಅವರು, ನಮ್ಮ ಹಿರಿಯರು 100 ವರ್ಷಕ್ಕೂ ಮೀರಿ ಬದುಕುತ್ತಿದ್ದರು. ಅಂದು ಸಿಗುತ್ತಿದ್ದ ಪೌಷ್ಟಿಕಾಂಶಯುಕ್ತ ಗುಣಮಟ್ಟದ ಆಹಾರ, ಹಸಿರಾಗಿದ್ದ ಪರಿಸರದಿಂದ ಉತ್ತಮ ವಾತಾವರಣ, ಉತ್ತಮ ಜೀವನ ಶೈಲಿಯ ಕಾರಣ ಹೆಚ್ಚು ವರ್ಷ ಬದುಕುತ್ತಿದ್ದರು.

ಆದರೆ ಈಗಿನ ಪರಿಸ್ಥಿತಿಯಲ್ಲಿ ಗರಿಷ್ಟ 60 ವರ್ಷ ಬದುಕುವುದೇ ಕಷ್ಟ. ಈ ಹಿನ್ನೆಲೆಯಲ್ಲಿ ಪರಿಸರ ಮಾಲಿನ್ಯವಾಗದಂತೆ ನೋಡಿಕೊಂಡು, ಗುಣಮಟ್ಟದ ಆಹಾರ ತಯಾರಿಕೆಗೆ ಆದ್ಯತೆ ನೀಡಿ, ನಮ್ಮ ಹಿರಿಯರಂತೆ ಜೀವನ ಶೈಲಿ ಅನುಸರಿಸಿದರೆ ಹೆಚ್ಚು ವರ್ಷ ಬದುಕಬಹುದು ಎಂದು ಸಲಹೆ ನೀಡಿದರು.

ಹೈದರಾಲಿ ರಸ್ತೆಯಲ್ಲಿ ಈ ಮೊದಲಿದ್ದ ಮರಗಳಿಂದ ಇಡೀ ರಸ್ತೆ ಹಸಿರಿನಿಂದ ಕಂಗೊಳಿಸುತ್ತಿತ್ತು. ಜನರಿಗೆ ನೆರಳಾಗಿ ತಂಪಾದ ವಾತಾವರಣ ನೀಡಿದ್ದವು. ಆದರೆ ಮರಗಳ ಮಾರಣಹೋಮದಿಂದ ಈಗ ಇಡೀ ರಸ್ತೆ ಬೋಳು ಬೋಳಾಗಿದೆ. ಹೈದರಾಲಿ ರಸ್ತೆಯಲ್ಲಿ 40 ಮರ ಕಡಿದಿರುವುದಕ್ಕೆ ಪರ್ಯಾಯವಾಗಿ 400 ಗಿಡ ನೆಟ್ಟು ಬೆಳೆಸುತ್ತೇವೆ ಎನ್ನುತ್ತಾರೆ. ಆದರೆ ಈ ಭರವಸೆ ಬಗ್ಗೆ ನಮಗೆ ನಂಬಿಕೆ ಇಲ್ಲ ಎಂದರು.

ನಮಗೆ ಪ್ರತಿಯೊಂದು ಸಂಪನ್ಮೂಲ ನೀಡುವುದು ಭೂಮಿಯಲ್ಲಿರುವ ಪರಿಸರ. ಈ ಹಿನ್ನೆಲೆಯಲ್ಲಿ ಮರಗಳನ್ನು ಬೆಳೆಸಿ ನಮ್ಮ ಸುತ್ತಮುತ್ತಲಿನ ಪರಿಸರ ಕಾಪಾಡಬೇಕು. ಆದರೆ ಮರ ಉಳಿಸುವ ಬದಲು ಕಡಿಯಲಾಗುತ್ತಿದೆ. ಈ ವೇಳೆ ಅಭಿವೃದ್ಧಿ ಪಥದಲ್ಲಿ ಮರಗಳ ತಿಥಿ ಎಂಬ ಲೇಖನ ನನಗೆ ನೆನಪಿಗೆ ಬರುತ್ತದೆ ಎಂದು ತಿಳಿಸಿದರು.

ನಾವು ನಮ್ಮ ಮಕ್ಕಳಂತೆ ಮರಗಳನ್ನು ಪಾಲನೆ ಮಾಡಬೇಕು. ಈ ಮೂಲಕ ಪರಿಸರ ಸಂರಕ್ಷಣೆ ಮಾಡಬೇಕು. ಮನುಷ್ಯನನ್ನು ಕೊಲೆ ಮಾಡಿದರೆ ಏನು ಶಿಕ್ಷೆ ಆಗುತ್ತದೆಯೋ ಅದೇ ಶಿಕ್ಷೆ ಮರ ಕಡಿದವರಿಗೂ ಆಗಬೇಕು ಎಂದು ಹೇಳಿದರು.

ತೆಂಗಿನ ಮರ ಮಾತ್ರ ಕಲ್ಪವೃಕ್ಷವಲ್ಲ, ಎಲ್ಲಾ ಮರಗಳೂ ಕೂಡ ಉಪಯೋಗಕ್ಕೆ ಬರುವ ಕಲ್ಪವೃಕ್ಷಗಳಾಗಿವೆ. ಸಮೃದ್ಧ ಮಳೆಯಾಗಬೇಕಾದರೆ ಮರಗಳಿರಬೇಕು. ಆದರೆ ಮರಗಳ ಮಾರಣಹೋಮ ಆಗುತ್ತಿರುವ ಹಿನ್ನೆಲೆಯಲ್ಲಿ ವಾಡಿಕೆಯಷ್ಟು ಮಳೆಯಾಗುತ್ತಿಲ್ಲ. ಮಳೆ ಬರಲು ಮರ ಬೇಕು ಎಂಬ ವಾಸ್ತವತೆಯನ್ನು ಅರ್ಥ ಮಾಡಿಕೊಂಡು ಮರ, ಗಿಡ ಬೆಳೆಸಿ ಉಳಿಸಬೇಕು ಎಂದು ಸಲಹೆ ನೀಡಿದರು.

ಜೀವ ಪರಿಸರ ವ್ಯವಸ್ಥೆಯಲ್ಲಿ ಸೂಕ್ಷ್ಮ ಜೀವಾಣುವಿನಿಂದ ಹಿಡಿದು ಪ್ರತಿಯೊಂದು ಜೀವಿಯೂ ಮುಖ್ಯವಾಗಿರುತ್ತದೆ. ಕಣ್ಣಿಗೆ ಕಾಣದ ಸೂಕ್ಷ್ಮ ಜೀವಾಣು ಪರಿಸರ ಸಂರಕ್ಷಣೆಗೆ ಪೂರಕವಾಗಿ ಇರುತ್ತವೆ. ಪರಿಸರ ಬಿಟ್ಟು ಮನುಷ್ಯ ಇರಲು ಸಾಧ್ಯವಿಲ್ಲ. ಆದರೆ ಮನುಷ್ಯನಿಲ್ಲದೆ ಪರಿಸರ ಇರುತ್ತದೆ. ಆದ ಕಾರಣ ಪರಿಸರದ ಮೇಲೆ ನಮ್ಮ ಬದುಕು ಅವಲಂಬಿತವಾಗಿರುವ ಕಾರಣ ಪರಿಸರ ಸಂರಕ್ಷಣೆ ಮಾಡಬೇಕು ಎಂದು ಹೇಳಿದರು.

ನಗರ ಪ್ರದೇಶದ ಮಾಲಿನ್ಯದಿಂದ ಬೇಸತ್ತ ಜನರು ಹಳ್ಳಿಗಳತ್ತ ಮುಖ ಮಾಡಿದ್ದರು. ರಜೆ ಹಾಗೂ ಬಿಡುವಿನ ಸಮಯದಲ್ಲಿ ಹಳ್ಳಿಗೆ ಹೋಗಿ ಬರುತ್ತಿದ್ದರು. ಆದರೆ ಈಗ ಹಳ್ಳಿಗಳು ಕೂಡ ನಗರಗಳಾಗಿ ಮಾರ್ಪಟ್ಟಿದೆ. ಈ ಹಿನ್ನೆಲೆ ಮಕ್ಕಳಿಗೆ ಪರಿಸರದ ಮಹತ್ವ ತಿಳಿಸಬೇಕು. ಮರಗಳು ಎಷ್ಟು ಮುಖ್ಯ ಎಂದು ಮನವರಿಕೆ ಮಾಡಬೇಕು ಎಂದರು.

> “ಬಹಳಷ್ಟು ಜನರು ಮಡಿಕೆ ಹಾಗೂ ಲೋಹದ ಲೋಟದಲ್ಲಿ ನೀರು ಕುಡಿಯುವುದನ್ನು ಬಿಟ್ಟಿದ್ದಾರೆ. ಇದಕ್ಕೆ ಪರ್ಯಾಯವಾಗಿ ಪ್ಲಾಸ್ಟಿಕ್ ಬಾಟಲ್‌ನಲ್ಲಿ ನೀರು ಕುಡಿಯುವ ಮನಸ್ಥಿತಿ ಹೊಂದಿದ್ದಾರೆ. ಇದರಿಂದ ಪ್ಲಾಸ್ಟಿಕ್ ಮೇಲೆ ಹೆಚ್ಚು ಅವಲಂಬಿತರಾಗಿದ್ದಾರೆ. ಅಂಗಡಿಗಳಲ್ಲಿ ವಸ್ತುಗಳಿಗಿಂತ ಪ್ಲಾಸ್ಟಿಕ್ ಕವರ್‌ಗಳೇ ಹೆಚ್ಚು ಸಿಗುತ್ತಿದೆ. ತ್ಯಾಜ್ಯ ವಸ್ತುಗಳು ಪರಿಸರದ ಮೇಲೆ ದುಷ್ಪರಿಣಾಮ ಬೀರುತ್ತದೆ. –ಡಾ.ಹರ್ಷ

ವಿಶ್ವದಲ್ಲಿ ಫಿನ್‌ಲ್ಯಾಂಡ್ ಹಾಗೂ ಭೂತಾನ್ ಹ್ಯಾಪಿಯೆಸ್ಟ್ ಕಂಟ್ರಿಯಾಗಿವೆ. ಶೇ.70ರಷ್ಟು ಕಾಡು ಇರುವ ಹಿನ್ನೆಲೆ ಅಲ್ಲಿ ಇಂಗಾಲದ ಪ್ರಮಾಣ ಶೂನ್ಯವಾಗಿದೆ. ಇದು ನಮಗೆ ಮಾದರಿಯಾಗಬೇಕು ಎಂದು ಅಭಿಪ್ರಾಯಪಟ್ಟರು.

ಕೊರೊನಾ ಬಂದ ನಂತರ ಆಕ್ಸಿಜನ್ ಮಹತ್ವ ಅರಿವಾಗಿದೆ. ಅಂದು ಆಕ್ಸಿಜನ್ ಸಿಗಲಿಲ್ಲವೆಂದರೆ ಜನರ ಸಾವಿನ ಪ್ರಮಾಣ ಮತ್ತಷ್ಟು ಹೆಚ್ಚಾಗುತ್ತಿತ್ತು ಎಂದರು.

ಪರಿಸರ ದಿನಾಚರಣೆ ಇವತ್ತು ಒಂದು ದಿನಕ್ಕೆ ಸೀಮಿತವಾಗದೆ ವರ್ಷಪೂರ್ತಿ ನಡೆಯಬೇಕು. ಈ ಮೂಲಕ ಪರಿಸರ ಸಂರಕ್ಷಣೆ ಬಗ್ಗೆ ಜನರಲ್ಲಿ ಜಾಗೃತಿ ಮೂಡಿಸಿ ಉತ್ತಮ ಪರಿಸರ ಪ್ರದೇಶವನ್ನಾಗಿಸಬೇಕು ಎಂದು ಸಲಹೆ ನೀಡಿದರು.

ಉತ್ತಮ ಪರಿಸರ ಇಲ್ಲದ, ಗುಣಮಟ್ಟದ ಆಹಾರ ದೊರೆಯದ ಹಾಗೂ ಜನರ ಜೀವನ ಶೈಲಿ ಬದಲಾಗಿರುವ ಹಿನ್ನೆಲೆ ಜನರ ಆಯಸ್ಸು ಗರಿಷ್ಟ 60 ವರ್ಷ ಎಂದು ಬೇಸರ ವ್ಯಕ್ತಪಡಿಸಿದರು. ಕಾರ್ಯಕ್ರಮದಲ್ಲಿ ಭಾಗವಹಿಸಿದ್ದ ಕಾಲೇಜು ವಿದ್ಯಾರ್ಥಿಗಳು ಪರಿಸರ ಗೀತೆ ಗಾಯನದ ಮೂಲಕ ಪರಿಸರದ ಮಹತ್ವ ತಿಳಿಸಿದರು.

ಹಾಸನ ಮಿತ್ರ

ಭೂಮಿಯ ಸಂರಕ್ಷಣೆ ಮಾಡುವುದು ಎಲ್ಲರ ಹೊಣೆ

ಪರಿಸರವಾದಿ ಸಿ.ಎನ್.ಅಶೋಕ್ ಅಭಿಮತ



ಚನ್ನರಾಯಪಟ್ಟಣದ ಆದಿಚುಂಚನಗಿರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ವಿಶ್ವ ಭೂಮಿ ದಿನದ ಅಂಗವಾಗಿ ಸಸಿ ನೆಡಲಾಯಿತು.

ಚನ್ನರಾಯಪಟ್ಟಣ: ಸಕಲ ಜೀವಿಗಳಿಗೆ ಆಶ್ರಯ ತಾಣವಾಗಿರುವ ಭೂಮಿಯ ಸಂರಕ್ಷಣೆ ಮಾಡುವುದು ಎಲ್ಲರ ಹೊಣೆ ಎಂದು ಪರಿಸರವಾದಿ ಸಿ.ಎನ್. ಅಶೋಕ್ ಹೇಳಿದರು.

ಪಟ್ಟಣದ ಆದಿಚುಂಚನಗಿರಿ ಪ್ರಥಮ ದರ್ಜೆ ಕಾಲೇಜಿನ ಭೂಗೋಳಶಾಸ್ತ್ರ ವಿಭಾಗ, ಬಿಜಿಎಸ್ ಸಮೂಹ ಶಿಕ್ಷಣ ಸಂಸ್ಥೆ, ಭೂಮಿ ಉಳಿಸಿ ಆಂದೋಲನಾ ಸಮಿತಿ, ಮಕ್ಕಳ ಸಾಹಿತ್ಯ ಪರಿಷತ್ತು ಸಹಯೋಗದಲ್ಲಿ ಏರ್ಪಡಿಸಿದ್ದ ವಿಶ್ವ ಭೂಮಿ ದಿನಾಚರಣೆಯಲ್ಲಿ ಅವರು ಮಾತನಾಡಿದರು.

ಭೂಮಿ ಮತ್ತು ಮನುಕುಲದ ನಡುವೆ ಭಾವನಾತ್ಮಕ ಸಂಬಂಧ ಇದೆ. ಭೂಮಿ ಸಮೃದ್ಧವಾಗಿದ್ದರೆ, ಉತ್ತಮ ಫಸಲು ಬರುತ್ತದೆ. ಆ ಮೂಲಕ ಸಮಾಜದ ಆರೋಗ್ಯ ಚೆನ್ನಾಗಿರುತ್ತದೆ. ನೈಸರ್ಗಿಕ ಕೃಷಿ ಕೈಗೊಳ್ಳುವುದು ಒಳಿತು ಎಂದರು.

ಜಾಗತಿಕ ತಾಪಮಾನ ಹೆಚ್ಚಾದರೆ, ಜೀವಸಂಕುಲದ ಮೇಲೆ ವ್ಯತಿರಿಕ್ತ ಪರಿಣಾಮ ಬೀರುತ್ತಿದೆ. ಹಸಿರು ಮನೆ ಪರಿಣಾಮ ಮತ್ತು ಅಗತ್ಯಕ್ಕಿಂತ ಹೆಚ್ಚು ಪ್ರಮಾಣದಲ್ಲಿ ವಾಹನಗಳ ಬಳಕೆ ಆಗುತ್ತಿದ್ದು, ಅದರಿಂದ ಹೊರಸೂಸುವ ಹೊಗೆಯಿಂದ ಪರಿಸರ ಮಾಲಿನ್ಯ ಉಂಟಾಗುತ್ತಿದೆ. ಇದರಿಂದ ಅನೇಕ ಸಮಸ್ಯೆ ಉಲ್ಬಣಿಸುತ್ತಿದೆ ಎಂದು ಹೇಳಿದರು.

ಅಭಿವೃದ್ಧಿ ಹೆಸರಿನಲ್ಲಿ ಮರಗಳನ್ನು ನಾಶ ಮಾಡುತ್ತಿದ್ದು, ಪ್ರಕೃತಿ ಸಂಪತ್ತು ಹಾಳಾಗುತ್ತಿದೆ. ಭೂಮಿ, ನಿಸರ್ಗ, ನೀರನ್ನು ಕಲುಷಿತಗೊಳಿಸಬಾರದು. ಇವುಗಳನ್ನು ಸ್ವಚ್ಛಂದವಾಗಿಡುವ ಮೂಲಕ ಭವಿಷ್ಯದ ಪೀಳಿಗೆಗೆ ಉತ್ತಮವಾಗಿ ಜೀವಿಸಲು ಅವಕಾಶ ಮಾಡಿಕೊಡಬೇಕು ಎಂದು ಹೇಳಿದರು.

ಕಾಲೇಜು ಪ್ರಾಂಶುಪಾಲ ಎಂ.ಕೆ. ಮಂಜುನಾಥ ಮಾತನಾಡಿ, ಅನಾದಿ ಕಾಲದಿಂದೂ ಭೂಮಿಯನ್ನು ಗೌರವದಿಂದ ಸ್ಮರಿಸಲಾಗುತ್ತಿದೆ. ಹೊಲ, ಗದ್ದೆಗಳಲ್ಲಿ ಬೆಳೆಗಳಿಗೆ ರಾಸಾಯನಿಕ ಬಳಕೆ ಹೆಚ್ಚಾದಂತೆ ಆರೋಗ್ಯದ ಮೇಲೆ ದುಷ್ಪರಿಣಾಮ ಬೀರುತ್ತದೆ ಎಂದರು.

ಸಮಾಜಶಾಸ್ತ್ರ ವಿಭಾಗದ ಮುಖ್ಯಸ್ಥ ಪ್ರವೀಣ್‌ಕುಮಾರ್, ಭೂಗೋಳಶಾಸ್ತ್ರ ವಿಭಾಗದ ಸಹಾಯಕ ಪ್ರಾಧ್ಯಾಪಕಿ ನಳಿನಾ, ಸಹಾಯಕ ಪ್ರಾಧ್ಯಾಪಕರಾದ ಎಚ್.ಜೆ.ಅರ್ಪಿತಾ, ನಿರುಪಮಾ, ಜಿ.ಎಸ್.ಲೋಕೇಶ್, ಶೇಖ್ ಇಮ್ರಾನ್, ಗ್ರಂಥಪಾಲಕಿ ಕವಿತಾ, ಮಕ್ಕಳ ಸಾಹಿತ್ಯ ಪರಿಷತ್ತು ಪದಾಧಿಕಾರಿಗಳಾದ ಜಯರಾಂ, ಶ್ರೀನಿವಾಸ್ ಭಾಗವಹಿಸಿದ್ದರು. ಇದಕ್ಕೂ ಮುನ್ನ ಕಾಲೇಜು ಆವರಣದಲ್ಲಿ ಭೂಮಿಗೆ ಪೂಜೆ ಸಲ್ಲಿಸಿ, ಗಿಡ ನೆಡಲಾಯಿತು.

ವಾಯುವಿಹಾರಕ್ಕೆ ತೆರಳಿದ್ದ ವ್ಯಕ್ತಿ ಮೇಲೆ ಒಂಟಿಸಲಗ ದಾಳಿ



ಹಾಸನ: ವಾಯುವಿಹಾರಕ್ಕೆ ತೆರಳಿದ್ದ ವ್ಯಕ್ತಿ ಮೇಲೆ ಏಕಾಏಕಿ ಒಂಟಿ ಸಲಗ ದಾಳಿ ನಡೆಸಿರುವ ಘಟನೆ ಸಕಲೇಶಪುರ ತಾಲೂಕಿನ ಹೆಬ್ಬನಹಳ್ಳಿಯಲ್ಲಿ ನಡೆದಿದೆ.

ಹೆಬ್ಬನಹಳ್ಳಿ ಗ್ರಾಮದ ರಾಜು (68) ಕಾಡಾನೆ ದಾಳಿಯಿಂದ ಗಾಯಗೊಂಡ ವ್ಯಕ್ತಿ. ವಾಯುವಿಹಾರಕ್ಕೆ ತೆರಳಿದ್ದ ರಾಜು ಅವರನ್ನು ಕಾಡಾನೆ ಸೊಂಡಲಿನಿಂದ ಎತ್ತಿ ಬಿಸಾಡಿ, ತುಳಿದು ದಾಳಿ ನಡೆಸಿದೆ. ಕಾಡಾನೆ ದಾಳಿಯಿಂದ ತೀವ್ರವಾಗಿ ಗಾಯಗೊಂಡಿರುವ ರಾಜು ಇದೀಗ ಜಿಲ್ಲಾ ಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾರೆ.

ಜನರು ಕಿರುಚಾಡುತ್ತಿದ್ದಂತೆ ದಾಳಿ ನಡೆಸುತ್ತಿದ್ದ ಒಂಟಿಸಲಗ ಕಾಫಿ ತೋಟದೊಳಗೆ ಹೋಗಿದೆ. ಗ್ರಾಮಸ್ಥರು ಗಾಯಾಳುವನ್ನು ಕೂಡಲೇ ಸಕಲೇಶಪುರ ಕ್ರಾಫರ್ಡ್ ಆಸ್ಪತ್ರೆಗೆ ರವಾನಿಸಿದ್ದಾರೆ. ನಂತರ ಹೆಚ್ಚಿನ ಚಿಕಿತ್ಸೆಗಾಗಿ ಜಿಲ್ಲಾಸ್ಪತ್ರೆಗೆ ರವಾನಿಸಿದ್ದು, ಸ್ಥಳಕ್ಕೆ ಅರಣ್ಯ ಇಲಾಖೆ ಸಿಬ್ಬಂದಿ ಭೇಟಿ ನೀಡಿದ್ದಾರೆ.

ಫೈನಾನ್ಸ್ ಕಿರುಕುಳಕ್ಕೆ ರೈತ ನೇಣಿಗೆ ಶರಣು

ಹಾಸನ, ಏ. 22–ರೈತರೊಬ್ಬರು ಫೈನಾನ್ಸ್ ಕಿರುಕುಳ ಮತ್ತು ಸಾಲದ ಒತ್ತಡ ತಾಳಲಾರದೆ ಮನೆಯಲ್ಲಿ ನೇಣು ಬಿಗಿದುಕೊಂಡು ಆತ್ಮಹತ್ಯೆ ಮಾಡಿಕೊಂಡಿರುವ ಘಟನೆ ಹಾಸನ ತಾಲೂಕಿನ ಗೊರೂರು ಪೊಲೀಸ್ ಠಾಣೆ ವ್ಯಾಪ್ತಿಯ ಜೋಡಿಮಲ್ಲಪ್ಪನಹಳ್ಳಿಯಲ್ಲಿ ನಡೆದಿದೆ.



ವೆಂಕಟೇಗೌಡ (48) ಆತ್ಮಹತ್ಯೆ ಮಾಡಿಕೊಂಡ ರೈತ. ಇವರು ಫೈನಾನ್ಸ್ ಬ್ಯಾಂಕ್, ವ್ಯವಸಾಯ ಸಹಕಾರ ಸಂಘ, ಧರ್ಮಸ್ಥಳ ಸಂಘ, ಕೈಸಾಲ ಸೇರಿ ಒಟ್ಟು 7 ಲಕ್ಷ 60 ಸಾವಿರ ರೂ. ಸಾಲ ಮಾಡಿಕೊಂಡಿದ್ದಾರೆ ಎನ್ನಲಾಗಿದೆ. ಸಾಲದ ಹಣವನ್ನು ಪಾವತಿಸುವಂತೆ ಫೈನಾನ್ಸ್ ಸಂಸ್ಥೆಗಳಿಂದ ಕಿರುಕುಳಕ್ಕೊಳಗಾಗಿದ್ದ ಇವರು ಮನನೊಂದು ಆತ್ಮಹತ್ಯೆಗೆ ಶರಣಾಗಿದ್ದಾರೆ ಎಂದು ಕುಟುಂಬದವರು ತಿಳಿಸಿದ್ದಾರೆ. ಘಟನಾ ಸ್ಥಳಕ್ಕೆ ಪೊಲೀಸರು ಭೇಟಿ ನೀಡಿ ಪರಿಶೀಲಿಸಿದ್ದಾರೆ. ಗೊರೂರು ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ರಾಸುಗಳಿಗೆ ವಿಮೆ ಮಾಡಿಸಿ, ನಷ್ಟ ತಪ್ಪಿಸಿಕೊಳ್ಳಿ: ಶಾಸಕ ಬಾಲಕೃಷ್ಣ



ಹಿರೀಸಾವೆ: ರೈತರು ಸಾಕಿರುವ ರಾಸುಗಳಿಗೆ (ಹಸುಗಳಿಗೆ) ಕಡ್ಡಾಯವಾಗಿ 800 ರೂ. ಕಟ್ಟಿ ವಿಮೆ ಮಾಡಿಸಿಕೊಂಡು ಅನಾಹುತದಿಂದ ಆಗುವ ನಷ್ಟದಿಂದ ಪಾರಾಗಿ ಎಂದು ಶಾಸಕ ಸಿ.ಎನ್. ಬಾಲಕೃಷ್ಣ ಮನವಿ ಮಾಡಿದರು.

ಕೊತ್ತನಹಳ್ಳಿಯಲ್ಲಿ ಹಾಲು ಉತ್ಪಾದಕರು ಮಹಿಳಾ ಸಹಕಾರ ಸಂಘದ ಕಟ್ಟಡ ನಿರ್ಮಾಣ ಮತ್ತು ಪಡಿತರ ವಿತರಣೆಗೆ ಚಾಲನೆ ನೀಡಿ, ಮಾತನಾಡಿದರು.

ಅನಾರೋಗ್ಯ ಸೇರಿದಂತೆ ಇತರೆ ಕಾರಣಗಳಿಂದ ಹಸು ಮರಣ ಹೊಂದಿದ್ದಾಗ, 70 ಸಾವಿರ ರೂ. ಪರಿಹಾರ ಸಿಗುತ್ತದೆ. ಈ ಬಗ್ಗೆ ರೈತರಿಗೆ ಅರಿವು ಮೂಡಿಸಬೇಕು. ಇದಕ್ಕಿಂತ ಮುಖ್ಯವಾಗಿ ಪ್ರತಿಯೊಬ್ಬರೂ ವಾಹನಗಳ ವಿಮೆ ಮತ್ತು ವಾಹನ ಚಾಲನ ಪರವಾನಗಿಯನ್ನು ಕಡ್ಡಾಯವಾಗಿ ಮಾಡಿಸಿಕೊಂಡು ನಿಯಮಾನುಸಾರ ಚಾಲನೆ ಮಾಡುವ ಮೂಲಕ ತಮ್ಮ ಕುಟುಂಬವನ್ನು ಸುರಕ್ಷಿತವಾಗಿ ಇಡಬೇಕು ಎಂದರು.

ವೃದ್ಧರ ಅನುಕೂಲಕ್ಕಾಗಿ ಕೊತ್ತನಹಳ್ಳಿಯಲ್ಲಿ ಪ್ರತಿ ತಿಂಗಳ 3ನೇ ಸೋಮವಾರ ಮತ್ತು ಮಂಗಳವಾರ ಪಡಿತರವನ್ನು ವಿತರಣೆ ಮಾಡಲಾಗುವುದು. ಸಹಕಾರ ಸಂಘಗಳ ಮೂಲಕ ರೈತರಿಗೆ ಹೆಚ್ಚಿನ ನೆರವು ನೀಡಿರುವುದಾಗಿ ತಿಳಿಸಿದರು.

ಜೆಡಿಎಸ್ ಮುಖಂಡ ರವಿಕುಮಾರ್, ಹಿರೀಸಾವೆ ಗ್ರಾಪಂ ಅಧ್ಯಕ್ಷೆ ರಾಧಾ, ಕೃಷಿ ಪತ್ತಿನ ಸಹಕಾರ ಸಂಘದ ಅಧ್ಯಕ್ಷ ಎಚ್.ಜೆ.ಮಹೇಶ್, ನಿರ್ದೇಶಕರಾದ ಬೋರೇಗೌಡ, ಕೆಂಪೇಗೌಡ, ಬೋರಣ್ಣ, ಬಾಬು, ನಾಗೇಶ್, ನರಸಿಂಹಮೂರ್ತಿ, ಹಾಲು ಉತ್ಪಾದಕರ ಸಂಘದ ಅಧ್ಯಕ್ಷೆ ರೇಣುಕಾ ಮಂಜೇಗೌಡ, ವಿಸ್ತರಣಾಧಿಕಾರಿ ದಯಾನಂದ್, ಸೊಸೈಟಿ ಹರೀಶ್, ಮುಖಂಡರಾದ ಮಂಜುನಾಥ್, ಮರಿಸ್ವಾಮಣ್ಣ, ರಾಜಣ್ಣ, ಮಂಜುನಾಥ್, ಅಣ್ಣಯ್ಯ, ಪಂಚಾಯಿತಿ ಸದಸ್ಯರು, ಗ್ರಾಮಸ್ಥರು ಉಪಸ್ಥಿತರಿದ್ದರು.

ಮೈಸೂರಿನ ಸಂತ ಫಿಲೋಮಿನಾ ಚರ್ಚ್‌ನಲ್ಲಿ ಪೋಪ್ ಫ್ರಾನ್ಸಿಸ್ ನಿಧನಕ್ಕೆ ಶ್ರದ್ಧಾಂಜಲಿ



ಪೋಪ್ ಫ್ರಾನ್ಸಿಸ್ ಅವರ ಅಗಲಿಕೆಗೆ ಮೈಸೂರಿನ ಸಂತ ಫಿಲೋಮಿನಾ ಚರ್ಚ್‌ನಲ್ಲಿ ಶ್ರದ್ಧಾಂಜಲಿ ಅರ್ಪಿಸಲಾಯಿತು.

ಮೈಸೂರು, ಏ.22(ಬಿಎಲ್‌ಯು)– ರೋಮ್‌ನ ವ್ಯಾಟಿಕನ್ ಸಿಟಿಯಲ್ಲಿ ನಿನ್ನೆ ನಿಧನರಾದ ಪೋಪ್ ಫ್ರಾನ್ಸಿಸ್ ಅವರ ಅಗಲಿಕೆಗೆ ಮೈಸೂರಿನ ಸಂತ ಫಿಲೋಮಿನಾ ಚರ್ಚ್‌ನಲ್ಲಿ ಶ್ರದ್ಧಾಂಜಲಿ ಅರ್ಪಿಸಲಾಯಿತು. ಶ್ರದ್ಧಾಂಜಲಿ ಸಭೆಯಲ್ಲಿ 100ಕ್ಕೂ ಹೆಚ್ಚು ಧರ್ಮಗುರುಗಳು ಪಾಲ್ಗೊಂಡಿದ್ದರು.

ಸಂತ ಫಿಲೋಮಿನಾ ಚರ್ಚ್‌ನಲ್ಲಿ ನಡೆದ ಶ್ರದ್ಧಾಂಜಲಿ ಸಭೆಯಲ್ಲಿ ಪಾಲ್ಗೊಂಡಿದ್ದ ಮೈಸೂರು ಧರ್ಮ ಪ್ರಾಂತ್ಯದ ಪ್ರೇಷಿತ ಆಡಳಿತಾಧಿಕಾರಿ ಡಾ.ಬರ್ನಾರ್ಡ್ ಮೊರಾಸ್ ಅವರು ಪೋಪ್ ಫ್ರಾನ್ಸಿಸ್ ನಿಧನಕ್ಕೆ ತೀವ್ರ ಸಂತಾಪ ವ್ಯಕ್ತಪಡಿಸಿದರು.

ಈ ವೇಳೆ ಪೋಪ್ ಫ್ರಾನ್ಸಿಸ್ ಅವರ ಆತ್ಮಕ್ಕೆ ಶಾಂತಿ ಸಿಗಲೆಂದು ಡಾ.ಬರ್ನಾರ್ಡ್ ಮೊರಾಸ್ ಅವರು ಬಲಿ ಪೂಜೆ ಸೇರಿದಂತೆ ಹಲವು ಧಾರ್ಮಿಕ ವಿಧಿ ವಿಧಾನಗಳನ್ನು ನೆರವೇರಿಸಿದರು.

ಈ ವೇಳೆ ಮಾತನಾಡಿದ ಡಾ.ಬರ್ನಾರ್ಡ್ ಮೊರಾಸ್ ಅವರು, ಪೋಪ್ ಫ್ರಾನ್ಸಿಸ್ ಅವರು ನಿಷ್ಠೆ, ಧೈರ್ಯ ಹಾಗೂ ಪ್ರೀತಿಯಿಂದ ಬದುಕಲು ಕಲಿಸಿದರು. ಬಡ ಜನರ ಪರವಾಗಿದ್ದರು ಎಂದು ಹೇಳಿದರು.

ವ್ಯಾಟಿಕನ್ ಸಿಟಿ ಸೂಚಿಸಿರುವಂತೆ 9 ದಿನಗಳ ಕಾಲ ಶೋಕಾಚರಣೆ ಇರಲಿದ್ದು, ಯಾವುದೇ ಹಬ್ಬಗಳನ್ನು ಆಚರಣೆ ಮಾಡುವಂತಿಲ್ಲ. ಪೋಪ್ ಫ್ರಾನ್ಸಿಸ್ ಅವರ ಅಂತ್ಯಕ್ರಿಯೆ ನೆರವೇರುವ ಹಿಂದಿನ ದಿನ ಶ್ರದ್ಧಾಂಜಲಿ ಸಭೆ ನಡೆಸುವ ಬಗ್ಗೆ ವ್ಯಾಟಿಕನ್ ಸಿಟಿ ಮೈಸೂರು ಸೇರಿದಂತೆ ಎಲ್ಲಾ ಧರ್ಮ ಕ್ಷೇತ್ರಗಳಿಗೆ ಸೂಚನೆ ನೀಡಲಿದೆ. ಅದರಂತೆ ಡಾ.ಬರ್ನಾರ್ಡ್ ಮೊರಾಸ್ ಅವರು ತಮಗೆ ಬರುವ ಸೂಚನೆಯನ್ನು ಎಲ್ಲಾ ಚರ್ಚ್‌ಗಳಿಗೆ ಕಳುಹಿಸಲಿದ್ದಾರೆ. ಮೈಸೂರು ಸೇರಿದಂತೆ ಎಲ್ಲಾ ಚರ್ಚ್‌ಗಳಲ್ಲಿ ಅಂದು ಶ್ರದ್ಧಾಂಜಲಿ ಸಭೆ ನೆರವೇರಲಿದೆ.

ಶಿವ ಜ್ಯೋತಿ ಪಣಕ್ಕೆ ಜಾತಿಗಣತಿಯಲ್ಲಿ ಅನ್ಯಾಯ 8ರಿಂದ 10 ಲಕ್ಷ ಇರುವ ಜನಸಂಖ್ಯೆಯನ್ನು 6 ಲಕ್ಷಕ್ಕೆ ನಮೂದಿಸಲಾಗಿದೆ

ಮೈಸೂರು,ಏ.22(ಜಿಎ)–ಜಾತಿ ಗಣತಿ ವರದಿಯಲ್ಲಿ ಶಿವಜ್ಯೋತಿ ಪಣ ಮತ್ತು ಜ್ಯೋತಿ ಪಣ ಗಾಣಿಗರ ಸಂಖ್ಯೆ ತೀರಾ ಕಡಿಮೆ ತೋರಿಸಿ ಅನ್ಯಾಯ ಮಾಡಲಾಗಿದೆ. ಇದು ಸರಿಯಲ್ಲ. ಸಮರ್ಪಕವಾಗಿ ಗಣತಿ ನಡೆಯ ಬೇಕಾಗಿತ್ತು ಎಂದು ಜಿಲ್ಲಾ ಶಿವಜೋತಿ ಪಣ ಮತ್ತು ಜ್ಯೋತಿ ಪಣ ಗಾಣಿಗರ ಸಮಾಜ ಬೇಸರ ವ್ಯಕ್ತಪಡಿಸಿದೆ.

ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಪದಾಧಿಕಾರಿ ಅನಂತು ಮಾತನಾಡಿ, ರಾಜ್ಯದಲ್ಲಿ ಸಮುದಾಯದ ಸಂಖ್ಯೆ ಸುಮಾರು 8ರಿಂದ 10 ಲಕ್ಷ ಇದೆ. ಆದರೆ ವರದಿಯಲ್ಲಿ ಕೇವಲ 6 ಲಕ್ಷ ತೋರಿಸಲಾಗಿದೆ ಎನ್ನಲಾಗಿದೆ. ಇದರಿಂದಾಗಿ ಪ್ರಾತಿನಿಧ್ಯಕ್ಕೆ ಅಡ್ಡಿಯುಂಟಾಗುತ್ತದೆ ಎಂದು ಕಳವಳ ವ್ಯಕ್ತಪಡಿಸಿದರು.

ಸಿಎಂ ಕ್ಷೇತ್ರ ವರುಣ ಸೇರಿದಂತೆ ರಾಜ್ಯದ ಸುಮಾರು 12 ಜಿಲ್ಲೆಗಳಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಸಮುದಾಯದವರು ವಾಸ ಮಾಡುತ್ತಿದ್ದಾರೆ. ಆದರೆ ನಿಖರ ಸಂಖ್ಯೆ ವರದಿ ತೋರಿಸಿಲ್ಲ. ಹೀಗಾಗಿ ವೈಜ್ಞಾನಿಕವಾಗಿ ವರದಿ ಸಲ್ಲಿಸಬೇಕೆಂದು ಕೋರಿದರು.

ಮತ್ತೋರ್ವ ಮುಖಂಡ ಮಾದಶೆಟ್ಟಿ ಮಾತನಾಡಿ, ಸಮುದಾಯದ ಮುಖಂಡರಾದ ಅನಂತು ಅವರು ಮಾಜಿ ಮೇಯರ್ ಸಹ ಆಗಿದ್ದು, ಇವರನ್ನು ಎಂಎಲ್‌ಸಿ ಮಾಡಬೇಕೆಂದು ಇದೇ ವೇಳೆ ಸಿದ್ದರಾಮಯ್ಯ ಅವರಲ್ಲಿ ಮನವಿ ಮಾಡಿದರು. ಗೋಷ್ಠಿಯಲ್ಲಿ ಮುಖಂಡರಾದ ವೆಂಕಟೇಶ್, ಜಿ.ಸ್ವಾಮಿ, ಆರ್.ರಘು ಉಪಸ್ಥಿತರಿದ್ದರು.

ನಾಪತ್ತೆಯಾಗಿದ್ದ ವಿದ್ಯಾರ್ಥಿಗಳು ನೇಣು ಬಿಗಿದ ಸ್ಥಿತಿಯಲ್ಲಿ ಪತ್ತೆ

ದಾವಣಗೆರೆ, ಏ.22– ನಾಪತ್ತೆಯಾಗಿದ್ದ ಪ್ರೇಮಿಗಳಿಬ್ಬರು ಹರಪನಹಳ್ಳಿ ಪಟ್ಟಣದ ಹೊರವಲಯದ ಅನಂತನಹಳ್ಳಿ ಸರ್ಕಾರಿ ಐಟಿಐ ಎದುರಿಗಿರುವ ಅರಣ್ಯದಲ್ಲಿ ನೇಣುಬಿಗಿದ ಸ್ಥಿತಿಯಲ್ಲಿ ಪತ್ತೆಯಾಗಿದ್ದಾರೆ.

ಜಿಟ್ಟಿನಕಟ್ಟೆ ಗ್ರಾಮದ ಮದ್ದನಸ್ವಾಮಿ (18), ಬಂಡ್ರಿ ಗ್ರಾಮದ ದೀಪಿಕಾ(18) ನೇಣಿಗೆ ಶರಣಾದ ಪ್ರೇಮಿಗಳು. ಒಂದೇ ಮರದ ಕೊಂಬೆಗೆ ಇಬ್ಬರೂ ನೇಣು ಬಿಗಿದುಕೊಂಡಿದ್ದಾರೆ. ಮದ್ದನಸ್ವಾಮಿ ಹಾಗೂ ದೀಪಿಕಾ ಹರಪನಹಳ್ಳಿ ಸರ್ಕಾರಿ ಪಿಯು ಕಾಲೇಜ್‌ನಲ್ಲಿ ದ್ವಿತೀಯ ಪಿಯುಸಿ ಪರೀಕ್ಷೆ ಬರೆದಿದ್ದರು. ಇವರಿಬ್ಬರು ಏ.15 ಪಿಯುಸಿ ಫಲಿತಾಂಶ ಬಂದ ದಿನದಿಂದ ನಾಪತ್ತೆಯಾಗಿದ್ದರು.

ಇಬ್ಬರೂ ಪಿಯುಸಿ ಪರೀಕ್ಷೆಯಲ್ಲಿ ಪ್ರಥಮ ಶ್ರೇಣಿಯಲ್ಲಿ ಉತ್ತೀರ್ಣರಾಗಿದ್ದು, ದೀಪಿಕಾ 438 ಹಾಗೂ ಮದ್ದನಸ್ವಾಮಿ 373 ಅಂಕ ಪಡೆದಿದ್ದರು. ಪ್ರೇಮಿಗಳು ಯಾವ ಕಾರಣಕ್ಕೆ ಆತ್ಮಹತ್ಯೆ ಮಾಡಿಕೊಂಡಿದ್ದಾರೆ ಎಂದು ತಿಳಿದುಬಂದಿಲ್ಲ. ಈ ಸಂಬಂಧ ಪ್ರಕರಣ ದಾಖಲಿಸಿಕೊಂಡಿರುವ ಪೊಲೀಸರು ತನಿಖೆ ನಡೆಸುತ್ತಿದ್ದಾರೆ.

ಏ.27, ಅರಸು ಮಂಡಳಿ ಸಂಘದ ವಿಶೇಷ ಮಹಾಸಭೆ

ಮೈಸೂರು,ಏ.22–ಅರಸು ಮಂಡಳಿ ಸಂಘದ ವಿಶೇಷ ಮಹಾಸಭೆಯನ್ನು ಏ.27ರಂದು ಬೆಳಗ್ಗೆ 10 ಗಂಟೆಗೆ ರಾಜರ್ಷಿ ಶ್ರೀ ನಾಲ್ವಡಿ ಕೃಷ್ಣರಾಜ ಒಡೆಯರ್ ಸಮುದಾಯ ಭವನದಲ್ಲಿ ಸಂಘದ ಅಧ್ಯಕ್ಷ ಕೆ.ಮನೋಜ್ ಅರಸ್ ಅಧ್ಯಕ್ಷತೆಯಲ್ಲಿ ನಡೆಯಲಿದೆ.

ಕಾಂಗ್ರೆಸ್‌ಗೆ ನೇಮಕ



ಮೈಸೂರು: ಕರ್ನಾಟಕ ಪ್ರದೇಶ ಕಾಂಗ್ರೆಸ್ ಸಮಿತಿ ಅಲ್ಪಸಂಖ್ಯಾತರ ಘಟಕದ ರಾಜ್ಯ ಪ್ರಧಾನ ಕಾರ್ಯದರ್ಶಿಗಳಾಗಿ ಹುಲ್ಲಹಳ್ಳಿ ನಿವಾಸಿ ಅನ್ಸರ್ ಅಹಮದ್ ಅವರನ್ನು ನೇಮಕ ಮಾಡಲಾಗಿದೆ.

ಚಿತ್ರೋದ್ಯಮ ಕುರಿತು ಉಪನ್ಯಾಸ

ಮೈಸೂರು,ಏ.22–ಏ.23ರಂದು ವಿಶ್ವ ಪುಸ್ತಕ ಹಾಗೂ ಕೃತಿ ಸ್ವಾಮ್ಯ ದಿನಾಚರಣೆ ಅಂಗವಾಗಿ ನಗರ/ಜಿಲ್ಲಾ ಕೇಂದ್ರ ಗ್ರಂಥಾಲಯ, ಮೈಸೂರು ಹಾಗೂ ಪ್ರಥಮ್ ಬುಕ್ಸ್ ಸಂಯುಕ್ತಾಶ್ರಯದಲ್ಲಿ ಮಕ್ಕಳಿಗೆ ಗೊಗ್ಗಯ್ಯ ಎಲ್ಲಿ ಕಥಾ ವಾಚನ ಹಾಗೂ ಇದಕ್ಕೆ ಸಂಬಂಧಿಸಿದಂತೆ ಚಟುವಟಿಕೆಯನ್ನು ನಗರ ಕೇಂದ್ರ ಗ್ರಂಥಾಲಯ, ಪೀಪಲ್ಸ್ ಪಾರ್ಕ್‌ನಲ್ಲಿ ಏ.23ರಂದು ಬೆಳಗ್ಗೆ 11ರಿಂದ 12.30ರವರೆಗೆ ಆಯೋಜಿಸಲಾಗಿದೆ. ಸಂಗೀತ ನಿರ್ದೇಶಕ ಕವಿರಾಜ್ ಅವರಿಂದ ಸಾರ್ವಜನಿಕ ಓದುಗರಿಗೆ, ವಿದ್ಯಾರ್ಥಿಗಳಿಗೆ ಚಿತ್ರೋದ್ಯಮದ ಕುರಿತು ವಿಶೇಷ ಉಪನ್ಯಾಸ ಹಾಗೂ ಸಂವಾದ ಕಾರ್ಯಕ್ರಮವನ್ನು ಏರ್ಪಡಿಲಾಗಿದೆ.

ಬಾಲಕಿಯರ ವಿದ್ಯಾರ್ಥಿನಿಲಯಕ್ಕೆ ಪ್ರವೇಶ

ಮೈಸೂರು,ಏ.22(ಎಂಟಿವೈ)– ರಾಷ್ಟ್ರೀಯ ಮಾಧ್ಯಮಿಕ ಶಿಕ್ಷಣ ಅಭಿಯಾನದ ಅಂಗವಾಗಿ ಮೈಸೂರು ತಾಲೂಕಿನ ವರಕೋಡು ಗ್ರಾಮದ ಬಳಿ ನಿರ್ಮಿಸಿರುವ ಬಾಲಕಿಯರ ವಿದ್ಯಾರ್ಥಿನಿಲಯದಲ್ಲಿ 9ನೇ ತರಗತಿಯಿಂದ ದ್ವಿತೀಯ ಪಿಯುಸಿ ವಿದ್ಯಾರ್ಥಿನಿಯರ ಪ್ರವೇಶಕ್ಕೆ ಅರ್ಜಿ ಆಹ್ವಾನಿಸಲಾಗಿದೆ. ಬಾಲಕಿಯರ ವಸತಿ ನಿಲಯಕ್ಕೆ ಪ್ರವೇಶ ಉಚಿತವಾಗಿದ್ದು, 9ನೇ ತರಗತಿಯಿಂದ ದ್ವಿತೀಯ ಪಿಯುಸಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿನಿಯರು ಪ್ರವೇಶ ಪಡೆಯಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ಮೊ.ಸಂಖ್ಯೆ 9663002884 ಸಂಪರ್ಕಿಸಬಹುದಾಗಿದೆ.

ರಿಕ್ಕಿ ರೈ ಮೇಲೆ ಫೈರಿಂಗ್ ಪ್ರಕರಣ: ಗನ್ ಮ್ಯಾನ್ ವಿಠ್ಠಲ್ ಪೊಲೀಸರ ವಶಕ್ಕೆ



ರಿಕ್ಕಿ ರೈ

ರಾಮನಗರ, ಏ.22– ಮುತ್ತಪ್ಪ ರೈ ಪುತ್ರ ರಿಕ್ಕಿ ರೈ ಮೇಲೆ ನಡೆದ ಫೈರಿಂಗ್ ಪ್ರಕರಣಕ್ಕೆ ಟ್ವಿಸ್ಟ್ ಸಿಕ್ಕಿದ್ದು, ಇದೊಂದು ಫೇಕ್ ಅಟ್ಯಾಕ್ ಎಂಬ ಅನುಮಾನ ವ್ಯಕ್ತವಾಗುತ್ತಿದೆ. ವಿವಿಧ ಆಯಾಮಗಳಲ್ಲಿ ತನಿಖೆ ನಡೆಸುತ್ತಿರುವ ಪೊಲೀಸರಿಗೆ ಮಹತ್ವದ ಸುಳಿವು ಸಿಕ್ಕಿದೆ. ರಿಕ್ಕಿ ರೈ ಮನೆಯ ಭದ್ರತೆ ನೋಡಿಕೊಳ್ಳುತ್ತಿದ್ದ ವಿಠ್ಠಲ್‌ನನ್ನು ಪೊಲೀಸರು ವಶಕ್ಕೆ ಪಡೆದು, ವಿಚಾರಣೆ ನಡೆಸುತ್ತಿದ್ದಾರೆ.

ಕಳೆದ ಏ.18ರ ಮಧ್ಯರಾತ್ರಿ ಮುತ್ತಪ್ಪ ರೈ ಪುತ್ರ ರಿಕ್ಕಿ ರೈ ಮೇಲೆ ನಡೆದ ಫೈರಿಂಗ್ ಪ್ರಕರಣಕ್ಕೆ ದೊಡ್ಡ ತಿರುವು ಸಿಕ್ಕಿದೆ. ಇದು ಸುಪಾರಿ ಕಿಲ್ಲರ್‌ನಿಂದ ನಡೆದ ಅಟ್ಯಾಕಾ ಅಥವಾ ಜೊತೆಯಲ್ಲಿದ್ದವರಿಂದಲೇ ನಡೆದ ಕೊಲೆ ಯತ್ನವಾ ಎಂಬ ಅನುಮಾನದ ಮೇಲೆ ತನಿಖೆ ನಡೆಸಿದ ಪೊಲೀಸರಿಗೆ ಸ್ಥಳದಲ್ಲಿ ಸಿಕ್ಕ ಸಾಕ್ಷ್ಯಗಳು ಮಹತ್ವದ ಸುಳಿವು ನೀಡಿವೆ.

ಮನೆಗೆಲಸದವರು, ಗನ್ ಮ್ಯಾನ್‌ಗಳು, ಸೆಕ್ಯುರಿಟಿ, ಮ್ಯಾನೇಜರ್ ಹಾಗೂ ಆಡಿಟರ್‌ಗಳನ್ನ ವಿಚಾರಣೆ ಮಾಡಿದ್ದ ಪೊಲೀಸರು ಹೇಳಿಕೆ ದಾಖಲಿಸಿಕೊಂಡಿದ್ದರು. ಆದರೆ ವಿಚಾರಣಾಧೀನರ ಹೇಳಿಕೆಗೂ ಸ್ಥಳದಲ್ಲಿ ಸಿಕ್ಕ ಸಾಕ್ಷ್ಯಗಳಿಗೂ ತಾಳೆ ಆಗದಿರುವುದು ಇದೊಂದು ಫೇಕ್ ಅಟ್ಯಾಕ್ ಎಂಬ ಅನುಮಾನ ಬಂದಿದೆ.

ಸೋಮವಾರ ಇಡೀ ದಿನ ರಿಕ್ಕಿ ರೈ ಗನ್ ಮ್ಯಾನ್‌ಗಳನ್ನು ವಿಚಾರಣೆ ಮಾಡಿದ್ದ ಪೊಲೀಸರು, ಬಿಡದಿ ಫಾರ್ಮ್‌ಹೌಸ್‌ನಲ್ಲೂ ಸಂಪೂರ್ಣ ತಲಾಶ್ ಮಾಡಿದ್ದರು. ರಿಕ್ಕಿ ಭದ್ರತೆಗಾಗಿ ಇಟ್ಟುಕೊಂಡಿದ್ದ ಗನ್‌ಗಳೆಷ್ಟು, ಎಷ್ಟು ಬುಲೆಟ್ ಇವೆ. ಎಲ್ಲಾ ಗನ್‌ಗಳಿಗೂ ಲೈಸೆನ್ಸ್ ಇದ್ಯಾ ಎಂಬ ಪರಿಶೀಲನೆ ವೇಳೆ ಫೈರಿಂಗ್ ಸ್ಥಳದಲ್ಲಿ ಸಿಕ್ಕ ಗುಂಡಿಗೂ ರಿಕ್ಕಿ ರೈ ಮನೆಯ ಭದ್ರತೆ ನೋಡಿಕೊಳ್ಳುತ್ತಿದ್ದ ವಿಠ್ಠಲ್ ಎಂಬಾತನಿಗೂ ಗನ್‌ಗೂ ಸಾಮ್ಯತೆ ಇದೆ. ಹಾಗಾಗಿ ಗನ್ ಮ್ಯಾನ್ ವಿಠ್ಠಲ್‌ನನ್ನ ವಶಕ್ಕೆ ಪಡೆದ ಪೊಲೀಸರು ವಿಚಾರಣೆ ಮುಂದುವರೆಸಿದ್ದಾರೆ. ಅಲ್ಲದೇ ತನಿಖೆಯ ದಿಕ್ಕು ತಪ್ಪಿಸಲು ಸಿಮ್ ಇಲ್ಲದ ಮೊಬೈಲ್ ಬಿಸಾಕಿ, ನಾಲ್ವರ ಮೇಲೆ ಅನುಮಾನ ವ್ಯಕ್ತಪಡಿಸಿ ದೂರು ನೀಡಿದ್ದಾರೆ ಎನ್ನಲಾಗಿದೆ.

ಮುತ್ತಪ್ಪ ರೈ ಗನ್ ಮ್ಯಾನ್ ಆಗಿದ್ದ ಮಡಿಕೇರಿ ಮೂಲದ ವಿಠ್ಠಲ್, ಮುತ್ತಪ್ಪ ರೈ ನಿಧನದ ಬಳಿ ಅವರ ಕುಟುಂಬದ ಭದ್ರತೆ ನೋಡಿಕೊಳ್ಳುತ್ತಿದ್ದರು. ಇತ್ತೀಚೆಗೆ ಅನಾರೋಗ್ಯ ಹೆಚ್ಚಾಗಿದ್ದ ಕಾರಣ ಅವರಿಗೆ ಬಿಡದಿ ಮನೆಯ ಭದ್ರತೆ ಜವಾಬ್ದಾರಿ ನೀಡಲಾಗಿತ್ತು. ಘಟನೆ ನಡೆಯುವ ಮುನ್ನ ರಿಕ್ಕಿ ರೈ ಹಾಗೂ ವಿಠ್ಠಲ್ ಪ್ರತ್ಯೇಕ ಮಾತುಕತೆ ನಡೆಸಿದ್ದು, ಮನೆಯಿಂದ ಹೊರ ಹೋಗಿದ್ದರು.

ಘಟನೆ ನಡೆದು ರಿಕ್ಕಿ ರೈ ಆಸ್ಪತ್ರೆಗೆ ಸೇರಿದ ಬಳಿಕ ಮತ್ತೆ ವಿಠ್ಠಲ್ ಮನೆಗೆ ವಾಪಸ್ ಬಂದಿದ್ದ ಎಂಬುದು ಮನೆಯ ಸಿಸಿಟಿವಿ ಕ್ಯಾಮರಾದಿಂದ ಪೊಲೀಸರಿಗೆ ತಿಳಿದುಬಂದಿದೆ. ಹಾಗಾಗಿ ವಿಠ್ಠಲ್‌ನನ್ನ ತೀವ್ರ ವಿಚಾರಣೆಗೆ ಒಳಪಡಿಸಿದ್ದಾರೆ. ವಿಚಾರಣೆ ವೇಳೆ ವಿಠ್ಠಲ್‌ಗೆ ಎದೆನೋವು ಕಾಣಿಸಿಕೊಂಡ ಹಿನ್ನೆಲೆ ಆಸ್ಪತ್ರೆಗೆ ದಾಖಲಿಸಿ ಚಿಕಿತ್ಸೆ ಕೊಡಿಸಲಾಗುತ್ತಿದ್ದು, ಆಸ್ಪತ್ರೆಯಿಂದ ಡಿಸ್ಚಾರ್ಜ್ ಬಳಿಕ ಮತ್ತಷ್ಟು ವಿಚಾರಣೆ ನಡೆಯಲಿದೆ.

ಒಟ್ಟಾರೆ ರಿಕ್ಕಿ ರೈ ಮೇಲೆ ಅಟ್ಯಾಕ್ ಆದಾಗ ಗನ್ ಮ್ಯಾನ್ ಇದ್ರೂ ಕೌಂಟರ್ ಅಟ್ಯಾಕ್ ಆಗಿರಲಿಲ್ಲ. ಇದು ಸಾಕಷ್ಟು ಅನುಮಾನಕ್ಕೆ ಎಡೆಮಾಡಿಕೊಟ್ಟಿದ್ದು, ಇದೊಂದು ಫೇಕ್ ಅಟ್ಯಾಕ್ ಎನ್ನಲಾಗಿದೆ. ತನಿಖೆ ಬಳಿಕವಷ್ಟೇ ಸತ್ಯಾಸತ್ಯತೆ ಹೊರಬೀಳಬೇಕಿದೆ.

ಆರೋಪಿ ರಾಕೇಶ್ ಮಲ್ಲಿ ವಿಚಾರಣೆ

ರಾಮನಗರ, ಏ.22– ಭೂಗತ ಲೋಕದ ಮಾಜಿ ಡಾನ್ ಮುತ್ತಪ್ಪ ರೈ ಪುತ್ರ ರಿಕ್ಕಿ ರೈ ಮೇಲೆ ತಾಲೂಕಿನ ಬಿಡದಿ ಬಳಿ ಏ.18ರಂದು ರಾತ್ರಿ ನಡೆದ ಗುಂಡಿನ ದಾಳಿಗೆ ಸಂಬಂಧಿಸಿದಂತೆ, ಪ್ರಕರಣದ ಮೊದಲ ಆರೋಪಿಯಾಗಿರುವ ಕಾಂಗ್ರೆಸ್ ಮುಖಂಡ ರಾಕೇಶ್ ಮಲ್ಲಿ ಅವರನ್ನು ಮಂಗಳವಾರ ಬಿಡದಿ ಠಾಣೆಯಲ್ಲಿ ತನಿಖಾಧಿಕಾರಿಗಳು ವಿಚಾರಣೆ ನಡೆಸಿದರು. ಪೊಲೀಸರ ನೋಟಿಸ್ ಹಿನ್ನೆಲೆಯಲ್ಲಿ ರಾಕೇಶ್, ತಮ್ಮ ವಕೀಲರೊಂದಿಗೆ ಮಧ್ಯಾಹ್ನ ವಿಚಾರಣೆಗೆ ಹಾಜರಾದರು. ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಆರ್. ಶ್ರೀನಿವಾಸ ಗೌಡ ನೇತೃತ್ವದಲ್ಲಿ ಡಿವೈಎಸ್ಪಿಗಳು ಮತ್ತು ಇನ್ಸ್‌ಪೆಕ್ಟರ್‌ಗಳನ್ನು ಒಳಗೊಂಡ ತಂಡ ರಾಕೇಶ್ ಅವರನ್ನು ತೀವ್ರ ವಿಚಾರಣೆಗೆ ಒಳಪಡಿಸಿತು.

ದಕ್ಷಿಣ ಕನ್ನಡ ಜಿಲ್ಲೆಯ ಬಂಟ್ವಾಳದ ರಾಕೇಶ್ ಮಲ್ಲಿ ಒಂದು ಕಾಲದಲ್ಲಿ ಮುತ್ತಪ್ಪ ರೈ ಅವರ ಬಲಗೈ ಬಂಟನಂತಿದ್ದರು. ನಂತರ ಇಬ್ಬರ ನಡುವಿನ ಸಂಬಂಧದಲ್ಲಿ ಬಿರುಕುಂಟಾಗಿತ್ತು. ರಿಯಲ್ ಎಸ್ಟೇಟ್ ವ್ಯವಹಾರಕ್ಕೆ ಸಂಬಂಧಿಸಿದಂತೆ ರೈ ಅವರು ನನಗೆ ವಂಚನೆ ಮಾಡಿ, ಜೀವ ಬೆದರಿಕೆ ಹಾಕುತ್ತಿದ್ದಾರೆ ಎಂದು ರಾಕೇಶ್ ಬೆಂಗಳೂರು ಪೊಲೀಸರಿಗೆ ದೂರು ಕೊಟ್ಟಿದ್ದರು. ಆ ಮೇರೆಗೆ ರೈ ಮೇಲೆ ಪ್ರಕರಣ ಕೂಡ ದಾಖಲಾಗಿತ್ತು.

ರೈ ನಿಧನದ ಬಳಿಕ ಬಂಟ್ವಾಳದಲ್ಲಿ ಸಾಮಾಜಿಕ ಚಟುವಟಿಕೆಗಳಲ್ಲಿ ತೊಡಗಿಸಿಕೊಂಡಿದ್ದ ರಾಕೇಶ್, ಕಾಂಗ್ರೆಸ್ ಪಕ್ಷದಲ್ಲಿ ಗುರುತಿಸಿಕೊಂಡಿದ್ದ. 2018ರ ವಿಧಾನಸಭಾ ಚುನಾವಣೆಯಲ್ಲಿ ಕಾಂಗ್ರೆಸ್ ನಿಂದ ಕುಂದಾಪುರ ಕ್ಷೇತ್ರದಲ್ಲಿ ಸ್ಪರ್ಧಿಸಿ ಸೋತಿದ್ದರು.

ಒಬ್ಬನ ಮೇಲೆ ಹೆಚ್ಚಿದ ಸಂಶಯ: ಪ್ರಕರಣಕ್ಕೆ ಸಂಬಂಧಿಸಿದಂತೆ ಸತತ ಮೂರು ದಿನಗಳಿಂದ ಹಲವರನ್ನು ವಿಚಾರಣೆ ಮಾಡಲಾಗುತ್ತಿದೆ. ಇದರಲ್ಲಿ ಒಬ್ಬನ ಮೇಲೆ ಸಂಶಯ ಬಂದಿದೆ. ಆತನ ಪಾತ್ರದ ಬಗ್ಗೆ ಕೂಲಂಕುಷವಾಗಿ ತನಿಖೆ ಮಾಡುತ್ತಿದ್ದೇವೆ. ದೂರಿನಲ್ಲಿ ನಾಲ್ವರ ಮೇಲೆ ಅನುಮಾನ ವ್ಯಕ್ತಪಡಿಸಲಾಗಿದೆ ಎಂದು ಪೊಲೀಸ್ ವರಿಷ್ಠಾಧಿಕಾರಿ ಶ್ರೀನಿವಾಸ ಗೌಡ ಮಾಧ್ಯಮದವರಿಗೆ ಪ್ರತಿಕ್ರಿಯಿಸಿದರು.

ಮೈಸೂರು ಮಿತ್ರ

ದೇವರನ್ನು ಪೂಜಿಸುವವರಿಗೆ ಆಷಾಡಭೂತಿತನ ಇರಬಾರದು

ನಾಗಮಂಗಲ ಜಾತ್ರಾ ಮಹೋತ್ಸವದಲ್ಲಿ ಸಿಎಂ ಸಿದ್ದರಾಮಯ್ಯ ನುಡಿ



ಹುಚ್ಚಪ್ಪಸ್ವಾಮಿ ಹಾಗೂ ಹದಿನಾಲ್ಕು ಕೂಟದ ದೇವರುಗಳ ಜಾತ್ರಾ ಮಹೋತ್ಸವವನ್ನು ಉದ್ಘಾಟಿಸಿದ ಸಿಎಂ ಸಿದ್ದರಾಮಯ್ಯ.

ನಾಗಮಂಗಲ,ಏ.22– ದೇವರನ್ನು ಪೂಜಿಸುವವರಿಗೆ ಆಷಾಡಭೂತಿತನ ಇರಬಾರದು. ಮಾಡಬಾರದ್ದನ್ನೆಲ್ಲಾ ಮಾಡಿ ದೇವರ ಪೂಜೆ ಮಾಡಿದ ತಕ್ಷಣ ಪಾಪ ಕಾರ್ಯ ಹೋಗಲ್ಲ. ಮನುಷ್ಯ ಪ್ರೀತಿ ಮುಖ್ಯ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದರು.

ಮಂಗಳವಾರ ತಾಲೂಕಿನ ಬಿಂಡಿಗನವಿಲೆ ಹೋಬಳಿಯ ದೊಡ್ಡಬಾಲ ಗ್ರಾಮದಲ್ಲಿ 39 ವರ್ಷಗಳ ಬಳಿಕ ನಡೆಯುತ್ತಿರುವ ಹುಚ್ಚಪ್ಪಸ್ವಾಮಿ ಹಾಗೂ ಹದಿನಾಲ್ಕು ಕೂಟದ ದೇವರುಗಳ ಜಾತ್ರಾ ಮಹೋತ್ಸವವನ್ನು ಉದ್ಘಾಟಿಸಿ ಮಾತನಾಡಿದ ಅವರು, ಮಾಡಬಾರದ ಪಾಪಗಳನ್ನು, ಮನುಷ್ಯ ವಿರೋಧಿ ಕೃತ್ಯಗಳನ್ನು ಮಾಡಿ ದೇವರನ್ನು ಅರಸಿ ಹೋಗುವುದರಿಂದ ಪ್ರಯೋಜನ ಇಲ್ಲ. ಮನುಷ್ಯನನ್ನು ಮನುಷ್ಯ ಪ್ರೀತಿಸಬೇಕು. ಸಹಿಷ್ಣತೆ ಇರಬೇಕು ಎಂದರು.

ಸಮಾಜದಲ್ಲಿ ಎಲ್ಲಾ ಜಾತಿ, ಎಲ್ಲಾ ಧರ್ಮದವರಿಗೂ ಬೇರೆ ಬೇರೆ ನಂಬಿಕೆಗಳಿರುತ್ತವೆ. ಒಬ್ಬರ ನಂಬಿಕೆ ಬಗ್ಗೆ ಉಳಿದವರೆಲ್ಲರಿಗೂ ಗೌರವ ಇರಬೇಕು. ಪರಸ್ಪರ ಗೌರವಗಳಿಂದ ಎಲ್ಲರ ನಂಬಿಕೆಗಳನ್ನು ಕಾಣಬೇಕು. ಅಂಬೇಡ್ಕರ್ ಅವರು ಕೊಟ್ಟಿರುವ ಸಂವಿಧಾನ ಎಲ್ಲರ ನಂಬಿಕೆಗಳ ಆಚರಣೆಗೆ ಅವಕಾಶ ಇದೆ. ಸಂವಿಧಾನ ಕೊಟ್ಟ ಅವಕಾಶದಿಂದ ನಾನು ಶಿಕ್ಷಣ ಪಡೆದು ಮುಖ್ಯಮಂತ್ರಿಯಾದೆ. ಅಂಬೇಡ್ಕರ್ ಅವರು ಶಿಕ್ಷಣಕ್ಕೆ ಪ್ರಥಮ ಆದ್ಯತೆ ನೀಡಿದ್ದಾರೆ. ಅದ್ದರಿಂದ ಪ್ರತಿಯೊಬ್ಬರೂ ಇದನ್ನು ಪಾಲಿಸಬೇಕು. –ಸಿಎಂ. ಸಿದ್ದರಾಮಯ್ಯ

ಜಾತಿ ವ್ಯವಸ್ಥೆಗೆ ಚಾಲನೆ ಇಲ್ಲ. ಆರ್ಥಿಕ ಶಕ್ತಿ ಬಂದಾಗ, ಸಾಮಾಜಿಕ ಶಕ್ತಿ ಬಂದಾಗ ಚಾಲನೆ ಸಿಗುತ್ತದೆ ಸಂಸ್ಕೃತ ಕಲಿಯುವ ಶೂದ್ರರ ಕಿವಿಗೆ ಕಾದ ಸೀಸವನ್ನು ಸುರಿಯುತ್ತಿದ್ದರು. ಸಂವಿಧಾನದ ಕಾರಣದಿಂದ ಇಂಥಾ ಸ್ಥಿತಿ ಹೋಗಿ ನಮಗೆಲ್ಲಾ ಶಿಕ್ಷಣ ಸಿಕ್ಕಿದೆ ಎಂದರು.

ವೇದಿಕೆಯಲ್ಲಿ ಕೃಷಿ ಹಾಗೂ ಉಸ್ತುವಾರಿ ಸಚಿವ ಎನ್.ಚಲುವರಾಯಸ್ವಾಮಿ, ನಗರಾಭಿವೃದ್ಧಿ ಸಚಿವ ಬೈರತಿ ಸುರೇಶ್, ಶಾಸಕರಾದ ಪಿ.ಎಂ.ನರೇಂದ್ರಸ್ವಾಮಿ ಕೆ.ಎಂ.ಉದಯ್, ವಿಧಾನಪರಿಷತ್ ಸದಸ್ಯ ದಿನೇಶ್ ಗೂಳಿಗೌಡ, ಮಾಜಿ ಸಂಸದ ಎಲ್.ಆರ್.ಶಿವರಾಮೇಗೌಡ, ಮೈಷುಗರ್ ಅಧ್ಯಕ್ಷ ಸಿ.ಡಿ.ಗಂಗಾಧರ್, ಮುಖಂಡರಾದ ಸ್ಟಾರ್ ಚಂದ್ರು (ವೆಂಕಟರಮಣೇಗೌಡ), ಬಿ.ಎಲ್.ದೇವರಾಜು, ದಡದಪುರ ಶಿವಣ್ಣ, ಜಿಲ್ಲಾಧಿಕಾರಿ ಡಾ.ಕುಮಾರ, ಜಿ.ಪಂ. ಸಿಇಓ ಕೆ.ಆರ್.ನಂದಿನಿ, ಎಸ್ಪಿ ಮಲ್ಲಿಕಾರ್ಜುನ ಬಾಲದಂಡಿ ಸೇರಿದಂತೆ ಹಲವು ಮಂದಿ ಗಣ್ಯರು ಉಪಸ್ಥಿತರಿದ್ದರು.

ಸಾಮಾಜಿಕ ಶೈಕ್ಷಣಿಕ ಮತ್ತು ಆರ್ಥಿಕ ವರದಿ ಸರಿಯಿಲ್ಲವೆನ್ನಲು ಬಿಜೆಪಿಗೆ ನೈತಿಕ ಹಕ್ಕಿಲ್ಲ: ಸಿಎಂ

ನಾಗಮಂಗಲ: ಬಿಜೆಪಿ ಸರ್ಕಾರದ ಅವಧಿಯಲ್ಲಿ ನೇಮಕವಾಗಿದ್ದ ಹಿಂದುಳಿದ ವರ್ಗಗಳ ಶಾಶ್ವತ ಆಯೋಗದ ಅಧ್ಯಕ್ಷ ಜಯಪ್ರಕಾಶ್ ಹೆಗ್ಡೆಯವರು ನೀಡಿದ ವರದಿ ಸರಿಯಿಲ್ಲವೆಂದು ಹೇಳಲು ಬಿಜೆಪಿಯವರಿಗೆ ನೈತಿಕ ಹಕ್ಕಿಲ್ಲ ಎಂದು ಸಿಎಂ ಸಿದ್ದರಾಮಯ್ಯ ತಿಳಿಸಿದರು.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಸಮೀಕ್ಷೆ ವರದಿ ಬಗ್ಗೆ ಪಕ್ಷದ ನಾಯಕರಿಂದ ಅಪಸ್ವರ ಎದ್ದಿದೆಯೇ ಎಂಬ ಪತ್ರಕರ್ತರ ಪ್ರಶ್ನೆಗೆ ಉತ್ತರಿಸಿ, ವರದಿಯಲ್ಲಿ ಯಾವುದೇ ನ್ಯೂನ್ಯತೆಗಳಿದ್ದರೆ ಸರಿಪಡಿಸಲಾಗುವುದು. ವರದಿ ಬಗ್ಗೆ ಅಭಿಪ್ರಾಯಗಳನ್ನು ವ್ಯಕ್ತಪಡಿಸುವಂತೆ ಸಚಿವರಿಗೆ ತಿಳಿಸಲಾಗಿದ್ದು, ಅವುಗಳನ್ನು ಪರಿಶೀಲಿಸಿ ನಂತರ ಸೂಕ್ತ ತೀರ್ಮಾನವನ್ನು ಮುಂದಿನ ಸಚಿವ ಸಂಪುಟ ಸಭೆಯಲ್ಲಿ ತೆಗೆದುಕೊಳ್ಳಲಾಗುವುದು ಎಂದರು.

1984 ರಲ್ಲಿ ನಡೆದ ಸಮೀಕ್ಷೆಯಲ್ಲಿದ್ದ ಮುಸ್ಲಿಮರ ಸಂಖ್ಯೆ ಈಗ ವರದಿಯಲ್ಲಿ ಶೇ.90 ರಷ್ಟು ಹೆಚ್ಚಾಗಿದ್ದು, ಲಿಂಗಾಯತರ ಸಂಖ್ಯೆ ಕೇವಲ ಶೇ.8 ರಷ್ಟು ಜಾಸ್ತಿ ಯಾಗಿರುವುದಾಗಿ ಬಿಜೆಪಿಯವರು ಹೇಳುತ್ತಿರುವ ಬಗ್ಗೆ ಪ್ರತಿಕ್ರಿಯೆ ನೀಡಿ, ಇದು ಕಾಂತರಾಜು ಆಯೋಗದ ಅಂಕಿ ಅಂಶಗಳ ಆಧಾರದ ಮೇಲೆ ಜಯ ಪ್ರಕಾಶ್ ಹೆಗಡೆಯವರು ಶಿಫಾರಸ್ಸು ಮಾಡಿದ್ದಾರೆ ಎಂದು ಹೇಳಿದರು.

ವಿಂಗ್ ಕಮಾಂಡರ್‌ನೊಬ್ಬ ಕನ್ನಡಿಗರ ಮೇಲೆ ಹಲ್ಲೆ ಪ್ರಕರಣ ಬಗ್ಗೆ ಪ್ರತಿಕ್ರಿಯೆ ನೀಡಿ, ತಪ್ಪೆಸಗಿರುವವರ ಮೇಲೆ ಕಾನೂನು ಕ್ರಮ ಕೈಗೊಳ್ಳಲು ಈಗಾಗಲೇ ಸೂಚನೆ ನೀಡಲಾಗಿದೆ. ರಾಜ್ಯದಲ್ಲಿ ಹಿಂದಿ ಹೇರಿಕೆಗೆ ಅವಕಾಶ ನೀಡುವುದಿಲ್ಲ. ಕೇಂದ್ರ ಸರ್ಕಾರ ಹಿಂದಿ ಭಾಷೆಯನ್ನು ಹೇರುವ ಪ್ರಯತ್ನಕ್ಕೆ ಸರ್ಕಾರದ ವಿರೋಧವಿದೆ. ರಾಜ್ಯದಲ್ಲಿ ಮಾತೃಭಾಷೆ ಕನ್ನಡ ಹಾಗೂ ಇಂಗ್ಲಿಷ್ ಬಳಕೆಗೆ ಪೂರವಾದ ದ್ವಿಭಾಷಾ ನೀತಿ ಜಾರಿಯಲ್ಲಿದೆ. ರಾಜ್ಯದಲ್ಲಿ ತ್ರಿಭಾಷಾ ಸೂತ್ರವಲ್ಲ ಎಂದರು.

ಜನಿವಾರ ತೆಗೆಸಿದ ಪ್ರಕರಣ ಖಂಡಿಸಿ ಮಂಡ್ಯ, ಕೆ.ಆರ್.ಪೇಟೆಯಲ್ಲಿ ಪ್ರತಿಭಟನೆ



ಮಂಡ್ಯದಲ್ಲಿ ಬ್ರಾಹ್ಮಣ ಸಮುದಾಯ ಪ್ರತಿಭಟನಾ ಮೆರವಣಿಗೆ ನಡೆಸಿತು.



ಕೆ.ಆರ್.ಪೇಟೆಯಲ್ಲಿ ಬ್ರಾಹ್ಮಣ ಸಮುದಾಯ ಪ್ರತಿಭಟನಾ ಮೆರವಣಿಗೆ ನಡೆಸಿ ತಹಸೀಲ್ದಾರರಿಗೆ ಮನವಿ ಪತ್ರ ಸಲ್ಲಿಸಿತು.

ಮಂಡ್ಯ/ಕೆ.ಆರ್.ಪೇಟೆ: ಜನಿವಾರ ಧರಿಸಿದ ವಿದ್ಯಾರ್ಥಿಗಳಿಗೆ ಸಿಇಟಿ ಪರೀಕ್ಷೆ ಬರೆಯಲು ಅವಕಾಶ ನೀಡದೆ ಬ್ರಾಹ್ಮಣ ವಿದ್ಯಾರ್ಥಿಗಳ ಭವಿಷ್ಯ ಹಾಳು ಮಾಡಿರುವ ಅಧಿಕಾರಿಗಳ ವಿರುದ್ಧ ಕಾನೂನು ಕ್ರಮಕ್ಕೆ ಒತ್ತಾಯಿಸಿ ಜಿಲ್ಲಾ ಬ್ರಾಹ್ಮಣ ಸಭಾ ಮಂಡ್ಯದಲ್ಲಿ ಮತ್ತು ತಾಲೂಕು ಬ್ರಾಹ್ಮಣ ಮಹಾಸಭಾ ಕೆ.ಆರ್.ಪೇಟೆಯಲ್ಲಿ ಪ್ರತಿಭಟನೆ ನಡೆಸಿತು.

ಮಂಡ್ಯದ ಸರ್‌ಎಂವಿ ಪ್ರತಿಮೆ ಬಳಿಯಿಂದ ಮೆರವಣಿಗೆ ಹೊರಟ ಸಭಾ ಕಾರ್ಯಕರ್ತರು ಜಿಲ್ಲಾಧಿಕಾರಿ ಕಚೇರಿಗೆ ತೆರಳಿ ಜಿಲ್ಲಾಧಿಕಾರಿಗಳ ಮೂಲಕ ಮುಖ್ಯಮಂತ್ರಿಗೆ ಮನವಿ ಪತ್ರ ರವಾನಿಸಿದರು.

ಬ್ರಾಹ್ಮಣ ಸಮಾಜದ ಮೇಲೆ ಕೆಲವು ಸಮಾಜ ವಿದ್ರೋಹಿ ಮನಸ್ಥಿತಿಯ ಅವಿವೇಕಿಗಳು ಆಗಾಗ್ಗೆ ಉಪದ್ರವಗಳನ್ನು ಉಂಟು ಮಾಡುತ್ತಿದ್ದಾರೆ. ಇದು ಇತ್ತೀಚೆಗೆ ಅತಿರೇಕಕ್ಕೆ ಹೋಗುತ್ತಿದೆ, ಶಿವಮೊಗ್ಗ, ಬೀದರ್, ಸಾಗರ ದಲ್ಲಿ ಬ್ರಾಹ್ಮಣ ವಿದ್ಯಾರ್ಥಿಗಳು ಸಿಇಟಿ ಪರೀಕ್ಷೆಗೆ ಹಾಜರಾಗಲು ಹೋದಾಗ ಕೆಲವು ಅವಿವೇಕಿ ಅಧಿಕಾರಿಗಳು ಜನಿವಾರ ತೆಗೆದುಹಾಕಿ ಬಂದರೆ ಮಾತ್ರ ಪರೀಕ್ಷೆ ಬರೆಯಲು ಅವಕಾಶ ಕೊಡುತ್ತೇವೆ ಎಂದು ಪರೀಕ್ಷೆಯಿಂದ ವಂಚಿತ ಮಾಡಿದ್ದಾರೆ. ಉನ್ನತ ವ್ಯಾಸಂಗಕ್ಕೆ ತೆರಳುವ ಮುನ್ನಾ ಮಕ್ಕಳ ಭವಿಷ್ಯದ ಬಗ್ಗೆ ಆಟವಾಡಿ ವಿದ್ಯಾರ್ಥಿಗಳ ಆತ್ಮಸ್ಥೈರ್ಯ ಕುಗ್ಗಿಸಿರುತ್ತಾರೆ, ಸಂವಿಧಾನದಲ್ಲಿ ಅವರವರ ಆಚರಣೆಗೆ ಮಾನ್ಯತೆ ಕೊಡಲಾಗಿದೆ. ದಾರದ ಎಳೆಗಳಿರುವ ಜನಿವಾರ, ಶಿವದಾರ, ಕಾಶಿದಾರದಲ್ಲಿ ಪರೀಕ್ಷೆ ನಕಲು ಮಾಡಲು ಯಾವ ರೀತಿಯ ಡಿವೈಸ್‌ಗಳನ್ನು ಇಡಲು ಸಾಧ್ಯವಿದೆ ಎಂಬುದನ್ನು ಅರಿಯಬೇಕಾಗಿದೆ ಎಂದರು.

ಕೆಆರ್.ಪೇಟೆ: ಬೀದರ್ ಜಿಲ್ಲೆಯ ಸ್ಫೂರ್ತಿ ಸಿ.ಇ.ಟಿ ಪರೀಕ್ಷಾ ಕೇಂದ್ರದಲ್ಲಿ ಜನಿವಾರ ತೆಗೆಯಲು ನಿರಾಕರಿಸಿದ ಬ್ರಾಹ್ಮಣ ವಿದ್ಯಾರ್ಥಿಗೆ ಪರೀಕ್ಷೆ ಬರೆಯಲು ಅವಕಾಶ ನಿರಾಕರಿಸಿದ್ದನ್ನು ಖಂಡಿಸಿ ತಾಲೂಕು ಬ್ರಾಹ್ಮಣ ಮಹಾಸಭಾ ವತಿಯಿಂದ ಪಟ್ಟಣದಲ್ಲಿ ಬೃಹತ್ ಪ್ರತಿಭಟನಾ ಮೆರವಣಿಗೆ ನಡೆಸಿ ತಹಸೀಲ್ದಾರರಿಗೆ ಮನವಿ ಸಲ್ಲಿಸಲಾಯಿತು.

ತಾಲೂಕು ಬ್ರಾಹ್ಮಣ ಮಹಾಸಭಾ ಅಧ್ಯಕ್ಷ ಅರವಿಂದ್ ಕಾರಂತ್ ನೇತೃತ್ವದಲ್ಲಿ ಪಟ್ಟಣದ ಹೋಟೆಲ್ ರಾಮದಾಸ್ ಆವರಣದಲ್ಲಿ ಜಮಾವಣೆಗೊಂಡ ಪ್ರತಿಭಟನಾಕಾರರು ಪ್ರವಾಸಿ ಮಂದಿರ ವೃತ್ತದ ಮಾರ್ಗವಾಗಿ ಪಟ್ಟಣದ ಪ್ರಮುಖ ರಸ್ತೆಗಳಲ್ಲಿ ಸಿ.ಇ.ಟಿ ಪರೀಕ್ಷಾ ಪ್ರಾಧಿಕಾರ ಮತ್ತು ರಾಜ್ಯ ಸರ್ಕಾರದ ವಿರುದ್ದ ಧಿಕ್ಕಾರದ ಘೋಷಣೆಗಳನ್ನು ಕೂಗುತ್ತಾ ಮೆರವಣಿಗೆಯ ಮೂಲಕ ತಾಲೂಕು ಆಡಳಿತ ಸೌಧಕ್ಕೆ ಆಗಮಿಸಿ ಪ್ರತಿಭಟನೆ ನಡೆಸಿದರಲ್ಲದೆ ತಹಸೀಲ್ದಾರ್ ಡಾ.ಎಸ್.ಯು. ಅಶೋಕ್ ಅವರ ಮೂಲಕ ಮುಖ್ಯಮಂತ್ರಿಗಳಿಗೆ ಮನವಿ ಪತ್ರ ಸಲ್ಲಿಸಿದರು.

ಚಿಕ್ಕತಾಯಮ್ಮ, ದೊಡ್ಡ ತಾಯಮ್ಮ ಹಬ್ಬ ಆಚರಣೆ



ಶ್ರೀರಂಗಪಟ್ಟಣ ತಾಲೂಕಿನ ಪಿ.ಹೊಸಹಳ್ಳಿ ಗ್ರಾಮದಲ್ಲಿ ಚಿಕ್ಕತಾಯಮ್ಮ ಹಾಗೂ ದೊಡ್ಡತಾಯಮ್ಮ ದೇವಿಯರ ಗ್ರಾಮದ ದೇವತೆ ಹಬ್ಬದಲ್ಲಿ ಮಾಜಿ ಶಾಸಕ ರವೀಂದ್ರ ಶ್ರೀಕಂಠಯ್ಯ ದೇವಿಗೆ ಆರತಿ ಎತ್ತಿ ಪೂಜೆ ಮಾಡುವುದರ ಮೂಲಕ ಗ್ರಾಮ ದೇವಿಯ ಹಬ್ಬದಲ್ಲಿ ಭಾಗವಹಿಸಿದ್ದರು. ಈ ವೇಳೆ ಗರಡಿ ಮನೆಯಿಂದ ಊರಿನ ಪ್ರಮುಖ ಬೀದಿಗಳಲ್ಲಿ ಮೆರವಣಿಗೆ ಮಾಡಿ ವಿಜೃಂಭಣೆಯಿಂದ ದೇವಿಯ ಆರಾಧನೆ ನಡೆಯಿತು. ಈ ವೇಳೆ ಅವರನ್ನು ಅಭಿನಂದಿಸಲಾಯಿತು.

ನಾರಾಯಣಪುರ ಸೊಸೈಟಿ ಜೆಡಿಎಸ್ ತೆಕ್ಕೆಗೆ

ಚಿನಕುರಳಿ: ಇಲ್ಲಿನ ನಾರಾಯಣಪುರ ಪ್ರಾಥಮಿಕ ಕೃಷಿಪತ್ತಿನ ಸಹಕಾರ ಸಂಘದ ನಿರ್ದೇಶಕ ಸ್ಥಾನಕ್ಕೆ ನಡೆದ ಚುನಾವಣೆಯಲ್ಲಿ 12 ಸ್ಥಾನಗಳ ಪೈಕಿ 8 ಜೆಡಿಎಸ್ ಹಾಗೂ 3 ರೈತಸಂಘ–ಕಾಂಗ್ರೆಸ್ ಬೆಂಬಲಿತರು ಆಯ್ಕೆಯಾಗುವ ಮೂಲಕ ಸಂಘದ ಆಡಳಿತವನ್ನು ಜೆಡಿಎಸ್ ತೆಕ್ಕೆಗೆ ತೆಗೆದುಕೊಂಡಿದೆ.

ಜವರಯ್ಯ ಎಂಬ ಅಭ್ಯರ್ಥಿ ಅವಿರೋಧವಾಗಿ ಆಯ್ಕೆಯಾಗಿದ್ದು, ಉಳಿದ ನಿರ್ದೇಶಕ ಸ್ಥಾನಗಳಿಗೆ ಚುನಾವಣೆ ನಡೆಯಿತು. ಇದರಲ್ಲಿ 8 ಮಂದಿ ಜೆಡಿಎಸ್ ಬೆಂಬಲಿತರು ಹಾಗೂ 3 ರೈತಸಂಘ–ಕಾಂಗ್ರೆಸ್ ಬೆಂಬಲಿತರು ಗೆಲುವು ಸಾಧಿಸುವ ಮೂಲಕ ನಿರ್ದೇಶಕರಾಗಿ ಆಯ್ಕೆಯಾದರು.

ಚುನಾವಣೆಯಲ್ಲಿ ಜೆಡಿಎಸ್ ಬೆಂಬಲಿತ ಅಭ್ಯರ್ಥಿಗಳಾದ ಎಸ್.ಜೆ.ಚನ್ನಕೃಷ್ಣೇಗೌಡ, ಎನ್.ಎಸ್.ಆನಂದ್ ಮಾಸ್ಟರ್, ಕರಿಯಯ್ಯ, ಟಿ.ದೇವರಾಜು, ನಂಜೇಗೌಡ, ಎ.ಎಂ. ಪುಟ್ಟಸ್ವಾಮಿ, ಎನ್.ಎಚ್.ಯೋಗನರ ಸಿಂಹೇಗೌಡ, ಎಸ್.ಎನ್.ವಿನೂದ ದೇವರಾಜು, ರೈತಸಂಘ–ಕಾಂಗ್ರೆಸ್ ಬೆಂಬಲಿತ ಅಭ್ಯರ್ಥಿಗಳಾದ ಚಂದ್ರಕಲಾ, ಕೆ.ವಿ.ಶ್ರೀನಿವಾಸ್, ಅಶೋಕ್ ಅವರು ಆಯ್ಕೆಯಾದರು.

ಚುನಾವಣೆಯಲ್ಲಿ ಜೆಡಿಎಸ್ ಬೆಂಬಲಿತರು ಆಯ್ಕೆಯಾಗುವ ಮೂಲಕ ಬಹುಮತಪಡೆಯುತ್ತಿದ್ದಂತೆಯೇ ಹೊರಗೆ ಬೆಂಬಲಿಗರು ಪಟಾಕಿ ಸಿಡಿಸಿ ಸಿಹಿಹಂಚಿ ಸಂಭ್ರಮಿಸಿದರು.

ಸಿ.ಎಸ್.ಪುಟ್ಟರಾಜು ಅವರಿಂದ ಅಭಿನಂಧನೆ: ನಾರಾಯಣಪುರ ಪ್ರಾಥಮಿಕ ಕೃಷಿಪತ್ತಿನ ಸಹಕಾರ ಸಂಘದ ನಿರ್ದೇಶಕ ಸ್ಥಾನದ ಚುನಾವಣೆಯಲ್ಲಿ 8 ಸ್ಥಾನಗಳಲ್ಲಿ ಆಯ್ಕೆಯಾಗುವ ಮೂಲಕ ಬಹು ಮತ ಪಡೆದ ಎಲ್ಲಾ ಜೆಡಿಎಸ್ ಬೆಂಬಲಿತ ನಿರ್ದೇಶಕರನ್ನು ಮಾಜಿ ಸಚಿವ ಸಿ.ಎಸ್. ಪುಟ್ಟರಾಜು ಅವರು ತಾಲೂಕಿನ ಚಿನಕುರಳಿ ಗ್ರಾಮದ ಪ್ರವಾಸಿ ಮಂದಿರದಲ್ಲಿ ಅಭಿನಂಧಿಸಿದರು.

ಈ ಸಂದರ್ಭದಲ್ಲಿ ಮನ್‌ಮುಲ್ ನಿರ್ದೇಶಕ ಸಿ.ಶಿವಕುಮಾರ್, ಕೋಡಾಲ ರಾಧಾಕೃಷ್ಣೇಗೌಡ, ಪಿಎಲ್‌ಡಿ ಬ್ಯಾಂಕ್ ನಿರ್ದೇಶಕ ಕುಮಾರ್, ಟಿಎಪಿಸಿಎಂಎಸ್ ನಿರ್ದೇಶಕ ರಾಮಕೃಷ್ಣೇಗೌಡ, ಮಾಜಿ ನಿರ್ದೇಶಕ ಸುಂದ್ರಣ್ಣ, ಎಂ.ಕೆ. ಕೆಂಪರಾಜು, ನಲ್ಲಹಳ್ಳಿ ವೆಂಕಟೇಶ್, ಪೊಲೀಸ್ ಸ್ವಾಮೀಗೌಡ, ಬಲರಾಮೇಗೌಡ, ನಟರಾಜು, ಬೋರಲಿಂಗೇಗೌಡ, ಚಲುವರಾಜು, ಕಾಂತರಾಜು, ಶಿವಶಂಕರ್, ಬೆಟ್ಟ ಸ್ವಾಮೀಗೌಡ, ಗೋವಿಂದಯ್ಯ ಸೇರಿದಂತೆ ಹಲವರು ಇದ್ದರು.



ನಾರಾಯಣಪುರ ಪ್ರಾಥಮಿಕ ಕೃಷಿಪತ್ತಿನ ಸಹಕಾರ ಸಂಘದ ಚುನಾವಣೆಯಲ್ಲಿ ಆಯ್ಕೆಯಾದ ಜೆಡಿಎಸ್ ಬೆಂಬಲಿತ ನಿರ್ದೇಶಕರನ್ನು ಮಾಜಿ ಸಚಿವ ಸಿ.ಎಸ್.ಪುಟ್ಟರಾಜು ಅಭಿನಂಧಿಸಿದರು.

ಒಂದನೇ ಪುಟದಿಂದ

ಹಿಂದೂ ಪ್ರವಾಸಿಗರ ಮೇಲೆ ಮಾತ್ರ ಗುಂಡಿನ ದಾಳಿ

ಉಗ್ರರ ದಾಳಿಯಲ್ಲಿ ಶಿವಮೊಗ್ಗದ ರಿಯಲ್ ಎಸ್ಟೇಟ್ ಉದ್ಯಮಿ ಮಂಜುನಾಥ ರಾವ್ ಹಾಗೂ ಹಾವೇರಿ ಮೂಲದ, ಬೆಂಗಳೂರು ನಿವಾಸಿ ಸಾಫ್ಟ್‌ವೇರ್ ಇಂಜಿನಿಯರ್ ಭರತ್ ಭೂಷಣ್ ಸೇರಿದಂತೆ 30ಕ್ಕೂ ಅಧಿಕ ಮಂದಿ ಬಲಿಯಾಗಿದ್ದಾರೆ. ಈ ಘಟನೆಯಲ್ಲಿ ಹಲವರು ಗಾಯಗೊಂಡಿದ್ದಾರೆ. ವಿಷಯ ತಿಳಿಯುತ್ತಿದ್ದಂತೆಯೇ ಸೌದಿ ಅರೇಬಿಯಾ ಪ್ರವಾಸದಲ್ಲಿರುವ ಪ್ರಧಾನ ಮಂತ್ರಿ ನರೇಂದ್ರ ಮೋದಿ, ಗೃಹ ಸಚಿವ ಅಮಿತ್ ಶಾ ಹಾಗೂ ಉನ್ನತ ಅಧಿಕಾರಿಗಳ ಸಂಪರ್ಕಿಸಿ, ಚರ್ಚಿಸಿ, ಕೂಡಲೇ ಕಾಶ್ಮೀರಕ್ಕೆ ತೆರಳುವಂತೆ ಅಮಿತ್ ಶಾ ಅವರಿಗೆ ಸೂಚನೆ ನೀಡಿದರು. ಪ್ರಧಾನಿ ಸೂಚನೆ ಮೇರೆಗೆ ತಕ್ಷಣ ಜಮ್ಮು–ಕಾಶ್ಮೀರಕ್ಕೆ ಪ್ರಯಾಣ ಬೆಳೆಸಿದ ಗೃಹ ಸಚಿವ ಅಮಿತ್ ಶಾ, ಇಂದು ರಾತ್ರಿ ರಾಜಭವನದಲ್ಲಿ ವಾಸ್ತವ್ಯ ಹೂಡಿದ್ದು, ಉನ್ನತ ಅಧಿಕಾರಿಗಳೊಂದಿಗೆ ಸಭೆ ಕೂಡ ನಡೆಸಿದ್ದಾರೆ. ನಾಳೆ ಅವರು ಘಟನೆ ನಡೆದಂತಹ ಪಹಲ್ಗಾಮ್‌ಗೆ ಭೇಟಿ ನೀಡುವ ಕಾರ್ಯಕ್ರಮವಿದೆ. ದಕ್ಷಿಣ ಕಾಶ್ಮೀರದ ಅನಂತ್‌ನಾಗ್ ಜಿಲ್ಲೆಯ ಪ್ರಮುಖ ಪ್ರವಾಸಿ ತಾಣವಾದ ಪಹಲ್ಗಾಮ್‌ಗೆ ಏಪ್ರಿಲ್ ತಿಂಗಳಲ್ಲಿ ಅತ್ಯಧಿಕ ಸಂಖ್ಯೆಯಲ್ಲಿ ಪ್ರವಾಸಿಗರು ಭೇಟಿ ನೀಡುತ್ತಾರೆ. ಪಹಲ್ಗಾಮ್‌ನ ಬೆಸರನ್ ಕಣಿವೆ ಪ್ರದೇಶಕ್ಕೆ ಕುದುರೆಗಳ ಮೂಲಕ ಸಾಗಬೇಕಾಗಿದ್ದು, ಅಲ್ಲಿ ಮನೋ ಹರವಾದ ದೃಶ್ಯವನ್ನು ಕಣ್ತುಂಬಿಕೊಳ್ಳಲು ಹೆಚ್ಚಿನ ಸಂಖ್ಯೆಯಲ್ಲಿ ಪ್ರವಾಸಿಗರು ಹೋಗುತ್ತಾರೆ.

ಇದನ್ನು ಮನಗಂಡ ಉಗ್ರರು ಕಳೆದ ಒಂದು ವಾರದಿಂದ ಹೊಂದು ಹಾಕಿ, ಸಂಚು ರೂಪಿಸಿ ಇಂದು ವ್ಯವಸ್ಥಿತವಾಗಿ ದಾಳಿ ನಡೆಸಿದ್ದಾರೆ. ಉಗ್ರರ ಗುಂಡಿನ ದಾಳಿಯಲ್ಲಿ ಬಲಿಯಾಗಿರುವ ಕರ್ನಾಟಕದ ಇಬ್ಬರೂ ಸೇರಿದಂತೆ 30 ಜನರಲ್ಲಿ ಇಬ್ಬರು ವಿದೇಶಿಗರೂ ಸೇರಿದ್ದಾರೆ. ಇಸ್ರೇಲ್ ಹಾಗೂ ಇಟಲಿ ನಾಗರಿಕರು ಉಗ್ರರ ದಾಳಿಯಲ್ಲಿ ಉಸಿರು ಚೆಲ್ಲಿದ್ದಾರೆ. ಉಳಿದಂತೆ ಗುಜರಾತ್ ರಾಜ್ಯದ ಪ್ರವಾಸಿಗರು ಅಧಿಕ ಸಂಖ್ಯೆಯಲ್ಲಿದ್ದಾರೆ ಎಂದು ಹೇಳಲಾಗುತ್ತಿದೆ. ಉಗ್ರರ ಗುಂಡಿನ ದಾಳಿ ಬಳಿಕ ಭಾರತೀಯ ಸೇನಾ ಪಡೆಗಳು ಘಟನಾ ಸ್ಥಳವನ್ನು ಸುತ್ತುವರೆದಿದ್ದು, ಉಗ್ರರಿಗಾಗಿ ಬೇಟೆ ಆರಂಭಿಸಿವೆ. ಸುರಕ್ಷಿತ ದೃಷ್ಟಿಯಿಂದ ಈ ಪ್ರದೇಶದಲ್ಲಿನ ನಾಗರಿಕರನ್ನು ಸ್ಥಳಾಂತರಿಸಲಾಗುತ್ತಿದೆ. ಜಮ್ಮು–ಕಾಶ್ಮೀರ್ ಮುಖ್ಯಮಂತ್ರಿ ಒಮರ್ ಅಬ್ದುಲ್ಲಾ ನೆರೆಪೀಡಿತ ಪ್ರದೇಶಗಳ ಸಮೀಕ್ಷೆ ಕೈಬಿಟ್ಟು ಶ್ರೀನಗರಕ್ಕೆ ವಾಪಸ್ಸಾಗಿದ್ದು, ಉಗ್ರರ ದಾಳಿಯಿಂದ ಉಂಟಾದ ಪರಿಸ್ಥಿತಿಯನ್ನು ಅವಲೋಕಿಸುತ್ತಿದ್ದಾರೆ.

ಉಗ್ರರ ದಾಳಿಯನ್ನು ಖಂಡಿಸಿರುವ ಇಸ್ರೇಲ್ ಈ ಪೈಶಾಚಿಕ ಕೃತ್ಯವನ್ನು ಹತ್ತಿಕ್ಕುವ ಕಾರ್ಯದಲ್ಲಿ ತಾನೂ ನೆರವಾಗುವುದಾಗಿ ಸಹಾಯ ಹಸ್ತ ಚಾಚಿದೆ. ಘಟನೆಯಲ್ಲಿ ಗಾಯಗೊಂಡವರನ್ನು ವಿವಿಧ ಆಸ್ಪತ್ರೆಗಳಿಗೆ ಸ್ಥಳಾಂತರಿಸುವ ಕಾರ್ಯವನ್ನು ಸೇನೆ ಮಾಡುತ್ತಿದೆ. ಉಗ್ರರು ಕೇವಲ ಪುರುಷರನ್ನು ಮಾತ್ರ ಗುರಿಯಾಗಿರಿಸಿಕೊಂಡು ದಾಳಿ ನಡೆಸಿದ್ದಾರೆ. ಅದೂ ಧರ್ಮವನ್ನು ಖಚಿತ ಪಡಿಸಿಕೊಂಡು ಹಿಂದೂಗಳ ಮೇಲೆ ಮಾತ್ರವೇ ಅಟ್ಟಹಾಸ ಮೆರೆದಿದ್ದಾರೆ. ಹಲವು ನವವಿವಾಹಿತ ಜೋಡಿಗಳು ಈ ಸುಂದರ ಸ್ಥಳಕ್ಕೆ ಭೇಟಿ ನೀಡಿದ್ದು, ಅವರಲ್ಲಿ ತಮ್ಮ ಸಂಗಾತಿಯನ್ನು ಕಳೆದುಕೊಂಡವರು ಶವದ ಬಳಿಯೇ ರೋಧಿಸುತ್ತಿರುವುದು ಹೃದಯ ಹಿಂಡುವಂತಿದೆ. ಶಿವಮೊಗ್ಗದ ರಿಯಲ್ ಎಸ್ಟೇಟ್ ಉದ್ಯಮಿ ಮಂಜುನಾಥ ರಾವ್ ಅವರನ್ನು ಅವರ ಪತ್ನಿ ಪಲ್ಲವಿ ಹಾಗೂ ಪುತ್ರನ ಕಣ್ಮುಂದೆಯೇ ತಲೆಗೆ ಗುಂಡು ಹಾರಿಸಿ ಹತ್ಯೆಗೈದಿದ್ದಾರೆ. ಈ ವೇಳೆ ನಿಸ್ಸಹಾಯಕರಾಗಿ ನಮ್ಮನ್ನೂ ಹತ್ಯೆ ಮಾಡುವಂತೆ ಉಗ್ರರನ್ನು ಪ್ರಶ್ನಿಸಿದ ಪಲ್ಲವಿ ಅವರನ್ನು ನಿನ್ನನ್ನ ಕೊಲ್ಲಲ್ಲ, ಹೋಗಿ ಮೋದಿಗೆ ಹೇಳು ಎಂದು ಉಗ್ರರು ಪರಾರಿಯಾಗಿದ್ದಾರೆ.

ದಾಳಿ ಹೊಣೆ ಹೊತ್ತುಕೊಂಡ ಪಾಕ್ ಉಗ್ರ ಸಂಘಟನೆ

ಪಹಲ್ಗಾಮ್, ಏ. 22– ಪ್ರವಾಸಿಗರ ಮೇಲೆ ಗುಂಡಿನ ಮಳೆಗರೆದ ಹೊಣೆಯನ್ನು ಪಾಕ್ ಮೂಲಕ ಭಯೋತ್ಪಾದಕರು ಹೊತ್ತುಕೊಂಡಿದ್ದಾರೆ. ಮಿನಿ ಸ್ವಿಟ್ಜರ್‌ಲ್ಯಾಂಡ್ ಎಂದು ಕರೆಯಲ್ಪಡುವ ಪಹಲ್ಗಾಮ್‌ನ ಬೈಸರಾನ್ ಕಣಿವೆಯಲ್ಲಿ ಇಂದು ಮಧ್ಯಾಹ್ನ ಉಗ್ರರು ಪೈಶಾಚಿಕ ದಾಳಿಯ ಮೂಲಕ ಕರ್ನಾಟಕದ ಇಬ್ಬರು ಸೇರಿದಂತೆ 30ಕ್ಕೂ ಅಧಿಕ ಪ್ರವಾಸಿಗರನ್ನು ಬಲಿ ಪಡೆದಿದ್ದರು. ಕೆಲವೇ ಗಂಟೆಯಲ್ಲಿ ದಾಳಿ ಹೊಣೆಯನ್ನು ಪಾಕ್ ಮೂಲದ ಲಷ್ಕರ್–ಇ–ತೊಯ್ಬಾದ ಟಿಆರ್‌ಎಫ್ ಹೊತ್ತುಕೊಂಡಿದೆ.

ಸೇನಾ ಸಮವಸ್ತ್ರ ವೇಷಧಾರಿ ಉಗ್ರರು

ಪಹಲ್ಗಾಮ್ (ಜಮ್ಮು–ಕಾಶ್ಮೀರ), ಏ.22– ಇಂದು ಪ್ರವಾಸಿಗರನ್ನು ಗುರಿಯಾಗಿಸಿಕೊಂಡು ಗುಂಡಿನ ದಾಳಿ ನಡೆಸಿದ ಉಗ್ರರು ಸೇನಾ ಸಮವಸ್ತ್ರ ವೇಷಧಾರಿಗಳಾಗಿದ್ದರು ಎಂದು ಹೇಳಲಾಗಿದೆ. ಮಾರ್ಚ್, ಏಪ್ರಿಲ್ ತಿಂಗಳಲ್ಲಿ ಜಮ್ಮು–ಕಾಶ್ಮೀರಕ್ಕೆ ಭೇಟಿ ನೀಡುವವರ ಸಂಖ್ಯೆ ಅಧಿಕವಾಗಿದ್ದು, ಈ ವೇಳೆ ವ್ಯವಸ್ಥಿತ ಸಂಚು ರೂಪಿಸಿರುವ ಉಗ್ರರು, ಸೇನಾ ಸಮವಸ್ತ್ರ ವೇಷಧಾರಿಗಳಾಗಿ ದಾಳಿ ನಡೆಸಿದರೆ ಯಾರಿಗೂ ಅನುಮಾನ ಬರುವುದಿಲ್ಲ ಎಂಬುದನ್ನು ನಿರ್ಧರಿಸಿ, ಅದರಂತೆ ಇಂದು ದಾಳಿ ನಡೆಸಿದ್ದಾರೆ.

ಪ್ರವಾಸಿಗರೂ ಕೂಡ ಸೇನಾ ಸಿಬ್ಬಂದಿ ಇರಬಹುದೆಂಬ ಧೈರ್ಯದ ಮೇಲೆ ಈ ಪ್ರದೇಶದಲ್ಲಿ ವಿಹಾರಕ್ಕೆ ಮುಂದಾಗಿದ್ದಾರೆ. ಆದರೆ ಕ್ಷಣಾರ್ಧದಲ್ಲಿ ಉಗ್ರರು ಅಟ್ಟಹಾಸ ಮೆರೆದು ರಕ್ತದ ಓಕುಳಿಯಾಡಿದ್ದಾರೆ.

ಪ್ರವಾಸಿಗರ ಮೇಲೆ ಉಗ್ರರ ದಾಳಿ ಆಘಾತಕಾರಿ

ನವದೆಹಲಿ, ಏ.22– ಜಮ್ಮು ಮತ್ತು ಕಾಶ್ಮೀರದ ಪಹಲ್ಗಾಮ್‌ನಲ್ಲಿ ಪ್ರವಾಸಿಗರ ಮೇಲೆ ನಡೆದ ಭಯೋತ್ಪಾದಕ ದಾಳಿ ಅತ್ಯಂತ ಆಘಾತಕಾರಿ ಮತ್ತು ನೋವಿನಿಂದ ಕೂಡಿದೆ ಎಂದು ರಾಷ್ಟ್ರಪತಿ ದ್ರೌಪದಿ ಮುರ್ಮು ಮಂಗಳವಾರ ಹೇಳಿದ್ದಾರೆ.



ಮುಗ್ಧ ನಾಗರಿಕರನ್ನು ಗುರಿಯಾಗಿಸಿಕೊಂಡು ನಡೆಸಿದ ಈ ಕೃತ್ಯವನ್ನು ಕ್ಷಮಿಸಲಾಗದು. ಇದು ನಿಸ್ಸಂದೇಹವಾಗಿ ಖಂಡಿಸಬೇಕಾದ ಹೇಯ ಮತ್ತು ಅಮಾನವೀಯ ಕೃತ್ಯವಾಗಿದೆ ಎಂದು ರಾಷ್ಟ್ರಪತಿಗಳು ಎಕ್ಸ್ ನಲ್ಲಿ ಪೋಸ್ಟ್ ಮಾಡಿದ್ದಾರೆ. ತಮ್ಮ ಪ್ರೀತಿಪಾತ್ರರನ್ನು ಕಳೆದುಕೊಂಡ ಕುಟುಂಬಗಳಿಗೆ ಹೃತ್ಪೂರ್ವಕ ಸಂತಾಪ ಸೂಚಿಸಿದ್ದು, ಗಾಯಾಳುಗಳು ಶೀಘ್ರ ಚೇತರಿಸಿಕೊಳ್ಳಲಿ ಎಂದು ಪ್ರಾರ್ಥಿಸಿದ್ದಾರೆ.

ಮುಗ್ಧ ನಾಗರಿಕರ ಮೇಲೆ, ಈ ಸಂದರ್ಭದಲ್ಲಿ ಪ್ರವಾಸಿಗರ ಮೇಲೆ ದಾಳಿ ಮಾಡುವುದು ಸಂಪೂರ್ಣವಾಗಿ ಭಯಾನಕ ಮತ್ತು ಕ್ಷಮಿಸಲಾಗದು. ತಮ್ಮ ಪ್ರೀತಿಪಾತ್ರರನ್ನು ಕಳೆದುಕೊಂಡ ಕುಟುಂಬಗಳಿಗೆ ನನ್ನ ಹೃತ್ಪೂರ್ವಕ ಸಂತಾಪಗಳು ಮತ್ತು ಗಾಯಗೊಂಡವರು ಶೀಘ್ರ ಚೇತರಿಸಿಕೊಳ್ಳಲಿ ಎಂದು ಪ್ರಾರ್ಥಿಸುತ್ತೇನೆ ಎಂದು ಮುರ್ಮು ಅವರು ಹೇಳಿದ್ದಾರೆ. ಇಂದು ಮಧ್ಯಾಹ್ನ 3 ಗಂಟೆ ಸುಮಾರಿಗೆ ಬೈಸರನ್ ಕಣಿವೆಯಿಂದ ಇಳಿದು ಬಂದ ಭಯೋತ್ಪಾದಕರು, ಪ್ರವಾಸಿಗರ ಮೇಲೆ ಗುಂಡು ಹಾರಿಸಿದ್ದಾರೆ. ದಾಳಿಯಲ್ಲಿ 20ಕ್ಕೂ ಹೆಚ್ಚು ಜನ ಮೃತಪಟ್ಟಿದ್ದು, ಹಲವರು ಗಾಯಗೊಂಡಿದ್ದಾರೆ.


ಜಮ್ಮು ಮತ್ತು ಕಾಶ್ಮೀರದ ಪಹಲ್ಗಾಮ್‌ನಲ್ಲಿ ಹೇಡಿತನದ ದಾಳಿ ನಡೆದಿದೆ. ಭಯೋತ್ಪಾದಕರ ದಾಳಿಯಲ್ಲಿ ಪ್ರವಾಸಿಗರ ಸಾವು ಮತ್ತು ಹಲವರಿಗೆ ಗಾಯಗಳಾಗಿರುವುದು ಅತ್ಯಂತ ಖಂಡನೀಯ. ಈ ಘಟನೆ ಹೃದಯ ವಿದ್ರಾವಕವಾಗಿದ್ದು, ನಾನು ದುಃಖಿತ ಕುಟುಂಬಗಳಿಗೆ ಸಂತಾಪವನ್ನು ವ್ಯಕ್ತಪಡಿಸುತ್ತೇನೆ. ಗಾಯಾಳುಗಳು ಶೀಘ್ರವಾಗಿ ಚೇತರಿಸಿಕೊಳ್ಳಲಿ. ಭವಿಷ್ಯದಲ್ಲಿ ಇಂತಹ ಅಮಾನುಷ ಘಟನೆಗಳು ನಡೆಯುವುದು ಬೇಡ. ಮುಗ್ಧ ಭಾರತೀಯರು ಪ್ರಾಣ ಕಳೆದುಕೊಳ್ಳದಂತೆ ಕ್ರಮ ಕೈಗೊಳ್ಳಬೇಕು.



- ರಾಹುಲ್ ಗಾಂಧಿ, ಲೋಕ ಸಭೆ ವಿಪಕ್ಷ ನಾಯಕ

ರಾಣಾ ಬಂಧನಕ್ಕೆ ಪಾಕ್ ಪ್ರತೀಕಾರ ದಾಳಿಯೇ?

ಬೆಂಗಳೂರು, ಏ.22– ಮುಂಬೈ ಭಯೋತ್ಪಾದಕ ದಾಳಿಯ ರೂವಾರಿ ತಹಾವ್ಟೂರ್ ಹುಸೇನ್ ರಾಣಾ ಬಂಧನಕ್ಕೆ ಪ್ರತೀಕಾರವಾಗಿ ಪಾಕ್ ಭಯೋತ್ಪಾದಕರು ಜಮ್ಮು–ಕಾಶ್ಮೀರದಲ್ಲಿ ಹಿಂದೂ ಪ್ರವಾಸಿಗರ ಮೇಲೆ ದಾಳಿ ನಡೆಸಿದ್ದಾರೆ ಎನ್ನಲಾಗುತ್ತಿದೆ. ಅಮೆರಿಕಾದಿಂದ ಗಡಿಪಾರು ಮಾಡಿದ್ದ ಮುಂಬೈ ಭಯೋತ್ಪಾದಕ ದಾಳಿ(26/11/2008)ಯ ಮಾಸ್ಟರ್ ಮೈಂಡ್ ಆಗಿರುವ ಪಾಕಿಸ್ತಾನಿ–ಕೆನಡಾದ ತಹಾವ್ಟೂರ್ ಹುಸೇನ್ ರಾಣಾನನ್ನು ಏ.10ರಂದು ಎನ್‌ಐಎ ಅಧಿಕಾರಿಗಳು ಬಂಧಿಸಿ, ವಿಚಾರಣೆ ನಡೆಸುತ್ತಿದ್ದಾರೆ. ಇದಕ್ಕೆ ಪ್ರತೀಕಾರವಾಗಿ ಪಾಕ್, ಜಮ್ಮು–ಕಾಶ್ಮೀರದಲ್ಲಿ ಪ್ರವಾಸಿಗರ ಮೇಲೆ ಅಟ್ಟಹಾಸ ಮೆರೆದಿದೆ. ಅದರಲ್ಲೂ ಹಿಂದೂ ಧರ್ಮೀಯರಿಗೇ ಗುಂಡಿಕ್ಕಿ ಭಯೋತ್ಪಾದಕರು ಕೇಕೆ ಹಾಕಿದ್ದಾರೆ ಎಂದು ಹೇಳಲಾಗುತ್ತಿದೆ.



ಐಪಿಎಸ್ ಅಧಿಕಾರಿ ಆರ್.ಚೇತನ್ ತಂಡ ಜಮ್ಮು–ಕಾಶ್ಮೀರಕ್ಕೆ ದೌಡು

ಬೆಂಗಳೂರು, ಏ.22– ಮುಖ್ಯಮಂತ್ರಿ ಸಿದ್ದರಾಮಯ್ಯನವರ ಸೂಚನೆ ಮೇರೆಗೆ ಐಪಿಎಸ್ ಅಧಿಕಾರಿ ಆರ್.ಚೇತನ್ ನೇತೃತ್ವದ ತಂಡ ಜಮ್ಮು–ಕಾಶ್ಮೀರಕ್ಕೆ ತೆರಳಿದೆ.

ಕಾಶ್ಮೀರದಲ್ಲಿ ಕನ್ನಡಿಗರು ಉಗ್ರರ ದಾಳಿಗೆ ಗುರಿಯಾಗಿರುವ ಸುದ್ದಿ ತಿಳಿಯುತ್ತಿದ್ದಂತೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅಧಿಕಾರಿಗಳ ಸಭೆ ನಡೆಸಿ, ಮಾಹಿತಿ ಪಡೆದುಕೊಂಡರು. ಕೂಡಲೇ ಕಾರ್ಯಪ್ರವೃತ್ತರಾಗುವಂತೆ ಮುಖ್ಯ ಕಾರ್ಯದರ್ಶಿ ಹಾಗೂ ಹಿರಿಯ ಪೊಲೀಸ್ ಅಧಿಕಾರಿಗಳಿಗೆ ಸೂಚಿಸಿದರು. ಮುಂದಿನ ಕ್ರಮಗಳ ಉಸ್ತುವಾರಿ ನೋಡಿಕೊಳ್ಳಲು ದೆಹಲಿಯ ನಿವಾಸಿ ಆಯುಕ್ತರಿಗೆ ಸೂಚನೆ ನೀಡಿದರು. ಬಳಿಕ ಐಪಿಎಸ್ ಅಧಿಕಾರಿ ಆರ್.ಚೇತನ್ ನೇತೃತ್ವದಲ್ಲಿ ಅಧಿಕಾರಿಗಳು ಹಾಗೂ ಸಿಬ್ಬಂದಿ ತಂಡವನ್ನು ಜಮ್ಮು–ಕಾಶ್ಮೀರಕ್ಕೆ ಕಳುಹಿಸಲಾಯಿತು.

ಜಮ್ಮು ಕಾಶ್ಮೀರದ ಪಹಲ್ಗಾಮ್‌ನಲ್ಲಿ ಇಂದು ನಡೆದ ಉಗ್ರರ ದಾಳಿಯಲ್ಲಿ ಮೃತಪಟ್ಟವರ ಸಂಖ್ಯೆ ಕ್ಷಣಕ್ಷಣಕ್ಕೂ ಏರುತ್ತಿರುವುದು ಆತಂಕ ಹೆಚ್ಚಿಸಿದೆ. ದಾಳಿಗೆ ಬಲಿಯಾದ ಅಮಾಯಕ ಜೀವಗಳನ್ನು ನೆನಪಿಸಿಕೊಂಡರೆ ಎದೆ ನಲುಗುತ್ತದೆ. ಮಡಿದ ಎಲ್ಲರ ಆತ್ಮಕ್ಕೆ ಶಾಂತಿ ಸಿಗಲೆಂದು ಪ್ರಾರ್ಥಿಸುತ್ತೇನೆ. ಭಯೋತ್ಪಾದಕರ ಈ ಹೇಯ ಕೃತ್ಯದಲ್ಲಿ ಪ್ರವಾಸಕ್ಕೆಂದು ತೆರಳಿದ್ದ ಹಲವು ಕನ್ನಡಿಗರು ಕೂಡ ಸಾವನ್ನಪ್ಪಿರುವುದು ಅತ್ಯಂತ ದುಃಖದ ವಿಚಾರ. ಉಗ್ರಕೃತ್ಯದಿಂದಾಗಿ ದೂರದ ಕಾಶ್ಮೀರದಲ್ಲಿ ಸಂಕಷ್ಟಕ್ಕೆ ಸಿಲುಕಿರುವ ಕನ್ನಡಿಗರ ರಕ್ಷಣೆಗಾಗಿ ರಾಜ್ಯದ ಅಧಿಕಾರಿಗಳ ತಂಡವನ್ನು ಸಂಜೆಯೇ ಕಳುಹಿಸಲಾಗಿದೆ. ಈ ಸಂದರ್ಭದಲ್ಲಿ ನಮ್ಮ ಸರ್ಕಾರದಿಂದ ಹೆಚ್ಚಿನ ನೆರವಿನ ಅಗತ್ಯ ಇದೆ ಎನ್ನುವುದನ್ನು ಅರಿತು ಕಾರ್ಮಿಕ ಸಚಿವ ಸಂತೋಷ್ ಲಾಡ್ ಅವರಿಗೆ ಕಾಶ್ಮೀರಕ್ಕೆ ತೆರಳಿ ಇಡೀ ಕಾರ್ಯಾಚರಣೆಯ ಮೇಲ್ವಿಚಾರಣೆ ವಹಿಸುವಂತೆ ಸೂಚನೆ ನೀಡಿದ್ದೇನೆ. ಸಂತ್ರಸ್ತ ಕನ್ನಡಿಗರನ್ನು ಸುರಕ್ಷಿತವಾಗಿ ರಾಜ್ಯಕ್ಕೆ ಕರೆ ತರುವ ಕಾರ್ಯವನ್ನು ನಮ್ಮ ಸರ್ಕಾರ ಮಾಡಲಿದೆ.



-ಸಿದ್ದರಾಮಯ್ಯ, ಮುಖ್ಯಮಂತ್ರಿಗಳು.

ಕಾಶ್ಮೀರದ ಪಹಲ್ಗಾಮ್‌ನಲ್ಲಿ ಪ್ರವಾಸಿಗರ ಮೇಲೆ ನಡೆದಿರುವ ಭಯೋತ್ಪಾದಕ ದಾಳಿ ಖಂಡನೀಯ ಮತ್ತು ಹೇಯ. ಈ ಹೀನ ಕೃತ್ಯವನ್ನು ನಾನು ತೀವ್ರವಾಗಿ ಖಂಡಿಸುತ್ತೇನೆ. ಗೌರವಾನ್ವಿತ ಪ್ರಧಾನಿಗಳಾದ ನರೇಂದ್ರ ಮೋದಿ ಅವರ ಬಲಿಷ್ಠ ನಾಯಕತ್ವದಲ್ಲಿ ಕಣಿವೆ ರಾಜ್ಯದಲ್ಲಿ ಶಾಂತಿ ಮರುಸ್ಥಾಪನೆ ಆಗಿದ್ದು, ಹೇಗಾದರೂ ಅದನ್ನು ಹಾಳು ಮಾಡುವ ದುರುದ್ದೇಶ ದಿಂದ ಉಗ್ರರು ಈ ಕೃತ್ಯ ಎಸಗಿದ್ದಾರೆ. ಭಯೋತ್ಪಾದನೆ ಎಂದಿಗೂ ಭಾರತವನ್ನು ಅಧೀರಗೊಳಿಸುವುದಿಲ್ಲ. ಇಂತಹ ವಿನಾಶ ಕಾರಿ ಶಕ್ತಿಗಳ ವಿರುದ್ಧ ಹೋರಾಡುವ ಶಕ್ತಿ ಯನ್ನು ಭಾರತ ಹೊಂದಿದೆ. ಅಮಾನ ವೀಯ ದಾಳಿಯಲ್ಲಿ ಹುತಾತ್ಮರಾದ ಎಲ್ಲರಿಗೂ ಚಿರಶಾಂತಿ ಸಿಗಲಿ ಹಾಗೂ ದುಃಖವನ್ನು ಭರಿಸುವ ಶಕ್ತಿಯನ್ನು ಭಗವಂತ ಅವರ ಕುಟುಂಬಗಳಿಗೆ ದಯ ಪಾಲಿಸಲಿ ಎಂದು ಪ್ರಾರ್ಥಿಸುತ್ತೇನೆ.



- ಹೆಚ್.ಡಿ.ಕುಮಾರಸ್ವಾಮಿ, ಕೇಂದ್ರ ಸಚಿವರು

ಉಗ್ರರನ್ನು ಬೇಟೆಯಾಡಲು ಪ್ರತಿಜ್ಞೆ

ನವದೆಹಲಿ, ಏ.22– ಜಮ್ಮು ಮತ್ತು ಕಾಶ್ಮೀರದ ಪಹಲ್ಗಾಮ್‌ನಲ್ಲಿ ಪ್ರವಾಸಿಗರ ಮೇಲೆ ದಾಳಿ ನಡೆಸಿದ ಉಗ್ರರನ್ನು ಬೇಟೆಯಾಡುವುದಾಗಿ ಕೇಂದ್ರ ಗೃಹ ಸಚಿವ ಅಮಿತ್ ಶಾ ಮಂಗಳವಾರ ಪ್ರತಿಜ್ಞೆ ಮಾಡಿದ್ದಾರೆ.



ಎಲ್ಲಾ ಭದ್ರತಾ ಪಡೆಗಳೊಂದಿಗೆ ಭದ್ರತಾ ಪರಿಸ್ಥಿತಿಯನ್ನು ಪರಿಶೀಲಿಸುವುದಾಗಿ ಅಮಿತ್ ಶಾ ಹೇಳಿದ್ದಾರೆ.

ಪ್ರಸ್ತುತ ಸೌದಿ ಅರೇಬಿಯಾದಲ್ಲಿರುವ ಪ್ರಧಾನಿ ನರೇಂದ್ರ ಮೋದಿ ಅವರಿಗೆ ಘಟನೆಯ ಬಗ್ಗೆ ವಿವರಿಸಿದ್ದೇನೆ ಮತ್ತು ಭಯೋತ್ಪಾದಕ ದಾಳಿಯ ನಂತರ ಸಂಬಂಧಿತ ಅಧಿಕಾರಿಗಳೊಂದಿಗೆ ವಿಡಿಯೋ ಕಾನ್ಫರೆನ್ಸಿಂಗ್ ಮೂಲಕ ಸಭೆ ನಡೆಸಿದ್ದೇನೆ ಎಂದು ಅಮಿತ್ ಶಾ ತಿಳಿಸಿದ್ದಾರೆ.

ಜಮ್ಮು ಮತ್ತು ಕಾಶ್ಮೀರದ ಪಹಲ್ಗಾಮ್‌ನಲ್ಲಿ ಪ್ರವಾಸಿಗರ ಮೇಲೆ ನಡೆದ ಭಯೋತ್ಪಾದಕ ದಾಳಿಯಿಂದ ದುಃಖಿತನಾಗಿದ್ದೇನೆ. ಮೃತರ ಕುಟುಂಬ ಸದಸ್ಯರೊಂದಿಗೆ ನನ್ನ ಆಲೋಚನೆಗಳು ಇವೆ. ಈ ಹೇಯ ಭಯೋತ್ಪಾದಕ ಕೃತ್ಯದಲ್ಲಿ ಭಾಗಿಯಾಗಿರುವವರನ್ನು ಬಿಡುವುದಿಲ್ಲ ಮತ್ತು ದುಷ್ಕರ್ಮಿಗಳ ವಿರುದ್ಧ ನಾವು ಕಠಿಣ ಕ್ರಮ ಕೈಗೊಳ್ಳುತ್ತೇವೆ'' ಎಂದು ಅಮಿತ್ ಶಾ 'X'ನಲ್ಲಿ ಪೋಸ್ಟ್ ಮಾಡಿದ್ದಾರೆ.

ಇಂದು ಮಧ್ಯಾಹ್ನ 3 ಗಂಟೆ ಸುಮಾರಿಗೆ ಬೈಸರನ್ ಕಣಿವೆಯಿಂದ ಇಳಿದು ಬಂದ ಭಯೋತ್ಪಾದಕರು, ಪ್ರವಾಸಿಗರ ಮೇಲೆ ಗುಂಡು ಹಾರಿಸಿದ್ದಾರೆ. ದಾಳಿಯಲ್ಲಿ ಕನಿಷ್ಠ ಐವರು ಮೃತಪಟ್ಟಿದ್ದು, 20ಕ್ಕೂ ಹೆಚ್ಚು ಜನ ಗಾಯಗೊಂಡಿದ್ದಾರೆ ಎನ್ನಲಾಗಿದೆ.

ಪಹಲ್ಗಾಮ್ ದಾಳಿ ಖಂಡಿಸಿದ ಅಮೆರಿಕ ಉಪಾಧ್ಯಕ್ಷ

ಅಧ್ಯಕ್ಷ ಟ್ರಂಪ್, ರಷ್ಯಾ ಅಧ್ಯಕ್ಷ ಪುಟಿನ್ ಖಂಡನೆ

ಶ್ರೀನಗರ, ಏ.22– ಜಮ್ಮು ಮತ್ತು ಕಾಶ್ಮೀರದ ಪಹಲ್ಗಾಮ್‌ನಲ್ಲಿ ಉಗ್ರರ ದಾಳಿಯನ್ನು ಅಮೆರಿಕಾದ ಉಪಾಧ್ಯಕ್ಷ ಜೆಡಿ ವ್ಯಾನ್ಸ್ ಟ್ವೀಟ್ ಮೂಲಕ ಖಂಡಿಸಿದ್ದಾರೆ. ಅವರು ಎಕ್ಸ್ ಪ್ಲಾಟ್‌ಫಾರ್ಮ್ಸ್‌ನಲ್ಲಿ 'ಭಾರತದ ಪಹಲ್ಗಾಮ್‌ನಲ್ಲಿ ನಡೆದ ಭಯೋತ್ಪಾದಕ ದಾಳಿಯಲ್ಲಿ ಬಲಿಯಾದವರಿಗೆ ಉಷಾ ಮತ್ತು ನಾನು ಸಂತಾಪ ಸೂಚಿಸುತ್ತೇವೆ. ಕಳೆದ ಕೆಲವು ದಿನಗಳಿಂದ, ಈ ದೇಶದ ಮತ್ತು ಜನರ ಜೊತೆಗಿದ್ದೇವೆ.' ಎಂದು ಬರೆದಿದ್ದಾರೆ. ಪಹಲ್ಗಾಮ್ ಘಟನೆಯನ್ನು ಖಂಡಿಸಿರುವ ಅಮೆರಿಕ ಅಧ್ಯಕ್ಷ ಟ್ರಂಪ್, ನಾವು ಭಾರತದ ಜೊತೆ ನಿಲ್ಲುತ್ತೇವೆ ಎಂದು ಬೆಂಬಲ ಸೂಚಿಸಿದ್ದಾರೆ. ಅತ್ತ ರಷ್ಯಾ ಅಧ್ಯಕ್ಷ ಪುಟಿನ್ ಇದೊಂದು ಕ್ಷಮಿಸಲಾರದ ಘಟನೆ ಎಂದು ಖಂಡಿಸಿದ್ದು, ಭಾರತದ ನೆರವಿಗೆ ನಿಲ್ಲುವುದಾಗಿ ಘೋಷಿಸಿದ್ದಾರೆ.



ಜೆಡಿ ವ್ಯಾನ್ಸ್

ಜಮ್ಮು–ಕಾಶ್ಮೀರ ಪ್ರವಾಸ ನಿರತ ಮೈಸೂರಿನ ಮೂರು ಕುಟುಂಬ ಸುರಕ್ಷಿತ

ಮೈಸೂರು, ಏ.22– ಕಾಶ್ಮೀರ ಪ್ರವಾಸಕ್ಕೆ ತೆರಳಿರುವ ಮೈಸೂರಿನ ಮೂರು ಕುಟುಂಬದ 10 ಮಂದಿ ಸುರಕ್ಷಿತವಾಗಿದ್ದಾರೆ ಎಂದು ತಿಳಿದುಬಂದಿದೆ.

ನಗರದ ಟಿ.ಕೆ.ಲೇಔಟ್‌ನ ಮೂರು ಕುಟುಂಬದ ಹತ್ತು ಮಂದಿ ಏ.17ರಂದು ಜಮ್ಮು–ಕಾಶ್ಮೀರ ಪ್ರವಾಸಕ್ಕೆ ತೆರಳಿದ್ದು, ಸದ್ಯ ಶ್ರೀನಗರದ ಖಾಸಗಿ ಹೋಟೆಲ್‌ನಲ್ಲಿ ತಂಗಿದ್ದಾರೆ. ಭಯೋತ್ಪಾದಕರು ದಾಳಿ ನಡೆಸಿರುವ ಪಹಲ್ಗಾಮ್‌ಗೆ ಬುಧವಾರ ತೆರಳಲು ನಿರ್ಧರಿಸಿದ್ದರು ಎನ್ನಲಾಗಿದೆ.

ಇದೀಗ ಪ್ರವಾಸವನ್ನು ಮೊಟಕುಗೊಳಿಸಿ, ವಾಪಸ್ಸಾಗಲು ನಿರ್ಧರಿಸಿದ್ದು, ಏಕಾಏಕಿ ವಿಮಾನ ದರ ಹೆಚ್ಚಳ ಮಾಡಿರುವುದರಿಂದ ಸಂಕಷ್ಟಕ್ಕೀಡಾಗಿದ್ದಾರೆ. ದುಬಾರಿ ವಿಮಾನ ದರ ಭರಿಸಲಾಗದೆ ಮೈಸೂರು ಜಿಲ್ಲಾಡಳಿತದ ಸಹಕಾರ ಕೋರಿದ್ದಾರೆ.

ಓಂ ಪ್ರಕಾಶ್ ಹತ್ಯೆ: ಪತ್ನಿ ಪಲ್ಲವಿ ತಪ್ಪೊಪ್ಪಿಗೆ

ಪೊಲೀಸ್ ಮೂಲಗಳ ಪ್ರಕಾರ, ಓಂ ಪ್ರಕಾಶ್ ತಮ್ಮ ಮನೆಯಲ್ಲಿ ಊಟದ ಸಮಯದಲ್ಲಿ ಪತ್ನಿಯೊಂದಿಗೆ ಜಗಳವಾಡಿದ್ದಾರೆ. ಜಗಳ ತಾರಕಕ್ಕೇ ರಿದ್ದು, ಕೊಲೆಗೆ ಕಾರಣವಾಯಿತು ಎಂದು ಪ್ರಾಥಮಿಕ ತನಿಖೆಗಳು ತಿಳಿಸಿವೆ. ಘಟನೆ ನಡೆದಾಗ ಅವರ ಮಗಳು ಕೃತಿ ಕೂಡ ಮನೆಯಲ್ಲಿದ್ದರು ಎಂದು ಅವರು ಹೇಳಿದರು. ಓಂ ಪ್ರಕಾಶ್ ಅವರ ಮಗ ಕಾರ್ತಿಕೇಶ್ ನೀಡಿದ ದೂರಿನ ಆಧಾರದ ಮೇಲೆ ಎಚ್‌ಎಸ್‌ಆರ್ ಲೇಔಟ್ ಪೊಲೀಸರು ಪ್ರಕರಣ ದಾಖಲಿಸಿಕೊಂಡಿದ್ದಾರೆ. ತಮ್ಮ ತಾಯಿ ಮತ್ತು ಸಹೋದರಿಯ ಬಗ್ಗೆ ಅನುಮಾನ ವ್ಯಕ್ತಪಡಿಸಿರುವ ಕಾರ್ತಿಕೇಶ್, ಇಬ್ಬರೂ ಖಿನ್ನತೆಯಿಂದ ಬಳಲುತ್ತಿದ್ದಾರೆ ಎಂದಿದ್ದಾರೆ. ಕೊಲೆಗೆ ಸಂಬಂಧಿಸಿದಂತೆ ಕೃತಿಯು ಇರುವ ಬಗ್ಗೆ ಪೊಲೀಸರು ಇನ್ನೂ ತನಿಖೆ ನಡೆಸುತ್ತಿದ್ದು, ಸದ್ಯ ಅವರನ್ನು ಬಂಧಿಸಿಲ್ಲ.

ಲೆಕ್ಕಪತ್ರ ಪಕ್ಕಾ ಇದ್ದರಷ್ಟೇ ಸಹಕಾರಿ ಸಂಸ್ಥೆಗಳ ಉಳಿವು, ಬೆಳವಣಿಗೆ ಸಾಧ್ಯ

ಸಾಲ ವಸೂಲಾತಿ ಮತ್ತು ದಾವಾ ದಾಖಲಾತಿ ಕುರಿತ ತರಬೇತಿ ಕಾರ್ಯಾಗಾರವನ್ನು ಉದ್ಘಾಟಿಸಿದ ಸಹಕಾರ ಸಂಘಗಳ ಲೆಕ್ಕ ಪರಿಶೋಧನಾ ಜಂಟಿ ನಿರ್ದೇಶಕ ಎಂ.ರವಿ ಅಭಿಮತ

ಮೈಸೂರು,ಏ.22(ಎಂಟಿವೈ)– ಸಾಲ ವಸೂಲಾತಿಗೆ ಅಗತ್ಯ ಕ್ರಮ ಕೈಗೊಂಡು ಕಾಲ ಕಾಲಕ್ಕೆ ಲೆಕ್ಕಪತ್ರಗಳನ್ನು ವ್ಯವಸ್ಥಿತವಾಗಿ ನಿರ್ವಹಣೆ ಮಾಡಿದಾಗ ಮಾತ್ರ ಸೌಹಾರ್ದ ಸಹಕಾರಿ ಸಂಸ್ಥೆಗಳು ಅಭಿವೃದ್ಧಿ ಹೊಂದಲು ಸಾಧ್ಯ ಎಂದು ಸಹಕಾರ ಸಂಘಗಳ ಲೆಕ್ಕಪರಿಶೋಧನಾ ಜಂಟಿ ನಿರ್ದೇಶಕ ಎಂ. ರವಿ ಅಭಿಪ್ರಾಯಪಟ್ಟಿದ್ದಾರೆ.

ಮೈಸೂರಿನ ಜೆಎಲ್‌ಬಿ ರಸ್ತೆಯಲ್ಲಿರುವ ಇನ್‌ಸ್ಟಿಟ್ಯೂಷನ್ ಆಫ್ ಇಂಜಿನಿಯರ್ಸ್ ಸಭಾಂಗಣದಲ್ಲಿ ಕರ್ನಾಟಕ ರಾಜ್ಯ ಸೌಹಾರ್ದ ಸಂಯುಕ್ತ ಸಹಕಾರಿ ನಿಯಮಿತ ಸಂಸ್ಥೆಯ ಸೌಹಾರ್ದ ಸಂಯುಕ್ತ ಸಹಕಾರಿ ಸಂಘಗಳ ಮುಖ್ಯ ಕಾರ್ಯ ನಿರ್ವಹಣಾಧಿಕಾರಿಗಳಿಗಾಗಿ ಆಯೋಜಿಸಿದ್ದ 'ಲೆಕ್ಕಪರಿಶೋಧನೆ ವರದಿ ಸಿದ್ಧತೆ ಮತ್ತು ಪೂರ್ವ ಪ್ರಕ್ರಿಯೆಗಳು ಹಾಗೂ ಸಾಲ ವಸೂಲಾತಿ ಮತ್ತು ದಾವಾ ದಾಖಲಾತಿ' ಕುರಿತ ತರಬೇತಿ ಕಾರ್ಯಾಗಾರವನ್ನು ಉದ್ಘಾಟಿಸಿ ಮಾತನಾಡಿದ ಅವರು, ಸೌಹಾರ್ದ ಸಹಕಾರಿ ಸಂಸ್ಥೆಗಳ ಏಳಿಗೆಯಲ್ಲಿ ಸಾಲ ವಸೂಲಾತಿ ಹಾಗೂ ಲೆಕ್ಕ ಪತ್ರಗಳ ನಿರ್ವಹಣೆ ಪ್ರಮುಖ ಪಾತ್ರವಹಿಸುತ್ತದೆ. ಈ ಎರಡೂ ಅಂಶಗಳಲ್ಲಿ ಆಯಾ ಸಹಕಾರಿ ಸಂಘಗಳ ಸಿಇಓ ಸೇರಿದಂತೆ ಸಂಸ್ಥೆಯ ಎಲ್ಲಾ ಸಿಬ್ಬಂದಿಯ ಜವಾಬ್ದಾರಿ ಹೆಚ್ಚಾಗಿರುತ್ತದೆ. ವರ್ಷದ ಅಂತ್ಯದಲ್ಲಿ ಆಡಿಟ್ ಮಾಡಿಸಿದರೆ ನಮ್ಮ ಕರ್ತವ್ಯ ಮುಗಿಯಿತು ಎಂದು ಭಾವಿಸುವುದು ಸರಿಯಲ್ಲ. ಲೆಕ್ಕ ಪರಿಶೋಧನೆಗೆ ಬೇಕಾದ ದಾಖಲೆ, ಲೆಡ್ಜರ್‌ಗಳ ನಿರ್ವಹಣೆಯನ್ನು ಕಾಲ ಕಾಲಕ್ಕೆ ಮಾಡುವುದರಿಂದ ಆಡಿಟಿಂಗ್ ಸುಲಲಿತವಾಗಿ ನಡೆಸಬಹುದು ಎಂದರು.



ಮೈಸೂರಿನ ಇನ್‌ಸ್ಟಿಟ್ಯೂಷನ್ ಆಫ್ ಇಂಜಿನಿಯರ್ಸ್ ಸಭಾಂಗಣದಲ್ಲಿ ಸೌಹಾರ್ದ ಸಂಯುಕ್ತ ಸಹಕಾರಿ ಸಂಘಗಳ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳಿಗಾಗಿ ಆಯೋಜಿಸಿದ್ದ ತರಬೇತಿ ಕಾರ್ಯಾಗಾರವನ್ನು ಸಹಕಾರ ಸಂಘಗಳ ಲೆಕ್ಕಪರಿಶೋಧನಾ ಜಂಟಿ ನಿರ್ದೇಶಕ ಎಂ. ರವಿ ಉದ್ಘಾಟಿಸಿದರು. ಮಂಡ್ಯ ಜಿಲ್ಲಾ ಸೌಹಾರ್ದ ಸಹಕಾರಿಗಳ ಒಕ್ಕೂಟದ ಅಧ್ಯಕ್ಷ ಬಿ.ಟಿ.ಗುರುರಾಜ್, ಸೌಹಾರ್ದ ಸಹಕಾರಿಗಳ ಒಕ್ಕೂಟದ ಅಧ್ಯಕ್ಷ ಎಸ್.ಆರ್.ನಾರಾಯಣರಾವ್, ರಾಜ್ಯ ಸೌಹಾರ್ದ ಸಹಕಾರಿ ಪ್ರಾಂತೀಯ ಅಧಿಕಾರಿ ಗುರುಪ್ರಸಾದ್ ಬಂಗೇರ, ಬಿ.ಎನ್.ಚಂದ್ರಶೇಖರ್ ಇತರರಿದ್ದಾರೆ.

> "ಸೊಸೈಟಿಗಳಲ್ಲಿ ಶೇ.90 ಲೆಕ್ಕಪತ್ರಗಳು ಸರಿಯಾಗಿ ನಿರ್ವಹಿಸಿರುವುದಿಲ್ಲ. ಇದರಿಂದ ಕೆಲಸ ಕಾರ್ಯಗಳು ಸರಿಯಾಗಿ ಆಗದೇ ತೊಂದರೆ ಆಗುತ್ತದೆ. ಬೆರಳೆಣಿಕೆಯಷ್ಟು ಸೊಸೈಟಿಗಳಲ್ಲಿ ಮಾತ್ರ ಲೆಕ್ಕಪತ್ರಗಳು ಸರಿ ಇರುತ್ತವೆ. ಲೆಕ್ಕಪತ್ರಗಳನ್ನು ಕಾಲ ಕಾಲಕ್ಕೆ ನಿರ್ವಹಣೆ ಮಾಡಿದರೆ ಸಂಸ್ಥೆಯ ಚಟುವಟಿಕೆ ಉತ್ತಮವಾಗಿ ನಡೆಸಬಹುದು. ಸಿಇಓಗಳು ಪ್ರತಿ ತಿಂಗಳು ಲೆಕ್ಕ ಪತ್ರಗಳ ನಿರ್ವಹಣೆಯಾಗಿದೆಯಾ ಎಂದು ಪರಿಶೀಲಿಸಿಕೊಳ್ಳಬೇಕು. ಯಾವುದೇ ಪರಿಶೀಲನೆ ಮಾಡದೇ ಹೋದರೆ, ಲೆಕ್ಕಪತ್ರಗಳ ಸಮಗ್ರ ನಿರ್ವಹಣೆಯಾಗದೇ ಅಂತಿಮವಾಗಿ ಆಡಳಿತ ಮಂಡಳಿ ತೊಂದರೆಗೆ ಸಿಲುಕುವ ಸಾಧ್ಯತೆ ಇರುತ್ತದೆ. ಸೊಸೈಟಿಗಳಲ್ಲಿ ವಸೂಲಾತಿ ತುಂಬಾ ಮುಖ್ಯ. ನೀಡಿದ ಸಾಲ ಸರಿಯಾಗಿ ವಸೂಲಿ ಆಗದಿದ್ದಾಗ ತೊಂದರೆ ಆಗುತ್ತದೆ. ವಸೂಲಾತಿ ಆಗದಿದ್ದಾಗ ಕಾಯ್ದೆ ಪ್ರಕಾರ ಕ್ರಮ ಕೈಗೊಳ್ಳಬಹುದು. **–ಎಂ.ರವಿ, ಸಹಕಾರ ಸಂಘಗಳ ಲೆಕ್ಕಪರಿಶೋಧನಾ ಜಂಟಿ ನಿರ್ದೇಶಕ**

ಮಂಡ್ಯ ಜಿಲ್ಲಾ ಸೌಹಾರ್ದ ಸಹಕಾರಿಗಳ ಒಕ್ಕೂಟದ ಅಧ್ಯಕ್ಷ ಬಿ.ಟಿ.ಗುರುರಾಜ್ ಮಾತನಾಡಿ, ಲೆಕ್ಕಪರಿಶೋಧನೆ ಜವಾಬ್ದಾರಿ ಸಿಇಓಗಳದ್ದು. ಲೆಕ್ಕ ಪರಿಶೋಧನೆ ವಿಳಂಬಕ್ಕೆ ಶೇ.50ರಷ್ಟು ಆಡಳಿತ ಮಂಡಳಿ ಸಹ ಕಾರಣವಾಗಿರುತ್ತದೆ. ಹೀಗಾಗಿ, ಸಿಇಓಗಳು ವ್ಯವಸ್ಥಿತವಾಗಿ ಲೆಕ್ಕಪರಿಶೋಧನೆ ಕಾರ್ಯ ಮಾಡಬೇಕು. ಸಹಕಾರಿ ಸಂಸ್ಥೆಗಳನ್ನು ಲಾಭದಾಯಿಕವಾಗಿ ಮುನ್ನಡೆಸಲು ಹಾಗೂ ಸಂಸ್ಥೆಯನ್ನು ಅಭಿವೃದ್ಧಿ ಮಾಡಬೇಕಾದರೆ ಸಂಸ್ಥೆಯ ಸಿಇಓಗಳಿಗೆ ಕಾಲ ಕಾಲಕ್ಕೆ ತರಬೇತಿ ಕಾರ್ಯಾಗಾರ ನಡೆಸುವ ಅನಿವಾರ್ಯತೆ ಇದೆ. ಪ್ರತಿ ಕಾರ್ಯಾಗಾರದಲ್ಲೂ ಹೊಸ ಹೊಸ ವಿಷಯ ತಿಳಿದುಕೊಳ್ಳಬಹುದಾಗಿದೆ. ಆ ನಿಟ್ಟಿನಲ್ಲಿ ಆಸಕ್ತಿಯಿಂದ ಸಿಇಓಗಳು ಕಾರ್ಯಾಗಾರಕ್ಕೆ ಬರುವ ಮನಸ್ಥಿತಿ ಬೆಳೆಸಿಕೊಳ್ಳಬೇಕು ಎಂದರು.

ಈ ತರಬೇತಿಯಲ್ಲಿ ಮೈಸೂರು, ಕೊಡಗು, ಮಂಡ್ಯ ಮತ್ತು ಚಾಮರಾಜನಗರ ಜಿಲ್ಲೆಗಳಿಂದ 100ಕ್ಕೂ ಹೆಚ್ಚಿನ ಸೌಹಾರ್ದ ಸಹಕಾರಿಗಳ ಸಿಇಓಗಳು ಪಾಲ್ಗೊಂಡಿದ್ದರು. ಮೈಸೂರು, ಮಂಡ್ಯ ಮತ್ತು ಕೊಡಗು ಜಿಲ್ಲಾ ಸೌಹಾರ್ದ ಸಹಕಾರಿಗಳ ಒಕ್ಕೂಟದ ಅಧ್ಯಕ್ಷ ಎಸ್.ಆರ್.ನಾರಾಯಣರಾವ್ ಅಧ್ಯಕ್ಷತೆ ವಹಿಸಿದ್ದರು. ರಾಜ್ಯ ಸೌಹಾರ್ದ ಸಂಯುಕ್ತ ಸಹಕಾರಿ ಪ್ರಾಂತೀಯ ಅಧಿಕಾರಿ ಗುರುಪ್ರಸಾದ್ ಬಂಗೇರ ಪ್ರಾಸ್ತಾವಿಕವಾಗಿ ಮಾತನಾಡಿದರು. ಸನ್ನದು ಲೆಕ್ಕಪರಿಶೋಧಕ ಬಿ.ಎನ್. ಚಂದ್ರಶೇಖರ್ ಇದ್ದರು. ಪ್ರಿಯಾ ಪ್ರಾರ್ಥಿಸಿದರು. ಸೌಹಾರ್ದ ಅಭಿವೃದ್ಧಿ ಅಧಿಕಾರಿಗಳಾದ ಆರ್.ಎಸ್. ಸುರೇಶ ಸ್ವಾಗತಿಸಿದರು. ಎನ್.ಬಲರಾಮ್ ನಿರೂಪಿಸಿದರು.

ಮರಗಳ ಹನನ ಪ್ರಕರಣ ತನಿಖೆಗಾಗಿ ತ್ರಿ ಸದಸ್ಯ ಸಮಿತಿ ರಚನೆ





ಮೈಸೂರು,ಏ.22(ಎಂಟಿವೈ)– ಮೈಸೂರಿನ ಹೈದರಾಲಿ ರಸ್ತೆಯಲ್ಲಿ ರಸ್ತೆ ಅಗಲೀಕರಣಕ್ಕಾಗಿ 40 ಮರಗಳ ಹನನ ಪ್ರಕರಣದ ವಾಸ್ತವತೆ ಪರಿಶೀಲಿಸಲು ಜಿಲ್ಲಾಧಿಕಾರಿ ಜಿ.ಲಕ್ಷ್ಮೀಕಾಂತರೆಡ್ಡಿ ಮೂವರು ಅಧಿಕಾರಿಗಳುಳ್ಳ ತನಿಖಾ ಸಮಿತಿ ರಚಿಸಿದ್ದಾರೆ.

ರಸ್ತೆ ಅಗಲೀಕರಣಕ್ಕಾಗಿ ಮೈಸೂರು ಮಹಾನಗರಪಾಲಿಕೆ ಹೈದರಾಲಿ ರಸ್ತೆಯಲ್ಲಿ ಅರಣ್ಯ ಇಲಾಖೆಯ ಅನುಮತಿ ಪಡೆದು ರಾತ್ರೋರಾತ್ರಿ 3–4 ದಶಕಗಳಿಂದ ನಳನಳಿಸುತ್ತಿದ್ದ 40 ಮರಗಳನ್ನು ಕಡಿದಿತ್ತು. ಮರಗಳ ಹನನ ಪ್ರಕರಣವನ್ನು ಖಂಡಿಸಿ ಮೈಸೂರಲ್ಲಿ ಪ್ರತಿದಿನ ಪ್ರತಿಭಟನೆ ನಡೆಯುತ್ತಿದ್ದು, ಅರಣ್ಯ ಇಲಾಖೆ ಹಾಗೂ ಮಹಾನಗರಪಾಲಿಕೆ ವಿರುದ್ಧ ಪರಿಸರ ಪ್ರೇಮಿಗಳು ಆಕ್ರೋಶ ವ್ಯಕ್ತಪಡಿಸುತ್ತಿದ್ದಾರೆ. ಈ ಹಿನ್ನೆಲೆಯಲ್ಲಿ ಜಿಲ್ಲಾಧಿಕಾರಿ ಜಿ.ಲಕ್ಷ್ಮೀಕಾಂತರೆಡ್ಡಿ ಅವರು, ಮರ ಕಡಿದ ಪ್ರಕರಣದ ವಾಸ್ತವತೆ ಪರಿಶೀಲನೆಗಾಗಿ ತನಿಖಾ ಸಮಿತಿಯನ್ನು ರಚಿಸಿ ಆದೇಶಿಸಿದ್ದಾರೆ.

ಮುಡಾ ಆಯುಕ್ತ ರಘುನಂದನ್ ಸಮಿತಿ ಅಧ್ಯಕ್ಷರಾಗಿದ್ದು, ಹುಣಸೂರು ವಿಭಾಗದ ಡಿಸಿಎಫ್ ಫಯಾಜ್ ಸದಸ್ಯರಾಗಿದ್ದರೆ, ಜಿಲ್ಲಾ ನಗರಾಭಿವೃದ್ಧಿ ಕೋಶದ ಕಾರ್ಯನಿರ್ವಾಹಕ ಅಭಿಯಂತರ(ಮಂಜುನಾಥ್) ಕಾರ್ಯದರ್ಶಿಯಾಗಿರಲಿದ್ದಾರೆ.

ಈ ಸಮಿತಿಯು ರಸ್ತೆ ಅಗಲೀಕರಣದ ಅಗತ್ಯವಿತ್ತೇ, 40 ಮರಗಳನ್ನು ಕತ್ತರಿಸುವ ಅನಿವಾರ್ಯತೆ ಇತ್ತೆ ಎಂಬುದನ್ನು ತಾಂತ್ರಿಕವಾಗಿ ಪರಿಶೀಲಿಸಲಿದೆ. ಮರ ಕಡಿಯಲು ನಿಯಮಾನುಸಾರ ಅನುಮತಿ ನೀಡಲಾಗಿದೆಯೇ ಎಂದು ಸಮಗ್ರವಾಗಿ ಪರಿಶೀಲಿಸಿ, ವಾಸ್ತವಾಂಶವುಳ್ಳ ತನಿಖಾ ವರದಿಯನ್ನು ತನ್ನದೇ ಅಭಿಪ್ರಾಯದೊಂದಿಗೆ 7 ದಿನದ ಒಳಗಾಗಿ ನೀಡುವಂತೆ ಜಿಲ್ಲಾಧಿಕಾರಿ ಸೂಚಿಸಿದ್ದಾರೆ.

ಸಿಸಿಎಫ್ ದರ್ಜೆ ಅಧಿಕಾರಿಯಿಂದ ತನಿಖೆ: ಮರಗಳ ಹನನ ಖಂಡಿಸಿ ವ್ಯಾಪಕ ಪ್ರತಿಭಟನೆ ನಡೆಯುತ್ತಿರುವ ಹಿನ್ನೆಲೆಯಲ್ಲಿ ಅರಣ್ಯ ಸಚಿವ ಈಶ್ವರ್ ಬಿ.ಖಂಡ್ರೆ ಸಿಸಿಎಫ್ ದರ್ಜೆಯ ಅಧಿಕಾರಿಯಿಂದ ತನಿಖೆ ನಡೆಸುವಂತೆ ಸೂಚನೆ ನೀಡಿರುವುದನ್ನು ಇಲ್ಲಿ ಸ್ಮರಿಸಬಹುದು.

ಹೈದರಾಲಿ ರಸ್ತೆಯಲ್ಲಿ ಗಿಡ ನೆಟ್ಟು ಪರಿಸರ ಪ್ರೇಮ ಮೆರೆದ ರಘುಲಾಲ್ ಮೆಡಿಕಲ್ಸ್

ಜನರ ಗಮನ ಸೆಳೆದ ಪರಿಸರ ಸಂರಕ್ಷಣೆಯ ಮಹತ್ವ ಸಾರುವ ಘೋಷವಾಕ್ಯ ಫಲಕ

ಮೈಸೂರು,ಏ.22(ಬಿಎಲ್‌ಯು)–ಮೈಸೂರಿನ ಹೈದರಾಲಿ ರಸ್ತೆಯಲ್ಲಿ ಮರಗಳ ಮಾರಣಹೋಮವಾಗಿ ವಾರ ಕಳೆದಿದೆ. ಕಡಿದ ಮರಕ್ಕೆ ಪರ್ಯಾಯವಾಗಿ ಅರಣ್ಯ ಇಲಾಖೆ ಇನ್ನು ಗಿಡಗಳನ್ನು ನೆಟ್ಟಿಲ್ಲ. ಆದರೆ ಈಗ ರಘುಲಾಲ್ ಮೆಡಿಕಲ್ಸ್‌ನವರು ಗಿಡ ನೆಟ್ಟು, ಪರಿಸರ ಕಾಳಜಿ ಮೆರೆದಿದ್ದಾರೆ.

ಹಸಿರಾಗಿ, ಉಸಿರಾಗಿ ತಣ್ಣನೆ ಗಾಳಿ ಬೀಸುತ್ತಿದ್ದ ಹತ್ತಾರು ಮರಗಳು ಹೈದರಾಲಿ ರಸ್ತೆಗೆ ಭೂಷಣವಾಗಿದ್ದವು. ಆದರೆ ಈಗ ರಸ್ತೆಯ ಇಕ್ಕೆಲಗಳಲ್ಲಿದ್ದ 40 ಮರಗಳ ಹನನವಾಗಿದೆ. ಮರಗಳಿಲ್ಲದೆ ಇಡೀ ರಸ್ತೆ ಬೋಳಾಗಿದೆ. ರಸ್ತೆ ತನ್ನ ಸೌಂದರ್ಯ ಕಳೆದುಕೊಂಡಿದೆ. ಈ ರಸ್ತೆಯಲ್ಲಿ ಸಾಮಾನ್ಯವಾಗಿ ಓಡಾಡುವ ಜನರಿಗೆ ನೆರಳಿಲ್ಲದಂತಾಗಿದೆ.

ಮರಗಳನ್ನು ಕಡಿದಿರುವುದಕ್ಕೆ ವ್ಯಾಪಕ ಆಕ್ರೋಶ ವ್ಯಕ್ತವಾಗಿದೆ. ಮರಗಳ ಮಾರಣಹೋಮ ಮಾಡಿರುವ ಅರಣ್ಯ ಇಲಾಖೆ ಹಾಗೂ ನಗರಪಾಲಿಕೆಯ ಪರಿಸರ ವಿರೋಧಿ ನೀತಿ ವಿರುದ್ಧ ಹೈದರಾಲಿ ರಸ್ತೆಯಲ್ಲಿ ಒಂದಲ್ಲ ಒಂದು ಪ್ರತಿಭಟನೆ ನಡೆಯುತ್ತಲೆ ಇದೆ.

ಮರ ಕಡಿದಿರುವ ಹೈದರಾಲಿ ರಸ್ತೆಯಲ್ಲಿ ಪರಿಸರಿ ಪ್ರೇಮಿಯೊಬ್ಬರು ಪರಿಸರ ಸಂರಕ್ಷಣೆ ಕುರಿತು ಸ್ಕೂಟರ್‌ನಲ್ಲಿ ಹಾಕಿಕೊಂಡಿದ್ದ ಫಲಕ ಜನರ ಗಮನ ಸೆಳೆಯಿತು. ಶುದ್ಧ ಗಾಳಿ, ನೀರು, ಆಹಾರ ಇರದಿದ್ದರೆ ಎಷ್ಟು ಆಸ್ತಿ ಮಾಡಿದರೇನು ಉಪಯೋಗ ಎಂಬ ಫಲಕದ ಘೋಷವಾಕ್ಯ ಪರಿಸರ ಸಂರಕ್ಷಣೆಯ ಮಹತ್ವ ಸಾರಿತ್ತು. ಇಷ್ಟೆಲ್ಲಾ ಆದರೂ ರಸ್ತೆಯ ಇಕ್ಕೆಲಗಳಲ್ಲಿ ಅರಣ್ಯ ಇಲಾಖೆ ಗಿಡ ನೆಡಲು ಮುಂದಾಗಿಲ್ಲ. ಆದರೆ ಈ ತನಕ ಲಕ್ಷಾಂತರ ಗಿಡ ನೆಟ್ಟು ಪರಿಸರ ಪ್ರೇಮ ತೋರಿರುವ ರಘುಲಾಲ್ ಮೆಡಿಕಲ್ಸ್‌ನವರು ಹೈದರಾಲಿ ರಸ್ತೆಯ ಕರ್ನಾಟಕ ಪೊಲೀಸ್ ಅಕಾಡೆಮಿ ಕಾಂಪೌಂಡ್ ಬಳಿ ಗಿಡ ನೆಟ್ಟು, ಅವುಗಳಿಗೆ ಯಾವುದೇ ಹಾನಿಯಾಗದಂತೆ ವೃತ್ತಾಕಾರದ ಟ್ರೀಗಾರ್ಡ್ ಹಾಕಿ, ರಕ್ಷಿಸಿದ್ದಾರೆ.



ಪರಿಸರ ಸಂರಕ್ಷಣೆ ಕುರಿತು ಸ್ಕೂಟರ್‌ನಲ್ಲಿ ಹಾಕಿಕೊಂಡಿದ್ದ ಫಲಕ ಜನರ ಗಮನ ಸೆಳೆಯಿತು.



ರಘುಲಾಲ್ ಮೆಡಿಕಲ್ಸ್‌ನವರು ಹೈದರಾಲಿ ರಸ್ತೆಯುಲ್ಲಿ ಗಿಡ ನೆಟ್ಟು, ಪರಿಸರ ಕಾಳಜಿ ಮೆರೆದಿದ್ದಾರೆ.

ಇಂದು ವಿಶ್ವ ಪುಸ್ತಕ ದಿನಾಚರಣೆ: ಸೈಯದ್ ಇಸಾಕ್ ಗ್ರಂಥಾಲಯಕ್ಕೆ ಪುಸ್ತಕ ಕೊಡುಗೆ, ಸನ್ಮಾನ

ಮೈಸೂರು,ಏ.22–ಜೀವಧಾರ ರಕ್ತನಿಧಿ ಕೇಂದ್ರ ಹಾಗೂ ಕೆಎಂಪಿಕೆ ಚಾರಿಟೆಬಲ್ ಟ್ರಸ್ಟ್ ವತಿಯಿಂದ ವಿಶ್ವ ಪುಸ್ತಕ ದಿನಾಚರಣೆ ಅಂಗವಾಗಿ ಉದಯಗಿರಿಯಲ್ಲಿರುವ ಸೈಯದ್ ಇಸಾಕ್ ಗ್ರಂಥಾಲಯಕ್ಕೆ ಪುಸ್ತಕ ಕೊಡುಗೆ ಹಾಗೂ ಅವರಿಗೆ ಸನ್ಮಾನ ಕಾರ್ಯಕ್ರಮವನ್ನು ಏ.23ರಂದು ಬೆಳಗ್ಗೆ 11 ಗಂಟೆಗೆ ಹಮ್ಮಿಕೊಳ್ಳಲಾಗಿದೆ. ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ವಸ್ತುಪ್ರದರ್ಶನ ಪ್ರಾಧಿಕಾರದ ಅಧ್ಯಕ್ಷ ಅಯೂಬ್ ಖಾನ್, ಮಾಜಿ ಮೇಯರ್ ಸಂದೇಶ ಸ್ವಾಮಿ, ಕನ್ನಡ ಸಾಹಿತ್ಯ ಪರಿಷತ್ ಅಧ್ಯಕ್ಷ ಮಡ್ಡಿಕೆರೆ ಗೋಪಾಲ್, ಹೋಟೆಲ್ ಮಾಲೀಕರ ಸಂಘದ ಅಧ್ಯಕ್ಷ ನಾರಾಯಣಗೌಡ, ಮೈಸೂರು ನಗರ ಬಿಜೆಪಿ ಮಹಿಳಾ ಮೋರ್ಚಾ ಅಧ್ಯಕ್ಷೆ ರೇಣುಕಾ ರಾಜ್, ಜೀವಧಾರ ರಕ್ತನಿಧಿ ಕೇಂದ್ರದ ನಿರ್ದೇಶಕ ಗಿರೀಶ್ ಭಾಗವಹಿಸುವರು.

ಪಿಎಚ್.ಡಿ ಪದವಿ



ಮೈಸೂರು: ಡಾ.ಹೆಚ್.ಕೆ.ಚೇತನ್ ಮಾರ್ಗದರ್ಶನದಲ್ಲಿ ವೈ.ಎನ್.ಮಹದೇವ ಪ್ರಸಾದ್ ಗಣಕ ವಿಜ್ಞಾನ ವಿಷಯದಲ್ಲಿ ಸಂಶೋಧನೆ ನಡೆಸಿ ಸಾದರಪಡಿಸಿದ ಮಹಾಪ್ರಬಂಧವನ್ನು ಮೈಸೂರು ವಿಶ್ವವಿದ್ಯಾನಿಲಯ ಪಿಎಚ್.ಡಿ ಪದವಿಗೆ ಅಂಗೀಕರಿಸಿದೆ.

ಹೈಕೋರ್ಟ್‌ನ 4 ನ್ಯಾಯಾಧೀಶರ ವರ್ಗಾವಣೆ
ಬೆಂಗಳೂರು ವಕೀಲರ ಸಂಘ ವಿರೋಧ

ಬೆಂಗಳೂರು: ಉನ್ನತ ನ್ಯಾಯಾಲಯಗಳ ಮಟ್ಟದಲ್ಲಿ 'ಒಳಗೊಳ್ಳುವಿಕೆ ಮತ್ತು ವೈವಿಧ್ಯತೆಯನ್ನು ತುಂಬುವ' ಅಗತ್ಯವನ್ನು ಉಲ್ಲೇಖಿಸಿ ಕರ್ನಾಟಕದ ನಾಲ್ವರು ಸೇರಿ 7 ಹೈಕೋರ್ಟ್ ನ್ಯಾಯಾಧೀಶರ ವರ್ಗಾವಣೆಗೆ ಸುಪ್ರೀಂಕೋರ್ಟ್‌ನ ಕೊಲಿಜಿಯಂ ಶಿಫಾರಸು ಮಾಡಿದ್ದು, ಇದಕ್ಕೆ ಬೆಂಗಳೂರು ವಕೀಲರ ಸಂಘ ವಿರೋಧ ವ್ಯಕ್ತಪಡಿಸಿದೆ.

ಏ.19ರಂದು ಕೊಲಿಜಿಯಂ ಮಾಡಿದ ನಿರ್ಣಯದ ಪ್ರಕಾರ, ಏ.15 ಮತ್ತು ಏ.19ರಂದು ನಡೆದ ಸಭೆಗಳಲ್ಲಿ ಭಾರತದ ಮುಖ್ಯ ನ್ಯಾಯಮೂರ್ತಿ (ಸಿಜೆಐ) ಸಂಜೀವ್ ಖನ್ನಾ ನೇತೃತ್ವದ ಕೊಲಿಜಿಯಂ ಈ ನಿರ್ಧಾರವನ್ನು ತೆಗೆದುಕೊಂಡಿದೆ.

ಕರ್ನಾಟಕ ಹೈಕೋರ್ಟ್‌ನಿಂದ ನ್ಯಾ. ಹೇಮಂತ್ ಚಂದ್ರಶೇಖರ್ ಅವರನ್ನು ಮದ್ರಾಸ್, ನ್ಯಾ.ಕೃಷ್ಣನ್ ನಟರಾಜನ್ ಅವರನ್ನು ಕೇರಳ, ನ್ಯಾ. ನೇರನಹಳ್ಳಿ ಶ್ರೀನಿವಾಸನ್ ಸಂಜಯ್ ಗೌಡ ಅವರನ್ನು ಗುಜರಾತ್, ನ್ಯಾ.ಶ್ರೀಪಾದ ಕೃಷ್ಣ ದೀಕ್ಷಿತ್ ಅವರನ್ನು ಒಡಿಶಾ ಹೈಕೋರ್ಟ್‌ಗಳಿಗೆ ಕಳಿಸಲಾಗಿದೆ. ತೆಲಂಗಾಣದಿಂದ ನ್ಯಾ.ಪೆರುಗು ಶ್ರೀಸುಧಾ ಹಾಗೂ ಆಂಧ್ರಪ್ರದೇಶದಿಂದ ನ್ಯಾ.ಡಾ.ಕುಂಭ ಜಾಡಾಲ ಮನ್ಮಥರಾವ್ ಅವರನ್ನು ಹೈಕೋರ್ಟ್‌ಗೆ ವರ್ಗಾಯಿಸಲಾಗಿದೆ. ನ್ಯಾ. ಕಾಸೋಜು ಸುರೇಂದ್ರ ಅವರನ್ನು ತೆಲಂಗಾಣದಿಂದ ಮದ್ರಾಸ್ ಹೈಕೋರ್ಟ್‌ಗೆ ಕಳಿಸಲಾಗಿದೆ.

ವರ್ಗಾವಣೆಗೆ ಬೆಂಗಳೂರಿನ ವಕೀಲರ ಸಂಘ ವಿರೋಧ ವ್ಯಕ್ತಪಡಿಸಿದ್ದು, ಶಿಫಾರಸು ಹಿಂತೆಗೆದುಕೊಳ್ಳುವಂತೆ ಒತ್ತಾಯಿಸಿದೆ. ಅಲ್ಲದೆ, ಹೈಕೋರ್ಟ್‌ನ ಸುವರ್ಣ ಮಹೋತ್ಸವ ದ್ವಾರದ ಬಳಿ ಪ್ರತಿಭಟನೆ ನಡೆಸಲು ಮುಂದಾಗಿದೆ. ಅಲ್ಲದೆ, ಮುಂದಿನ ನಡೆ ಕುರಿತು ಚರ್ಚಿಸಲು ಮಧ್ಯಾಹ್ನ 1.30ಕ್ಕೆ ವಿಶೇಷ ಸಭೆ ನಡೆಸಲು ನಿರ್ಧರಿಸಿದೆ.

ವರ್ಗಾವಣೆಗೆ ಸಂಬಂಧಿಸಿದಂತೆ ಎಲ್ಲಾ ಹಿರಿಯ ವಕೀಲರೊಂದಿಗೆ ಸಭೆ ನಡೆಸಲಾಗಿದ್ದು, ನ್ಯಾಯಾಧೀಶರ ವರ್ಗಾವಣೆ ಕ್ರಮ ತಪ್ಪಾಗಿದೆ ಮತ್ತು ಅದನ್ನು ಹಿಂಪಡೆಯಬೇಕೆಂದು ಎಲ್ಲರೂ ಅಭಿಪ್ರಾಯ ವ್ಯಕ್ತಪಡಿಸಿದ್ದಾರೆಂದು ಎಎಬಿ ಹೇಳಿಕೆಯಲ್ಲಿ ತಿಳಿಸಿದೆ. ಅಲ್ಲದೆ, ವರ್ಗಾವಣೆ ಪ್ರಸ್ತಾವನೆಯನ್ನು ತಕ್ಷಣವೇ ಹಿಂಪಡೆಯುವಂತೆ ಕೋರಿ ಸುಪ್ರೀಂಕೋರ್ಟ್‌ನ ಕೊಲಿಜಿಯಂ ಸದಸ್ಯರಿಗೆ, ರಾಷ್ಟ್ರಪತಿ, ಪ್ರಧಾನ ಮಂತ್ರಿ ಮತ್ತು ಕಾನೂನು ಸಚಿವರಿಗೆ ಮನವಿ ಪತ್ರಗಳನ್ನು ಕಳುಹಿಸುವುದಾಗಿ ತಿಳಿಸಿದೆ.

ಅರಣ್ಯ ಸಂಪತ್ತು ಸಂರಕ್ಷಣೆ ತುರ್ತು ಅಗತ್ಯ

ವಿಶ್ವ ಭೂ ದಿನ ಕಾರ್ಯಕ್ರಮದಲ್ಲಿ ರಂಗಭೂಮಿ ಕಲಾವಿದ ದೀಪಕ್ ಅಭಿಮತ



ಮೈಸೂರಿನ ವಿಶ್ವೇಶ್ವರ ನಗರದಲ್ಲಿರುವ ಮಹರ್ಷಿ ಪಬ್ಲಿಕ್ ಶಾಲೆಯಲ್ಲಿ ಚಿತ್ರ ಭೂಮಿ ಸಂಸ್ಥೆ ವತಿಯಿಂದ ಹಮ್ಮಿಕೊಂಡಿದ್ದ ವಿಶ್ವ ಭೂ ದಿನ ಕಾರ್ಯಕ್ರಮದಲ್ಲಿ ಮಕ್ಕಳಿಗೆ ಭೂಮಿ ಹಾಗೂ ಪರಿಸರದ ಜಾಗೃತಿ ಮೂಡಿಸಲಾಯಿತು. ರಂಗಭೂಮಿ ಕಲಾವಿದ ದೀಪಕ್ ಇನ್ನಿತರರನ್ನು ಚಿತ್ರದಲ್ಲಿ ಕಾಣಬಹುದು.

ಮೈಸೂರು, ಏ. 22– ಮೈಸೂರು ನಗರದ ಅರಣ್ಯ ಸಂಪತ್ತನ್ನು ಸಂರಕ್ಷಣೆ ಮಾಡುವ ಅಗತ್ಯವಿದೆ ಎಂದು ರಂಗಭೂಮಿ ಕಲಾವಿದ ದೀಪಕ್ ತಿಳಿಸಿದರು.

ಮೈಸೂರಿನ ವಿಶ್ವೇಶ್ವರನಗರದಲ್ಲಿರುವ ಮಹರ್ಷಿ ಪಬ್ಲಿಕ್ ಶಾಲೆಯಲ್ಲಿ ಚಿತ್ರ ಭೂಮಿ ಸಂಸ್ಥೆ ಹಮ್ಮಿಕೊಂಡಿದ್ದ ವಿಶ್ವ ಭೂ ದಿನ ಕಾರ್ಯಕ್ರಮದಲ್ಲಿ ಮಕ್ಕಳಿಗೆ ಭೂಮಿ ಹಾಗೂ ಪರಿಸರದ ಜಾಗೃತಿ ಮೂಡಿಸಿ ಮಾತನಾಡಿದ ಅವರು, ರಾಜ್ಯದಲ್ಲಿ ಕೇವಲ ಶೇ.20ರಷ್ಟು ಅರಣ್ಯ ಪ್ರದೇಶವಿದೆ. ಇದು ಅಪಾಯಕಾರಿಯಾಗಿದ್ದು, ಕನಿಷ್ಠ 33% ಅರಣ್ಯ ಇದ್ದರೆ ಮಾತ್ರ ಪರಿಸರ ಸಮತೋಲನ ಸಾಧ್ಯವಿದೆ. ಆದ್ದರಿಂದ ಪ್ರತಿಯೊಬ್ಬ ಪರಿಸರ ಸಂರಕ್ಷಣೆಗೆ ಮುಂದಾಗಬೇಕು ಎಂದರು.

ಅರಣ್ಯ ಪ್ರದೇಶದಲ್ಲಿ ಇರುವ ಸಾವಿರಾರು ಎಕರೆ ಅರಣ್ಯ ಭೂಮಿಯನ್ನು ಉಳಿಸಿ ಸಂರಕ್ಷಿಸಿ ಮುಂದಿನ ಪೀಳಿಗೆಗೆ ನೀಡುವ ಅನಿವಾರ್ಯತೆ ಇದೆ. ಆಧುನಿಕತೆ ಬೆಳೆದಂತೆ ಅದು ಭೂಮಿಗೆ ಕಂಟಕವಾಗುತ್ತಿದೆ. ಅದರ ವ್ಯತಿರಿಕ್ತ ಪರಿಣಾಮ ಈಗಾಗಲೇ ಅರಿವಾಗಿದೆ. ಭೂಮಿಗೆ ಕಂಟಕವಾದರೆ ಮನುಷ್ಯರಿಗೆ ಮಾತ್ರವಲ್ಲ, ಯಾವುದೇ ಜೀವಿಗಳಿಗೆ ಉಳಿಗಾಲವಿಲ್ಲ. ಈ ಭೂಮಿಯ ರಕ್ಷಣೆಯ ಬಗ್ಗೆ ಜಾಗ್ರತೆ ಮೂಡಿಸಲು ವಿಶ್ವ ಭೂಮಿ ದಿನವನ್ನು ಆಚರಿಸಲಾಗುವುದು ಎಂದು ಕಲಾವಿದ ದೀಪಕ್ ಮಕ್ಕಳಲ್ಲಿ ಜಾಗೃತಿ ಮೂಡಿಸಿದರು.

ಕಾರ್ಯಕ್ರಮದಲ್ಲಿ ಭುವನ್, ವಿಸ್ಮಿತ, ಚೆರಿತ, ಚಿನ್ಮಯ್, ಅನುಷ್ಕಾ, ಗಗನ್ಯ ಸೇರಿದಂತೆ ಇನ್ನಿತರರು ಉಪಸ್ಥಿತರಿದ್ದರು.

ಸನ್ಮಾನ....



ದ್ವಿತೀಯ ಪಿಯುಸಿ ಪರೀಕ್ಷೆಯಲ್ಲಿ ಅತ್ಯುನ್ನತ ಶ್ರೇಣಿಯಲ್ಲಿ (542) ತೇರ್ಗಡೆ ಹೊಂದಿದ ಮೈಸೂರು ತಾಲೂಕು ಜಯಪುರ ಗ್ರಾಮದ ರೈತ ರಂಗಸ್ವಾಮಿ ಅವರ ಪುತ್ರಿ ಆರ್.ದೀಪಾ ಅವರನ್ನು ಸಮಾಜ ಸೇವಕ ಎಸ್.ಶ್ರೀಕಾಂತ್, 5 ಸಾವಿರ ರೂ. ಧನಸಹಾಯ, ವಾಣಿಜ್ಯ ಪದವಿ ಪುಸ್ತಕಗಳನ್ನು ನೀಡಿ, ಸನ್ಮಾನಿಸಿದರು. ಜಯಪುರ ಗ್ರಾಮದ ವಾಲ್ಮೀಕಿ ಸಂಘದ ಪದಾಧಿಕಾರಿಗಳು ಉಪಸ್ಥಿತರಿದ್ದರು.

ರೈತರ ಮಕ್ಕಳ ತರಬೇತಿಗೆ ಅರ್ಜಿ ಆಹ್ವಾನ

ಮೈಸೂರು,ಏ.22– ತೋಟಗಾರಿಕೆ ಇಲಾಖೆ ವತಿಯಿಂದ 2025–26ನೇ ಸಾಲಿನ ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರ ಕಚೇರಿಯ ಅಧೀನ ಮೈಸೂರಿನ ರಂಗಸಮುದ್ರ ತೋಟಗಾರಿಕೆ ತರಬೇತಿ ಕೇಂದ್ರದಲ್ಲಿ ಮೈಸೂರು, ಚಾಮರಾಜನಗರ ಜಿಲ್ಲೆಯ ರೈತರ ಮಕ್ಕಳ ಮಹಿಳಾ ಮತ್ತು ಪುರುಷ ಅಭ್ಯರ್ಥಿಗಳಿಗೆ 10 ತಿಂಗಳ ತರಬೇತಿ ಕಾರ್ಯಕ್ರಮ ಆಯೋಜಿಸಿದ್ದು, ಏ.25ರವರೆಗೆ ಅರ್ಜಿ ಸಲ್ಲಿಕೆ ವಿಸ್ತರಿಸಲಾಗಿದೆ.

ಎಸ್‌ಎಸ್‌ಎಲ್‌ಸಿಯಲ್ಲಿ ಉತ್ತೀರ್ಣರಾಗಿರುವ ರೈತ ಮಕ್ಕಳ ಮಹಿಳಾ ಮತ್ತು ಪುರುಷ ಅಭ್ಯರ್ಥಿಗಳಲ್ಲಿ ಸಾಮಾನ್ಯ ಅಭ್ಯರ್ಥಿಗಳಿಗೆ 18–30 ವರ್ಷ ಹಾಗೂ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡದ ಅಭ್ಯರ್ಥಿಗಳಿಗೆ 18–33 ವರ್ಷ ಹಾಗೂ ಮಾಜಿ ಸೈನಿಕರಿಗೆ 33–65 ವರ್ಷದೊಳಗಿರುವ ಆಸಕ್ತರು ಅರ್ಜಿ ಸಲ್ಲಿಸಬಹುದು. ಅರ್ಜಿ ಫಾರಂಗಳನ್ನು https://horticul turedir.karnataka.gov.in ಮೂಲಕ ಡೌನ್‌ಲೋಡ್ ಮಾಡಿಕೊಳ್ಳಬಹುದು. ಮಾಹಿತಿಗೆ ದೂ.ಸಂ.0821–2977572.

ದೇಶ – ವಿದೇಶ

ತಪ್ಪಿದ ವಿಮಾನ ದುರಂತ: 282 ಪ್ರಯಾಣಿಕರು ಪಾರು



ಫ್ಲೋರಿಡಾ: ಅಮೆರಿಕದಲ್ಲಿ ಭೀಕರ ವಿಮಾನ ದುರಂತ ಸಂಭವಿಸಿ ಕೂದಲೆಳೆ ಅಂತರದಲ್ಲಿ ತಪ್ಪಿದ್ದು, 282 ಪ್ರಯಾಣಿಕರಿದ್ದ ಡೆಲ್ಟಾ ವಿಮಾನದ ಎರಡೂ ಎಂಜಿನ್‌ಗೆ ಬೆಂಕಿ ಹೊತ್ತಿದ ಘಟನೆ ವರದಿಯಾಗಿದೆ. ಸೋಮವಾರ (ಸ್ಥಳೀಯ ಸಮಯ) ಒರ್ಲ್ಯಾಂಡೊ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣದಲ್ಲಿ ಡೆಲ್ಟಾ ಏರ್‌ಲೈನ್ಸ್ ವಿಮಾನ ಟೇಕ್ ಆಫ್ ಆಗುವಾಗ ಎರಡೂ ಎಂಜಿನ್‌ಗೆ ಬೆಂಕಿ ಹೊತ್ತಿಕೊಂಡಿದೆ. ಕೂಡಲೇ ಪೈಲಟ್ ವಿಮಾನವನ್ನು ನಿಲ್ಲಿಸಿದ್ದು, ಪ್ರಯಾಣಿಕರನ್ನು ತುರ್ತು ಸ್ಲೈಡ್‌ಗಳ ಮೂಲಕ ಸ್ಥಳಾಂತರಿಸಲಾಗಿದೆ. ಫೆಡರಲ್ ಏವಿಯೇಷನ್ ಅಡ್ಮಿನಿಸ್ಟ್ರೇಷನ್ ಮತ್ತು ಡೆಲ್ಟಾ ಏರ್‌ಲೈನ್ಸ್ ಅನ್ನು ಉಲ್ಲೇಖಿಸಿದೆ. ಅಟ್ಲಾಂಟಾಗೆ ತೆರಳುತ್ತಿದ್ದ ವಿಮಾನವು ರನ್‌ವೇಗೆ ಹೊರಟಾಗ ಎರಡು ಎಂಜಿನ್‌ಗಳಲ್ಲಿ ಒಂದು ಬೆಂಕಿಗೆ ಆಹುತಿಯಾಯಿತು. ಟರ್ಮಿನಲ್‌ನಲ್ಲಿ ಪ್ರಯಾಣಿಕರೊಬ್ಬರು ವಿಡಿಯೋ ಸೆರೆ ಹಿಡಿದಿದ್ದು, ವಿಮಾನದ ಬಲ ಎಂಜಿನ್‌ನಿಂದ ಜ್ವಾಲೆ ಹೊರ ಬರುತ್ತಿರುವ ವಿಡಿಯೋ ವೈರಲ್ ಆಗಿದೆ. ಇನ್ನು ಘಟನೆಯ ಬಗ್ಗೆ ಎಫ್‌ಎಎ ತನಿಖೆಯನ್ನು ಪ್ರಾರಂಭಿಸಿದೆ.

ಗುಜರಾತ್: ತರಬೇತಿ ವಿಮಾನ ಪತನ; ಪೈಲಟ್ ಸಾವು



ಅಮ್ರೇಲಿ: ಖಾಸಗಿ ವಿಮಾನಯಾನ ಅಕಾಡೆಮಿಗೆ ಸೇರಿದ ತರಬೇತಿ ವಿಮಾನವೊಂದು ವಸತಿ ಪ್ರದೇಶದಲ್ಲಿ ಪತನಗೊಂಡು ಬೆಂಕಿ ಹೊತ್ತಿಕೊಂಡ ಪರಿಣಾಮ ಓರ್ವ ಟ್ರೈನಿ ಪೈಲಟ್ ಸಾವನ್ನಪ್ಪಿರುವ ಘಟನೆ ಗುಜರಾತ್‌ನ ಅಮ್ರೇಲಿಯಲ್ಲಿ ನಡೆದಿದೆ. ಮಂಗಳವಾರ ಮಧ್ಯಾಹ್ನ 12:30ರ ಸುಮಾರಿಗೆ ಅಮ್ರೇಲಿ ಪಟ್ಟಣದ ಗಿರಿಯಾ ರಸ್ತೆಯ ವಸತಿ ಪ್ರದೇಶದಲ್ಲಿನ ಮರವೊಂದರ ಮೇಲೆ ಬಿದ್ದ ವಿಮಾನ ತದನಂತರ ನೆಲಕ್ಕೆ ಬಿದ್ದು ಪತನಗೊಂಡಿದೆ. ಇದಕ್ಕೆ ನಿಖರ ಕಾರಣ ತಿಳಿದುಬಂದಿಲ್ಲ.

ಅಪಘಾತ ಸಂಭವಿಸಿದಾಗ ಪೈಲಟ್ ಒಬ್ಬರೇ ವಿಮಾನದಲ್ಲಿದ್ದರು ಎನ್ನಲಾಗಿದೆ. ಅಮ್ರೇಲಿ ವಿಮಾನ ನಿಲ್ದಾಣದಿಂದ ಟೇಕ್ ಆಫ್ ಆದ ವಿಮಾನ ಶಾಸ್ತ್ರಿನಗರದ ಬಳಿ ಪತನಗೊಂಡ ನಂತರ ಅದಕ್ಕೆ ಬೆಂಕಿ ಹೊತ್ತಿಕೊಂಡಿದ್ದು, ಧಗಧಗನೆ ಹೊತ್ತಿ ಉರಿದಿದೆ. ವಿಮಾನ ನಿಲ್ದಾಣದಿಂದ ಕಾರ್ಯನಿರ್ವಹಿಸುವ ಏವಿಯೇಷನ್ ಅಕಾಡೆಮಿ ತರಬೇತಿ ವಿಮಾನ ವಸತಿ ಪ್ರದೇಶಕ್ಕೆ ಅಪ್ಪಳಿಸಿದೆ. ಪರಿಣಾಮ ಟ್ರೈನಿ ಪೈಲಟ್ ಅಪಘಾತದಲ್ಲಿ ಸಾವನ್ನಪ್ಪಿದ್ದು, ವಿಮಾನ ಬೆಂಕಿಯಲ್ಲಿ ಸುಟ್ಟು ಕರಕಲಾಗಿದೆ. ಅಪಘಾತದಲ್ಲಿ ಬೇರೆ ಯಾರಿಗೂ ಗಾಯವಾಗಿಲ್ಲ ಎಂದು ಅಮ್ರೇಲಿ ಎಸ್ಪಿ ಖಾರತ್ ತಿಳಿಸಿದ್ದಾರೆ.

ಲೆಬನಾನ್ ಸೇನಾ ವಾಹನದಲ್ಲಿ ಸ್ಫೋಟ: ಸೇನಾಧಿಕಾರಿ ಸಹಿತ 5 ಮಂದಿ ಸಾವು

ಬೈರೂತ್: ದಕ್ಷಿಣ ಲೆಬನಾನ್‌ನ ಕ್ಲೇಬೆ–ಬ್ರೇಕೆ ಹೆದ್ದಾರಿಯಲ್ಲಿ ಮದ್ದುಗುಂಡುಗಳನ್ನು ಸಾಗಿಸುತ್ತಿದ್ದ ಮಿಲಿಟರಿ ವಾಹನದಲ್ಲಿ ಸಂಭವಿಸಿದ ಸ್ಫೋಟದಲ್ಲಿ ಸೇನಾಧಿಕಾರಿ, ಇಬ್ಬರು ಯೋಧರ ಸಹಿತ ಐವರು ಮೃತಪಟ್ಟಿರುವುದಾಗಿ ವರದಿಯಾಗಿದೆ. ಇತ್ತೀಚಿನ ಯುದ್ಧದಿಂದ ಉಳಿದ ಮದ್ದುಗುಂಡುಗಳನ್ನು ತುಂಬಿಸಿದ್ದ ಸೇನಾ ವಾಹನದಲ್ಲಿ ಸ್ಫೋಟ ಸಂಭವಿಸಿದ್ದು ವಾಹನದಲ್ಲಿದ್ದ ಸೇನಾಧಿಕಾರಿ ಮತ್ತು ಇಬ್ಬರು ಯೋಧರು, ಸಮೀಪದ ಕಾರಿನಲ್ಲಿದ್ದ ಮಹಿಳೆ ಹಾಗೂ ಆಕೆಯ ಮಗು ಮೃತಪಟ್ಟಿದ್ದು ಇತರ ಹಲವರು ಗಾಯಗೊಂಡಿರುವುದಾಗಿ ಲೆಬನಾನ್ ಸೇನಾ ಕಮಾಂಡ್ ಹೇಳಿದೆ. ಸ್ಫೋಟ ಸಂಭವಿಸಿದ ಸಂದರ್ಭದಲ್ಲೇ ಸಮೀಪದ ಅರ್ನೌನ್, ಕೆಫಾರ್ ಟಿಬ್ನಿಟ್ ನಗರಗಳ ನಡುವೆ ಇರುವ ಜಲ್‌ಶಿಹಾಬ್ ಪ್ರದೇಶದಲ್ಲಿ ಇಸ್ರೇಲ್ ವೈಮಾನಿಕ ದಾಳಿ ನಡೆಸಿತ್ತು. ಹೌಲಾ ಪ್ರದೇಶದಲ್ಲಿ ನಡೆದ ಪ್ರತ್ಯೇಕ ಕ್ಷಿಪಣಿ ದಾಳಿಯಲ್ಲಿ ಒಬ್ಬ ಸಾವನ್ನಪ್ಪಿದ್ದಾನೆ. ಕವಾಥರಿಯೆಹ್ ಅಲ್–ಸಿಯಾದ್ ಅಲ್–ಶರ್ಕಿಯಾದಲ್ಲಿ ಕಾರೊಂದನ್ನು ಗುರಿಯಾಗಿಸಿ ನಡೆದ ಮಾರ್ಗದರ್ಶಿ ಕ್ಷಿಪಣಿ ಹೊಂದಿದ್ದ ಡ್ರೋನ್ ದಾಳಿಯಲ್ಲಿ ಹೆಜ್ಬುಲ್ಲಾದ ಬೆಟಾಲಿಯನ್‌ನ ಡೆಪ್ಯುಟಿ ಕಮಾಂಡರ್ ಹುಸೇನ್ ಅಲಿ ಸಾವನ್ನಪ್ಪಿರುವುದಾಗಿ ಇಸ್ರೇಲ್ ಸೇನೆ ತಿಳಿಸಿದೆ.

ನಟ ಟೈಗರ್ ಶ್ರಾಫ್‌ಗೆ ಜೀವ ಬೆದರಿಕೆ: ಸುಳ್ಳು ಮಾಹಿತಿ ನೀಡಿದ್ದ ವ್ಯಕ್ತಿ ಬಂಧನ



ಮುಂಬೈ: ಬಾಲಿವುಡ್ ನಟ ಟೈಗರ್ ಶ್ರಾಫ್ ಅವರಿಗೆ ಕೊಲೆ ಬೆದರಿಕೆ ಇದೆ ಎಂದು ಮುಂಬೈ ಪೊಲೀಸ್ ನಿಯಂತ್ರಣ ಕೊಠಡಿಗೆ ಸುಳ್ಳು ಮಾಹಿತಿ ನೀಡಿದ ಆರೋಪದ ಮೇಲೆ ಪಂಜಾಬ್ ಮೂಲದ 35 ವರ್ಷದ ವ್ಯಕ್ತಿಯನ್ನು ಬಂಧಿಸಲಾಗಿದೆ. ಖಾರ್ ಪೊಲೀಸ್ ಠಾಣೆಯ ಅಧಿಕಾರಿ ಪ್ರಕಾರ, ಸೋಮವಾರ, ಮುಂಬೈ ಪೊಲೀಸ್ ನಿಯಂತ್ರಣ ಕೊಠಡಿಗೆ ಪಂಜಾಬ್‌ನಿಂದ ಕರೆ ಮಾಡಿದ್ದ ಮಾಣಿಕ್ ಕುಮಾರ್ ಸುಜಿಂದರ್ ಸಿಂಗ್ ಎಂಬ ವ್ಯಕ್ತಿ, ಟೈಗರ್ ಶ್ರಾಫ್ ಅವರ ಹತ್ಯೆಗೆ ಸುಪಾರಿ ನೀಡಲಾಗಿದ್ದು, ಕೆಲ ವ್ಯಕ್ತಿಗಳಿಗೆ ಆಯುಧ ಹಾಗೂ 2 ಲಕ್ಷ ನೀಡಲಾಗಿದೆ ಎಂದು ಹೇಳಿದ್ದ. ಅಲ್ಲದೇ ಕೆಲವು ಭದ್ರತಾ ಏಜೆನ್ಸಿಯವರಿಂದ ಟೈಗರ್ ಶ್ರಾಫ್ ಅವರನ್ನು ಕೊಲ್ಲಲು ಸಿದ್ಧತೆ ನಡೆಯುತ್ತಿದೆ ಎಂದೂ ಹೇಳಿದ್ದ. ಪ್ರಕರಣದ ತನಿಖೆ ನಡೆಸಿದ ಪೊಲೀಸರಿಗೆ ಸಿಂಗ್ ನೀಡಿದ್ದ ಮಾಹಿತಿ ಸುಳ್ಳು ಎಂದು ಗೊತ್ತಾಗಿದೆ. ಈ ಸಂಬಂಧ ಮುಂಬೈ ಪೊಲೀಸರು ಖಾರ್ ಉಪನಗರದಲ್ಲಿ ಪ್ರಕರಣ ದಾಖಲಿಸಿದ್ದು, ಪಂಜಾಬ್‌ನ ಅಧಿಕಾರಿಗಳ ಸಹಕಾರದಿಂದ ಆತನನ್ನು ಬಂಧಿಸಿದ್ದಾರೆ. ಸದ್ಯ ಆರೋಪಿಯನ್ನು ಮುಂಬೈಗೆ ತರಲಾಗುತ್ತಿದೆ ಎಂದು ಅಧಿಕಾರಿಯೊಬ್ಬರು ತಿಳಿಸಿದ್ದಾರೆ.

ಅನುದಾನ ಸ್ಥಗಿತ: ಟ್ರಂಪ್ ವಿರುದ್ಧ ಕೇಸ್ ಹಾಕಿದ ಹಾರ್ವರ್ಡ್ ವಿವಿ



ಬೋಸ್ಟನ್: ಅನುದಾನ ಸ್ಥಗಿತಕ್ಕೆ ಸಂಬಂಧಿಸಿದಂತೆ ಹಾರ್ವರ್ಡ್ ವಿಶ್ವವಿದ್ಯಾಲಯ ಮತ್ತು ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ನಡುವಿನ ಸಂಘರ್ಷ ತಾರಕಕ್ಕೇರಿದ್ದು, ಇದೀಗ ಹಾರ್ವರ್ಡ್ ವಿವಿ ಟ್ರಂಪ್ ಆಡಳಿತದ ವಿರುದ್ಧ ಮೊಕದ್ದಮೆ ದಾಖಲಿಸಲು ಮುಂದಾಗಿದೆ.

ಟ್ರಂಪ್ ಆಡಳಿತ ಕ್ಯಾಂಪಸ್‌ನಲ್ಲಿ ಕ್ರಿಯಾಶೀಲತೆಯನ್ನು ಮಿತಿಗೊಳಿಸುವ ಬೇಡಿಕೆಗಳನ್ನು ಧಿಕ್ಕರಿಸುವುದಾಗಿ ಸಂಸ್ಥೆ ಹೇಳಿದ್ದ ಹಾರ್ವರ್ಡ್ ವಿವಿ ಇದೀಗ 2.2 ಶತಕೋಟಿ ಡಾಲರ್‌ಗಿಂತ ಹೆಚ್ಚಿನ ಅನುದಾನ ಸ್ಥಗಿತಗೊಳಿಸುವಿಕೆಯನ್ನು ನಿಲ್ಲಿಸಲು ಮೊಕದ್ದಮೆ ಹೂಡಿರುವುದಾಗಿ ಪ್ರಕಟಿಸಿದೆ. ಟ್ರಂಪ್ ಆಡಳಿತವು ಫೆಡರಲ್ ನಿಧಿಯನ್ನು ತಡೆಹಿಡಿಯುವ ಮೂಲಕ ಶೈಕ್ಷಣಿಕ ನಿರ್ಧಾರಗಳ ಮೇಲೆ ಹಿಡಿತ ಸಾಧಿಸಲು ಪ್ರಯತ್ನಿಸುತ್ತಿದೆ ಎಂದು ಆರೋಪಿಸಿ ಮ್ಯಾಸಚೂಸೆಟ್ಸ್ ನ್ಯಾಯಾಲಯದಲ್ಲಿ ಹಾರ್ವರ್ಡ್ ವಿವಿ ಮೊಕದ್ದಮೆ ಹೂಡಿದೆ. ಹಣಕಾಸಿನ ನೆರವು ನೀಡದೆ ಶೈಕ್ಷಣಿಕ ನಿರ್ಧಾರಗಳ ಮೇಲೆ ಹಿಡಿತ ಸಾಧಿಸಲು ಪ್ರಯತ್ನಿಸುತ್ತಿದೆ ಎಂದು ವಿವಿ ಮೊಕದ್ದಮೆಯಲ್ಲಿ ಹೇಳಲಾಗಿದೆ. ಟ್ರಂಪ್ ಆಡಳಿತವು ಗುರಿಯಾಗಿಸಿಕೊಂಡಿರುವ ಇತರ ಶಿಕ್ಷಣ ಸಂಸ್ಥೆಗಳ ಹೆಸರನ್ನೂ ದೂರಿನಲ್ಲಿ ಉಲ್ಲೇಖಿಸಲಾಗಿದೆ.

ಹುಲಿ ಸೆರೆ ಕಾರ್ಯಾಚರಣೆ; ಸ್ಥಳಕ್ಕೆ ಪೊನ್ನಣ್ಣ ಭೇಟಿ


ಹುಲಿ ಸೆರೆ ಕಾರ್ಯಾಚರಣೆ ಸ್ಥಳಕ್ಕೆ ಶಾಸಕ ಎ.ಎಸ್.ಪೊನ್ನಣ್ಣ ಭೇಟಿ ನೀಡಿದರು.

ಮಡಿಕೇರಿ, ಏ.22– ಜಿಲ್ಲೆಯ ಬಿರುನಾಣಿ ಗ್ರಾಮ ವ್ಯಾಪ್ತಿಯ ತೆರಾಲು ಗ್ರಾಮ ವ್ಯಾಪ್ತಿ ಸೇರಿದಂತೆ ಸುತ್ತಮುತ್ತಲಿನ ಪ್ರದೇಶಗಳಲ್ಲಿ ಕೈಗೊಳ್ಳಲಾಗಿರುವ ಹುಲಿ ಹಿಡಿಯುವ ಕಾರ್ಯಾಚರಣೆ ಸ್ಥಳಕ್ಕೆ ಶಾಸಕ ಎ.ಎಸ್.ಪೊನ್ನಣ್ಣ ಭೇಟಿ ನೀಡಿ ಉಪ ಅರಣ್ಯ ಸಂರಕ್ಷಣಾಧಿಕಾರಿ ಹಾಗೂ ಸ್ಥಳೀಯರ ಜೊತೆ ಸುದೀರ್ಘವಾಗಿ ಚರ್ಚಿಸಿದರು.

ತೆರಾಲು, ಟಿ.ಶೆಟ್ಟಿಗೇರಿ, ಶ್ರೀಮಂಗಲ ಸೇರಿದಂತೆ ಸುತ್ತಮುತ್ತಲಿನ ವ್ಯಾಪ್ತಿಯಲ್ಲಿ ಹುಲಿಯು ಆಗಾಗ ಕಾಣಿಸಿಕೊಳ್ಳುತ್ತಿದ್ದು, ಭಯದಿಂದ ಜೀವಿಸುವಂತಾಗಿದೆ. ಆದ್ದರಿಂದ ಹುಲಿಯನ್ನು ಸೆರೆ ಹಿಡಿಯುವಂತಾಗಬೇಕು ಎಂದು ಸ್ಥಳೀಯರು ಕೋರಿದರು.

ಅರಣ್ಯ ಅಧಿಕಾರಿಗಳು, ಗ್ರಾಮ ಪಂಚಾಯಿತಿ ಹಾಗೂ ಸ್ಥಳೀಯರು ಒಳಗೊಂಡ ವಾಟ್ಸ್‌ಆಪ್ ಗುಂಪು ಮಾಡಿ, ತಕ್ಷಣವೇ ಮಾಹಿತಿ ನೀಡಿದ್ದಲ್ಲಿ ಹುಲಿಯನ್ನು ಸೆರೆ ಹಿಡಿಯಲು ಸಹಕಾರಿಯಾಗುತ್ತದೆ. ಆ ನಿಟ್ಟಿನಲ್ಲಿ ಸ್ಥಳೀಯರು ಸಹಕರಿಸುವಂತೆ ವನ್ಯಜೀವಿ ವಿಭಾಗದ ಉಪ ಅರಣ್ಯ ಸಂರಕ್ಷಣಾಧಿಕಾರಿ ನೆಹರು ಕೋರಿದರು.

ಉಪ ಅರಣ್ಯ ಸಂರಕ್ಷಣಾಧಿಕಾರಿ ಜಗನ್ನಾಥ್ ಇರ್ಪು ಅವರಿಂದ ಕುಟುಂಬಾಲವರಿಗೂ ಹುಲಿಯ ಚಲನವಲನದ ಬಗ್ಗೆ ನಿಗಾ ವಹಿಸಲಾಗುವುದು. ಈ ಸಂಬಂಧ ಕ್ಯಾಂಪ್‌ಗಳನ್ನು ಮಾಡಿ ಹುಲಿ ಸೆರೆ ಹಿಡಿಯಲು ಕಾರ್ಯಾಚರಣೆ ಕೈಗೊಳ್ಳಲಾಗಿದೆ ತೆರಾಲು ಭಾಗವು ಬ್ರಹ್ಮಗಿರಿ ವನ್ಯಜೀವಿ ವ್ಯಾಪ್ತಿಯಲ್ಲಿ ಬರಲಿದ್ದು, ಕಾಡಂಚಿನಲ್ಲಿ ವಾಸಿಸುವ ಜನರಿಗೆ ಸುರಕ್ಷತೆ ಒದಗಿಸುವುದು ಅಗತ್ಯವಾಗಿದೆ. ಆ ನಿಟ್ಟಿನಲ್ಲಿ ಅಗತ್ಯ ಕ್ರಮ ಕೈಗೊಳ್ಳುವಂತೆ ಸೂಚಿಸಿದರು.

ಹುಲಿ ಕಾರ್ಯಾಚರಣೆಯಲ್ಲಿ ಪಾಲ್ಗೊಂಡಿರುವ ಅರಣ್ಯ ಸಿಬ್ಬಂದಿಗಳ ಜೊತೆ ಚರ್ಚಿಸಿದ ಪೊನ್ನಣ್ಣ ಅರಣ್ಯ ಇಲಾಖೆ ಸಿಬ್ಬಂದಿಗಳು ಪೊಲೀಸರು ಹಾಗೂ ಸ್ವಯಂಸೇವಕರು ಜೀವದ ಹಂಗು ತೊರೆದು ಕರ್ತವ್ಯ ನಿರ್ವಹಿಸುವುದು ಶ್ಲಾಘನೀಯ. ತಮ್ಮ ರಕ್ಷಣೆ ಜೊತೆಗೆ ಕಾಡಂಚಿನ ಜನರ ರಕ್ಷಣೆಯೂ ಅತ್ಯಗತ್ಯ. ಆ ನಿಟ್ಟಿನಲ್ಲಿ ಕಾಡಂಚಿನ ಜನರ ಆತಂಕವನ್ನು ದೂರ ಮಾಡಿ ಹುಲಿಯನ್ನು ಸೆರೆ ಹಿಡಿಯುವಂತಾಗಬೇಕು ಎಂದು ಪೊನ್ನಣ್ಣ ಸಲಹೆ ಮಾಡಿದರು.

ರಾಜ್ಯ ವನ್ಯಜೀವಿ ಮಂಡಳಿ ಸದಸ್ಯ ಸಂಕೇತ್ ಪೂವಯ್ಯ ಮಾತನಾಡಿ, ಕ್ಷೇತ್ರದಲ್ಲಿ ರಾಜ್ಯದಲ್ಲಿಯೇ ಅತ್ಯಧಿಕ ಮಾನವ ವನ್ಯಜೀವಿ ಸಂಘರ್ಷವಿದೆ. ಶಾಸಕ ಪೊನ್ನಣ್ಣ ಮೂಲಕ ಕಾನೂನುಗಳನ್ನು ಮಾರ್ಪಾಡು ಮಾಡಿಸುವ ಹಾಗೂ ವೈಜ್ಞಾನಿಕವಾಗಿ ಕಾಡು ಪ್ರಾಣಿಗಳನ್ನು ಹಿಡಿದು ಸ್ಥಳಾಂತರಿಸುವ ಅಥವಾ ಪುನರ್ವಸತಿ ಕಲ್ಪಿಸುವ ನಿಟ್ಟಿನಲ್ಲಿ ಯೋಜನೆಗಳನ್ನು ರೂಪಿಸಲಾಗುತ್ತಿದೆ. ಎಂದರು.

ಪೊನ್ನಂಪೇಟೆ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಮೀದೇರಿರ ನವೀನ್, ಪೊನ್ನಂಪೇಟೆ ತಾಲೂಕು ಗ್ಯಾರಂಟಿ ಅನುಷ್ಠಾನ ಸಮಿತಿ ಅಧ್ಯಕ್ಷ ಕಾಳಿಮಾಡ ಪ್ರಶಾಂತ್, ಟಿ. ಶೆಟ್ಟಿಗೇರಿ ವಲಯ ಕಾಂಗ್ರೆಸ್ ಅಧ್ಯಕ್ಷ ತೀತರ ಪ್ರಭು, ಬಿರುನಾಣಿ ವಲಯ ಅಧ್ಯಕ್ಷ ಕುಪ್ಪಣಮಾಡ ಪ್ರೀತಮ್, ವಲಯ ಅರಣ್ಯಾಧಿಕಾರಿ ಸಂತೋಷ್ ಹೂಗಾರ್, ಪೊನ್ನಂಪೇಟೆ ವಲಯ ಅರಣ್ಯಾಧಿಕಾರಿ ಶಂಕರ್, ಉಪ ಅರಣ್ಯಾಧಿಕಾರಿ ಶ್ರೀಶೈಲ ಹಾಗೂ ಗ್ರಾಮಸ್ಥರು ಪಾಲ್ಗೊಂಡಿದ್ದರು.

ವಕ್ಫ್ ತಿದ್ದುಪಡಿ ವಿರೋಧಿಸಿ ಕಾಂಗ್ರೆಸ್ ಪ್ರತಿಭಟನೆ



ವಕ್ಫ್ ತಿದ್ದುಪಡಿ ವಿರೋಧಿಸಿ ಕಾಂಗ್ರೆಸ್ ಆಯೋಜಿಸಿದ್ದ ಸಭೆಯಲ್ಲಿ ಕೆಪಿಸಿಸಿ ವಕ್ತಾರ ಎಂ.ಲಕ್ಷ್ಮಣ್ ಮಾತನಾಡಿದರು.

ಮಡಿಕೇರಿ, ಏ.22– ಕೇಂದ್ರ ಸರ್ಕಾರದ ವಕ್ಫ್ ತಿದ್ದುಪಡಿ ಕಾಯ್ದೆ ವಿರೋಧಿಸಿ ಕೊಡಗು ಜಿಲ್ಲಾ ಕಾಂಗ್ರೆಸ್ ಮತ್ತು ಅಲ್ಪ ಸಂಖ್ಯಾತರ ಘಟಕದ ವತಿಯಿಂದ ಪ್ರತಿಭಟನೆ ನಡೆಸಲಾಯಿತು.

ಜಿಲ್ಲಾ ಅಲ್ಪ ಸಂಖ್ಯಾತ ಘಟಕದ ಜಿಲ್ಲಾಧ್ಯಕ್ಷ ಕೆ.ಹನೀಫ್, ಕೆಪಿಸಿಸಿ ವಕ್ತಾರ ಎಂ.ಲಕ್ಷ್ಮಣರ ಮುಂದಾಳತ್ವದಲ್ಲಿ ಮುಸ್ಲಿಂ ಬಾಂಧವರು ಜಾಮೀಯ ಮಸೀದಿ ಮುಂಭಾಗದಿಂದ ಗಾಂಧಿ ಮೈದಾನದವರೆಗೆ ಘೋಷಣೆಗಳ ಸಹಿತ ಪ್ರತಿಭಟನಾ ಮೆರವಣಿಗೆ ನಡೆಸಿದರು.

ವಕ್ಫ್ ತಿದ್ದುಪಡಿ ಮಸೂದೆ ವಿರುದ್ಧ ಕಾನೂನಾತ್ಮಕ ಹೋರಾಟ ರೂಪಿಸುವುದು ಸೂಕ್ತ. ಅಣ್ಣ–ತಮ್ಮನ ರೀತಿಯಲ್ಲಿ ಬದುಕಬೇಕಾದವರ ನಡುವೆ ವಿಂಗಡಿಸುವ ನೀತಿಯನ್ನು ಅಳವಡಿಸುವ ಅಗತ್ಯವಿಲ್ಲ. ಜನತೆ ಮತ್ತು ಸರಕಾರ ಅಭಿವೃದ್ಧಿಗೆ ಅವಕಾಶ ನೀಡಿದ್ದಾರೆ. ಈ ಹಿನ್ನೆಲೆಯಲ್ಲಿ ತಾವು ಮತ್ತು ಶಾಸಕ ಪೊನ್ನಣ್ಣ ಅವರು ಎಲ್ಲಾ ಸಮುದಾಯದ ಅಭಿವೃದ್ಧಿಗೆ ಶ್ರಮಿಸುತ್ತೇವೆ ಎಂದು ಶಾಸಕ ಡಾ.ಮಂತರ್ ಗೌಡ ಹೇಳಿದರು.

ಕೆಪಿಸಿಸಿ ವಕ್ತಾರ ಎಂ.ಲಕ್ಷ್ಮಣ್, ಕರ್ನಾಟಕ ರಾಜ್ಯದಲ್ಲಿ ವಕ್ಫ್‌ಗೆ ಸಂಬಂಧಿಸಿದ ಸುಮಾರು 6.50 ಲಕ್ಷ ಏಕರೆ ಜಾಗವಿದ್ದರೆ, ದೇಶದಾದ್ಯಂತ ಸುಮಾರು 37 ಲಕ್ಷ ಏಕರೆ ಜಾಗವಿದೆ. ಇದರ ಒಟ್ಟು ಮೌಲ್ಯ 20 ಲಕ್ಷ ಕೋಟಿ ರೂ.ಗಳಾಗಿದೆ. ಈ ಆಸ್ತಿಯನ್ನು ವಕ್ಫ್‌ಗೆ ಇಲ್ಲದಂತೆ ಮಾಡಲು ಕೇಂದ್ರ ಸರ್ಕಾರ ವಕ್ಫ್ ತಿದ್ದುಪಡಿ ಮಸೂದೆ ಜಾರಿಗೆ ಮುಂದಾಗಿದೆ. ಇದರಿಂದ ಶೇ.90ರಷ್ಟು ಜಾಗ ಸರಕಾರದ ಸುಪರ್ದಿಗೆ ಹೋಗಲಿದೆ ಎಂದು ಆರೋಪಿಸಿದರು.

ಜಿಲ್ಲಾಧ್ಯಕ್ಷ ಧರ್ಮಜಾ ಉತ್ತಪ್ಪ ಮಾತನಾಡಿ, ವಕ್ಫ್ ಅಧೀನದಲ್ಲಿ ರಾಜ್ಯ ವ್ಯಾಪಿ ಲಕ್ಷಾಂತರ ಏಕರೆ ಆಸ್ತಿ ಇದೆ. ಈ ಎಲ್ಲಾ ಆಸ್ತಿಗಳು ನೂರಾರು ವರ್ಷಗಳ ಹಿಂದೆ ದೇವರ ಹೆಸರಿನಲ್ಲಿ ದಾನವಾಗಿ ನೀಡಿದ ಜಾಗವಾಗಿದೆ. ಮಸೀದಿ, ಮದರಸಗಳು ಇಂತಹ ಜಾಗವನ್ನು ಹೊಂದಿಕೊಂಡಿವೆ. ಕೇಂದ್ರದ ಬಿಜೆಪಿ ಸರಕಾರ ವಕ್ಫ್ ತಿದ್ದುಪಡಿ ಕಾಯ್ದೆ ಜಾರಿ ಮಾಡುವ ಮುನ್ನ ಯಾವುದೇ ಚರ್ಚೆ ನಡೆಸದೇ ಸರ್ವಾಧಿಕಾರಿ ಧೋರಣೆಯಿಂದ ಜಾರಿಗೆ ಮುಂದಾಗಿದೆ ಎಂದು ಅಸಮಾಧಾನ ವ್ಯಕ್ತಪಡಿಸಿದರು.

ಕೇಂದ್ರ ಬಿಜೆಪಿ ಸರಕಾರ ಮುಸ್ಲಿಮರನ್ನು ಗುರಿಯಾಗಿಸಿ ವಕ್ಫ್ ತಿದ್ದುಪಡಿ ಎಂಬ ಕರಾಳ ಕಾನೂನನ್ನು ಜಾರಿಗೆ ತರುತ್ತಿದೆ, ಮಾತ್ರವಲ್ಲದೇ ವಕ್ಫ್ ಎಂಬ ಹೆಸರನ್ನೇ ಬದಲಾಯಿಸಿ ಉಮ್ಮೀದ್ ಎಂದು ನಾಮಕರಣ ಮಾಡಿದೆ. ಇಂತಹ ಬಿಜೆಪಿ ಸರಕಾರವನ್ನು ಅಲ್ಪ ಸಂಖ್ಯಾತ ಸಮುದಾಯ ನಂಬಲು ಸಾಧ್ಯವೇ ಎಂದು ಅಲ್ಪ ಸಂಖ್ಯಾತ ಘಟಕದ ಜಿಲ್ಲಾಧ್ಯಕ್ಷ ಕೆ.ಹನೀಫ್ ಪ್ರಶ್ನಿಸಿದರು.

ಗಾಂಧಿ ಮೈದಾನದಲ್ಲಿ ಪ್ರತಿಭಟನೆ ನಡೆಸಿದ ಬಳಿಕ ಜಿಲ್ಲಾಧಿಕಾರಿಗಳ ಮೂಲಕ ಕೇಂದ್ರ ಸರಕಾರಕ್ಕೆ ಮನವಿ ಸಲ್ಲಿಸಲಾಯಿತು. ಈ ಸಂದರ್ಭ ಮೂಡಾ ಅಧ್ಯಕ್ಷ ರಾಜೇಶ್ ಯಲ್ಲಪ್ಪ, ಮಾಜಿ ಅಧ್ಯಕ್ಷೆ ಸುರಯ್ಯಾ ಅಬ್ರಾರ್, ಪಕ್ಷದ ಮುಖಂಡರಾದ ವಿ.ಪಿ.ಶಶಿಧರ್, ನಾಪಂಡ ಮುತ್ತಪ್ಪ, ನೆರವಂಡ ಉಮೇಶ್ ಅಬ್ದುಲ್ ರಜಾಕ್, ಅಬ್ದು ರೆಹಮಾನ್, ಟಿ.ಪಿ.ರಮೇಶ್, ಪಟ್ಟಡ ರಂಜಿ ಪೂಣಚ್ಚ, ರಶೀದ್, ಇಸ್ಮಾಯಿಲ್, ಹಂಸ ಸೇರಿದಂತೆ ಮತ್ತಿತರರು ಹಾಜರಿದ್ದರು.

ಮುದ್ದಂಡ ಕಪ್ ಹಾಕಿ ಉತ್ಸವ: ನಾಳೆ ಪ್ರೀ ಕ್ವಾರ್ಟರ್ ಫೈನಲ್ಸ್


ಚೆಪ್ಪುಡಿರ–ಅಂಜಪರವಂಡ ತಂಡಗಳ ನಡುವಿನ ಪಂದ್ಯಾವಳಿ

ಮಡಿಕೇರಿ, ಏ.22– ಮುದ್ದಂಡ ಕಪ್ ಹಾಕಿ ಉತ್ಸವದಲ್ಲಿ ಏ.22ರಂದು ನಡೆದ ಪ್ರೀ ಕ್ವಾರ್ಟರ್ ಫೈನಲ್ಸ್ ಪಂದ್ಯಾವಳಿಯಲ್ಲಿ ಚೇಂದಂಡ, ಚೆಪ್ಪುಡಿರ, ಮಂಡೇಪಂಡ, ಕುಪ್ಪಂಡ(ಕೈಕೇರಿ) ತಂಡಗಳು ಜಯ ಸಾಧಿಸಿವೆ.

ಏ.23ರ ಪ್ರೀ ಕ್ವಾರ್ಟರ್ ಫೈನಲ್ಸ್ : ಬೆಳಿಗ್ಗೆ 9 ಗಂಟೆಗೆ ನೆಲ್ಲಮಕ್ಕಡ–ಕೋಳೇರ, 10 ಗಂಟೆಗೆ ಕೂತಂಡ–ಅಮ್ಮಣಿಚಂಡ, ಮಧ್ಯಾಹ್ನ 12 ಗಂಟೆಗೆ ನಾಳಿಯಂಡ–ಮದಿಯೊಕ್ಕಡ, 1.30 ಗಂಟೆಗೆ ಕರವಂಡ–ಕಾಂಡಂಡ ತಂಡಗಳ ನಡುವೆ ನಡೆಯಲಿದೆ.

ಜನಿವಾರ ತೆಗೆಸಿದ ಪ್ರಕರಣ

ಬ್ರಾಹ್ಮಣ ವಿದ್ಯಾಭಿವೃದ್ಧಿ ನಿಧಿ ಪ್ರತಿಭಟನೆ


ಸಿಇಟಿ ಪರೀಕ್ಷಾ ಜನಿವಾರ ಪ್ರಕರಣವನ್ನು ಖಂಡಿಸಿ ಬ್ರಾಹ್ಮಣ ವಿದ್ಯಾಭಿವೃದ್ಧಿ ನಿಧಿ ಪ್ರತಿಭಟನೆ ನಡೆಸಿತು.

ಮಡಿಕೇರಿ, ಏ.22– ಸಿಇಟಿ ಪರೀಕ್ಷಾ ಕೇಂದ್ರಗಳಲ್ಲಿ ವಿದ್ಯಾರ್ಥಿಗಳ ಜನಿವಾರ ತೆಗೆಸಿದ ಪ್ರಕರಣವನ್ನು ಖಂಡಿಸಿ ಮತ್ತು ತಪ್ಪಿತಸ್ಥರ ವಿರುದ್ಧ ಕಾನೂನು ಕ್ರಮ ಕೈಗೊಳ್ಳಬೇಕೆಂದು ಆಗ್ರಹಿಸಿ ಕೊಡಗು ಬ್ರಾಹ್ಮಣ ವಿದ್ಯಾಭಿವೃದ್ಧಿ ನಿಧಿ ಪ್ರತಿಭಟನೆ ನಡೆಸಿತು.

ಜಿಲ್ಲಾಧಿಕಾರಿಗಳ ಕಚೇರಿ ಎದುರು ಪ್ರತಿಭಟನೆ ನಡೆಸಿ ಅಸಮಾಧಾನ ವ್ಯಕ್ತಪಡಿಸಿದ ಪ್ರಮುಖರು, ಧಾರ್ಮಿಕ ಭಾವನೆಗಳಿಗೆ ಧಕ್ಕೆ ಉಂಟಾಗುವಂತೆ ವಿದ್ಯಾರ್ಥಿಗಳ ಜನಿವಾರ ತೆಗೆಸಿದ ಕ್ರಮ ಖಂಡನೀಯ, ಈ ತಪ್ಪೆಸಗಿದ ಸಿಬ್ಬಂದಿಗಳ ವಿರುದ್ಧ ಕ್ರಮ ಕೈಗೊಳ್ಳಬೇಕೆಂದು ಒತ್ತಾಯಿಸಿದರು.

ಜನಿವಾರ ಧಾರಣೆಯು ಸನಾತನ ಧರ್ಮದ ಪದ್ಧತಿಯಾಗಿದ್ದು, ಸಂವಿಧಾನದಲ್ಲೂ ಈ ಕುರಿತು ಆಕ್ಷೇಪ ಇಲ್ಲದಿರುವಾಗ ವಿದ್ಯಾರ್ಥಿಗಳ ಮಾನಸಿಕತೆಗೆ ಧಕ್ಕೆ ತರುವ ರೀತಿಯಲ್ಲಿ ನಡೆದುಕೊಂಡ ಸಿಬ್ಬಂದಿಯ ವರ್ತನೆ ಕ್ಷಮಾರ್ಹವಲ್ಲ. ಜನ ಪ್ರತಿನಿಧಿಗಳು, ಸಾಮಾಜಿಕ ಮುಖಂಡರು, ಧಾರ್ಮಿಕ ಮುಖಂಡರು ಒಂದಾಗಿ ದನಿ ಎತ್ತಿದರೆ ಮಾತ್ರ ಇಂತಹ ಘಟನೆಗಳು ಮರುಕಳಿಸದಂತೆ ಮಾಡಲು ಸಾಧ್ಯ ಎಂದು ಅಭಿಪ್ರಾಯಪಟ್ಟರು.

ವಿದ್ಯಾರ್ಥಿಗಳಿಗೆ ಸೂಕ್ತ ಪರಿಹಾರೋಪಾಯವನ್ನು ಸರ್ಕಾರವು ಕಂಡುಕೊಂಡು ಅವರ ಮುಂದಿನ ವಿದ್ಯಾಭ್ಯಾಸಕ್ಕೆ ತೊಂದರೆ ಉಂಟಾಗದಂತೆ ಸಂಬಂಧಪಟ್ಟ ಇಲಾಖೆಗಳಿಗೆ ಮಾರ್ಗದರ್ಶನ ನೀಡಬೇಕು. ಸಿಇಟಿ, ಸರಕಾರಿ, ಖಾಸಗಿ ಸಂಸ್ಥೆಗಳಲ್ಲಿ, ಸ್ಪರ್ಧಾತ್ಮಕ ಪರೀಕ್ಷಾ ಕೇಂದ್ರಗಳಲ್ಲಿ ವ್ಯವಸ್ಥೆಗಳ ದೃಷ್ಟಿಯಿಂದ ತಪಾಸಣೆ ನಡೆಸುವುದು ತಪ್ಪಲ್ಲ, ಆದರೆ ಈ ರೀತಿಯ ಕ್ರಮಗಳಿಂದ ವಿದ್ಯಾರ್ಥಿ ಗಳ ಮನಸ್ಸಿನ ಮೇಲಾಗುವ ಪರಿಣಾಮ ಹಾಗೂ ಹೆತ್ತವರಿಗೆ ಉಂಟಾಗುವ ಕಷ್ಟನಷ್ಟಗಳ ಕುರಿತು ಚಿಂತನೆ ನಡೆಸಬೇಕು ಎಂದು ತಿಳಿಸಿದರು.

ವಿದ್ಯಾಭಿವೃದ್ಧಿ ನಿಧಿಯ ಅಧ್ಯಕ್ಷ ಸಿ.ರಾಮಚಂದ್ರ ಮೂಗೂರು, ಕಾರ್ಯದರ್ಶಿ ಬಿ.ಕೆ.ಜಗದೀಶ್ ಮತ್ತಿತರರು ಪ್ರತಿಭಟನೆಯಲ್ಲಿ ಪಾಲ್ಗೊಂಡು ಹೆಚ್ಚುವರಿ ಜಿಲ್ಲಾಧಿಕಾರಿ ಆರ್.ಐಶ್ವರ್ಯ ಅವರ ಮೂಲಕ ಸರ್ಕಾರಕ್ಕೆ ಮನವಿ ಪತ್ರ ಸಲ್ಲಿಸಿದರು.

ನಕ್ಸಲ್ ಪ್ರಕರಣದ ಆರೋಪಿಗೆ ಬಾಡಿ ವಾರೆಂಟ್; ನ್ಯಾಯಾಲಯಕ್ಕೆ ಹಾಜರುಪಡಿಸಿದ ಪೊಲೀಸರು



ಮಡಿಕೇರಿ, ಏ.22– ನಕ್ಸಲ್ ಪ್ರಕರಣದ ಆರೋಪಿ ಚಂದ್ರು ಅಲಿಯಾಸ್ ತಿರುವೆಂಗಡಂ ಎಂಬಾತನನ್ನು ಇಂದು ಮಡಿಕೇರಿಯ ನ್ಯಾಯಾಲಯಕ್ಕೆ ಹಾಜರುಪಡಿಸಲಾಯಿತು. ಚಂದ್ರು ವಿರುದ್ಧ ಜಿಲ್ಲಾ ನ್ಯಾಯಾಲಯ ಬಾಡಿ ವಾರೆಂಟ್ ಹೊರಡಿಸಿದ್ದ ಹಿನ್ನೆಲೆಯಲ್ಲಿ ಕೇರಳ ರಾಜ್ಯದ ತ್ರಿಶೂರ್ ಜಿಲ್ಲಾ ಕಾರಾಗೃಹದಲ್ಲಿ ನ್ಯಾಯಾಂಗ ಬಂಧನದಲ್ಲಿದ್ದ ಚಂದ್ರು ಅಲಿಯಾಸ್ ತಿರುವೆಂಗಡಂನನ್ನು ಬಿಗಿ ಭದ್ರತೆಯಲ್ಲಿ ಮಡಿಕೇರಿಗೆ ಕರೆತರಲಾಗಿತ್ತು. ಬಳಿಕ ನಗರದ ಹೆಚ್ಚುವರಿ ಸಿವಿಲ್ ಜಡ್ಜ್ ಮತ್ತು ಜೆಎಂಎಫ್‌ಸಿ ನ್ಯಾಯಾಲಯದ ಮುಂದೆ ಹಾಜರುಪಡಿಸಲಾಯಿತು.

ಪ್ರಕರಣದ ಹಿನ್ನೆಲೆ: ನಾಪೋಕ್ಲುವಿನ ನಾಲಡಿ ಗ್ರಾಮದ ಮೆಕ್ಕೆಕೊಪ್ಪ ಕಾಲೋನಿಗೆ 2018ರ ಫೆಬ್ರವರಿ 19 ರಂದು ಮೂವರು ಅಪರಿಚಿತ ವ್ಯಕ್ತಿಗಳು ಹೆಗಲ ಮೇಲೆ ಬಂದೂಕು ಹಾಕಿಕೊಂಡು ಕೆ.ಕೆ.ಪೆಮ್ಮಯ್ಯ ಎಂಬವರ ಲೈನ್ ಮನೆಗೆ ಆಗಮಿಸಿ ತಮಗೆ ಊಟ ಬೇಕು ಎಂದು ಮನೆಯೊಳಗೆ ಅಕ್ರಮ ಪ್ರವೇಶ ಮಾಡಿದ್ದಲ್ಲದೆ ಪೆಮ್ಮಯ್ಯ ಮತ್ತವರ ಪತ್ನಿ ಹಾಗೂ ಕಾರ್ಮಿಕರನ್ನು ಅಕ್ರಮ ಬಂಧನದಲ್ಲಿರಿಸಿದ್ದರು. ಮನೆಯಲ್ಲಿ ಊಟ ಮಾಡಿದ್ದಲ್ಲದೇ, ಅಕ್ಕಿ ಹಾಗೂ ಇತರೆ ಪಡಿತರಗಳನ್ನು ಬಲವಂತವಾಗಿ ಪಡೆದುಕೊಂಡು ಜೀವ ಬೆದರಿಕೆ ಒಡ್ಡಿ ಸಮೀಪದ ತೋಟದೊಳಗೆ ಮರೆಯಾಗಿದ್ದರು.

ನಾಪೋಕ್ಲು ಪೊಲೀಸರು ಸ್ಥಳಕೆ ತೆರಳಿ ತಮ್ಮ ಬಳಿ ಇದ್ದ ನಕ್ಸಲರ ಫೋಟೋವನ್ನು ಪೆಮ್ಮಯ್ಯ ಅವರಿಗೆ ತೋರಿಸಿದ್ದಾರೆ. ಈ ಪೈಕಿ ವಿಕ್ರಂಗೌಡ ಮತ್ತು ಚಂದ್ರು ಎಂಬುವರನ್ನು ಪೆಮ್ಮಯ್ಯ ಅವರು ಗುರುತಿಸಿದ್ದರು. ಪ್ರಕರಣಕ್ಕೆ ಸಂಬಂಧಿಸಿದಂತೆ ಆರೋಪಿ ವಿಕ್ರಂ ಗೌಡ, ಚಂದ್ರು ಅಲಿಯಾಸ್ ತಿರುವೆಂಗಡಂ ಮತ್ತು ಇತರರ ವಿರುದ್ಧ ನಾಪೋಕ್ಲು ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಿಸಿಕೊಂಡು ಪೊಲೀಸರು ಆರೋಪಿಗಳ ವಿರುದ್ಧ ಜಿಲ್ಲಾ ನ್ಯಾಯಾಲಯಕ್ಕೆ ದೋಷಾರೋಪಣಾ ವರದಿಯನ್ನೂ ಸಲ್ಲಿಸಿದ್ದರು. ಈಗಾಗಲೇ ನಕ್ಸಲ್ ಮುಖಂಡ ವಿಕ್ರಂ ಗೌಡ ಪೊಲೀಸ್ ಎನ್‌ಕೌಂಟರ್‌ನಲ್ಲಿ ಮೃತಪಟ್ಟಿದ್ದು, ಇನ್ನೋರ್ವ ಆರೋಪಿ ಚಂದ್ರು ಅಲಿಯಾಸ್ ತಿರುವೆಂಗಡಂನನ್ನು, ನ್ಯಾಯಾಲಯಕ್ಕೆ ಹಾಜರುಪಡಿಸಿ, ಬಳಿಕ ತ್ರಿಶೂರ್ ಜಿಲ್ಲಾ ಕಾರಾಗೃಹಕ್ಕೆ ಕರೆದೊಯ್ಯಲಾಯಿತು.

ಭಗೀರಥ ಜಯಂತಿ ಪೂರ್ವಭಾವಿ ಸಭೆ


ಯಳಂದೂರು ಪಟ್ಟಣದ ತಹಶೀಲ್ದಾರ್ ಕಚೇರಿಯ ಆವರಣದಲ್ಲಿ ಸೋಮವಾರ ಭಗೀರಥ ಜಯಂತಿಯ ಪೂರ್ವಭಾವಿ ಸಭೆ ನಡೆಯಿತು.

ಯಳಂದೂರು,ಏ.22–ಮಹರ್ಷಿ ಭಗೀರಥ ಜಯಂತಿ ಕಾರ್ಯಕ್ರಮದ ಪೂರ್ವಭಾವಿ ಸಭೆ ಪಟ್ಟಣದ ತಹಶೀಲ್ದಾರ್ ಕಚೇರಿ ಸಭಾಂಗಣದಲ್ಲಿ ನಡೆಯಿತು.

ಅದ್ದೂರಿ ಭಗೀರಥ ಜಯಂತಿ ಆಚರಣೆ: ಮೇ4 ರಂದು ಪಟ್ಟಣದ ಸರ್ಕಾರಿ ಪದವಿ ಪೂರ್ವ ಕಾಲೇಜಿನ ಆವರಣದಲ್ಲಿ ಬೆಳ್ಳಿರಥದಲ್ಲಿ ಭಗೀರಥರ ಭಾವಚಿತ್ರವನ್ನು ವಿವಿಧ ಕಲಾತಂಡಗಳೊಂದಿಗೆ ಪಟ್ಟಣದಲ್ಲಿ ಮೆರವಣಿಗೆ ಮಾಡಬೇಕು, 3 ಸಾವಿರ ಮಂದಿ ಈ ಕಾರ್ಯಕ್ರಮದಲ್ಲಿ ಭಾಗವಹಿಸುವ ನಿರೀಕ್ಷೆ ಇದ್ದು, ಇವರಿಗೆ ಊಟದ ವ್ಯವಸ್ಥೆಯನ್ನು ಮಾಡಬೇಕು. ಈ ಸಂಬಂಧ ಅಧಿಕಾರಿಗಳು, ಶಾಸಕರೊಂದಿಗೆ ಚರ್ಚಿಸಿ ಸೂಕ್ತ ಕ್ರಮ ವಹಿಸ ಬೇಕು ಎಲ್ಲೂ ಲೋಪವಾಗದಂತೆ ನೋಡಿಕೊಳ್ಳಬೇಕು ಎಂದು ಜಿಪಂ ಮಾಜಿ ಉಪಾಧ್ಯಕ್ಷ ಜೆ. ಯೋಗೇಶ್ ತಿಳಿಸಿದರು.

ತಹಶೀಲ್ದಾರ್ ಶಿವರಾಜು, ಏ.24 ರಂದು ಮಲೆಮಹದೇಶ್ವರ ಬೆಟ್ಟದಲ್ಲಿ ಸಚಿವ ಸಂಪುಟ ಸಭೆ ನಡೆಯಲಿದ್ದು, ತಹಶೀಲ್ದಾರ್ ಸೇರಿದಂತೆ ವಿವಿಧ ಅಧಿಕಾರಿಗಳು ಕಾರ್ಯನಿರತರಾಗಿದ್ದಾರೆ. ಇದಾದ ಬಳಿಕ ಮುಖಂಡರು ಹಾಗೂ ಅಧಿಕಾರಿಗಳ ಸಭೆ ನಡೆಸಿ ಎಲ್ಲಾ ಸಿದ್ಧತೆಗಳನ್ನು ಮಾಡಲು ಕ್ರಮ ವಹಿಸಲಾಗುವುದು ಎಂದು ಭರವಸೆ ನೀಡಿದರು.

ಪಪಂ ಸದಸ್ಯರಾದ ಮಹೇಶ್, ವೈ.ಜಿ. ರಂಗನಾಥ, ಗ್ಯಾರಂಟಿಯೋಜನೆಯ ತಾಲೂಕು ಅಧ್ಯಕ್ಷ ಕಿನಕಹಳ್ಳಿ ಪ್ರಭುಪ್ರಸಾದ್, ಜಿಪಂ ಉಪಾಧ್ಯಕ್ಷ ಸಿದ್ದರಾಜು, ತಾಪಂ ಸ್ಥಾಯಿ ಸಮಿತಿ ಮಾಜಿ ಅಧ್ಯಕ್ಷ ವೈ.ಕೆ. ಮೋಳೆ ನಾಗರಾಜು, ಕಸಾಪ ಅಧ್ಯಕ್ಷ ಯರಿಯೂರು ನಾಗೇಂದ್ರ, ಉಪ್ಪಾರ ಸೇನಾ ಸಮಿತಿ ಅಧ್ಯಕ್ಷ ನಾಗೇಶ್, ಪ್ರದೀಪ್, ಸರ್ವೇ ಇಲಾಖೆಯ ಉಮೇಶ್, ರಾಜಸ್ವ ನಿರೀಕ್ಷಕ ಯದುಗಿರಿ, ತೋಟಗಾರಿಕಾ ಇಲಾಖೆಯ ರಾಜು ವಿವಿಧ ಇಲಾಖೆಯ ಅಧಿಕಾರಿಗಳು ಲಿಂಗಾಯಿತ, ಉಪ್ಪಾರ ಸಮಾಜದ ಮುಖಂಡರು, ಯಜಮಾನರು ಭಾಗವಹಿಸಿದ್ದರು.

ಸದಾಶಿವರೆಡ್ಡಿ ಮೇಲೆ ಹಲ್ಲೆ, ವಕೀಲರ ಪ್ರತಿಭಟನೆ


ಗ್ರೇಡ್ 2 ತಹಶೀಲ್ದಾರ್ ಶಿವರಾಜು ರವರಿಗೆ ಮನವಿ ಸಲ್ಲಿಸಲಾಯಿತು.

ಯಳಂದೂರು, ಏ.22– ಹಿರಿಯ ವಕೀಲ ಸದಾಶಿವರೆಡ್ಡಿ ಮೇಲೆ ಕೆಲ ಅಪರಿಚಿತರು ಹಲ್ಲೆ ನಡೆಸಿರುವ ಪ್ರಕರಣವನ್ನು ಖಂಡಿಸಿ ತಾಲೂಕು ವಕೀಲರ ಸಂಘದ ಸದಸ್ಯರು ತೋಳಿಗೆ ಕೆಂಪುಪಟ್ಟಿ ಧರಿಸಿ ಪ್ರತಿಭಟನೆ ನಡೆಸಿದರು.

ವಕೀಲರ ಸಂಘದ ಅಧ್ಯಕ್ಷ ರಾಜಣ್ಣ ಮಾತನಾಡಿ, ಏ. 16 ರಂದು ಸದಾಶಿವ ರೆಡ್ಡಿರವರ ಮೇಲೆ ಕೆಲವು ಅಪರಿಚಿತರು ಹಲ್ಲೆ ನಡೆಸಿರುವುದು ಖಂಡನೀಯವಾಗಿದೆ. ಸರ್ಕಾರವು ಈ ಕೃತ್ಯ ಎಸಗಿದವರ ವಿರುದ್ಧ ಕಾನೂನು ಕ್ರಮ ಕೈಗೊಂಡು ಕೂಡಲೇ ಅವರನ್ನು ಬಂಧಿಸಬೇಕು. ವಕೀಲರು ನಿರ್ಭೀತಿಯಿಂದ ಕರ್ತವ್ಯ ನಿರ್ವಹಿಸಲು ಅನುವು ಮಾಡಿಕೊಡಬೇಕು. ನಮ್ಮ ಬಲಗೈ ತೋಳಿಗೆ ಕೆಂಪುಪಟ್ಟಿಯನ್ನು ಧರಿಸಿ ಸಾಂಕೇತಿಕವಾಗಿ ಪ್ರತಿಭಟನೆಯನ್ನು ಹಮ್ಮಿಕೊಂಡಿದ್ದು ತಹಶೀಲ್ದಾರ್ ಮೂಲಕ ರಾಜ್ಯ ಸರ್ಕಾರಕ್ಕೆ ಮನವಿ ಪತ್ರವನ್ನು ಸಲ್ಲಿಸುತ್ತಿದ್ದೇವೆ ಎಂದರು.

ಗ್ರೇಡ್ 2 ತಹಶೀಲ್ದಾರ್ ಶಿವರಾಜು ರವರಿಗೆ ಮನವಿ ಪತ್ರವನ್ನು ನೀಡಲಾಯಿತು. ವಕೀಲರ ಸಂಘದ ಕಾರ್ಯದರ್ಶಿ ಕುಮಾರಸ್ವಾಮಿ, ಖಜಾಂಚಿ ಶ್ರೀನಿವಾಸ ಮೂರ್ತಿ, ಸದಸ್ಯರಾದ ಸಿ.ಆರ್.ನಾಗರಾಜು, ಸಿ. ಸಿದ್ದರಾಜು, ಕೆ.ಬಿ. ಶಶಿಧರ್, ಎನ್. ಜಯಶಂಕರ್, ಕೃಷ್ಣ, ಸಂಪತ್ತು, ಸಿ.ಎಂ. ಮಹದೇವಸ್ವಾಮಿ, ಕುಮಾರಸ್ವಾಮಿ, ಸಂಪತ್ತು, ಚಂದನ, ಎಂ. ನಾಗರಾಜು, ಎನ್. ಮಾದೇಶ್ ಸೇರಿದಂತೆ ಅನೇಕರು ಇದ್ದರು. ಹಿರಿಯ ವಕೀಲ ಸದಾಶಿವರೆಡ್ಡಿ ಮೇಲೆ ನಡೆದಿರುವ ಹಲ್ಲೆಯನ್ನು ಖಂಡಿಸಿ ಯಳಂದೂರು ತಾಲೂಕು ವಕೀಲರ ಸಂಘದ ಸದಸ್ಯರು ತಮ್ಮ ಬಲಗೈ ತೋಳಿಗೆ ಕೆಂಪುಪಟ್ಟಿ ಕಟ್ಟಿ ಪ್ರತಿಭಟನೆ ನಡೆಸಿದರು.

ಜಿಲ್ಲಾ ಕನಕ ಸಮುದಾಯ ಭವನಕ್ಕೆ ಮುಖ್ಯಮಂತ್ರಿ ಭೂಮಿಪೂಜೆ

ಚಾಮರಾಜನಗರ, ಏ.22– ಜಿಲ್ಲಾ ಕುರುಬರ ಸಂಘದ ವತಿಯಿಂದ ಏ. 25 ರ ಶುಕ್ರವಾರ ಜಿಲ್ಲಾ ಕನಕ ಸಮುದಾಯ ಭವನದ ಭೂಮಿಪೂಜೆಯನ್ನು ಮುಖ್ಯಮಂತ್ರಿ ಸಿದ್ದ ರಾಮಯ್ಯನವರು ನೆರವೇರಿಸಲಿದ್ದಾರೆ ಎಂದು ಸಂಘದ ಜಿಲ್ಲಾಧ್ಯಕ್ಷ ಎನ್.ನಂಜೇಗೌಡ ತಿಳಿಸಿದರು.



ತಾಲೂಕಿನ ಮಂಗಲ ಗ್ರಾಮದ ಸಮೀಪ ಸಂತೇಮರಹಳ್ಳಿಗೆ ಹೋಗುವ ಮುಖ್ಯರಸ್ತೆಯಲ್ಲಿರುವ ಜಿಲ್ಲಾ ಕುರುಬರ ಸಂಘದ ನಿವೇಶನದಲ್ಲಿ ಅಂದು ಬೆಳಿಗ್ಗೆ 11 ಗಂಟೆಗೆ ಮುಖ್ಯಮಂತ್ರಿ ಸಿದ್ದರಾಮಯ್ಯನವರು ಭೂಮಿ ಪೂಜೆ ನೆರವೇರಿಸುವರು ಕಾಗಿನೆಲೆ ಮಹಾಸಂಸ್ಥಾನ ಕನಕಗುರುಪೀಠದ ಪೀಠಾಧಿಪತಿಗಳಾದ ಶ್ರೀ ಡಾ. ಶಿವನಂದಪುರಿ ಮಹಾಸ್ವಾಮೀಜಿ ದಿವ್ಯ ಸಾನಿಧ್ಯ ವಹಿಸಲಿದ್ದಾರೆ. ಎಂಎಸ್ಐಎಲ್ ಅಧ್ಯಕ್ಷರು, ಶಾಸಕ ಸಿ.ಪುಟ್ಟರಂಗಶೆಟ್ಟಿ ಅಧ್ಯಕ್ಷತೆ ವಹಿಸಲಿದ್ದಾರೆ ಎಂದು ಸುದ್ದಿಗೋಷ್ಠಿಯಲ್ಲಿ ಹೇಳಿದರು

ಜಿಲ್ಲಾ ಉಸ್ತುವಾರಿ ಸಚಿವ ಕೆ.ವೆಂಕಟೇಶ್, ಸಚಿವರಾದ ಹೆಚ್.ಸಿ.ಮಹದೇವಪ್ಪ, ಸತೀಶ್ ಜಾರಕಿಹೊಳಿ, ಬೈರತಿ ಸುರೇಶ್, ಶಿವ ರಾಜ್ ತಂಗಡಗಿ, ಸಂಸದ ಸುನೀಲ್ ಬೋಸ್, ವಿಶೇಷ ಆಹ್ವಾನಿತರಾಗಿ ಭಾಗವಹಿಸಲಿದ್ದಾರೆ. ಗ್ಯಾರಂಟಿ ಅನುಷ್ಠಾನ ಸಮಿತಿ ಅಧ್ಯಕ್ಷ ಹೆಚ್.ಎಂ.ರೇವಣ್ಣ, ಶಾಸಕ ರಾದ ಎ.ಆರ್.ಕೃಷ್ಣಮೂರ್ತಿ, ಹೆಚ್.ಎಂ. ಗಣೇಶ್ ಪ್ರಸಾದ್. ಎಂ.ಆರ್. ಮಂಜು ನಾಥ್, ಡಿ. ರವಿಶಂಕರ್. ಡಾ. ಯತೀಂದ್ರ, ಡಾ. ತಿಮ್ಮಯ್ಯ ಮುಖ್ಯಮಂತ್ರಿ ಜಂಟಿ ಕಾರ್ಯದರ್ಶಿ ರಾಮಯ್ಯ ಮುಖ್ಯ ಅತಿಥಿಯಾಗಿ ಭಾಗವಹಿಸಲಿದ್ದಾರೆ ಎಂದರು.

ಅಭಿನಂದನೆ : ಜಿಲ್ಲಾ ಕನಕ ಸಮುದಾಯ ಭವನಕ್ಕೆ 2 ಕೋಟಿ ರೂ. ಮಂಜೂರು ಮಾಡಿದ್ದು, ಮೊದಲನೇ ಕಂತಿನಲ್ಲಿ 50 ಲಕ್ಷ ರೂ. ಬಿಡುಗಡೆ ಮಾಡಿದ್ದಾರೆ. ಜಿಲ್ಲಾ ಡಳಿತ ಭವನದ ಮುಂಭಾಗದಲ್ಲಿ ವಾಲ್ಮೀಕಿ ಕನಕ ಭಗೀರಥರ ಪ್ರತಿಮೆಗೆ ತಲಾ 50 ಲಕ್ಷ ರೂ.ಮಂಜೂರು ಮಾಡಿದ್ದಾರೆ. ಅದಕ್ಕಾಗಿ ಅಭಿನಂದನೆ ಸಲ್ಲಿಸುತ್ತೇವೆ ಎಂದರು.

ಪತ್ರಿಕಾಗೋಷ್ಠಿಯಲ್ಲಿ ಜಿಲ್ಲಾ ಕುರುಬರ ಸಂಘದ ಗೌರವ ಅಧ್ಯಕ್ಷ ಜನ್ನೂರು ಮಹದೇವು, ಪ್ರಧಾನ ಕಾರ್ಯದರ್ಶಿ ಶಿವಲಿಂಗೇ ಗೌಡ, ಉಪಾಧ್ಯಕ್ಷರಾದ ನಟರಾಜು, ಬಸಪ್ಪನಪಾಳ್ಯ, ಆರ್.ಮಹದೇವು, ಸದಸ್ಯ ಎಂ.ಮಂಜು, ಮುಖಂಡ ಮಾಸಗಾಪುರ ಸ್ವಾಮಿ ಮಹೇಶ್ ಹಾಜರಿದ್ದರು.

ಸಿಎಂ ಎರಡು ದಿನಗಳ ಜಿಲ್ಲಾ ಪ್ರವಾಸ

ಚಾಮರಾಜನಗರ, ಏ.22– ಮುಖ್ಯಮಂತ್ರಿ ಸಿದ್ದರಾಮಯ್ಯ ಏ. 24, 25 ರಂದು ಜಿಲ್ಲಾ ಪ್ರವಾಸ ಕೈಗೊಂಡಿದ್ದಾರೆ.

ಏ. 24ರ ಬೆಳಿಗ್ಗೆ 11.30 ಗಂಟೆಗೆ ಮಲೆ ಮಹದೇಶ್ವರ ಬೆಟ್ಟಕ್ಕೆ ಆಗಮಿಸುವರು. ಮಧ್ಯಾಹ್ನ 12 ಗಂಟೆಗೆ ಮಲೆ ಮಹದೇಶ್ವರ ಬೆಟ್ಟದಲ್ಲಿ ಸಚಿವ ಸಂಪುಟ ಸಭೆಯಲ್ಲಿ ಭಾಗವಹಿಸಿ, ಮಧ್ಯಾಹ್ನ 3 ಗಂಟೆಗೆ ಶ್ರೀ ಮಲೆ ಮಹದೇಶ್ವರಸ್ವಾಮಿ ಕ್ಷೇತ್ರ ಅಭಿವೃದ್ಧಿ ಪ್ರಾಧಿಕಾರದ ಸಭೆಯಲ್ಲಿ ಭಾಗವಹಿಸುವರು. ಬಳಿಕ ಬೆಟ್ಟದಲ್ಲಿಯೇ ವಾಸ್ತವ್ಯ ಹೂಡುವರು.

ಏ. 25ರ ಬೆಳಿಗ್ಗೆ 9 ಗಂಟೆಗೆ ಮಲೆ ಮಹದೇಶ್ವರಬೆಟ್ಟದ ಸುತ್ತೂರು ಮಠಕ್ಕೆ ಭೇಟಿ ನೀಡಿ, ಬೆಳಿಗ್ಗೆ 11 ಗಂಟೆಗೆ ಚಾಮರಾಜನಗರಕ್ಕೆ ಆಗಮಿಸಿ ಜಿಲ್ಲಾಡಳಿತ ಭವನದ ಮುಂಭಾಗದಲ್ಲಿ ನಿರ್ಮಿಸಿರುವ ಶ್ರೀ ಬಸವೇಶ್ವರ ಪುತ್ಥಳಿ ಉದ್ಘಾಟನೆ ಶ್ರೀ ಭಗೀರಥ ಮಹರ್ಷಿ, ಶ್ರೀ ಮಹರ್ಷಿ ವಾಲ್ಮೀಕಿ ಹಾಗೂ ಶ್ರೀ ಕನಕದಾಸರ ಪುತ್ಥಳಿಗಳ ಶಂಕುಸ್ಥಾಪನೆ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳುವರು. ಮಧ್ಯಾಹ್ನ 2 ಗಂಟೆಗೆ ಮೈಸೂರಿಗೆ ತೆರಳುವರು.

ಜಿಲ್ಲೆಗೆ ವಿಶೇಷ ಕೊಡುಗೆಗಳನ್ನು ಘೋಷಿಸಲು ನಿರಂಜನ್ ಕುಮಾರ್ ಆಗ್ರಹ



ಬಿಜೆಪಿ ಜಿಲ್ಲಾಧ್ಯಕ್ಷ ಸಿ.ಎಸ್.ನಿರಂಜನಕುಮಾರ್ ಸುದ್ದಿಗೋಷ್ಠಿಯಲ್ಲಿ ಮಾತನಾಡಿದರು.

ಚಾಮರಾಜನಗರ,ಏ.22– ಮಲೆಮಹದೇಶ್ವರ ಬೆಟ್ಟದಲ್ಲಿ ಏ. 24 ರಂದು ನಡೆಯುವ ಸಚಿವ ಸಂಪುಟ ಸಭೆಯಲ್ಲಿ ಜಿಲ್ಲೆಯ ಅಭಿವೃದ್ಧಿಗೆ ವಿಶೇಷ ಕೊಡುಗೆಗಳನ್ನು ಮುಖ್ಯಮಂತ್ರಿಗಳು ಘೋಷಣೆ ಮಾಡಬೇಕು ಎಂದು ಬಿಜೆಪಿ ಜಿಲ್ಲಾಧ್ಯಕ್ಷ ಸಿ.ಎಸ್.ನಿರಂಜನಕುಮಾರ್ ಆಗ್ರಹಿಸಿದರು.

ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದು 2 ವರ್ಷ ಕಳೆದಿದೆ. ಸರ್ಕಾರ ಬರುವುದಕ್ಕೂ ಮುನ್ನ ಜನರಿಗೆ ನೀಡಿದ್ದ ಭರವಸೆಗಳನ್ನು ಈಡೇರಿಸಬೇಕು. ಜಿಲ್ಲೆಗೆ ವಿಶೇಷ ಅನುದಾನ ಘೋಷಿಸಿ ಅಭಿವೃದ್ಧಿಗೆ ಮುಂದಾಗಬೇಕು ಎಂದು ಸುದ್ದಿಗೋಷ್ಠಿಯಲ್ಲಿ ಒತ್ತಾಯಿಸಿದರು.


ಕೊರೊನಾ ಸಂದರ್ಭದಲ್ಲಿ ಆಕ್ಸಿಜನ್ ದುರಂತದಲ್ಲಿ ಮೃತಪಟ್ಟ 35 ಜನರ ಕುಟುಂಬದವರಿಗೆ ಸರ್ಕಾರಿ ಉದ್ಯೋಗ ನೀಡುವಲ್ಲಿ ವಿಫಲವಾಗಿದ್ದು ಕೂಡಲೇ ನೀಡಿದ್ದ ಭರವಸೆಯಂತೆ ಸರ್ಕಾರಿ ಉದ್ಯೋಗ ನೀಡಬೇಕು. ಗುಂಡ್ಲುಪೇಟೆ, ಹನೂರು ಭಾಗದ ಹಲವು ಕೆರೆಗಳಿಗೆ ನೀರು ತುಂಬಿಸುವ ಯೋಜನೆಗೆ ಡಿಪಿಆರ್ ಆಗಿತ್ತು. ಈ ಯೋಜನೆಯನ್ನು ಸಚಿವ ಸಂಪುಟ ಸಭೆಯಲ್ಲಿ ಜಾರಿಗೊಳಿಸಬೇಕು ಎಂದು ಒತ್ತಾಯಿಸಿದರು.

ಕೊಳ್ಳೇಗಾಲ ಕ್ಷೇತ್ರದ ಉಮ್ಮತ್ತೂರು ಕೆರೆ ಸೇರಿದಂತೆ 24 ಕೆರೆಗಳಿಗೆ ನೀರು ತುಂಬಿಸುವ ಯೋಜನೆ ಸಮಸ್ಯೆಯನ್ನು ಪರಿಹರಿಸಿ ನೀರು ತುಂಬಿಸಿ ಜನರಿಗೆ ಅನುಕೂಲ ಕಲ್ಪಿಸಬೇಕು. ಹೊಂಗನೂರು ಹಿರಿಕೆರೆ ಸೇರಿದಂತೆ ಹನೂರು ಭಾಗದಲ್ಲಿ ಚೆಕ್ ಡ್ಯಾಂ ನಿರ್ಮಿಸಲು ಕ್ರಮವಹಿಸಬೇಕು ಎಂದು ಬಿಜೆಪಿ ರಾಜ್ಯ ಉಪಾಧ್ಯಕ್ಷ ಎನ್.ಮಹೇಶ್ ಒತ್ತಾಯಿಸಿದರು.

ಎಸ್ ಸಿ, ಎಸ್ ಟಿ, ಓಬಿಸಿ ಅಭಿವೃದ್ಧಿ ನಿಗಮಗಳಲ್ಲಿ ಹಣದ ಕೊರತೆಯಿಂದಾಗಿ ಶೂನ್ಯ ಸಾಧನೆ ಮಾಡಲಾಗಿದೆ. ಆದ್ದರಿಂದ ಈ ನಿಗಮಗಳ ಹಲವು ಯೋಜನೆಗಳಿಗೆ ಕನಿಷ್ಟ 100 ರಷ್ಟು ಗುರಿಗಳನ್ನು ನಿಗದಿಪಡಿಸಬೇಕು. ಚಾಮರಾಜನಗರ ವಿಶ್ವವಿದ್ಯಾಲಯಗೆ ಡಾ.ಬಿ.ಆರ್. ಅಂಬೇಡ್ಕರ್ ವಿವಿ ಎಂದು ನಾಮಕರಣ ಮಾಡಲು ಕ್ರಮವಹಿಸಬೇಕು ಎಂದು ಆಗ್ರಹಿಸಿದರು. ಕೇಂದ್ರ ಪರಿಹಾರ ಸಮಿತಿ ಮಾಜಿ ಅಧ್ಯಕ್ಷ ಎಂ.ರಾಮಚಂದ್ರ, ಕಾಡಾ ಮಾಜಿ ಅಧ್ಯಕ್ಷ ನಿಜಗುಣರಾಜು, ಬಿಜೆಪಿ ಜಿಲ್ಲಾ ಪ್ರಧಾನ ಕಾರ್ಯದರ್ಶಿಗಳಾದ ಪಿ. ವೃಷಬೇಂದ್ರಪ್ಪ, ಮೂಡ್ನಾಕೂಡು ಪ್ರಕಾಶ್, ಮಾಜಿ ಅಧ್ಯಕ್ಷ ನಾರಾಯಣ ಪ್ರಸಾದ್, ಜಿಲ್ಲಾ ವಕ್ತಾರ ಕಾಡಹಳ್ಳಿ ಕುಮಾರ್ ಪತ್ರಿಕಾಗೋಷ್ಠಿಯಲ್ಲಿ ಹಾಜರಿದ್ದರು.

ಅಭಿವೃದ್ಧಿ ಯೋಜನೆಗಳಿಗೆ ಆದ್ಯತೆ: ಎ.ಆರ್.ಕೆ

ಚಾಮರಾಜನಗರ, ಏ.22– ಮಲೆ ಮಹದೇಶ್ವರ ಬೆಟ್ಟದಲ್ಲಿ ನಡೆಯಲಿರುವ ಸಂಪುಟ ಸಭೆಯಲ್ಲಿ ನಮ್ಮ ಜಿಲ್ಲೆಯ ಅಭಿವೃದ್ಧಿ ಯೋಜನೆಗಳಿಗೆ ಆದ್ಯತೆ ನೀಡಿ, ಅದಕ್ಕೆ ಅನುಮೋದನೆ ಪಡೆದುಕೊಳ್ಳಬೇಕು ಎಂದು ಶಾಸಕ ಎ.ಆರ್.ಕೃಷ್ಣಮೂರ್ತಿ ಸುದ್ದಿಗೋಷ್ಠಿಯಲ್ಲಿ ಹೇಳಿದರು.



ಬಜೆಟ್‌ನಲ್ಲಿ ಜಿಲ್ಲೆಗೆ ಹೆಚ್ಚಿನ ಕೊಡುಗೆ ದೊರೆತಿಲ್ಲ. ಬೆಟ್ಟದಲ್ಲಿ ನಡೆಯಲಿರುವ ಸಚಿವ ಸಂಪುಟ ಸಭೆಯಲ್ಲಿ ಹೆಚ್ಚಿನ ಅನುದಾನ, ಯೋಜನೆ ಘೋಷಣೆಯಾಗುವ ನಿರೀಕ್ಷೆ ಹೊಂದಲಾಗಿದೆ. ಈಗಾಗಲೇ ಮುಖ್ಯಮಂತ್ರಿಯವರಿಗೆ ಜಿಲ್ಲೆಗೆ ಬೇಕಾದ ಅಭಿವೃದ್ಧಿ ಯೋಜನೆಗಳ ಬಗ್ಗೆ ಮನವಿ ಸಲ್ಲಿಸಿದ್ದೇನೆ. ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಜಿಲ್ಲೆಯ ನಾಲ್ವರು ಶಾಸಕರು ಹಾಗೂ ಹೆಚ್.ಡಿ ಕೋಟೆ, ನಂಜನಗೂಡು ಶಾಸಕರನ್ನು ತಮ್ಮ ನಿವಾಸಕ್ಕೆ ಕರೆದು ಕಾವೇರಿ ನೀರಾವರಿ ಯೋಜನೆಯಲ್ಲಿ ಕ್ಷೇತ್ರಕ್ಕೆ ಆಗಬೇಕಾದ ಕೆಲಸಗಳ ಬಗ್ಗೆ ಮಾಹಿತಿ ನೀಡುವಂತೆ ಕೇಳಿದ್ದರೆಂದರು.

ಸರ್ವಾಂಗೀಣ ಅಭಿವೃದ್ಧಿಗೆ ಕಾಳಜಿ: ಜಿಲ್ಲೆಯ ಮೇಲಿನ ವಿಶೇಷ ಅಭಿಮಾನದಿಂದ ಶ್ರೀ ಕ್ಷೇತ್ರ ಮಲೆ ಮಹದೇಶ್ವರ ಬೆಟ್ಟದಲ್ಲಿ ಪೂರ್ಣಪ್ರಮಾಣದ ಸಚಿವ ಸಂಪುಟ ಸಭೆ ನಡೆಸುವ ಮೂಲಕ ಮುಖ್ಯಮಂತ್ರಿಗಳು ಜಿಲ್ಲೆಯ ಸರ್ವಾಂಗೀಣ ಅಭಿವೃದ್ಧಿಗೆ ಕಂಕಣಬದ್ಧರಾಗಿದ್ದಾರೆ. ಜಿಲ್ಲೆಯ ಜ್ವಲಂತ ಸಮಸ್ಯೆಗಳಿಗೆ ಪರಿಹಾರ ಸಿಗುವ ಹೊಸ ಭರವಸೆಯನ್ನು ಮೂಡಿಸಿದ್ದಾರೆ. ಈ ಸಚಿವ ಸಂಪುಟ ಸಭೆ ಭವಿಷ್ಯದಲ್ಲಿ ಚಾಮರಾಜನಗರ ಜಿಲ್ಲೆಯ ಅಭಿವೃದ್ಧಿಗೆ ಹೊಸ ಮೈಲಿಗಲ್ಲು ಸ್ಥಾಪನೆಯಾಗುವುದರಲ್ಲಿ ಎರಡನೆ ಮಾತಿಲ್ಲ ಎಂದು ಎಆರ್‌ಕೆ ಆಶಾಭಾವನೆ ವ್ಯಕ್ತಪಡಿಸಿದರು.

ಸುದ್ದಿಗೋಷ್ಠಿಯಲ್ಲಿ ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಎಚ್.ವಿ. ಚಂದ್ರು, ಯಳಂದೂರು ತಾಲೂಕು ಗ್ಯಾರಂಟಿ ಪ್ರಾಧಿಕಾರ ಅಧ್ಯಕ್ಷ ಪ್ರಭುಪ್ರಸಾದ್, ಕೊಳ್ಳೇಗಾಲ ತಾ. ಗ್ಯಾರಂಟಿ ಪ್ರಾಧಿಕಾರ ಅಧ್ಯಕ್ಷ ರಾಜೇಂದ್ರ, ತಾ.ಪಂ. ಮಾಜಿ ಅಧ್ಯಕ್ಷ ಆರ್. ಮಹದೇವ, ಕಂದಹಳ್ಳಿ ನಂಜುಂಡಸ್ವಾಮಿ, ಸೋಮಣ್ಣ, ಗೌಡಹಳ್ಳಿ ರಾಜೇಶ್ ಇತರರು ಉಪಸ್ಥಿತರಿದ್ದರು.

ಡಾ.ವಿ.ಲಕ್ಷ್ಮೀನಾರಾಯಣ ಎಲ್ಲೇ ಮಾನವ ಹಕ್ಕುಗಳ ಉಲ್ಲಂಘನೆಯಾದರೂ ಖಂಡಿಸದೇ ಬಿಡುತ್ತಿರಲಿಲ್ಲ

ವಿ.ಲಕ್ಷ್ಮೀನಾರಾಯಣ ಮೊದಲ ಸಂಸ್ಮರಣಾ ದಿನದ ಕಾರ್ಯಕ್ರಮದಲ್ಲಿ ಸಮತಾ ವೇದಿಕೆಯ ಕೆ.ಸುಶೀಲ ಸ್ಮರಣೆ

ಮೈಸೂರು,ಏ.22(ಪಿಎಂ)– ಎಲ್ಲೇ ಮಾನವ ಹಕ್ಕುಗಳ ಉಲ್ಲಂಘನೆಯಾದರೂ ಅದಕ್ಕೆ ಕಾರಣವಾದ ವ್ಯವಸ್ಥೆಯನ್ನು ಡಾ.ವಿ.ಲಕ್ಷ್ಮೀನಾರಾಯಣ ಅವರು ಖಂಡಿಸದೇ ಬಿಡುತ್ತಿರಲಿಲ್ಲ ಎಂದು ಸಮತಾ ವೇದಿಕೆಯ ಕೆ.ಸುಶೀಲ ಸ್ಮರಿಸಿದರು.



ಮೈಸೂರಿನ ಗೋಕುಲಂ 3ನೇ ಹಂತದ ಶಿವರುದ್ರಮ್ಮ ಟ್ರಸ್ಟ್‌ನ ಶ್ಯಾಗಲೆ ಹೌಸ್ ಸಭಾಂಗಣದಲ್ಲಿ ಮಂಗಳವಾರ ಡಾ.ವಿ.ಲಕ್ಷ್ಮೀನಾರಾಯಣ ಅವರ ಭಾವಚಿತ್ರಕ್ಕೆ ಪುಷ್ಪ ನಮನ ಸಲ್ಲಿಸಲಾಯಿತು.

ಮೈಸೂರಿನ ಗೋಕುಲಂ 3ನೇ ಹಂತದ ಕಾಂಟೂರ್ ರಸ್ತೆಯಲ್ಲಿರುವ ಶಿವರುದ್ರಮ್ಮ ಟ್ರಸ್ಟ್‌ನ ಶ್ಯಾಗಲೆ ಹೌಸ್ ಸಭಾಂಗಣದಲ್ಲಿ ಡಾ.ವಿ.ಲಕ್ಷ್ಮೀನಾರಾಯಣ ಚಿಂತನ ಮಂಥನ ವೇದಿಕೆ, ಪಿಯುಸಿಎಲ್ ಮೈಸೂರು, ಕರ್ನಾಟಕ ಮಹಿಳಾ ದೌರ್ಜನ್ಯ ವಿರೋಧಿ ಒಕ್ಕೂಟದ ಸಂಯುಕ್ತಾಶ್ರಯದಲ್ಲಿ ಮಂಗಳವಾರ ಹಮ್ಮಿಕೊಂಡಿದ್ದ ಡಾ.ವಿ.ಲಕ್ಷ್ಮೀನಾರಾಯಣ ಅವರ ಮೊದಲ ಸಂಸ್ಮರಣಾ ದಿನ ಹಾಗೂ ರಷ್ಯಾ ಕ್ರಾಂತಿಯ ನಾಯಕ ವ್ಲಾಡಿಮಿರ್ ಲೆನಿನ್ 155ನೇ ಜನ್ಮದಿನ, ಸಿಪಿಐ ಎಂಎಲ್ ಲಿಬರೇಷನ್ ಸಂಸ್ಥಾಪನಾ ದಿನದ ಕಾರ್ಯಕ್ರಮದಲ್ಲಿ ಡಾ.ಲಕ್ಷ್ಮೀನಾರಾಯಣ ಅವರ ವ್ಯಕ್ತಿತ್ವ ಕುರಿತು ಅವರು ಮಾತನಾಡಿದರು.

ಡಾ.ವಿ.ಲಕ್ಷ್ಮೀನಾರಾಯಣ ಎಲ್ಲೇ ಮಾನವ ಹಕ್ಕುಗಳ ಉಲ್ಲಂಘನೆಯಾದರೂ ಅದಕ್ಕೆ ಕಾರಣವಾದ ವ್ಯವಸ್ಥೆಯನ್ನು ಖಂಡಿಸಿ, ಸರ್ಕಾರಕ್ಕೂ ಬಿಸಿ ಮುಟ್ಟಿಸುತ್ತಿದ್ದರು. ಮಾನವ ಹಕ್ಕುಗಳ ಉಲ್ಲಂಘನೆ ಪ್ರಕರಣಗಳ ಸತ್ಯಶೋಧನಾ ಕೆಲಸವನ್ನು ಅಚ್ಚುಕಟ್ಟಾಗಿ ಮಾಡುತ್ತಿದ್ದರು. ಅವರು ಯಾವುದೇ ವರ್ಗ ಮತ್ತು ಸ್ತರದ ಜನರೊಂದಿಗೆ ಬೆರೆಯುವ ವಿಶಾಲ ಹೃದಯದವರು. ತುಂಬ ವಿಷಯಗಳ ಬಗ್ಗೆ ಅವರಿಗೆ ಅಪಾರವಾದ ಜ್ಞಾನವಿತ್ತು. ತಮ್ಮೊಂದಿಗೆ ಒಡನಾಟ ಹೊಂದಿದವರ ವೈಚಾರಿಕ ನೆಲೆಯನ್ನು ವಿಸ್ತರಿಸಲು ಪ್ರಯತ್ನ ಮಾಡುತ್ತಿದ್ದರು. ಮಾನವೀಯತೆ ಮತ್ತು ಅಂತಃಕರಣ ಬೆಳೆಸಿಕೊಳ್ಳಬೇಕೆಂದು ಸದಾ ಹೇಳುತ್ತಿದ್ದರು. ಯಾವುದೇ ಹೊಸದನ್ನು ಕಲಿಯಲು ಉತ್ಸಾಹ ಹೊಂದಿದ್ದರು ಎಂದರು.

ದೈಹಿಕವಾಗಿ ಅವರಿಗೆ ತುಂಬ ಅಡಚಣೆಗಳು ಇದ್ದಾಗ್ಯೂ ಪ್ರಗತಿಪರ ಹೋರಾಟಗಳಲ್ಲಿ ಕ್ರಿಯಾಶೀಲರಾಗಿ ಪಾಲ್ಗೊಳ್ಳುತ್ತಿದ್ದರು. ಜೀವಪರ ಮತ್ತು ಪ್ರಜಾಸತ್ತಾತ್ಮಕ ಸಿದ್ಧಾಂತಗಳನ್ನು ಗಟ್ಟಿಯಾಗಿ ಅಪ್ಪಿಕೊಂಡಿದ್ದರು. ಯಾವುದೇ ವಿಷಯವಾದರೂ ಅದರ ಆಳ–ಅಗಲಗಳನ್ನು ತುಂಬ ಚೆನ್ನಾಗಿ ಅರಿತುಕೊಳ್ಳುತ್ತಿದ್ದರು. ಸಮ ಸಮಾಜ ನಿರ್ಮಾಣ ಸಂಬಂಧ ಕೇವಲ ಭಾಷಣಕ್ಕೆ ಸೀಮಿತವಾಗದೇ ಅತ್ಯಂತ ಬದ್ಧತೆ ಹೊಂದಿದ್ದ ಅವರು, ಮೈಸೂರು ವಲಯದ ದೊಡ್ಡ ಚಿಂತಕರು. ಅವರ ಹೋರಾಟಗಳನ್ನು ಮುಂದೆ ತೆಗೆದುಕೊಂಡು ಹೋದರೆ ಅವರಿಗೆ ಹೆಚ್ಚಿನ ಗೌರವ ಸಲ್ಲಿಸಿದಂತೆ ಆಗಲಿದೆ. ಅವರ ತೋರಿಸಿದ ದಾರಿಯಲ್ಲಿ ಮಾಡಬೇಕಾದ ಕೆಲಸಗಳು ಸಾಕಷ್ಟು ಇವೆ. ಆ ದಾರಿಯಲ್ಲಿ ನಾವು ಹೆಜ್ಜೆಯಿಡಬೇಕಿದೆ ಎಂದು ಹೇಳಿದರು.

ಡಾ.ವಿ.ಲಕ್ಷ್ಮೀನಾರಾಯಣ ಅವರ ಪತ್ನಿಯೂ ಆದ ಐಪ್ವಾ ರಾಷ್ಟ್ರೀಯ ಅಧ್ಯಕ್ಷೆ ಡಾ.ಇ.ರತಿರಾವ್ ಮಾತನಾಡಿ, ವಿದ್ಯಾರ್ಥಿ ದೆಸೆಯಲ್ಲಿ ಡಾ.ವಿ.ಲಕ್ಷ್ಮೀನಾರಾಯಣ ಶೈಕ್ಷಣಿಕವಾಗಿ ಮುಂದಿದ್ದವರು. ಪಿಯುಸಿಯಲ್ಲಿ ರ್‍ಯಾಂಕ್ ಗಳಿಸಿದ್ದವರು. ಎಂಬಿಬಿಎಸ್ ಮಾಡುತ್ತಲೇ ಹಲವು ಹೋರಾಟದಲ್ಲಿ ತೊಡಗಿಸಿಕೊಂಡಿದ್ದರು. 70ರ ದಶಕದಲ್ಲಿ ದಲಿತ ಸಂಘರ್ಷ ಸಮಿತಿ ರಚನೆಯಾದಾಗ ಆ ಚಳವಳಿಯಲ್ಲಿಯೂ ಇದ್ದರು. ಎಡಪಂಥೀಯ ಚಳುವಳಿಗಳಲ್ಲಿ ಅತ್ಯಂತ ಕ್ರಿಯಾಶೀಲವಾಗಿ ತೊಡಗಿಸಿಕೊಂಡಿದ್ದರು ಎಂದರು.

ರಂಗಕರ್ಮಿ ಕೆ.ಆರ್.ಸುಮತಿ ನಿರ್ಮಿಸಿ, ನಿರ್ದೇಶಿಸಿರುವ ಡಾ.ವಿ.ಲಕ್ಷ್ಮೀನಾರಾಯಣ ಅವರ ಕುರಿತ ಸಾಕ್ಷ್ಯಚಿತ್ರ ಪ್ರದರ್ಶಿಸಲಾಯಿತು. ನಿವೃತ್ತ ಪ್ರಾಧ್ಯಾಪಕ ಪ್ರೊ.ಕಾಳಚನ್ನೇಗೌಡ ಅಧ್ಯಕ್ಷತೆ ವಹಿಸಿದ್ದರು. ಚಿಂತಕ ನಾ.ದಿವಾಕರ, ಸಿಪಿಐ ಎಂಎಲ್ ಲಿಬರೇಷನ್‌ನ ಕಾಂ.ಪಿ.ಆರ್.ಮಣಿ, ಸಮಕಾಲೀನ ಸಾಮಾಜಿಕ ಸಾಂಸ್ಕೃತಿಕ ವೇದಿಕೆಯ ಬಿ.ಆರ್.ಮಂಜುನಾಥ್, ಚಿಂತಕ ಕೆ.ವೆಂಕಟರಾಜು, ರಂಗಕರ್ಮಿ ಕೆ.ಆರ್.ಸುಮತಿ, ಮುಖಂಡ ಬೂಕನಕೆರೆ ವಿಜೇಂದ್ರ ಮತ್ತಿತರರು ಹಾಜರಿದ್ದರು.

ದಲಿತರ ಮೇಲಿನ ದೌರ್ಜನ್ಯ ಪ್ರಕರಣಗಳೇಕೆ ದೊಡ್ಡ ಸುದ್ದಿಯಾಗಲ್ಲ...

ಸಿಇಟಿ ಪರೀಕ್ಷೆ ವೇಳೆ ಜನಿವಾರ ತೆಗೆಸಿದ್ದು ಖಂಡನೀಯ. ಆದರೆ ಈ ಪ್ರಕರಣದಂತೆ ದಲಿತರು, ಮಹಿಳೆಯರ ಮೇಲಿನ ದೌರ್ಜನ್ಯ ಪ್ರಕರಣಗಳು ಏಕೆ ದೊಡ್ಡ ಸುದ್ದಿಯಾಗುವುದಿಲ್ಲ. ಐಟಿ, ನೀಟ್ ಪರೀಕ್ಷೆಗಳಲ್ಲಿ ಜನಿವಾರ ತೆಗೆಸುತ್ತಾರೆಂಬುದನ್ನು ಕೇಳಿದ್ದೇನೆ. ದಲಿತ ಹುಡುಗನ ವಿವಸ್ತ್ರಗೊಳಿಸಿ ಹಲ್ಲೆ ನಡೆಸಿದ ಪ್ರಕರಣ ಮಾಧ್ಯಮಗಳಲ್ಲಿ ಏಕೆ ದೊಡ್ಡ ಸುದ್ದಿಯಾಗಲಿಲ್ಲ. ಮುಟ್ಟಾದ ಶಾಲಾ ಬಾಲಕಿಯನ್ನು ತರಗತಿಯಿಂದ ಹೊರ ಕೂರಿಸಿದ ಅಮಾನವೀಯ ಘಟನೆ ಕೂಡ ದೊಡ್ಡ ಸುದ್ದಿಯಾಗಲಿಲ್ಲ. ಒಂದು ತುಂಡು ವಸ್ತ್ರದ ಕಾರಣಕ್ಕಾಗಿ ಶಿಕ್ಷಣ ನಿರಾಕರಿಸಿದ್ದೂ ಅಂತೆಯೇ ಆಯಿತು. ಇದು ಏಕೆ ಹೀಗೆ. -ಕೆ.ಸುಶೀಲ

ಜಮ್ಮು–ಕಾಶ್ಮೀರದಲ್ಲಿ ಪ್ರವಾಸಿಗರ ಮೇಲೆ ಉಗ್ರರ ದಾಳಿಗೆ ಖಂಡನೆ

ಮೊಂಬತ್ತಿ ಬೆಳಗಿ ಮೃತರ ಆತ್ಮಕ್ಕೆ ಶಾಂತಿ ಕೋರಿಕೆ



ಜಮ್ಮು–ಕಾಶ್ಮೀರದ ಪ್ರವಾಸಿ ತಾಣ ವೀಕ್ಷಣೆಗೆ ತೆರಳಿದ್ದ ವಿವಿಧ ರಾಜ್ಯಗಳ 30ಕ್ಕೂ ಹೆಚ್ಚು ಪ್ರವಾಸಿಗರ ಮೇಲಿನ ಉಗ್ರರ ದಾಳಿಯನ್ನು ಕೃಷ್ಣರಾಜ ಯುವ ಬಳಗದ ಪದಾಧಿಕಾರಿಗಳು ಖಂಡಿಸಿದರು.

ಮೈಸೂರು, ಏ.22(ಎಸ್‌ಪಿಎನ್)– ಜಮ್ಮು–ಕಾಶ್ಮೀರದ ಪ್ರವಾಸಿ ತಾಣಗಳ ವೀಕ್ಷಣೆಗೆ ತೆರಳಿದ್ದ ವಿವಿಧ ರಾಜ್ಯಗಳ 30ಕ್ಕೂ ಹೆಚ್ಚು ಪ್ರವಾಸಿಗರ ಮೇಲಿನ ಉಗ್ರರ ದಾಳಿಯನ್ನು ಖಂಡಿಸಿ ಕೃಷ್ಣರಾಜ ಯುವ ಬಳಗದ ಪದಾಧಿಕಾರಿಗಳು ಮೈಸೂರು ಚಾಮುಂಡಿಪುರಂ ವೃತ್ತದಲ್ಲಿ ಮಂಗಳವಾರ ಕಪ್ಪುಪಟ್ಟಿ ಧರಿಸಿ ಮೊಂಬತ್ತಿ ಬೆಳಗಿಸಿ, ಬಳಿಕ ಮೃತರ ಆತ್ಮಕ್ಕೆ ಶ್ರದ್ಧಾಂಜಲಿ ಕೋರಿದರು.

ಜಮ್ಮು ಕಾಶ್ಮೀರದ ಪಹಲ್ಗಾಮ್‌ನಲ್ಲಿ ಅತ್ಯಂತ ಪೈಶಾಚಿಕ ಕೃತ್ಯ ನಡೆದಿದ್ದು, ಉಗ್ರರ ದಾಳಿಗೆ 30ಕ್ಕೂ ಹೆಚ್ಚು ಮಂದಿ ಪ್ರವಾಸಿಗರು ಸಾವನ್ನಪ್ಪಿದ್ದಾರೆ ಹಾಗೂ ಹಲವರಿಗೆ ಗಾಯವಾಗಿದೆ. ಇದರಲ್ಲಿ ಶಿವಮೊಗ್ಗದ ಮಂಜುನಾಥ್ ರಾವ್ ಹಾಗೂ ಬೆಂಗಳೂರಿನ ಭರತ್ ಭೂಷಣ್ ಸಾವನ್ನಪ್ಪಿದ್ದು, ಇವರ ಆತ್ಮಕ್ಕೆ ಶಾಂತಿ ಸಿಗಲಿ ಎಂದು ಶ್ರದ್ಧಾಂಜಲಿ ಕೋರಿದರು.

ಮೈಸೂರು ನಗರಪಾಲಿಕೆ ಮಾಜಿ ಸದಸ್ಯ ಮಾ.ವಿ.ರಾಮ್‌ಪ್ರಸಾದ್ ಮಾತನಾಡಿ, ಜಮ್ಮು–ಕಾಶ್ಮೀರದ ಪ್ರವಾಸಿತಾಣಗಳ ವೀಕ್ಷಣೆಗೆ ತೆರಳಿದ್ದ 30 ಪ್ರವಾಸಿಗರ ಮೇಲೆ ಉಗ್ರರು ಪೈಶಾಚಿಕ ಕೃತ್ಯ ನಡೆಸಿದ್ದಾರೆ. ಇಂತಹ ಕೃತ್ಯಗಳಲ್ಲಿ ಭಾಗಿಯಾಗುವವರ ವಿರುದ್ಧ, ಇದಕ್ಕೆ ಸಹಕಾರ ನೀಡುವವರ ವಿರುದ್ಧ ಕೇಂದ್ರ ಸರ್ಕಾರ ಕಠಿಣ ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿದರು.

ಈ ವೇಳೆ ಕೆ.ಆರ್. ಬ್ಯಾಂಕ್ ಅಧ್ಯಕ್ಷ ಬಸವರಾಜ್ ಬಸಪ್ಪ, ಟಿ.ಎಸ್ ಅರುಣ್, ಕೆಪಿಸಿಸಿ ಸದಸ್ಯರಾದ ನಜರ್‌ಬಾದ್ ನಟರಾಜ್, ಬಿಜೆಪಿ ಚಾಮುಂಡೇಶ್ವರಿ ಕ್ಷೇತ್ರದ ಅಧ್ಯಕ್ಷ ರಾಕೇಶ್ ಭಟ್, ಜೆಡಿಎಸ್ ಕಾರ್ಯಾಧ್ಯಕ್ಷ ಎಸ್. ಪ್ರಕಾಶ್ ಪ್ರಿಯಾದರ್ಶನ್, ಜಿ.ರಾಘವೇಂದ್ರ, ಅಗಸ್ತ್ಯ ಕ್ರೆಡಿಟ್ ಕೋ ಆಪರೇಟಿವ್ ಸೊಸೈಟಿಯ ಖಜಾಂಚಿ ನಾಗರಾಜ್, ಕರ್ನಾಟಕ ಹಿತರಕ್ಷಣಾ ವೇದಿಕೆ ಅಧ್ಯಕ್ಷ ವಿನಯ್ ಕುಮಾರ್, ಜೀವಧಾರ ರಕ್ತನಿಧಿ ಕೇಂದ್ರದ ನಿರ್ದೇಶಕ ಗಿರೀಶ್, ರಮೇಶ್ ರಾಮಪ್ಪ, ಅಪೂರ್ವ ಸುರೇಶ್, ಶ್ರೀಕಾಂತ್ ಕಶ್ಯಪ್, ಶ್ರೀನಿವಾಸ್ ಪ್ರಸಾದ್, ರವಿಶಂಕರ್, ಕಡಕೋಳ ಶಿವು, ಪಾಂಡು, ಮಹಾನ್ ಶ್ರೇಯಸ್, ರಾಘವೇಂದ್ರ, ಮಂಜುನಾಥ್, ರಾಕೇಶ್, ನಾಗೇಂದ್ರ ಹಾಗೂ ಇನ್ನಿತರರು ಹಾಜರಿದ್ದರು.

ಬೆಟ್ಟದ ಮೆಟ್ಟಿಲು ಮಾರ್ಗದಲ್ಲಿ ಅಸಭ್ಯ ವರ್ತನೆ ; ಕೇರಳ ಯುವಕರ ವಿರುದ್ಧ ಲಘು ಪ್ರಕರಣ ದಾಖಲು



ಮೈಸೂರು ಚಾಮುಂಡಿಬೆಟ್ಟದ ಮೆಟ್ಟಿಲು ಮಾರ್ಗದಲ್ಲಿ ಅಂಗಿ ಬಿಚ್ಚಿಕೊಂಡ ಅಸಭ್ಯವಾಗಿ ವರ್ತಿಸುತ್ತಿದ ಕೇರಳ ಯುವಕರನ್ನು ಠಾಣೆಯಲ್ಲಿ ಕೂರಿಸಿಕೊಂಡಿದ್ದನ್ನು ಕಾಣಬಹುದು.

ಮೈಸೂರು,ಏ.22(ಪಿಎಂ)–ಚಾಮುಂಡಿ ಬೆಟ್ಟದ ಮೆಟ್ಟಿಲು ಮಾರ್ಗದಲ್ಲಿ ಅಸಭ್ಯವಾಗಿ ವರ್ತಿಸುತ್ತಿದ್ದ ಹೊರರಾಜ್ಯದ ಯುವಕರ ವಿರುದ್ಧ ಕೆಆರ್ ಪೊಲೀಸ್ ಠಾಣೆಯಲ್ಲಿ ಲಘು ಪ್ರಕರಣ ದಾಖಲಿಸಲಾಗಿದೆ.

ಸೋಮವಾರ ಬೆಟ್ಟದ ಮೆಟ್ಟಿಲು ಮಾರ್ಗದಲ್ಲಿ ಅಂಗಿ ಬಿಚ್ಚಿಕೊಂಡು ಅಸಭ್ಯವಾಗಿ ವರ್ತಿಸುತ್ತಿದ್ದ ಯುವಕರ ಗುಂಪನ್ನು ಕಂಡ ಗಸ್ತಿನಲ್ಲಿದ್ದ ಪೊಲೀಸರು, ಅವರನ್ನು ವಿಚಾರಣೆ ಮಾಡಿದಾಗ, ಅವರು ಕೇರಳ ರಾಜ್ಯದವರು ಎಂದು ತಿಳಿದು ಬಂದಿದೆ.

ಈ ವೇಳೆ ಆ ಎಲ್ಲಾ ಯುವಕರನ್ನು ವಶಕ್ಕೆ ಪಡೆದ ಪೊಲೀಸರು, ಠಾಣೆಗೆ ಕರೆತಂದು ಸಾರ್ವಜನಿಕ ಸ್ಥಳದಲ್ಲಿ ಅಸಭ್ಯವಾಗಿ ವರ್ತಿಸಬಾರದು ಎಂದು ತಿಳುವಳಿಕೆ ನೀಡಿ, ಅವರ ವಿರುದ್ಧ ಲಘು ಪ್ರಕರಣ ದಾಖಲಿಸಿದ್ದಾರೆ. ಬಳಿಕ ಅವರನ್ನು ಬಿಟ್ಟು ಕಳುಹಿಸಿದ್ದಾರೆ.

ವಿವಿಧ ಇಲಾಖೆ ಗುತ್ತಿಗೆ ನೌಕರರ ನೇರ ವೇತನ ಪಾವತಿ ವ್ಯವಸ್ಥೆಯಡಿ ತರಲು ಮಾಜಿ ಮೇಯರ್ ಸಂದೇಶ್ ಸ್ವಾಮಿ ಆಗ್ರಹ

ಮೈಸೂರು, ಏ.22– ರಾಜ್ಯದ ವಿವಿಧ ಇಲಾಖೆಗಳಲ್ಲಿ ಗುತ್ತಿಗೆ ಆಧಾರದಲ್ಲಿ ಕಾರ್ಯ ನಿರ್ವಹಿಸುತ್ತಿರುವ ಲಕ್ಷಾಂತರ ನೌಕರರನ್ನು ನೇರ ವೇತನ ಪಾವತಿ ವ್ಯವಸ್ಥೆಯಡಿ ತರಬೇಕು ಎಂದು ಮೈಸೂರಿನ ಮಾಜಿ ಮೇಯರ್ ಸಂದೇಶ್ ಸ್ವಾಮಿ ಆಗ್ರಹಿಸಿದ್ದಾರೆ.



ಸಂದೇಶ್ ಸ್ವಾಮಿ

ಈ ಸಂಬಂಧ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಪತ್ರ ಬರೆದಿರುವ ಅವರು, ವಿವಿಧ ಇಲಾಖೆಗಳಲ್ಲಿ 20 ಲಕ್ಷಕ್ಕೂ ಹೆಚ್ಚು ಗುತ್ತಿಗೆ ನೌಕರರು ಕಾರ್ಯ ನಿರ್ವಹಿಸುತ್ತಿದ್ದಾರೆ. ಆದರೆ ಗುತ್ತಿಗೆದಾರರು ಸರ್ಕಾರದ ನಿಯಮಾನುಸಾರ ವೇತನ ಹಾಗೂ ಇತರೆ ಸೌಲಭ್ಯಗಳನ್ನು ನೀಡದೆ ಶೋಷಿಸುತ್ತಿದ್ದಾರೆ. ಆದ್ದರಿಂದ ಈ ನೌಕರರಿಗೆ ಆಯಾಯ ಇಲಾಖೆಗಳ ಮೂಲಕವೇ ನೇರ ವೇತನ ಪಾವತಿಗೆ ಅಗತ್ಯ ಕ್ರಮ ಕೈಗೊಳ್ಳಬೇಕೆಂದು ಮನವಿ ಮಾಡಿದ್ದಾರೆ.

ರಾಜ್ಯ ಸರ್ಕಾರ ಎರಡು ದಶಕಗಳಿಂದ ನಿಯಮಿತವಾಗಿ ನೇಮಕಾತಿ ನಡೆಸದ ಕಾರಣದಿಂದ ವಿಧಾನಸೌಧ, ಸ್ಥಳೀಯ ಸಂಸ್ಥೆಗಳು, ವಿಶ್ವವಿದ್ಯಾಲಯಗಳು, ಮೃಗಾಲಯಗಳು, ಕೆಇಬಿ, ನೀರು ಸರಬರಾಜು ಮಂಡಳಿ ಸೇರಿದಂತೆ ವಿವಿಧ ಇಲಾಖೆಗಳ ಕಾರ್ಯವ್ಯಾಪ್ತಿಯಲ್ಲಿ ತಾತ್ಕಾಲಿಕ, ಹೊರಗುತ್ತಿಗೆ ನೌಕರರು ಹೆಚ್ಚಿನ ಸಂಖ್ಯೆಯಲ್ಲಿ ಸೇವೆ ಸಲ್ಲಿಸುತ್ತಿದ್ದಾರೆ. ಟೆಂಡರ್ ಗುತ್ತಿಗೆದಾರರು ಇಲಾಖೆಗಳಿಂದ ಪಡೆಯುವ ವೇತನದ ಮೊತ್ತದಲ್ಲಿ ಶೇ.30 ರಿಂದ 40ರಷ್ಟು ಕಡಿತ ಮಾಡಿ, ನೌಕರರಿಗೆ ನೀಡುತ್ತಿದ್ದಾರೆ. ಪಿಎಫ್ ಮತ್ತು ಇಎಸ್‌ಐ ಸೌಲಭ್ಯಕ್ಕಾಗಿ ಹಣ ಪಡೆದರೂ ಸೇವೆ ಕಲ್ಪಿಸಿಲ್ಲ. ವೇತನ ಪಾವತಿಯಲ್ಲೂ ವಿಳಂಬ ಧೋರಣೆ ಅನುಸರಿಸುತ್ತಿದ್ದಾರೆ. ಈ ಬಗ್ಗೆ ಧ್ವನಿ ಎತ್ತುವ ನೌಕರರಿಗೆ ಬೆದರಿಸುತ್ತಿದ್ದಾರೆ. ಯಾವುದೇ ರೀತಿಯಲ್ಲಿ ಹತ್ತು ವರ್ಷಗಳ ಕಾಲ ಇಲಾಖೆಯಲ್ಲಿ ಸೇವೆ ಸಲ್ಲಿಸಿದ ನೌಕರರ ಸೇವೆಯನ್ನು ಖಾಯಂಗೊಳಿಸಬೇಕೆಂದು ಹೈಕೋರ್ಟ್ ಆದೇಶ ನೀಡಿದ್ದರೂ ನಿರ್ಲಕ್ಷಿಸಲಾಗಿದೆ ಎಂದು ಆರೋಪಿಸಿದ್ದಾರೆ. ನಾನು ಮೈಸೂರು ಮಹಾನಗರ ಪಾಲಿಕೆ ಮೇಯರ್ ಆಗಿದ್ದಾಗ ಪಾಲಿಕೆಯ ಪೌರಕಾರ್ಮಿಕರು ಮತ್ತು ವಾಣಿ ವಿಲಾಸ ನೀರು ಸರಬರಾಜು ಕೇಂದ್ರದ ಗುತ್ತಿಗೆ ನೌಕರರನ್ನು ನೇರ ವೇತನ ಪಾವತಿ ವ್ಯವಸ್ಥೆಗೆ ಸೇರಿಸಲಾಯಿತು. ಇತ್ತೀಚೆಗೆ ರಾಜ್ಯದ ವಿವಿಧೆಡೆ ಪೌರಕಾರ್ಮಿಕರಿಗೆ ನೇರ ವೇತನ ಸೌಲಭ್ಯ ದೊರೆತಿದೆ. ವಿವಿಧ ಇಲಾಖೆಗಳಲ್ಲಿ ಶಾಸಕರು ಮತ್ತು ಸಚಿವರ ಶಿಫಾರಸ್ಸಿನಿಂದ ಉದ್ಯೋಗಸ್ಥರನ್ನು ಮಾತ್ರ ನೇರ ವೇತನ ಪಾವತಿಯಡಿ ಸೇರಿಸಲಾಗಿದೆಯಷ್ಟೇ. ಆದ್ದರಿಂದ ಎಲ್ಲಾ ಇಲಾಖೆಗಳಲ್ಲಿ ಹತ್ತು ವರ್ಷಕ್ಕೂ ಹೆಚ್ಚು ಕಾಲದಿಂದ ಕಾರ್ಯ ನಿರ್ವಹಿಸುತ್ತಿರುವ ಎಲ್ಲಾ ನೌಕರರಿಗೂ ನೇರ ವೇತನ ಪಾವತಿಗೆ ಆದೇಶಿಸುವಂತೆ ಮನವಿ ಮಾಡಿದ್ದಾರೆ.

ಮೈಸೂರು ಮೃಗಾಲಯದಲ್ಲಿ 250ಕ್ಕೂ ಹೆಚ್ಚು ಮಂದಿ ಗುತ್ತಿಗೆ ನೌಕರರು ಸುಮಾರು 20 ವರ್ಷದಿಂದ ಕೆಲಸ ನಿರ್ವಹಿಸುತ್ತಿದ್ದಾರೆ. ಇವರೇನಾದರೂ ಧರಣಿ ಕೈಗೊಂಡರೆ, ಪ್ರಾಣಿಗಳ ಪೋಷಣೆಗೆ ಸಮಸ್ಯೆಯಾಗುತ್ತದೆ. ಇನ್ನು ಎಲ್ಲಾ ಇಲಾಖೆಯ ಗುತ್ತಿಗೆ ನೌಕರರು ಮುಷ್ಕರ ಹೂಡಿದರೆ ಸರ್ಕಾರದ ಆಡಳಿತ ವ್ಯವಸ್ಥೆಯೇ ಹದಗೆಡಲಿದೆ. ಇವರನ್ನು ಸರ್ಕಾರಿ ಉದ್ಯೋಗಿಗಳೆಂದು ಪರಿಗಣಿಸಿ, ಪಡಿತರ ಚೀಟಿಯನ್ನೂ ನೀಡುತ್ತಿಲ್ಲ. ಜೀವನ ನಿರ್ವಹಣೆಗಾಗಿ ಸಾಲದ ಸುಳಿಗೆ ಸಿಲುಕಿದ್ದಾರೆ. ನಿವೃತ್ತಿಯಾದವರಿಗೆ ಯಾವುದೇ ಸೌಲಭ್ಯ ದೊರಕುತ್ತಿಲ್ಲ. ಗುತ್ತಿಗೆ ನೌಕರರ ಕುಟುಂಬಗಳೂ ಸಂಕಷ್ಟದಲ್ಲಿವೆ. ಆದ್ದರಿಂದ ಪ್ರಾಮಾಣಿಕವಾಗಿ 10 ವರ್ಷಕ್ಕಿಂತ ಕಾರ್ಯನಿರ್ವಹಿಸಿರುವ ಅರ್ಹ ನೌಕರರನ್ನು ನೇರ ವೇತನ ಪಾವತಿಗೆ ಒಳಪಡಿಸಿ, ನಂತರ ಹಂತ ಹಂತವಾಗಿ ಸೇವೆಯನ್ನು ಖಾಯಂಗೊಳಿಸಬೇಕು ಎಂದು ಆಗ್ರಹಿಸಿದ್ದಾರೆ.

ರೇಣುಕಾಸ್ವಾಮಿ ಕೊಲೆ ಪ್ರಕರಣ

ಜಾಮೀನು ಪ್ರಶ್ನಿಸಿದ ಮೇಲ್ಮನವಿ ಅರ್ಜಿ ವಿಚಾರಣೆ ಮೇ 14ಕ್ಕೆ ಮುಂದೂಡಿಕೆ

ಬೆಂಗಳೂರು, ಏ.22– ರೇಣುಕಾಸ್ವಾಮಿ ಕೊಲೆ ಪ್ರಕರಣ ಸಂಬಂಧ ನಟ ದರ್ಶನ್ ಸೇರಿದಂತೆ ಇತರ ಆರೋಪಿಗಳಿಗೆ ಕರ್ನಾಟಕ ಹೈಕೋರ್ಟ್ ನೀಡಿದ್ದ ಜಾಮೀನು ಪ್ರಶ್ನಿಸಿ ಸುಪ್ರೀಂಕೋರ್ಟ್‌ಗೆ ಸಲ್ಲಿಸಲಾಗಿದ್ದ ಮೇಲ್ಮನವಿ ಅರ್ಜಿಯ ವಿಚಾರಣೆ ನಡೆಸಿದ ಸರ್ವೋಚ್ಚ ನ್ಯಾಯಾಲಯ ಮುಂದಿನ ವಿಚಾರಣೆಯನ್ನು ಮೇ 14ಕ್ಕೆ ಮುಂದೂಡಿದೆ. ಹೀಗಾಗಿ ದರ್ಶನ್‌ಗೆ 21 ದಿನ ರಿಲೀಫ್ ಸಿಕ್ಕಿದೆ.



ಬೆಂಗಳೂರು ನಗರ ಪೊಲೀಸರು ಹೈಕೋರ್ಟ್ ಜಾಮೀನು ನೀಡಿರುವುದನ್ನು ಪ್ರಶ್ನಿಸಿ ಸಲ್ಲಿಸಿದ್ದ ಮೇಲ್ಮನವಿಯನ್ನು ಇಂದು ಸುಪ್ರೀಂಕೋರ್ಟ್ ನ್ಯಾಯಮೂರ್ತಿಗಳಾದ ಜೆಬಿ ಪರ್ದಿವಾಲಾ ಮತ್ತು ಮಹದೇವನ್ ಅವರನ್ನೊಳಗೊಂಡ ದ್ವಿಸದಸ್ಯ ಪೀಠ ವಿಚಾರಣೆ ನಡೆಸಿತು. ಈ ವೇಳೆ ವಕೀಲರ ವಾದ ಆಲಿಸಿದ ನ್ಯಾಯಪೀಠ ವಿಚಾರಣೆಯನ್ನು ಮೇ 14ಕ್ಕೆ ಮುಂದೂಡಿದೆ.

ಕಳೆದ ಡಿಸೆಂಬರ್ 13ರಂದು ಕರ್ನಾಟಕ ಹೈಕೋರ್ಟ್ ದರ್ಶನ್, ಪವಿತ್ರಾಗೌಡ, ಪ್ರದೂಶ್, ಜಗದೀಶ್, ಲಕ್ಷ್ಮಣ್, ಅನುಕುಮಾರ್ ಹಾಗೂ ನಾಗರಾಜುಗೆ ಜಾಮೀನು ನೀಡಿತ್ತು. ಇದನ್ನು ಪ್ರಶ್ನಿಸಿ ಬೆಂಗಳೂರು ನಗರ ಪೊಲೀಸರು ಸುಪ್ರೀಂ ಕೋರ್ಟ್‌ಗೆ ಮೊರೆ ಹೋಗಿದ್ದರು. ಈ ಹಿಂದೆ ಏಪ್ರಿಲ್ 2ರಂದು ವಿಚಾರಣೆ ನಡೆಸಿದ್ದ ನ್ಯಾಯಪೀಠ ಏಪ್ರಿಲ್ 22ಕ್ಕೆ ಮುಂದೂಡಿತ್ತು.

ಇಂದು ರೋಟರಿ ಮಿಡ್‌ಟೌನ್ ಸಿಲಿಕಾನ್ ಮಾಧ್ಯಮ ಪ್ರಶಸ್ತಿ ಪ್ರದಾನ



ಯೋಗೇಶ್‌ಕುಮಾರ್



ಲೋಕೇಶ್ವರಿ



ನಾಗೇಂದ್ರಬಾಬು

ಮೈಸೂರು,ಏ.22(ಪಿಎಂ)– ರೋಟರಿ ಮೈಸೂರು ಮಿಡ್‌ಟೌನ್ ವತಿಯಿಂದ ಕೊಡಮಾಡುವ ಸಿಲಿಕಾನ್ ಮಾಧ್ಯಮ ಪ್ರಶಸ್ತಿಗೆ (2025ನೇ ಸಾಲಿನ ಪ್ರಶಸ್ತಿ) ಮೂವರನ್ನು ಆಯ್ಕೆ ಮಾಡಿದ್ದು, ನಾಳೆ (ಏ.23) ಸಂಜೆ 6.30ಕ್ಕೆ ಮೈಸೂರಿನ ಜೆಎಲ್‌ಬಿ ರಸ್ತೆಯ ರೋಟರಿ ಕೇಂದ್ರದಲ್ಲಿ ಪ್ರಶಸ್ತಿ ಪ್ರದಾನ ಸಮಾರಂಭ ನಡೆಯಲಿದೆ.

ಮಿಜೋರಾಂ ವಿಶ್ವವಿದ್ಯಾನಿಲಯದ ನಿವೃತ್ತ ಪ್ರಾಧ್ಯಾಪಕ ಡಾ.ಕೆವಿ.ನಾಗರಾಜು ಸಮಾರಂಭದಲ್ಲಿ ಮುಖ್ಯ ಅತಿಥಿಯಾಗಿ ಪಾಲ್ಗೊಳ್ಳಲಿದ್ದಾರೆ. 'ಮೈಸೂರು ಮಿತ್ರ' ಮತ್ತು 'ಸ್ಟಾರ್ ಆಫ್ ಮೈಸೂರ್' ಹಿರಿಯ ವರದಿಗಾರ ಎಂ.ಟಿ.ಯೋಗೇಶ್‌ಕುಮಾರ್, ಮೈಸೂರು ಆಕಾಶವಾಣಿ ಕೃಷಿರಂಗದ ನಿರೂಪಕಿ ಆರ್.ಲೋಕೇಶ್ವರಿ ಹಾಗೂ ವ್ಯಂಗ್ಯಚಿತ್ರಕಾರ ಎಂ.ವಿ.ನಾಗೇಂದ್ರ ಬಾಬು ಅವರು ಸಿಲಿಕಾನ್ ಮಾಧ್ಯಮ ಪ್ರಶಸ್ತಿ ಸ್ವೀಕರಿಸಲಿದ್ದಾರೆ ಎಂದು ಪ್ರಕಟಣೆ ತಿಳಿಸಿದೆ.

ಇಂದು ರಸ್ತೆ ಅಭಿವೃದ್ಧಿಗೆ ಸಚಿವರಿಂದ ಚಾಲನೆ



ಮೈಸೂರು, ಏ.22– ತಾಲೂಕಿನ ಉದ್ಬೂರು ಮುಖ್ಯ ರಸ್ತೆಯ ಅಗಲೀಕರಣ ಹಾಗೂ ಅಭಿವೃದ್ಧಿ ಕಾಮಗಾರಿಗೆ ಲೋಕೋಪಯೋಗಿ ಸಚಿವ ಸತೀಶ್ ಜಾರಕಿಹೊಳಿ ಬುಧವಾರ ಬೆಳಗ್ಗೆ 11.30ಕ್ಕೆ ಚಾಲನೆ ನೀಡಲಿದ್ದಾರೆ. ಶಾಸಕ ಜಿ.ಟಿ.ದೇವೇಗೌಡರ ಅಧ್ಯಕ್ಷತೆ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಡಾ.ಹೆಚ್.ಸಿ.ಮಹದೇವಪ್ಪನವರ ಉಪಸ್ಥಿತಿಯಲ್ಲಿ ನೆರವೇರಲಿರುವ ಗುದ್ದಲಿಪೂಜೆ ಕಾರ್ಯಕ್ರಮದಲ್ಲಿ ಶಾಸಕರಾದ ಅನಿಲ್ ಚಿಕ್ಕಮಾದು ಹಾಗೂ ದರ್ಶನ್ ಧ್ರುವನಾರಾಯಣ್, ವಿಧಾನಪರಿಷತ್ ಸದಸ್ಯ ಡಾ.ಯತೀಂದ್ರ ಸಿದ್ದರಾಮಯ್ಯ ಮತ್ತಿತರರು ಉಪಸ್ಥಿತರಿರಲಿದ್ದಾರೆ. ಇದಕ್ಕೂ ಮುನ್ನ ಗ್ರಾಮದ ಬಸ್ ನಿಲ್ದಾಣದ ಬಳಿ ಸಚಿವ ಸತೀಶ್ ಜಾರಕಿಹೊಳಿ ಅವರನ್ನು ಸ್ವಾಗತಿಸಲಾಗುವುದು ಎಂದು ಕಾಂಗ್ರೆಸ್ ಮುಖಂಡ ಹೆಚ್. ಕೃಷ್ಣ ನಾಯಕ ಹಾಗೂ ಉದ್ಯಮಿ ಎ.ಮಹೇಶ್ ತಿಳಿಸಿದ್ದಾರೆ.

ತಾಪಂ, ಜಿಪಂಗೆ 3 ತಿಂಗಳಲ್ಲಿ ಚುನಾವಣೆ

ಹುಬ್ಬಳ್ಳಿ, ಏ.22– ತಾಲೂಕು ಪಂಚಾಯಿತಿ, ಜಿಲ್ಲಾ ಪಂಚಾಯಿತಿಗೆ ಮೂರು ತಿಂಗಳೊಳಗೆ ಚುನಾವಣೆ ನಡೆಸಲು ರಾಜ್ಯ ಸರ್ಕಾರ ಚಿಂತನೆ ನಡೆಸಿದೆ ಎಂದು ವೈದ್ಯಕೀಯ ಶಿಕ್ಷಣ ಸಚಿವ ಶರಣಪ್ರಕಾಶ ಪಾಟೀಲ ಹೇಳಿದರು.

ಇಲ್ಲಿನ ಕಾಂಗ್ರೆಸ್ ಕಚೇರಿಗೆ ಮಂಗಳವಾರ ಭೇಟಿ ನೀಡಿದ ಬಳಿಕ ನಂತರ ಸುದ್ದಿಗಾರರೊಂದಿಗೆ ಮಾತನಾಡಿದರು. ಗ್ರಾಮ ಪಂಚಾಯಿತಿ ಹಾಗೂ ಪುರಸಭೆಗಳಿಗೆ 8 ತಿಂಗಳಲ್ಲಿ ಚುನಾವಣೆ ನಡೆಸಲಿದ್ದೇವೆ. ಹಿಂದಿನ ಬಿಜೆಪಿ ಸರ್ಕಾರವು ಸ್ಥಳೀಯ ಸಂಸ್ಥೆಗಳಿಗೆ ಚುನಾವಣೆ ನಡೆಸಿಲ್ಲ. ಕ್ಷೇತ್ರ ಮರುವಿಂಗಡಣೆ ಹಾಗೂ ಮೀಸಲಾತಿ ವಿಷಯದಲ್ಲಿ ಸಾಕಷ್ಟು ಗೊಂದಲ ಸೃಷ್ಟಿ ಮಾಡಿತ್ತು. ನ್ಯಾಯಾಲಯದ ಮೆಟ್ಟಿಲು ಏರಿತ್ತು. ಇವೆಲ್ಲ ಸಮಸ್ಯೆಗಳನ್ನು ನಮ್ಮ ಸರ್ಕಾರ ಬಗೆಹರಿಸಿದ್ದು, ಚುನಾವಣೆಗಳನ್ನು ನಡೆಸಲು ಅಗತ್ಯ ತಯಾರಿ ಮಾಡಿಕೊಳ್ಳುತ್ತಿದೆ. ಅಧಿಕಾರ ವಿಕೇಂದ್ರೀಕರಣ ಆಗಬೇಕು ಎನ್ನುವುದು ಕಾಂಗ್ರೆಸ್ ಸಿದ್ಧಾಂತ ಎಂದು ಹೇಳಿದರು.

ಶ್ರೀ ಕೃಷ್ಣದೇವರಾಯ ಸಮಾಧಿ ಮಂಟಪದಲ್ಲಿ ಮಾಂಸ ಶುದ್ಧೀಕರಣ: ಮೂವರ ವಿರುದ್ಧ ಎಫ್‌ಐಆರ್



ಕೊಪ್ಪಳ, ಏ.22– ಆನೆಗೊಂದಿಯ ತುಂಗಭದ್ರಾ ನದಿ ದಡದಲ್ಲಿರುವ ಶ್ರೀ ಕೃಷ್ಣದೇವರಾಯ ಸಮಾಧಿ ಮಂಟಪದಲ್ಲಿ ಮಾಂಸ ಶುದ್ಧೀಕರಣ ಮಾಡಿದ್ದ ಮೂವರ ವಿರುದ್ಧ ಗಂಗಾವತಿ ಗ್ರಾಮೀಣ ಠಾಣೆಯಲ್ಲಿ ಎಫ್‌ಐಆರ್ ದಾಖಲಾಗಿದೆ. ಆನೆಗೊಂದಿ ಗ್ರಾಮದ ಹನುಮಂತ, ಫಕೀರಪ್ಪ, ಹುಲಗಪ್ಪ ಎಂಬುವರ ವಿರುದ್ಧ ಎಫ್‌ಐಆರ್ ದಾಖಲಾಗಿದೆ.

ಶ್ರೀ ಕೃಷ್ಣದೇವರಾಯ ಸಮಾಧಿ ಮಂಟಪದಲ್ಲಿ ಮಾಂಸ ಶುದ್ಧೀಕರಣ ಮಾಡಿದ್ದ ವಿಡಿಯೋ ವೈರಲ್ ಆಗುತ್ತಿದ್ದಂತೆ, ಪ್ರವಾಸೋದ್ಯಮ ಸಚಿವ ಹೆಚ್.ಕೆ. ಪಾಟೀಲ್ ಸ್ಥಳಕ್ಕೆ ಭೇಟಿ ನೀಡಿದರು. ಬಳಿಕ ಮಾಧ್ಯಮ ಪ್ರತಿನಿಧಿಗಳೊಂದಿಗೆ ಮಾತನಾಡಿದ ಅವರು, ಈ ವಿಚಾರದಲ್ಲಿ ರಾಜಕೀಯ ಬೆರೆಸುವುದಿಲ್ಲ, ಅವರೂ ಬೆರೆಸಬಾರದು. ಅಪಮಾನ ಆಗಿದ್ದನ್ನು ನಾವು ಒಪ್ಪಿಕೊಳ್ಳುತ್ತೇವೆ ಎಂದರು.

ಸಮಾಧಿ ಮಂಟಪದಲ್ಲಿ ಅಚಾತುರ್ಯ ಆಗಿದೆ ಎಂದು ಇಲ್ಲಿಗೆ ಬಂದಿದ್ದೇನೆ. ಅಂಜನಾದ್ರಿ ಬೆಟ್ಟ ಅಭಿವೃದ್ಧಿ ಬಗ್ಗೆ ಮೇ ತಿಂಗಳಲ್ಲಿ ಬಂದಾಗ ಹೇಳುತ್ತೇನೆ. ಆನೆಗೊಂದಿಯಲ್ಲಿ ಪೊಲೀಸ್ ಠಾಣೆ ಸ್ಥಾಪನೆ ಬಗ್ಗೆ ಮನವರಿಕೆ ಮಾಡುತ್ತೇನೆ ಎಂದು ಹೇಳಿದರು.

ಪ್ರಕರಣ ಸಂಬಂಧ ಆನೆಗೊಂದಿ ಗ್ರಾಮ ಪಂಚಾಯತ್ ಅಧ್ಯಕ್ಷೆ ಹುಲಿಗೆಮ್ಮ ಮಾತನಾಡಿ, ಗೊತ್ತಿದ್ದೊ, ಗೊತ್ತಿಲ್ಲದೆಯೋ ಮಾಡಿದ್ದಾರೆ. ಅಚಾನಕ್ಕಾಗಿ ಘಟನೆ ನಡೆದಿದೆ. ಇದರಲ್ಲಿ ರಾಜಕೀಯ ಮಾಡಬಾರದು. ತಪ್ಪಾಗಿದೆ ಮುಂದೆ ಆಗದಂತೆ ನೋಡಿಕೊಳ್ಳುತ್ತೇವೆ. ಈ ಕುರಿತು ಪ್ರವಾಸೋದ್ಯಮ ಇಲಾಖೆಗೆ ಪತ್ರ ಬರೆಯುತ್ತೇವೆ ಎಂದರು.

ಎಳೆಯರ ಮೇಳ 2025 ಸಂಪನ್ನ



ಎಳೆಯರ ಮೇಳ 2025 ಮಂಗಳವಾರ ಸಂಪನ್ನಗೊಂಡಿತು.

ಮೈಸೂರು, ಏ. 22(ಎಸ್‌ಪಿಎನ್)– ಮೈಸೂರು ಸರಸ್ವತಿಪುರಂ ಜೆಎಸ್‌ಎಸ್ ಪದವಿ ಮಹಿಳಾ ಕಾಲೇಜಿನ ನವಜ್ಯೋತಿ ಸಭಾಂಗಣದಲ್ಲಿ ಜೆಎಸ್‌ಎಸ್ ಮಹಾವಿದ್ಯಾಪೀಠ, ಜೆಎಸ್‌ಎಸ್ ಕಲಾಮಂಟಪ ಸಹಯೋಗದೊಂದಿಗೆ ನಡೆದ ಎಳೆಯರ ಮೇಳ 2025 ಮಂಗಳವಾರ ಸಂಪನ್ನಗೊಂಡಿತು.

ಕರ್ನಾಟಕ ಬಯಲಾಟ ಅಕಾಡೆಮಿ ಪ್ರಶಸ್ತಿ ಪುರಸ್ಕೃತ, ಹಿರಿಯ ಕಲಾವಿದ ಡಿ.ತಿಪ್ಪಣ್ಣ ಮಾತನಾಡಿ, ಮಕ್ಕಳಿಗೆ ರಂಗಭೂಮಿ ಚಟುವಟಿಕೆಗಳಲ್ಲಿ ತೊಡಗಿಸಿದರೆ, ಸ್ಪರ್ಧಾತ್ಮಕ ಪರೀಕ್ಷೆಗಳನ್ನು ಸುಲಭವಾಗಿ ಎದುರಿಸಲು ಸಾಧ್ಯವಿದೆ ಎಂದರು.

ಕಳೆದ 30 ವರ್ಷಗಳಿಂದ ಮಕ್ಕಳ ರಂಗಭೂಮಿಯಲ್ಲಿ ತೊಡಗಿಸಿಕೊಂಡಿದ್ದೇನೆ. ವ್ಯಾಸಂಗ ಜೊತೆಗೆ ರಂಗಭೂಮಿಯಲ್ಲಿ ತೊಡಗಿಸಿಕೊಂಡ ವಿದ್ಯಾರ್ಥಿಗಳು ಪರೀಕ್ಷೆಯಲ್ಲೂ ಉತ್ತಮ ಅಂಕ ಗಳಿಸಿದ್ದಾರೆ ಅಲ್ಲದೆ, ಅಂತಹ ವಿದ್ಯಾರ್ಥಿಗಳು ಮುಂದೆ ಸ್ಪರ್ಧಾತ್ಮಕ ಪರೀಕ್ಷೆಗಳನ್ನು ಧೈರ್ಯವಾಗಿ ಎದುರಿಸಿ, ಸಕ್ಸಸ್ ಆಗಿದ್ದಾರೆ ಎಂದರು.

ಹಾಗಾಗಿ ಪೋಷಕರು, ತಮ್ಮ ಮಕ್ಕಳಿಗೆ ವ್ಯಾಸಂಗದ ಜೊತೆಗೆ, ಕಲೆ, ಚಿತ್ರಕಲೆ, ಸಂಗೀತ, ಸಾಹಿತ್ಯ ಹಾಗೂ ರಂಗಭೂಮಿ ಚಟುವಟಿಕೆಗಳಲ್ಲಿ ತೊಡಗಿಸಿದರೆ, ಉತ್ತಮ ಪ್ರಜೆಗಳಾಗಿ ರೂಪುಗೊಳ್ಳುತ್ತಾರೆ. ಹಾಗಾಗಿ ರಂಗಶಿಬಿರದಲ್ಲಿ ಕಲಿತ ಪ್ರತಿಯೊಂದು ಚಟುವಟಿಕೆಗಳು ಮಕ್ಕಳ ಮನಸ್ಸಿನಲ್ಲಿ ಅನೇಕ ವರ್ಷಗಳವರೆಗೆ ನೆನಪು ಇರುತ್ತದೆ ಎಂದರು.

ವೇದಿಕೆ ಕಾರ್ಯಕ್ರಮದ ನಂತರ ಶಿಬಿರಾರ್ಥಿಗಳು ರಂಗಗೀತೆಗಳನ್ನು ಹಾಡಿದರು. ನಂತರ ಶಕುಂತಲಾ ಹೆಗಡೆ ನಿರ್ದೇಶನದ ಪಂಚತಂತ್ರ ನಾಟಕವನ್ನು ನಲಿವು ತಂಡ ಪ್ರದರ್ಶಿಸಿದರೆ, ಪಿ.ಜಿ.ಸಮತ ನಿರ್ದೇಶನದ ಮಳೆ ಬೀಜ ನಾಟಕ ಪ್ರದರ್ಶನಗೊಂಡಿತು. ಬಳಿಕ ಗೆಲುವು ತಂಡದ ಶಿಬಿರಾರ್ಥಿಗಳು ಬಿ.ಪ್ರಶಾಂತ ನಿರ್ದೇಶನದ ಸಾಯೋ ಆಟ ಪ್ರದರ್ಶಿಸಿ, ಪ್ರೇಕ್ಷಕರ ಮನಸೂರೆಗೊಂಡರು.

ನೈಪಥ್ಯದಲ್ಲಿ ಚಂದ್ರಶೇಖರಾಚಾರ್ ಹೆಗ್ಗೊತಾರ, ಸಾಂಗತ್ಯ ಮೈಸೂರು ಸುಬ್ರಹ್ಮಣ್ಯ, ಪ್ರಸಾಧನ ಮಂಜುನಾಥ್ (ಕಾಚಕ್ಕಿ), ರಂಗ ಸಜ್ಜಿಕೆಯಲ್ಲಿ ರೇವಣ್ಣ, ಕೆ.ವಿ.ಸ್ವಾಮಿ, ಎನ್.ಬಿ.ಪಲ್ಲೇದ, ಬಿ.ಜೀವನ್ ಕುಮಾರ್ ಹೆಗ್ಗೋಡ್ ನೆರವೇರಿಸಿದರು. ವೇದಿಕೆಯಲ್ಲಿ ಕ್ಲಾರಿಯೊನೆಟ್ ವಾದಕ ಡಿ.ರಾಮು, ಹಿರಿಯ ಕಲಾವಿದ ರಾಜಪ್ಪ ಕಿರಗಸೂರು, ಬಿ.ಪ್ರಶಾಂತ್, ಕೆಮನು, ಭವಾನಿ ಶಂಕರ್, ಬಾಲಕೃಷ್ಣ, ಡಾ.ಎಂ.ಸಿ.ಮನೋಹರ್, ಕೋಳಿಮಂಜ, ವಿನಯ್(ಕೆವಿಕೆ), ನಾಗರಾಜು, ಡಾ.ಆರ್.ನಿಂಗರಾಜು, ಆರ್.ಪಿ. ಸತೀಶ್, ವರದೇಶ್ ಕುಮಾರ್, ಮಹದೇವಮ್ಮ, ವೀರಭದ್ರಸ್ವಾಮಿ, ಮಂಗಳಮ್ಮ ಉಪಸ್ಥಿತರಿದ್ದರು.


ದೇವ ವೃದ್ಧರು ನಾಟಕ ಪ್ರದರ್ಶನ

ಮೈಸೂರು, ಏ.22(ಎಸ್‌ಪಿಎನ್)– ಮಕ್ಕಳು ಓದಿನ ಜೊತೆಗೆ ಕಲೆ, ಸಾಹಿತ್ಯ ಹಾಗೂ ಜಾನಪದ ಕಲಿಕೆಗೂ ಹೆಚ್ಚಿನ ಆದ್ಯತೆ ನೀಡಬೇಕು ಎಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಜಂಟಿ ನಿರ್ದೇಶಕ ವಿ.ಎನ್.ಮಲ್ಲಿಕಾರ್ಜುನ ಸ್ವಾಮಿ ಅಭಿಪ್ರಾಯಪಟ್ಟರು.

ಮೈಸೂರು ಕಲಾಮಂದಿರ ಆವರಣದ ಕಿರು ರಂಗಮಂದಿರದಲ್ಲಿ ನೃತ್ಯ ವರ್ಣ ಕಲಾಸೌರಭದ ವತಿಯಿಂದ ಆಯೋಜಿಸಿದ್ದ ವಿವಿಧ ಜಾನಪದ ನೃತ್ಯ ಪ್ರಾಕಾರಗಳ ಪ್ರದರ್ಶನ ಹಾಗೂ ದಿನೇಶ್ ಚಮ್ಮಾಳಿಗೆ ನಿರ್ದೇಶನದ 'ದೇವ ವೃದ್ಧರು' ನಾಟಕ ಪ್ರದರ್ಶನ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದರು.

ನಗರ ಪ್ರದೇಶದಲ್ಲಿ ನಾನಾ ಕಾರಣಗಳಿಗಾಗಿ ಮಕ್ಕಳನ್ನು ಬೇಸಿಗೆ ರಜೆಯಲ್ಲಿ ತೊಡಗಿಸಲು ರಂಗಶಿಬಿರಗಳು ಆಯೋಜನೆಗೊಳ್ಳುತ್ತಿವೆ. ಈ ಶಿಬಿರದಲ್ಲಿ ಶ್ಲೋಕಪಠಣ, ಕಂಸಾಳೆ, ಪಟಕುಣಿತ, ವಿವಿಧ ರಂಗಗೀತೆಗಳು, ಜಾನಪದ ನೃತ್ಯ ಹಾಗೂ ನಾಟಕದಲ್ಲಿ ಪಾಲ್ಗೊಂಡಿರುವ ಮಕ್ಕಳು ಪ್ರಜ್ಞಾವಂತ ಪ್ರಜೆಗಳಾಗಿ ರೂಪುಗೊಳ್ಳುತ್ತಾರೆ ಎಂದು ಆಶಿಸಿದರು.

ತದನಂತರ 35 ಶಿಬಿರಾರ್ಥಿಗಳಿಂದ ಶ್ಲೋಕ ಪಠಣ, ಕಂಸಾಳೆ, ಪಟಕುಣಿತ, ವಿವಿಧ ರಂಗಗೀತೆಗಳು, ಜನಪದ ನೃತ್ಯ ಪ್ರದರ್ಶನಗೊಂಡಿತು. ನಂತರ ಹಿರಿಯ ರಂಗಕರ್ಮಿ ದಿನೇಶ್ ಚಮ್ಮಾಳಿಗೆ ನಿರ್ದೇಶನದಲ್ಲಿ 'ದೇವ ವೃದ್ಧರು' ನಾಟಕ ಪ್ರದರ್ಶನಗೊಂಡು ಪ್ರೇಕ್ಷಕರ ಮನಸೂರೆಗೊಂಡಿತು. ಕಾರ್ಯಕ್ರಮದಲ್ಲಿ ರಂಗಕಲಾವಿದೆ ಕಲ್ಪಿತ ಪ್ರಶಾಂತ್ ಸೇರಿದಂತೆ ಇತರರಿದ್ದರು.



ಹಿರಿಯ ಕಲಾವಿದ ದಿನೇಶ್ ಚಮ್ಮಾಳಿಗೆ ನಿರ್ದೇಶನದ 'ದೇವ ವೃದ್ಧರು' ನಾಟಕ ಪ್ರದರ್ಶನಗೊಂಡಿತು.

ವನಿತಾಕುಮಾರಗೆ ಪಿಎಚ್.ಡಿ



ಮೈಸೂರು,ಏ.22– ಮೈಸೂರು ವಿಶ್ವವಿದ್ಯಾಲಯ ರಾಜ್ಯಶಾಸ್ತ್ರ ಅಧ್ಯಯನ ವಿಭಾಗದ ಅಸೋಸಿಯೇಟ್ ಪ್ರೊಫೆಸರ್ ಡಾ. ಜಿ.ಎಚ್. ನಾಗರಾಜ ಅವರ ಮಾರ್ಗದರ್ಶನದಲ್ಲಿ ವನಿತಾಕುಮಾರ .ಎಂ.ಎನ್ ಅವರು The Three Tire System in Karnataka A Case Study of Mysore Zilla Panchayat" ಎಂಬ ಮಹಾಪ್ರಬಂಧವನ್ನು ಪಿಎಚ್.ಡಿ ಪದವಿಗೆ ಅಂಗೀಕರಿಸಿದೆ ಎಂದು ದ್ರಾವಿಡ ವಿಶ್ವವಿದ್ಯಾಲಯದ ಪರೀಕ್ಷಾ ನಿಯಂತ್ರಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಬಾಬೂಜಿಯವರ ತತ್ವಾದರ್ಶ ಮೈಗೂಡಿಸಿಕೊಳ್ಳಿ

ಡಾ.ಬಾಬು ಜಗಜೀವನರಾಂ ಜಯಂತೋತ್ಸವದಲ್ಲಿ ಶಾಸಕ ದರ್ಶನ್

ನಂಜನಗೂಡು, ಏ.22– ದೇಶದ ಜನತೆ ಆಹಾರದ ಕೊರತೆ ಅನುಭವಿಸುತ್ತಿರುವುದನ್ನು ಕಂಡು ಹಸಿರು ಕ್ರಾಂತಿ ಆರಂಭಿಸಿ ದೇಶವನ್ನು ಆಹಾರ ಉತ್ಪಾದನೆಯಲ್ಲಿ ಸ್ವಾವಲಂಬಿಯನ್ನಾಗಿಸಿದ ಕೀರ್ತಿ ಡಾ.ಬಾಬು ಜಗಜೀವನರಾಂ ಅವರಿಗೆ ಸಲ್ಲುತ್ತದೆ ಎಂದು ಶಾಸಕ ದರ್ಶನ್ ತಿಳಿಸಿದರು.

ತಾಲೂಕು ರಾಷ್ಟ್ರೀಯ ಹಬ್ಬಗಳ ಆಚರಣಾ ಸಮಿತಿಯಿಂದ ನಗರದ ಶ್ರೀಕಂಠೇಶ್ವರ ದೇವಾಲಯದ ಆವರಣದಲ್ಲಿ ನಡೆದ ಡಾ.ಬಾಬು ಜಗಜೀವನರಾಂ ಜಯಂತೋತ್ಸವ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಎಲ್ಲರೂ ಸಮಾನವಾಗಿ ಜೀವನ ನಡೆಸಬೇಕು ಎನ್ನುವ ಮಹತ್ವಾಕಾಂಕ್ಷೆ ಬಾಬು ಜಗಜೀವನರಾಂ ಹೊಂದಿದ್ದರು. ಅಲ್ಲದೇ ಕಾರ್ಮಿಕರ ಏಳಿಗೆಯನ್ನು ಸದಾ ಬಯಸುತ್ತಿದ್ದರು. ಸುಮಾರು 40 ವರ್ಷಗಳ ಕಾಲ ಕೇಂದ್ರದ ಮಂತ್ರಿಯಾಗಿ ಹಲವು ಖಾತೆಗಳನ್ನು ಸಮರ್ಥವಾಗಿ ನಿಭಾಯಿಸಿ ದೇಶದ ಅಭಿವೃದ್ಧಿಗೆ ಕೊಡುಗೆ ನೀಡಿದ್ದಾರೆ. ಅವರ ತತ್ವ ಆದರ್ಶಗಳನ್ನು ಚಿಂತನೆಗಳನ್ನು ಮೈಗೂಡಿಸಿಕೊಂಡು ನಾವೆಲ್ಲರೂ ಮುನ್ನಡೆಯಬೇಕು ಎಂದರು.

ಎಂಎಲ್‌ಸಿ ಡಾ. ಯತೀಂದ್ರ ಮಾತನಾಡಿ, ಡಾ.ಬಾಬು ಜಗಜೀವನರಾಂ ಅಮತು ಡಾ.ಬಿ.ಆರ್. ಅಂಬೇಡ್ಕರ್ ಅವರಂತೆ ಶೋಷಣೆ ಅನುಭವಿಸಿ, ಜಾತಿ ತಾರತಮ್ಯದ ವಿರುದ್ಧ ಹೋರಾಡಿ ಸಮಾಜ ಸುಧಾರಣೆಗೆ ಶ್ರಮಿಸಿದ್ದಾರೆ. ಚುನಾವಣೆಗೂ ಮುನ್ನಾ ಕಾಂಗ್ರೆಸ್ ಅಧಿಕಾರಕ್ಕೆ ಬಂದಲ್ಲಿ ಮಾದಿಗ ಸಮುದಾಯಕ್ಕೆ ಒಳ ಮೀಸಲಾತಿ ಜಾರಿಗೊಳಿಸುವುದಾಗಿ ಪ್ರಣಾಳಿಕೆಯಲ್ಲಿ ತಿಳಿಸಿದ್ದು, ಅದರಂತೆ ಸಿಎಂ ಸಿದ್ದರಾಮಯ್ಯ ಈಗಾಗಲೇ ಬೆಂಗಳೂರಿನಲ್ಲಿ ನಡೆದ ಬಾಬು ಜಗಜೀವನರಾಂ ಜಯಂತಿ ವೇಳೆ ಶೀಘ್ರ ಎಡಗೈ ಸಮುದಾಯಕ್ಕೆ ಒಳ ಮೀಸಲಾತಿ ಜಾರಿಗೊಳಿಸುವುದಾಗಿ ಘೋಷಿಸಿದ್ದಾರೆ. ಜೊತೆಗೆ ನಾಗಮೋಹನ್ ದಾಸ್ ನೇತೃತ್ವದಲ್ಲಿ ಆಯೋಗ ರಚಿಸಿ ಅಂಕಿ ಅಂಶಗಳ ಸಮೀಕ್ಷೆ ವರದಿ ಸಲ್ಲಿಸುವಂತೆ ಸೂಚನೆ ನೀಡಿದ್ದು ಶೀಘ್ರ ಒಳ ಮೀಸಲಾತಿ ಜಾರಿಗೆ ಬಂದು ಮಾದಿಗ ಸಮುದಾಯದ ಬೇಡಿಕೆ ಈಡೇರಿಸಲಾಗುವುದು ಎಂದರು.

ಎಂಎಲ್‌ಸಿ ಡಾ.ತಿಮ್ಮಯ್ಯ, ಮುಖ್ಯ ಭಾಷಣಕಾರ ಶ್ರೀನಿವಾಸಮೂರ್ತಿ ಮಾತನಾಡಿದರು. ಇದಕ್ಕೂ ಮುನ್ನ ನಗರದ ಜೂನಿಯರ್ ಕಾಲೇಜು ಮೈದಾನದಿಂದ ವಿವಿಧ ಜಾನಪದ ಕಲಾತಂಡಗಳೊಂದಿಗೆ ಡಾ.ಬಾಬು ಜಗಜೀವನರಾಂ ಭಾವಚಿತ್ರವನ್ನು ಅದ್ದೂರಿಯಾಗಿ ಮೆರವಣಿಗೆ ಮಾಡಲಾಯಿತು. ಮಾಜಿ ಶಾಸಕ ಕಳಲೆ ಕೇಶವಮೂರ್ತಿ, ನಗರಸಭಾ ಅಧ್ಯಕ್ಷ ಶ್ರೀಕಂಠಸ್ವಾಮಿ, ಉಪಾಧ್ಯಕ್ಷೆ ರಿಹಾನ ಬಾನು, ಸದಸ್ಯರಾದ ವಿಜಯಲಕ್ಷ್ಮಿ, ಮಂಗಳಮ್ಮ, ಯೋಗೀಶ್, ತಗಡೂರು ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ರಂಗಸ್ವಾಮಿ, ತಹಸೀಲ್ದಾರ್ ಶಿವಕುಮಾರ್ ಕಾಸ್ನೂರು, ಡಿವೈಎಸ್ಪಿ ರಘು, ಸಮಾಜ ಕಲ್ಯಾಣ ಇಲಾಖೆ ಸಹಾಯಕ ನಿರ್ದೇಶಕ ಸಿದ್ದಲಿಂಗ ಮುಖಂಡರಾದ ದೇವರಾಜು, ಶ್ರೀನಿವಾಸ್, ಸ್ವಾಮಿ, ಮಧುರಾಜ್, ಸುಂದರರಾಜು, ನಾರಾಯಣಸ್ವಾಮಿ, ಆನಂದ್, ಸಿದ್ದಪ್ಪ, ಚಂದ್ರು, ಆಯಿಲ್ ಸ್ವಾಮಿ, ದಸಂಸ ಸಂಚಾಲಕರಾದ ಮಲ್ಲೇಶ್, ನಾರಾಯಣ, ಬಸವಣ್ಣ ಇದ್ದರು.


ಕಾರ್ಯಕ್ರಮವನ್ನು ಶಾಸಕ ದರ್ಶನ್ ಉದ್ಘಾಟಿಸಿದರು.

ಶೋಷಿತ ಸಮುದಾಯಗಳನ್ನು ಸಮಾಜದ ಮುಖ್ಯವಾಹಿನಿಗೆ ತರಲು

ಪ್ರಜಾಪ್ರಭುತ್ವ ವ್ಯವಸ್ಥೆ ಜಾರಿಗೆ ತಂದ ಅಂಬೇಡ್ಕರ್

ವಿಧಾನಪರಿಷತ್ ಸದಸ್ಯ ಡಾ.ಯತೀಂದ್ರ

ತಿ.ನರಸೀಪುರ, ಏ.22– ಸಾಮಾಜಿಕ ಅಸಮಾನತೆ ಅರಿತಿದ್ದ ಅಂಬೇಡ್ಕರ್ ಅವರು ಶೋಷಿತ ಸಮುದಾಯಗಳನ್ನು ಸಮಾಜದ ಮುಖ್ಯವಾಹಿನಿಗೆ ತರಲು ಸಂವಿಧಾನದಲ್ಲಿ ಸಾರ್ವತ್ರಿಕ ಮತದಾನದ ಹಕ್ಕನ್ನು ಎಲ್ಲರಿಗೂ ಕಲ್ಪಿಸಿಕೊಟ್ಟು ಪ್ರಜಾಪ್ರಭುತ್ವ ವ್ಯವಸ್ಥೆ ಜಾರಿಗೆ ತಂದರು ಎಂದು ವಿಧಾನಪರಿಷತ್ ಸದಸ್ಯ ಡಾ.ಯತೀಂದ್ರ ತಿಳಿಸಿದರು.

ತಾಲೂಕಿನ ಬನ್ನಹಳ್ಳಿ ಗ್ರಾಮದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲಾವರಣದಲ್ಲಿ ನಡೆದ ವಿಶ್ವರತ್ನ, ಮಹಾನಾಯಕ ಡಾ.ಬಿ.ಆರ್.ಅಂಬೇಡ್ಕರ್ ಜಯಂತಿಯಲ್ಲಿ ಮಾತನಾಡಿದ ಅವರು ದೇಶದಲ್ಲಿ ಶತಮಾನಗಳ ಕಾಲ ಪಟ್ಟಭದ್ರರ ಮನು ವ್ಯವಸ್ಥೆ ಇದ್ದಿದ್ದರಿಂದ ವರ್ಣ ವ್ಯವಸ್ಥೆಯಡಿ ಜಾತಿ ಪದ್ಧತಿ ರೂಪಿಸಿ, ಬಡವರನ್ನು ಬಲಾಢ್ಯರು ನಿರಂತರವಾಗಿ ಶೋಷಣೆ ಮಾಡುತ್ತಿದ್ದರು. ಶೋಷಿತರ ವಿಮೋಚಕರಾಗಿ ಅಂಬೇಡ್ಕರ್ ಉದಯಿಸಿದರು ಎಂದರು.

ಸಂವಿಧಾನ ಇಲ್ಲದಿದ್ದರೆ ಶೋಷಿತರಾಗಲಿ ಅಥವಾ ಹಿಂದುಳಿದ ವರ್ಗಗಳ ಜನರಾಗಲಿ ರಾಜಕೀಯ ಅಧಿಕಾರ ಪಡೆಯಲು ಸಾಧ್ಯವಾಗುತ್ತಿರಲಿಲ್ಲ. ಈ ಹಿನ್ನೆಲೆಯಲ್ಲಿ ಸಿಎಂ ಸಿದ್ದರಾಮಯ್ಯ ಸಂವಿಧಾನ ಬದಲಿಸಿದರೆ ರಕ್ತ ಕ್ರಾಂತಿ ಆಗಲಿದೆ ಎಂದು ಎಚ್ಚರಿಸಿದ್ದರು. ಅದರಿಂದ ಸಂವಿಧಾನ ಪರಿಶಿಷ್ಟರಿಗಷ್ಟೇ ಅಲ್ಲ, ಸಮಸ್ತ ಭಾರತೀಯರ ಅಭ್ಯುದಯಕ್ಕೆ ರೂಪುಗೊಂಡಂತಹ ಪವಿತ್ರ ಗ್ರಂಥ ಎಂದು ವ್ಯಾಖ್ಯಾನಿಸಿದರು.

ನಳಂದ ಬುದ್ಧ ವಿಹಾರದ ಭೋಧಿರತ್ನ ಬಂತೇಜಿ ಸಾನಿಧ್ಯ ವಹಿಸಿದ್ದರು. ಪಿಕಾರ್ಡ್ ಬ್ಯಾಂಕ್ ಅಧ್ಯಕ್ಷ ಎಂ.ಮಹದೇವಣ್ಣ, ಜಿಪಂ ಮಾಜಿ ಸದಸ್ಯ ಕೆ.ಮಹದೇವ, ದಸಂಸ ಜಿಲ್ಲಾ ಪ್ರಧಾನ ಸಂಚಾಲಕ ಬನ್ನಹಳ್ಳಿ ಸೋಮಣ್ಣ, ಪುರಸಭೆ ಸ್ಥಾಯಿ ಸಮಿತಿ ಅಧ್ಯಕ್ಷ ಸಿ.ಪ್ರಕಾಶ್, ಮಾಜಿ ಅಧ್ಯಕ್ಷ ಎನ್.ಸೋಮಣ್ಣ, ಕುರುಬರ ಸಂಘದ ಅಧ್ಯಕ್ಷ ಮಹೇಶ್, ಮುಖಂಡರಾದ ಪುಟ್ಟಸ್ವಾಮಯ್ಯ, ಜೋರ್‌ವೆಲ್ ಪರಶಿವ, ಸುರೇಶ್, ರೇವಣ್ಣ, ಶಿವಣ್ಣ, ಕೆಪಿಟಿಸಿಎಲ್ ರಮೇಶ್, ದೊರೆಸ್ವಾಮಿ, ಮಹೇಶ್, ನಿಂಗರಾಜು, ನಾರಾಯಣ, ದೊರೆಸ್ವಾಮಿ, ಶಾಂತರಾಜು, ಬಸವರಾಜು, ರಂಗಸ್ವಾಮಿ, ಪಾಯಸ ಸೇರಿದಂತೆ ಯುವಕರ ಸಂಘದ ಅಧ್ಯಕ್ಷರು, ಪದಾಧಿಕಾರಿಗಳು, ಮಹಿಳಾ ಸ್ವಸಹಾಯ ಸಂಘಗಳ ಪ್ರತಿನಿಧಿಗಳಿದ್ದರು.


ಕಾರ್ಯಕ್ರಮದಲ್ಲಿ ಎಂಎಲ್‌ಸಿ ಡಾ.ಯತೀಂದ್ರ ಮಾತನಾಡಿದರು.

> ಆಂತರಿಕ ಒಪ್ಪಂದದಂತೆ ಮತ್ತೊಬ್ಬರಿಗೆ ಅವಕಾಶ ಕಲ್ಪಿಸಿಕೊಡಲು ಈಗಿನ ಅಧ್ಯಕ್ಷೆ, ಉಪಾಧ್ಯಕ್ಷೆಯರು ರಾಜೀನಾಮೆ ನೀಡಬೇಕಿತ್ತು. ಉಪಾಧ್ಯಕ್ಷೆ ರಾಜೀನಾಮೆ ಕೊಡಲಿಲ್ಲವೆಂದು ಅಧ್ಯಕ್ಷೆ ಕೊಟ್ಟಿದ್ದ ರಾಜೀನಾಮೆ ಹಿಂಪಡೆದಿದ್ದಾರೆ. ಮತ್ತು ಮೌಖಿಕ ಆದೇಶ ಪಾಲಿಸುವ ಇಬ್ಬರ ವಿರುದ್ಧ ಕ್ರಮಕ್ಕೆ ಚಿಂತನೆ ಮಾಡುತ್ತೇವೆ. ನಮ್ಮ ಮಾತಿಗೆ ಗೌರವ ಕೊಟ್ಟವರಿಗೆ ಅನ್ಯಾಯ ಮಾಡಲ್ಲ. –ಡಾ.ಯತೀಂದ್ರ, ವಿಧಾನ ಪರಿಷತ್ ಸದಸ್ಯ.

ಸಾರಿಗೆ ಬಸ್ ಡಿಕ್ಕಿ: ಪಾದಚಾರಿ ಸಾವು



ಹೆಚ್.ಡಿ.ಕೋಟೆ, ಏ.22– ಪಾದಚಾರಿಗೆ ಸಾರಿಗೆ ಬಸ್ ಡಿಕ್ಕಿ ಹೊಡೆದ ಪರಿಣಾಮ ಆತ ಸ್ಥಳದಲ್ಲೇ ಸಾವನ್ನಪ್ಪಿರುವ ಘಟನೆ ತಾಲೂಕಿನ ಮೈಸೂರು–ಮಾನಂದವಾಡಿ ಮುಖ್ಯ ರಸ್ತೆಯ ಹೈರಿಗೆ ಗ್ರಾಮದ ಬಳಿ ನಡೆದಿದೆ.

ಗ್ರಾಮದ ನಿವಾಸಿ ಸಣ್ಣೇಗೌಡ(73) ಸಾವನ್ನಪ್ಪಿದವರು. ಈತ ಸ್ವಗ್ರಾಮದಿಂದ ಮಾದಾಪುರಕ್ಕೆ ನಡೆದುಕೊಂಡು ಹೋಗುತ್ತಿದ್ದ ವೇಳೆ ಸರಗೂರಿನಿಂದ ಮೈಸೂರಿಗೆ ತೆರಳುತ್ತಿದ್ದ ಸಾರಿಗೆ ಬಸ್ ಡಿಕ್ಕಿ ಹೊಡೆದ ಪರಿಣಾಮ ತೀವ್ರ ಗಾಯಗೊಂಡ ಸಣ್ಣೇಗೌಡ ಸ್ಥಳದಲ್ಲೇ ಸಾವನ್ನಪ್ಪಿದ್ದಾರೆ.

ರಸ್ತೆ ತಡೆ: ಘಟನೆ ಖಂಡಿಸಿ ರಸ್ತೆ ತಡೆ ನಡೆಸಿದ ಗ್ರಾಮಸ್ಥರು ಕೂಡಲೇ ಸ್ಥಳಕ್ಕೆ ಸಾರಿಗೆ ಅಧಿಕಾರಿಗಳು ಆಗಮಿಸಬೇಕು. ಮೃತನ ಕುಟುಂಬಕ್ಕೆ ಸೂಕ್ತ ಪರಿಹಾರ ಒದಗಿಸಬೇಕು ಎಂದು ಪ್ರತಿಭಟನೆ ನಡೆಸಿದರು. ಈ ವೇಳೆ ಸ್ಥಳಕ್ಕಾಗಮಿಸಿದ ಹೆಚ್.ಡಿ.ಕೋಟೆ ಡಿಪೋ ಮ್ಯಾನೇಜರ್ ಮಹದೇವ ಪ್ರಸಾದ್ ಅವರೊಂದಿಗೆ ಗ್ರಾಮಸ್ಥರು ಮಾತಿನ ಚಕಮಕಿ ನಡೆಸಿದರು. ಈ ವೇಳೆ ಮಧ್ಯೆ ಪ್ರವೇಶಿಸಿದ ಪೊಲೀಸರು ಪರಿಸ್ಥಿತಿ ತಿಳಿಗೊಳಿಸಿದರು. ಇದೇ ವೇಳೆ ಮೃತನ ಕುಟುಂಬದವರಿಗೆ ಸಾರಿಗೆ ಅಧಿಕಾರಿಗಳು 50 ಸಾವಿರ ರೂ. ನೀಡಿದರು. ಸಿಪಿಐ ಗಂಗಾಧರ್ ಹಾಗೂ ಸಿಬ್ಬಂದಿ ಸುಗಮ ರಸ್ತೆ ಸಂಚಾರಕ್ಕೆ ಅನುವು ಮಾಡಿಕೊಟ್ಟರು. ಬಳಿಕ ಪೊಲೀಸರು ಶವವನ್ನು ಕೋಟೆ ಸಾರ್ವಜನಿಕ ಆಸ್ಪತ್ರೆಗೆ ರವಾನಿಸಿ, ಮರಣೋತ್ತರ ಪರೀಕ್ಷೆ ಬಳಿಕ ವಾರಸುದಾರರಿಗೆ ಒಪ್ಪಿಸಿದರು. ಈ ಸಂಬಂಧ ಹೆಚ್.ಡಿ.ಕೋಟೆ ಠಾಣೆಯಲ್ಲಿ ದೂರು ದಾಖಲಾಗಿದೆ.

ನೂತನ ವಾಣಿಜ್ಯ ಮಳಿಗೆ ಉದ್ಘಾಟನೆ


ಕಾರ್ಯಕ್ರಮದಲ್ಲಿ ಶಾಸಕ ಜಿ.ಡಿ.ಹರೀಶ್‌ಗೌಡರನ್ನು ಸನ್ಮಾನಿಸಲಾಯಿತು.

ಹುಣಸೂರು, ಏ.22– ನಗರದ ಶಾಹಿ ಮಸೀದಿ ನೂತನ ವಾಣಿಜ್ಯ ಮಳಿಗೆ ಅಭಿವೃದ್ಧಿಗಾಗಿ ಶಾಸಕರ ನಿಧಿಯಿಂದ 5 ಲಕ್ಷ ಅನುದಾನ ನೀಡುತ್ತೇನೆ ಎಂದು ಶಾಸಕ ಜಿ.ಡಿ.ಹರೀಶ್‌ಗೌಡ ತಿಳಿಸಿದರು.

ಶಬ್ಬೀರ್ ನಗರದ ಶಾಹಿ ಮಸೀದಿಯ ನೂತನ ವಾಣಿಜ್ಯ ಮಳಿಗೆ ಉದ್ಘಾಟಿಸಿ ಮಾತನಾಡಿದ ಅವರು, ನಗರ ಹಾಗೂ ಮಸೀದಿ ಅಭಿವೃದ್ಧಿಗಾಗಿ ಸಾಕಷ್ಟು ಅನುದಾನ ನೀಡಿದ್ದೇನೆ. ಮುಂದಿನ ದಿನಗಳಲ್ಲಿ ಅಲ್ಪಸಂಖ್ಯಾತ ಇಲಾಖೆ ಸಚಿವರೊಂದಿಗೆ ಚರ್ಚಿಸಿ ಹೆಚ್ಚಿನ ಅನುದಾನ ಕೊಡಿಸಲು ಪ್ರಯತ್ನಿಸುತ್ತೇನೆ ಎಂದರು.

ನಗರಸಭೆಯಿಂದ 78 ಕೋಟಿ ವೆಚ್ಚದ ಯುಜಿಡಿ ಅಭಿವೃದ್ಧಿ ಕಾಮಗಾರಿ ನೀಲನಕ್ಷೆ ತಯಾರಿಸಿ ಈಗಾಗಲೇ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಿದ್ದೇವೆ. ಅನುದಾನ ಬಂದ ನಂತರ ಯುಜಿಡಿ ಕೆಲಸ ಮಾಡಿ ಯಶಸ್ವಿಗೊಳಿಸುತ್ತೇನೆ ಎಂದರು.

ನಗರದ ಮುಸ್ಲಿಂ ಬ್ಲಾಕ್ ಉರ್ದು ಸರ್ಕಾರಿ ಬಾಲಕಿಯರ ಶಾಲೆ ಅಭಿವೃದ್ಧಿಗಾಗಿ ನಗರೋತ್ಥಾನ ಯೋಜನೆ ವಿಶೇಷ ಅನುದಾನಡಿ 6 ಲಕ್ಷ ನೀಡಿದ್ದೇನೆ ಎಂದರು.

ಶಾಹಿ ಮಸೀದಿ ಅಧ್ಯಕ್ಷ ಹೆಚ್.ಎಂ. ಫಜ್ಲುಲ್ಲಾ ಮಾತನಾಡಿದರು. ಇದೇ ವೇಳೆ ಶಾಸಕ ಜಿ.ಡಿ.ಹರೀಶ್‌ಗೌಡರನ್ನು ಸನ್ಮಾನಿಸಲಾಯಿತು. ಮಸೀದಿ ಕಾರ್ಯದರ್ಶಿ ವಜೀರ್ ಅಹಮದ್, ನಗರಸಭೆ ಸದಸ್ಯರಾದ ಸೆಮಿನಾ ಬಾನು, ಇಮ್ರಾನ್, ಸೈಯದ್ ಯೂನಸ್, ಮಾಲೀಕ್ ಪಾಷ, ಜೆಡಿಎಸ್ ಮುಖಂಡರಾದ ನಸ್ರುಲ್ಲಾ, ಮುಬಾರಕ್, ಸಮಿಉಲ್ಲಾ, ಮಹತಾಬ್, ರಫಿ, ಜೋಗಿ, ಖಾಲಿದ್ ಪಾಷಾ, ಆಯುಬ್ ಖಾನ್, ಸಿರಾಜ್ ಪಾಷ ಇತರರಿದ್ದರು.

ನೇಮಕ



ತಿ.ನರಸೀಪುರ, ಏ.22– ಕರ್ನಾಟಕ ದಲಿತ ಸಂಘರ್ಷ ಸಮಿತಿ (ಭೀಮ ವಾದ) ರಾಜ್ಯ ವಿಭಾಗೀಯ ಸಂಚಾಲಕರನ್ನಾಗಿ ಪಟ್ಟಣದ ಆಲಗೂಡು ಗ್ರಾಮದ ಮುಖಂಡ ಡಾ.ಎಸ್.ಚಂದ್ರಶೇಖರ್ ಅವರನ್ನು ನೇಮಕ ಮಾಡಲಾಗಿದೆ.

ಗ್ಯಾರಂಟಿಗಾಗಿ ಎಸ್‌ಇಪಿ, ಟಿಎಸ್ಪಿ ಅನುದಾನ ದುರ್ಬಳಕೆ

ಮಾಜಿ ಸಂಸದ ಎಸ್.ಮುನಿಸ್ವಾಮಿ ಆರೋಪ


ಮಾಜಿ ಸಂಸದ ಎಸ್.ಮುನಿಸ್ವಾಮಿ ಮಾತನಾಡಿದರು.

ನಂಜನಗೂಡು, ಏ.22– ಮುಖ್ಯಮಂತ್ರಿ ಸಿದ್ದರಾಮಯ್ಯನವರು ಗ್ಯಾರಂಟಿ ಯೋಜನೆಗಳ ಹೆಸರಿನಲ್ಲಿ ಎಸ್‌ಇಪಿ ಮತ್ತು ಟಿಎಸ್ಪಿ ಅನುದಾನ ದುರ್ಬಳಕೆ ಮಾಡಿಕೊಂಡು ದಲಿತರಿಗೆ ಅನ್ಯಾಯ ವೆಸಗಿದ್ದಾರೆ ಎಂದು ಮಾಜಿ ಸಂಸದ ಎಸ್.ಮುನಿಸ್ವಾಮಿ ಆರೋಪಿಸಿದರು.

ಮಂಗಳವಾರ ನಗರದ ಯಾತ್ರೀ ಭವನದಲ್ಲಿ ಭಾರತೀಯ ಜನತಾ ಪಕ್ಷದಿಂದ ಆಯೋಜಿಸಿದ್ದ ಡಾ.ಬಿ.ಆರ್.ಅಂಬೇಡ್ಕರ್ ವಿಚಾರ ಯಾತ್ರೆ ಅಭಿಯಾನ ಸಮಾರಂಭದಲ್ಲಿ ಅವರು ಮಾತನಾಡಿದರು.

ಡಾ.ಬಿ.ಆರ್.ಅಂಬೇಡ್ಕರ್ ಅವರಿಗೆ ಕಿರುಕುಳ ನೀಡಿದ ಕಾಂಗ್ರೆಸ್ ಪಕ್ಷದವರು ಈಗ ಅಂಬೇಡ್ಕರ್ ಹೆಸರಿನಲ್ಲಿ ದಲಿತರ ಮತ ಪಡೆಯಲು ಹವಣಿಸುತ್ತಿದ್ದಾರೆ. ದಲಿತ ಸಮುದಾಯದ ಡಾ.ಹೆಚ್.ಸಿ.ಮಹದೇವಪ್ಪನವರು ಸಮಾಜ ಕಲ್ಯಾಣ ಮಂತ್ರಿಯಾಗಿದ್ದರೂ ದಲಿತರಿಗೆ ಮೀಸಲಾದ ಅನುದಾನ ದುರ್ಬಳಕೆಯಾಗುವುದನ್ನು ತಡೆಯಲು ಸಾಧ್ಯವಾಗಿಲ್ಲ. ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದು 2 ವರ್ಷವಾದರೂ ರಾಜ್ಯದಲ್ಲಿ ಯಾವುದೇ ಪ್ರಗತಿಯಾಗಿಲ್ಲ. ಎಸ್ಸಿ ಮತ್ತು ಎಸ್ಟಿಗಳನ್ನು ತಮ್ಮ ಓಟ್ ಬ್ಯಾಂಕ್ ಆಗಿ ಬಳಸಿಕೊಂಡು ವಂಚಿಸುತ್ತಿರುವ ಕಾಂಗ್ರೆಸ್ ಅನ್ನು ಅಧಿಕಾರದಿಂದ ಕಿತ್ತೊಗೆಯಲು ಬಿಜೆಪಿ ಕಾರ್ಯಕರ್ತರು ಈಗಿನಿಂದಲೇ ಸಂಕಲ್ಪ ಮಾಡಬೇಕು. ಮುಂಬರುವ ದಿನಗಳಲ್ಲಿ ಪ್ರತಿಯೊಂದು ಹಳ್ಳಿ ಹಾಗೂ ಬೂತ್ ವ್ಯಾಪ್ತಿಯಲ್ಲಿ ಮತದಾರರನ್ನು ಭೇಟಿ ಮಾಡಿ ಕಾಂಗ್ರೆಸ್ ಉರಿಯುವ ಮನೆ ಎಂದು ಅಂಬೇಡ್ಕರ್ ಹೇಳಿದ್ದ ಮಾತನ್ನು ಜನರಿಗೆ ತಲುಪಿಸಬೇಕು ಎಂದರು.

ಮಾಜಿ ಶಾಸಕ ಬಿ.ಹರ್ಷವರ್ಧನ್ ಮಾತನಾಡಿ, ಕಾಂಗ್ರೆಸ್ ಅಧಿಕಾರಾವಧಿಯಲ್ಲಿ ದೇಶದ ಸಂವಿಧಾನದ ಪೀಠಿಕೆ ಸೇರಿದಂತೆ ಅತೀ ಹೆಚ್ಚು ವಿಧಿಗಳನ್ನು ತಿದ್ದುಪಡಿ ಮಾಡಲಾಗಿದ್ದು, ಸಂವಿಧಾನದ ನಿಜವಾದ ವಿರೋಧಿಗಳು ಕಾಂಗ್ರೆಸ್ಸಿಗರೇ ಆಗಿದ್ದಾರೆ. ಡಾ.ಬಿ.ಆರ್.ಅಂಬೇಡ್ಕರ್ ಅವರನ್ನು ಚುನಾವಣೆಯಲ್ಲಿ ಸೋಲಿಸುವ ಸಲುವಾಗಿ ಅವರಿಗೆ ಸಹಾಯಕನಾಗಿದ್ದ ನಾರಾಯಣ ಸದೋಬ ಕಜ್ರೋಲ್ಕರ್ ಅವರನ್ನೇ ಕಾಂಗ್ರೆಸ್ ಪಕ್ಷದಿಂದ ಕಣಕ್ಕಿಳಿಸಿ ಅವರ ಪರವಾಗಿ ನೆಹರು ಮತಯಾಚಿಸಿ ಚುನಾವಣೆಯಲ್ಲಿ ಅಂಬೇಡ್ಕರ್ ಅವರನ್ನು ಸೋಲಿಸಿದರು. ಜೊತೆಗೆ ನಾರಾಯಣ ಸದೋಬ ಕಜ್ರೋಲ್ಕರ್ ಅವರಿಗೆ ಪದ್ಮಭೂಷಣ ಪ್ರಶಸ್ತಿ ನೀಡಿ ಕಾಂಗ್ರೆಸ್‌ನವರು ಬಾಬಾ ಸಾಹೇಬರನ್ನು ಅಪಮಾನಿಸಿದ್ದರು. ಆದರೆ ಪ್ರಧಾನಿ ಮೋದಿ ನೇತೃತ್ವದ ಬಿಜೆಪಿ ಸರ್ಕಾರ ದೇಶದ ಉದ್ಧಾರಕ್ಕಾಗಿ ಅವಿರತ ಶ್ರಮಿಸಿದ ಡಾ.ಬಿ.ಆರ್.ಅಂಬೇಡ್ಕರ್ ಅವರನ್ನು ಸ್ಮರಿಸುವ ಪಂಚ ತೀರ್ಥ ಯೋಜನೆಗಳನ್ನು ಜಾರಿಗೊಳಿಸುವ ಮೂಲಕ ಅವರನ್ನು ಗೌರವಿಸಿದೆ ಎಂದರು.

ಸಮಾರಂಭದಲ್ಲಿ ಶಾಸಕ ಶ್ರೀವತ್ಸ, ಬಿಜೆಪಿ ಗ್ರಾಮಾಂತರ ಸಮಿತಿ ಜಿಲ್ಲಾಧ್ಯಕ್ಷ ಎಲ್.ಆರ್.ಮಹದೇವಸ್ವಾಮಿ, ನಗರಾಧ್ಯಕ್ಷ ನಾಗೇಂದ್ರ, ಮಾಜಿ ಮೇಯರ್ ಶಿವಕುಮಾರ್, ಕಾಂಪೋಸ್ಟ್ ಅಭಿವೃದ್ಧಿ ನಿಗಮದ ಮಾಜಿ ಅಧ್ಯಕ್ಷ ಎಸ್.ಮಹದೇವಯ್ಯ, ಜಿಪಂ ಮಾಜಿ ಸದಸ್ಯರಾದ ಸಿ.ಚಿಕ್ಕರಂಗನಾಯಕ, ಮಂಗಳ ಸೋಮಶೇಖರ್, ಎಸ್ಸಿ ಮೋರ್ಚಾ ಜಿಲ್ಲಾಧ್ಯಕ್ಷ ಅನಿಲ್, ಶೈಲೇಂದ್ರ, ಸೋಮಸುಂದರ್, ಪ್ರಫುಲ್ಲಾ ಮಲ್ಲಾಡಿ, ಖಾದಿ ಗ್ರಾಮೋದ್ಯೋಗ ಮಂಡಳಿ ಮಾಜಿ ಅಧ್ಯಕ್ಷ ಎನ್.ಆರ್.ಕೃಷ್ಣಪ್ಪಗೌಡ, ಬಿಜೆಪಿ ತಾಲೂಕು ಅಧ್ಯಕ್ಷ ಕೆಂಡಗಣ್ಣಪ್ಪ, ನಗರಾಧ್ಯಕ್ಷ ಸಿದ್ದರಾಜು, ನಗರಸಭಾ ಸದಸ್ಯ ಮಹದೇವಪ್ರಸಾದ್, ಮಹೇಶ್, ಸಾಮಾಜಿಕ ಕಾರ್ಯಕರ್ತ ವಾದಿರಾಜ್, ಮುಖಂಡರಾದ ಪರಶಿವಮೂರ್ತಿ, ಸೋಮಣ್ಣ ಇತರರಿದ್ದರು.

ನಾಳೆ ಕೋಟೆಯಲ್ಲಿ ಉದ್ಯೋಗ ಮೇಳ

ಹೆಚ್.ಡಿ.ಕೋಟೆ, ಏ.22– ಪಟ್ಟಣದ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಏ.24ರಂದು ಬೆಳಗ್ಗೆ 10 ಗಂಟೆಗೆ ಉದ್ಯೋಗ ಮೇಳ ಆಯೋಜಿಸಲಾಗಿದೆ ಎಂದು ಕಾಲೇಜಿನ ಪ್ರಾಂಶುಪಾಲ ಅರುಣ್ ಕುಮಾರ್ ತಿಳಿಸಿದ್ದಾರೆ.

ಕಾಲೇಜಿನ ಆವರಣದಲ್ಲಿ ಉದ್ಯೋಗ ಮಾರ್ಗದರ್ಶಿ ಸಂದರ್ಶನ ಕಾರ್ಯಕ್ರಮ ಆಯೋಜಿಸಲಾಗಿದ್ದು, ಪದವಿ ಪೂರ್ವ, ಸ್ನಾತಕ ಪದವಿ, ಸ್ನಾತಕೋತ್ತರ ಪದವಿ ವಿದ್ಯಾರ್ಥಿಗಳನ್ನು ನೇರ ಸಂದರ್ಶನದ ಮೂಲಕ ಆಯ್ಕೆಯನ್ನು ಮಾಡಿಕೊಳ್ಳಲಾಗುತ್ತದೆ. ಮೇಳದಲ್ಲಿ ಆಕ್ಸಿಸ್ ಬ್ಯಾಂಕ್, ಎಸ್‌ಬಿಐ, ಮುತ್ತೂಟ್ ಫೈನಾನ್ಸ್ ಸೇರಿದಂತೆ ವಿವಿಧ ಕಂಪನಿಗಳು ಭಾಗವಹಿಸಲಿದ್ದು, ಗ್ರಾಮೀಣ ವಿದ್ಯಾರ್ಥಿಗಳು ಅಂಕಪಟ್ಟಿ ಸೇರಿದಂತೆ ಮೂಲ ದಾಖಲಾತಿಗಳೊಂದಿಗೆ ಭಾಗವಹಿಸಿ ಇದರ ಸದುಪಯೋಗ ಪಡಿಸಿಕೊಳ್ಳಬೇಕು ಎಂದು ತಿಳಿಸಿದ್ದಾರೆ. ಹೆಚ್ಚಿನ ಮಾಹಿತಿಗೆ ಮೊ.8296351048, 9740926487, 9880637978 ಸಂಪರ್ಕಿಸಬಹುದು.

ವಿಜೃಂಭಣೆಯ ಕಾಳಿಕಾಂಬ ಕಮಠೇಶ್ವರಿ ಅಮ್ಮನವರ ವಾರ್ಷಿಕೋತ್ಸವ


ಕಾಳಿಕಾಂಬ ಕಮಠೇಶ್ವರಿ ಅಮ್ಮನವರ ವಾರ್ಷಿಕೋತ್ಸವ ವಿಜೃಂಭಣೆಯಿಂದ ನಡೆಯಿತು.

ಸರಗೂರು, ಏ.22– ಪಟ್ಟಣದಲ್ಲಿ ವಿಶ್ವಕರ್ಮ ಸಮಾಜದಿಂದ ಕಾಳಿಕಾಂಬ ಕಮಠೇಶ್ವರಿ ಅಮ್ಮನವರ 51ನೇ ವಾರ್ಷಿಕೋತ್ಸವ ವಿಜೃಂಭಣೆಯಿಂದ ನಡೆಯಿತು.

ದೇವಸ್ಥಾನ ಹಾಗೂ ವಿಶ್ವಕರ್ಮ ಬೀದಿಯನ್ನು ತಳಿರು ತೋರಣ, ಬಣ್ಣ ಬಣ್ಣದ ರಂಗೋಲಿ, ವಿದ್ಯುತ್ ದೀಪದಿಂದ ಸಿಂಗರಿಸಲಾಗಿತ್ತು. ಬಳಿಕ ಹೋಮ ಹವನ ನಡೆಸಿ ದೇವರಿಗೆ ವಿಶೇಷ ಪೂಜೆ ಸಲ್ಲಿಸಲಾಯಿತು. ಕಳಸವನ್ನು ಕಪಿಲಾ ನದಿ ಬಳಿಗೆ ತೆರಳಿ ಅಮ್ಮನವರ ಮೂರ್ತಿಗೆ ಗಂಗೆ ಪೂಜೆ ಸಲ್ಲಿಸಿ, ಪೂರ್ಣ ಕುಂಭ ಕಳಸವನ್ನು ಶ್ರದ್ಧಾ ಭಕ್ತಿಯಿಂದ ಸತ್ತಿಗೆ, ನಂದಿ ಕಂಬ, ಮಂಗಳವಾದ್ಯದೊಂದಿಗೆ ಪ್ರಮುಖ ಬೀದಿಗಳಲ್ಲಿ ಮೆರವಣಿಗೆ ಮೂಲಕ ದೇವಾಲಯಕ್ಕೆ ತರಲಾಯಿತು. ದಾರಿಯುದ್ದಕ್ಕೂ ಭಕ್ತರು ತೆಂಗಿನಕಾಯಿ ಒಡೆದು ಹರಕೆ ತೀರಿಸಲಾಯಿತು. ಬಳಿಕ ಅಮ್ಮನವರಿಗೆ ವಿಶೇಷ ಪೂಜೆ ಸಲ್ಲಿಸಿ ಮಹಾ ಮಂಗಳಾರತಿ ನೆರವೇರಿಸಿ ಪ್ರಸಾದ ವಿನಿಯೋಗ ಮಾಡಲಾಯಿತು.

ಶಾಸಕ ಅನಿಲ್, ಕಾಳಿಕಾಂಬ ಕಮಠೇಶ್ವರಿ ಅಮ್ಮನವ ದರ್ಶನ ಪಡೆದರು. ವಿಶ್ವಕರ್ಮ ಸಮಾಜದಿಂದ ಶಾಸಕರನ್ನು ಸನ್ಮಾನಿಸಲಾಯಿತು.

ಪೂಜಾ ಕೈಂಕರ್ಯವನ್ನು ಅರ್ಚಕರಾದ ಕುಮಾರ್ ನೆರವೇರಿಸಿದರು, ಭಕ್ತರಿಗೆ ಅನ್ನ ಸಂತರ್ಪಣೆ ಏರ್ಪಡಿಸಲಾಗಿತ್ತು. ಈ ವೇಳೆ ವಿಶ್ವಕರ್ಮ ಸಮಾಜದ ಅಧ್ಯಕ್ಷ ನಟರಾಜ್, ಗೌರವಾಧ್ಯಕ್ಷ ಚಿನ್ನಬೆಳ್ಳಿ ಜಿ.ರವಿ, ಉಪಾಧ್ಯಕ್ಷ ಶ್ರೀನಿವಾಸ್, ಕಾರ್ಯದರ್ಶಿ ಮಂಜುನಾಥ್, ಖಜಾಂಚಿ ಸಂತೋಷ್, ಮುಖಂಡರಾದ ಎಸ್.ವಿ.ಕೃಷ್ಣಚಾರ್, ಎ.ಪ್ರಭಾಕರ್, ಎ.ಕೃಷ್ಣಕುಮಾರ್, ಚಂದ್ರಶೇಖರ್, ಎಸ್.ಸಿ.ಗೋಪಾಲಕೃಷ್ಣ, ಪುಟ್ಟಸ್ವಾಮಾಚಾರ್, ಮಾ.ಸುರೇಶ್, ಶ್ರೀನಿವಾಸಾಚಾರ್, ಮುಖಂಡರಾದ ರಿಷಿವಿಶ್ವಕರ್ಮ, ಪಿ.ಗೋಪಾಲಕೃಷ್ಣ, ಚಂದ್ರಹಾಸ್, ಕುಮಾರ್, ಎಸ್.ಪಿ.ರಾಜೇಶ್, ಎಸ್.ಎಸ್.ಶಿವರಾಮ್, ಕೇಶವಚಾರ್, ಕಾಳಸ್ವಾಮಾಚಾರ್, ಎಸ್.ಜಿ.ಶಿವಕುಮಾರ್, ಲೋಕೇಶ್, ಗೋವಿಂದಚಾರ್, ಎಸ್.ಎಂ.ಮಂಜುನಾಥ್, ವಿನಯ್, ಮೂರ್ತಿ ಆಚಾರ್, ವೀರಶೈವ ಸಮಾಜದ ಅಧ್ಯಕ್ಷ ಎಸ್.ಎನ್.ಮೋಹನಕುಮಾರ್, ಪಪಂ ಅಧ್ಯಕ್ಷೆ ರಾಧಿಕಾ, ಉಪಾಧ್ಯಕ್ಷ ವೀರೇಶ್, ಸದಸ್ಯರಾದ ಶ್ರೀನಿವಾಸ್, ಉಮಾ, ವಸಂತಚಾರ್, ಅನಿಲ್ ಕುಮಾರ್ ಸೇರಿದಂತೆ ಇತರರಿದ್ದರು.

ಯುವಕ ಆತ್ಮಹತ್ಯೆ

ನಂಜನಗೂಡು, ಏ.22– ಹೊಟ್ಟೆ ನೋವು ತಾಳಲಾರದೆ ಯುವಕ ನೇಣು ಬಿಗಿದುಕೊಂಡು ಆತ್ಮಹತ್ಯೆ ಮಾಡಿಕೊಂಡಿರುವ ಘಟನೆ ತಾಲೂಕಿನ ಹುಲ್ಲಹಳ್ಳಿ ಹೋಬಳಿಯ ಕಾರ್ಯ ಗ್ರಾಮದಲ್ಲಿ ಜರುಗಿದೆ.

ಗ್ರಾಮದ ಚಿನ್ನಸ್ವಾಮಪ್ಪ ಅವರ ಪುತ್ರ ಸಂಜಯ್(24) ಆತ್ಮಹತ್ಯೆ ಮಾಡಿಕೊಂಡ ಯುವಕ. ಗ್ರಾಮದಲ್ಲಿ ಕೋಳಿ ಫಾರಂ ನಡೆಸುತ್ತಿದ್ದ ಸಂಜಯ್‌ಗೆ ಆಗಾಗ್ಗೆ ಹೊಟ್ಟೆ ನೋವು ಬರುತ್ತಿತ್ತು ಎನ್ನಲಾಗಿದೆ. ಇದರಿಂದ ಬೇಸತ್ತ ಸಂಜಯ್ ಮನೆಯಲ್ಲಿ ಯಾರೂ ಇಲ್ಲದ ವೇಳೆ ನೇಣು ಬಿಗಿದುಕೊಂಡು ಆತ್ಮಹತ್ಯೆ ಮಾಡಿಕೊಂಡಿದ್ದಾನೆ ಎಂದು ಪೊಲೀಸರು ತಿಳಿಸಿದ್ದಾರೆ. ಈ ಸಂಬಂಧ ಹುಲ್ಲಹಳ್ಳಿ ಠಾಣೆಯಲ್ಲಿ ದೂರು ದಾಖಲಾಗಿದೆ.

ಕುಪ್ಪೆ ಗ್ರಾಪಂಗೆ ಶಾರದಮ್ಮ ಅಧ್ಯಕ್ಷೆ


ನೂತನ ಅಧ್ಯಕ್ಷೆ ಶಾರದಮ್ಮ ಅವರನ್ನು ಸನ್ಮಾನಿಸಲಾಯಿತು.

ಕೆ.ಆರ್.ನಗರ, ಏ.22– ಸಾಲಿಗ್ರಾಮ ತಾಲೂಕಿನ ಕುಪ್ಪೆ ಗ್ರಾಪಂ ಅಧ್ಯಕ್ಷೆಯಾಗಿ ಶಾರದಮ್ಮ ಅವಿರೋಧವಾಗಿ ಆಯ್ಕೆಯಾಗಿದ್ದಾರೆ.

ಈ ಹಿಂದಿನ ಅಧ್ಯಕ್ಷೆ ಸವಿತಾ ಅವರ ರಾಜೀನಾಮೆಯಿಂದ ತೆರವಾದ ಸ್ಥಾನಕ್ಕೆ ಮಂಗಳವಾರ ಗ್ರಾಪಂ ಆವರಣದಲ್ಲಿ ನಡೆದ ಚುನಾವಣೆಯಲ್ಲಿ ಶಾರದಮ್ಮ ಅವರನ್ನು ಹೊರತುಪಡಿಸಿ ಬೇರೆ ಯಾರೂ ನಾಮಪತ್ರ ಸಲ್ಲಿಸದ ಕಾರಣ ಅವಿರೋಧ ಆಯ್ಕೆಯನ್ನು ಚುನಾವಣಾಧಿಕಾರಿ ಪಶುಸಂಗೋಪನಾ ಇಲಾಖೆ ಹಿರಿಯ ಸಹಾಯ ನಿರ್ದೇಶಕ ಡಾ. ಮಂಜುನಾಥ್ ಪ್ರಕಟಿಸಿದರು.

ಸಭೆಯಲ್ಲಿ ಉಪಾಧ್ಯಕ್ಷೆ ಗೀತಾ, ಸದಸ್ಯರಾದ ಸಿ.ಬಿ.ಧರ್ಮ, ಗಣೇಶ್, ಗೋವಿಂದೇಗೌಡ, ಗೀತಾ, ಪಿಡಿಓ ಯೋಗಾನಂದ ಮತ್ತು ಸಿಬ್ಬಂದಿ ಹಾಜರಿದ್ದರು. ಅಧ್ಯಕ್ಷೆ ಶಾರದಮ್ಮ ಅವರನ್ನು, ಬಿಜೆಪಿ ಅಧ್ಯಕ್ಷ ಧರ್ಮ, ಮುಖಂಡರಾದ ಸಿ.ಬಿ.ಲೋಕೇಶ್, ಪ್ರಸನ್ನ, ತಿಮ್ಮೇಗೌಡ, ನವೀನ್, ಸಿ.ಡಿ.ಪ್ರಭಾಕರ್, ನರಸಿಂಹ ಕಾಮತ್, ಡಿ.ಆರ್.ನವೀನ್, ಮಾ.ಹಿರಣ್ಣಯ್ಯ, ಗುರುಕಾರ್ ಮಹೇಶ್, ಯಶೋಧ, ಕೆ.ಆರ್.ನಗರ ಕೇಶಾ ಲಂಕಾರಿ ಸಂಘದ ಅಧ್ಯಕ್ಷ ಎಂ.ಎಸ್.ರಾಜೇಶ್, ಪದಾಧಿಕಾ ರಿಗಳಾದ ಯೋಗೇಶ್, ಅಭಿಲಾಶ್, ಭಾಸ್ಕರ್, ಮಂಜುನಾಥ್ ಮತ್ತಿತರರು ಅಭಿನಂದಿಸಿದರು.

ಗೀತಗಾಯನ ಕಾರ್ಯಕ್ರಮ

ಮೈಸೂರು,ಏ.22– ಜಿಲ್ಲಾಡಳಿತ, ಮೈಸೂರು ಮಹಾನಗರ ಪಾಲಿಕೆ, ವಾರ್ತಾ ಇಲಾಖೆ ಸಹಯೋಗದಲ್ಲಿ ಏ.24ರಂದು ಡಾ.ರಾಜ್‌ಕುಮಾರ್ ಅವರ ಜನ್ಮದಿನಾಚರಣೆಯ ಅಂಗವಾಗಿ ಡಾ.ರಾಜ್‌ಕುಮಾರ್ ಉದ್ಯಾನವನದಲ್ಲಿರುವ ಅವರ ಪ್ರತಿಮೆಗೆ ಬೆಳಗ್ಗೆ 10 ಗಂಟೆಗೆ ಮಾಲಾರ್ಪಣೆ ಮಾಡಲಾಗುತ್ತದೆ. ನಂತರ ಗೀತಾಗಾಯನವನ್ನು ಏರ್ಪಡಿಸಲಾಗಿದೆ.

ಜನರ ಕಲ್ಯಾಣಕ್ಕೆ ರೇಣುಕಾಚಾರ್ಯರ ವಿಚಾರಧಾರೆ ಭದ್ರ ಬುನಾದಿ

ಮುಡುಕುತೊರೆ ತೋಪಿನ ಮಠದ ಶ್ರೀಮಲ್ಲಿಕಾರ್ಜುನ ಶಿವಾಚಾರ್ಯ ಸ್ವಾಮೀಜಿ ಅಭಿಪ್ರಾಯ


ಕಾರ್ಯಕ್ರಮವನ್ನು ಚಾಮುಲ್ ಅಧ್ಯಕ್ಷ ಎಂ.ನಂಜುಂಡಸ್ವಾಮಿ ಉದ್ಘಾಟಿಸಿದರು.

ತಿ.ನರಸೀಪುರ, ಏ.22– ವಿಶ್ವ ಬಂಧುತ್ವದ ಮಾನವೀಯ ವೈಶಾಲ್ಯಗಳನ್ನು ಸಾರಿದ ವೀರಶೈವ ಧರ್ಮದ ಸಂಸ್ಥಾಪನಾಚಾರ್ಯ ಜಗದ್ಗುರು ರೇಣುಕಾಚಾರ್ಯರ ಜೀವನ, ತತ್ವ ಸಿದ್ಧಾಂತಗಳು ಮನುಷ್ಯನ ಸುಖ ಶಾಂತಿ ಬದುಕಿಗೆ ಮೂಲಸೆಲೆಯಾಗಿವೆ ಎಂದು ಮುಡು ಕುತೊರೆ ತೋಪಿನ ಮಠದ ಶ್ರೀಮಲ್ಲಿ ಕಾರ್ಜುನ ಶಿವಾಚಾರ್ಯ ಸ್ವಾಮೀಜಿ ತಿಳಿಸಿದರು.

ಪಟ್ಟಣದ ವಾಸವಿ ಮಹಲ್‌ನಲ್ಲಿ ವೀರಶೈವ ಸಮಾಜ ಸೇವಾ ಸಮಿತಿಯಿಂದ ಮಂಗಳವಾರ ಆಯೋಜಿಸಿದ್ದ ಶ್ರೀಆದಿ ಜಗದ್ಗುರು ರೇಣುಕಾಚಾರ್ಯರ ಜಯಂತಿ, ಯುಗಮಾನೋತ್ಸವ ಮತ್ತು ಗೌರವ ಗುರು ರಕ್ಷೆ ಹಾಗೂ ಪ್ರತಿಭಾ ಪುರಸ್ಕಾರ ಸಮಾರಂಭದಲ್ಲಿ ಆಶೀರ್ವಚನ ನೀಡಿ ಅವರು ಮಾತನಾಡಿದರು.

ಕರ್ಮ ಕಳೆದು ಧರ್ಮ ಬಿತ್ತಿ ಬದುಕನ್ನು ಬಂಗಾರಗೊಳಿಸಿದ ಕೀರ್ತಿ ಜಗದ್ಗುರು ರೇಣುಕಾಚಾರ್ಯರದು. ಜಾತಿ, ಮತ, ಪಂಥಗಳ ಗಡಿ ಮೀರಿ ತನು ಮನ ಶುದ್ಧಿಗೆ ಆದರ್ಶ ಮೌಲ್ಯಗಳ ಪರಿಪಾಲನೆ ಮಹತ್ವ ಸಾರಿದ ಶ್ರೇಯಸ್ಸು ಅವರದು ಎಂದರು.

ಬಹುಜನ್ಮದ ಪುಣ್ಯದ ಫಲವಾಗಿ ಪ್ರಾಪ್ತವಾದ ಮಾನವ ಜೀವನ ಸಾರ್ಥಕ ಪಡಿಸಿಕೊಳ್ಳಬೇಕಾಗಿದೆ. ಜಗದ್ಗುರು ರೇಣುಕಾಚಾರ್ಯರ ದೂರದರ್ಶಿತ್ವದ ವಿಚಾರಧಾರೆಗಳು ಎಲ್ಲಾ ವರ್ಗದ ಜನರ ಕಲ್ಯಾಣಕ್ಕೆ ಭದ್ರ ಬುನಾದಿಯಾಗಿದೆ ಎಂದರು.

ಕಾರ್ಯಕ್ರಮದಲ್ಲಿ ಖೋ ಖೋ ಆಟಗಾರ್ತಿ ಬಿ.ಚೈತ್ರಾ ಅವರನ್ನು ಸನ್ಮಾನಿಸಲಾಯಿತು. ಪಟ್ಟಣದಲ್ಲಿ 3 ಕೋಟಿ ವೆಚ್ಚದಲ್ಲಿ ನಿರ್ಮಿಸುವ ಜಗದ್ಗುರು ರೇಣುಕಾಚಾರ್ಯ ಸಭಾ ಭವನದ ನೀಲನಕ್ಷೆಯನ್ನು ಹರಗುರು ಚರಮೂರ್ತಿಗಳು ಹಾಗೂ ಗಣ್ಯರು ಬಿಡುಗಡೆ ಮಾಡಿದರು. ಯಳಂದೂರು ತಾಲೂಕಿನ ಕೆಸ್ತೂರು ಗ್ರಾಮದ ಕೆ.ಎಂ.ಮಲ್ಲಿಕಾರ್ಜುನಸ್ವಾಮಿ ಸಭಾ ಭವನ ನಿರ್ಮಾಣಕ್ಕೆ 1.08 ಲಕ್ಷ ರೂ. ದೇಣಿಗೆ ನೀಡುವುದಾಗಿ ಘೋಷಿಸಿದರೆ, ಚಾಮುಲ್ ಅಧ್ಯಕ್ಷ ಎಂ.ನಂಜುಂಡಸ್ವಾಮಿ ಒಂದು ಕೊಠಡಿ ಕಟ್ಟಿಸಿಕೊಡುವುದಾಗಿ ಭರವಸೆ ನೀಡಿದರು. ಪಿಯುಸಿಯಲ್ಲಿ ಹೆಚ್ಚು ಅಂಕ ಗಳಿಸಿದ ವಿದ್ಯಾರ್ಥಿನಿಯ ರಾದ ಶರಣ್ಯ, ಮೋನಿಷಾ ಹಾಗೂ ಸ್ವರ್ಣಗೌರಿಗೆ ಪ್ರತಿಭಾ ಪುರಸ್ಕಾರ ನೀಡಲಾಯಿತು.

ಸಾನಿಧ್ಯವನ್ನು ಶ್ರೀತ್ರ್ಯಂಬಕೇಶ್ವರ ಮಠದ ಶ್ರೀವೀರೇಶ ಶಿವಾಚಾರ್ಯ ಸ್ವಾಮೀಜಿ ವಹಿಸಿದ್ದರು. ವಾಟಾಳು ಮಠದ ಸಿದ್ಧಲಿಂಗ ಶಿವಾಚಾರ್ಯ ಸ್ವಾಮೀಜಿ, ಸಿದ್ದರಹಳ್ಳಿ ಗವಿ ಮಠದ ಮಲ್ಲಿಕಾರ್ಜುನಸ್ವಾಮೀಜಿ, ಹೊಸೂರು ಹುಂಡಿ ಮಠದ ರಾಜಶೇಖರ ಸ್ವಾಮೀಜಿ, ಕೀಲು ಮತ್ತು ಮೂಳೆ ತಜ್ಞ ಡಾ.ಎಸ್.ಮಹದೇವಪ್ರಸಾದ್, ಪ್ರಾಧ್ಯಾ ಪಕಿ ಡಾ.ಹೆಚ್.ಆರ್.ಚನ್ನಮ್ಮ, ದೇವಾಲಯ ದತ್ತಿ ಸಮಿತಿ ಧರ್ಮದರ್ಶಿ ಎನ್.ಗಂಗರಾಜು, ಮದ್ದೂರು ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭಾ ಅಧ್ಯಕ್ಷ ಸಿ.ಜಿ.ಗೌರಿಶಂಕರ, ಕಬಿನಿ ನೀರಾವರಿ ಇಲಾಖೆ ಪ್ರಥಮ ದರ್ಜೆ ಲೆಕ್ಕ ಸಹಾಯಕ ಎನ್.ರವೀಂದ್ರ, ಜಹಗೀರ್‌ದಾರ್ ಜೆಬಿ.ಕುಮಾರಸ್ವಾಮಿ, ಮಂಜು, ವೀರಶೈವ ಸಮಾಜ ಸೇವಾ ಸಮಿತಿ ಅಧ್ಯಕ್ಷ ಟಿ.ಎಸ್. ಶಾಂತರಾಜು, ಉಪಾಧ್ಯಕ್ಷ ಎನ್.ಶಿವಪ್ರಸಾದ್, ಕಾರ್ಯದರ್ಶಿ ಹಾಗೂ ಪುರಸಭೆಯ ಮಾಜಿ ಅಧ್ಯಕ್ಷ ಸಿ.ವೀರೇಶ್, ಸಹ ಕಾರ್ಯದರ್ಶಿ ಎಂ.ವೀರೇಶ್, ಖಜಾಂಚಿ ಆರ್.ಸಿದ್ದಲಿಂಗಸ್ವಾಮಿ, ಪುರಸಭೆ ಸದಸ್ಯ ಎಸ್.ಕೆ.ಕಿರಣ್, ಪಿಎಸಿಎಸ್ ನಿರ್ದೇಶಕ ಶೇಖರ್, ಮೋಹನ್, ಸಿದ್ದಲಿಂಗಸ್ವಾಮಿ, ನಾಗೇಶ್, ನಾಗಪ್ಪ ಮತ್ತಿತರರಿದ್ದರು.


> ರೇಣುಕಾಚಾರ್ಯರು ವೀರಶೈವ ಧರ್ಮ ಸ್ಥಾಪಿಸಿದವರು. ವೀರಶೈವ ಧರ್ಮ ಪ್ರಚಾರ ಮಾಡಲು ಇಡೀ ಜಗತ್ತನ್ನೇ ಸುತ್ತಿದರು. ಅವರ ತತ್ವ, ಸಿದ್ಧಾಂತಗಳು ಬಸವಣ್ಣನ ತತ್ವಗಳನ್ನು ಹೋಲುವಂತದ್ದು, ಬಸವಣ್ಣ ಮತ್ತು ರೇಣುಕಾಚಾರ್ಯರ ತತ್ವಗಳು ಒಂದೇ ನಾಣ್ಯದ 2 ಮುಖಗಳಿದ್ದಂತೆ. ರೇಣುಕಾಚಾರ್ಯರ ಆದರ್ಶಗಳನ್ನು ಪ್ರತಿಯೊಬ್ಬರೂ ಅಳವಡಿಸಿಕೊಳ್ಳಬೇಕು.
> – ಎಂ.ನಂಜುಂಡಸ್ವಾಮಿ, ಚಾಮುಲ್ ಅಧ್ಯಕ್ಷ.

ವೆಂಕಟಮ್ಮ ನಿಧನ



ಹುಣಸೂರು, ಏ.22– ನಗರದ ಬೈಪಾಸ್ ರಸ್ತೆ ಕೆಇಬಿ ಕ್ವಾಟ್ರಸ್ ನಿವಾಸಿ ದಿ.ಬಳೆ ಗೋವಿಂದ ಅವರ ಪತ್ನಿ ವೆಂಕಟಮ್ಮ (80) ಸೋಮವಾರ ರಾತ್ರಿ ನಿಧನರಾದರು. ಮೃತರು ಇಬ್ಬರು ಪುತ್ರಿಯರು, ಅಳಿಯಂದಿರು ಸೇರಿದಂತೆ ಅಪಾರ ಬಂಧುಗಳನ್ನು ಅಗಲಿದ್ದಾರೆ. ಅಂತ್ಯಕ್ರಿಯೆ ಮಂಗಳವಾರ ಮಧ್ಯಾಹ್ನ ನಗರದ ತಾಲೂಕು ಕಚೇರಿಪಕ್ಕದಲ್ಲಿರುವ ರುದ್ರಭೂಮಿಯಲ್ಲಿ ನಡೆಯಿತು.

ವೈರಮುಡಯ್ಯ



ಹುಣಸೂರು, ಏ.22– ತಾಲೂಕಿನ ಸೋಮನಹಳ್ಳಿ ಗ್ರಾಮದ ನಿವಾಸಿ ವೈರಮುಡಯ್ಯ (78) ಸೋಮವಾರ ರಾತ್ರಿ ನಿಧನರಾದರು. ಮೃತರು ಓರ್ವ ಪುತ್ರಿ, ಪುತ್ರ ಸೇರಿದಂತೆ ಅಪಾರ ಬಂಧುಗಳನ್ನು ಅಗಲಿದ್ದಾರೆ. ಅಂತ್ಯಕ್ರಿಯೆ ಮಂಗಳವಾರ ಮಧ್ಯಾಹ್ನ ಮೃತರ ಜಮೀನಿನಲ್ಲಿ ನೆರವೇರಿತು.

ಐಪಿಎಲ್ ಹಂಗಾಮ

ಲಕ್ನೋ ಸದ್ದಡಗಿಸಿದ ಡೆಲ್ಲಿಗೆ ಸುಲಭ ಜಯ



ಲಕ್ನೋ, ಏ.22– ಮುಕೇಶ್ ಕುಮಾರ್ ಅವರ ಮಾರಕ ಬೌಲಿಂಗ್, ಅಭಿಷೇಕ್ ಪೊರೆಲ್ ಹಾಗೂ ಕೆ.ಎಲ್.ರಾಹುಲ್ ಅವರ ಅರ್ಧಶತಕಗಳ ನೆರವಿನಿಂದ ಡೆಲ್ಲಿ ಕ್ಯಾಪಿಟಲ್ಸ್ ಲಕ್ನೋ ಸೂಪರ್ ಜೆಂಟ್ಸ್ ಅನ್ನು 8 ವಿಕೆಟ್‌ಗಳಿಂದ ಬಗ್ಗು ಬಡಿದಿದೆ.

ಆ ಮೂಲಕ ಆಡಿರುವ 8 ಪಂದ್ಯಗಳ ಪೈಕಿ 6 ರಲ್ಲಿ ಗೆಲುವು ಸಾಧಿಸಿ 12 ಅಂಕ ಗಳಿಸಿ ಅಂಕಪಟ್ಟಿಯಲ್ಲಿ 2ನೇ ಸ್ಥಾನ ಭದ್ರಪಡಿಸಿಕೊಂಡರೆ, ಲಕ್ನೋ ಆಡಿರುವ 9 ಪಂದ್ಯಗಳಲ್ಲಿ 5ರಲ್ಲಿ ಗೆಲುವು ಸಾಧಿಸಿ 5ನೇ ಸ್ಥಾನ ಅಲಂಕರಿಸಿದೆ.

ಇಲ್ಲಿನ ಭಾರತರತ್ನ ಅಟಲ್ ಬಿಹಾರಿ ಶ್ರೀಅಟಲ್ ಬಿಹಾರಿ ವಾಜಪೇಯಿ ಕ್ರೀಡಾಂಗಣದಲ್ಲಿ ಮಂಗಳವಾರ ನಡೆದ ಪಂದ್ಯದಲ್ಲಿ 160 ರನ್‌ಗಳ ಗೆಲುವಿನ ಗುರಿ ಬೆನ್ನತ್ತಿದ ಡೆಲ್ಲಿ ಪರ ಇನ್ನಿಂಗ್ಸ್ ಆರಂಭಿಸಿದ ಕನ್ನಡಿಗ ಕರುಣ್ ನಾಯರ್ 9 ಎಸೆತಗಳಲ್ಲಿ 1 ಸಿಕ್ಸರ್, 2 ಬೌಂಡರಿ ಒಳಗೊಂಡ 15 ರನ್ ಗಳಿಸಿ ನಿರ್ಗಮಿಸಿದರು. ಬಳಿಕ ಕ್ರೀಸಿಗೆ ಬಂದ ಮತ್ತೋರ್ವ ಕನ್ನಡಿಗ ಕೆ.ಎಲ್.ರಾಹುಲ್ ಅಭಿಷೇಕ್ ಪೋರೆಲ್ ಜೊತೆಗೂಡಿ ತಂಡದ ಮೊತ್ತವನ್ನು 100ರ ಗಡಿ ದಾಟಿಸಿದರು.

ಈ ವೇಳೆ ಅರ್ಧಶತಕ ಸಿಡಿಸಿ ಉತ್ತಮವಾಗಿ ಆಡುತ್ತಿದ್ದ ಪೋರೆಲ್ 36 ಎಸೆತಗಳಲ್ಲಿ 5 ಬೌಂಡರಿ, 1 ಸಿಕ್ಸರ್ ಒಳಗೊಂಡ 51 ರನ್ ಗಳಿಸಿ ಔಟಾದರು. ಬಳಿಕ ಕೆ.ಎಲ್.ರಾಹುಲ್ ಜೊತೆಗೂಡಿದ ನಾಯಕ ಅಕ್ಷರ್ ಪಟೇಲ್ ಅವರು ಮುರಿಯದ 3ನೇ ವಿಕೆಟ್‌ಗೆ 56 ರನ್ ಜೊತೆಯಾಟವಾಡುವ ಮೂಲಕ ತಂಡಕ್ಕೆ ಜಯ ತಂದುಕೊಟ್ಟರು. ರಾಹುಲ್ ತಲಾ 3 ಸಿಕ್ಸರ್, ಬೌಂಡರಿ ಒಳಗೊಂಡ 57 ರನ್ ಗಳಿಸಿದರೇ, ಅಕ್ಷರ್ ಪಟೇಲ್ 4 ಸಿಕ್ಸರ್, 1 ಬೌಂಡರಿ ಒಳಗೊಂಡ 34ರನ್ ಗಳಿಸಿ ಅಜೇಯರಾಗಿ ಉಳಿದರು. ಅಂತಿಮವಾಗಿ ಡೆಲ್ಲಿ 17.5 ಓವರ್‌ಗಳಲ್ಲಿ 2 ವಿಕೆಟ್ ನಷ್ಟಕ್ಕೆ 161 ರನ್ ಗಳಿಸುವ ಮೂಲಕ ಇನ್ನೂ 13 ಎಸೆತಗಳು ಬಾಕಿ ಉಳಿದಿರುವಂತೆಯೇ ಜಯಘೋಷ ಮೊಳಗಿಸಿತು. ಲಕ್ನೋ ಪರ ಏಡನ್ ಮಾರ್ಕಂ 2 ವಿಕೆಟ್ ಪಡೆದರು.

ಇದಕ್ಕೂ ಮುನ್ನಾ ಮೊದಲು ಬ್ಯಾಟಿಂಗ್ ಮಾಡಿದ ಲಕ್ನೋಗೆ ಏಡನ್ ಮಾರ್ಕಂ ಮತ್ತು ಮಿಚೆಲ್ ಮಾರ್ಷ್ 87ರನ್ ಜೊತೆಯಾಟವಾಡುವ ಮೂಲಕ ಉತ್ತಮ ಆರಂಭ ಒದಗಿಸಿದರು. ಆದರೆ 33 ಎಸೆತಗಳಲ್ಲಿ 2 ಬೌಂಡರಿ, 3 ಸಿಕ್ಸರ್ ಒಳಗೊಂಡ 52 ರನ್ ಗಳಿಸಿ ಮಾರ್ಕಂ ವಿಕೆಟ್ ಒಪ್ಪಿಸಿದರು. ಬಳಿಕ ಬಂದ ನಿಕೋಲಸ್ ಪೂರನ್ 9, ಅಬ್ದುಲ್ ಸಮದ್ 2 ರನ್ ಗಳಿಸಿ ಬಹುಬೇಗ ಔಟಾದರು. ಇವರ ಹಿಂದೆಯೇ ಮಿಚೆಲ್ ಮಾರ್ಷ್ 36 ಎಸೆತಗಳಲ್ಲಿ 1 ಸಿಕ್ಸರ್, 3 ಬೌಂಡರಿ ಒಳಗೊಂಡ 45 ರನ್ ಗಳಿಸಿ ನಿರ್ಗಮಿಸಿದರು. ಉಳಿದಂತೆ ಆಯುಶ್ ಬದೋಣಿ 6 ಬೌಂಡರಿ ಒಳಗೊಂಡ 36 ರನ್ ಗಳಿಸಿ ತಂಡದ ಮೊತ್ತವನ್ನು 150ರ ಗಡಿ ದಾಟಿಸಿದರು. ಡೇವಿಡ್ ಮಿಲ್ಲರ್ 14 ರನ್ ಗಳಿಸಿದರು. ಡೆಲ್ಲಿ ಪರ ಮುಕೇಶ್ ಕುಮಾರ್ 4, ಮಿಚೆಲ್ ಸ್ಟಾರ್ಕ್ ಮತ್ತು ದುಶ್ಮಂತ ಚಾಮೀರ ತಲಾ ಒಂದೊಂದು ವಿಕೆಟ್ ಹಂಚಿಕೊಂಡರು. ಮುಕೇಶ್ ಕುಮಾರ್ ಅರ್ಹವಾಗಿ ಪಂದ್ಯಶ್ರೇಷ್ಠ ಪ್ರಶಸ್ತಿ ಪಡೆದರು.

ತಂಡದ ಅಂಕಪಟ್ಟಿ ವಿವರ

ತಂಡ	ಪಂದ್ಯಗಳು	ಗೆಲುವು	ಸೋಲು	ಡ್ರಾ	ಅಂಕ
ಗುಜರಾತ್	8	6	2	0	12
ಡೆಲ್ಲಿ	8	6	2	0	12
ಬೆಂಗಳೂರು	8	5	3	0	10
ಪಂಜಾಬ್	8	5	3	0	10
ಲಕ್ನೋ	9	5	4	0	10
ಮುಂಬೈ	8	4	4	0	8
ಕೋಲ್ಕತ್ತಾ	8	3	5	0	6
ರಾಜಸ್ಥಾನ್	8	2	6	0	4
ಹೈದರಾಬಾದ್	7	2	5	0	4
ಚೆನ್ನೈ	8	2	6	0	4

ಇಂದಿನ ಪಂದ್ಯ

ಸನ್‌ರೈಸರ್ಸ್ ಹೈದರಾಬಾದ್
V/S
ಮುಂಬೈ ಇಂಡಿಯನ್ಸ್

ಸಮಯ: ಸಂಜೆ 7.30

ಸ್ಥಳ : ರಾಜೀವ್ ಗಾಂಧಿ, ಕ್ರೀಡಾಂಗಣ, ಹೈದರಾಬಾದ್

ಮೈಸೂರು ಚಿತ್ರಮಂದಿರಗಳಲ್ಲಿ

ಪದ್ಮ ಚಿತ್ರಮಂದಿರ	(ದೂ: 2521923)
ಅರ್ಜುನ್ S/O ವೈಜಯಂತಿ (ತೆ)	4 ಪ್ರದರ್ಶನಗಳು
ವುಡ್‌ಲ್ಯಾಂಡ್ಸ್ ಚಿತ್ರಮಂದಿರ	(ದೂ: 2422871)
ಗುಡ್ ಬ್ಯಾಡ್ ಅಗ್ಲಿ (ತ)	4 ಪ್ರದರ್ಶನಗಳು
ಬಾಲಾಜಿ ಚಿತ್ರಮಂದಿರ	(ದೂ: 2497199)
ಸಿಕಂದರ್ (ಹಿಂ)	4 ಪ್ರದರ್ಶನಗಳು
ಮಹದೇಶ್ವರ ಚಿತ್ರಮಂದಿರ	(ಮೊ:9900820093)
ಒಡೆಲಾ–2 (ತೆ)	4 ಪ್ರದರ್ಶನಗಳು
ಗಾಯಿತ್ರಿ	
ವಿದ್ಯಾಪತಿ (ಕ)	4 ಪ್ರದರ್ಶನಗಳು
ರಾಜಕಮಲ್	
ಒಡೆಲಾ–2 (ತೆ)+ ಅರ್ಜುನ್ S/O ವೈಜಯಂತಿ (ತೆ)	2+2 ಪ್ರದರ್ಶನಗಳು
ಸಂಗಂ	
ವಾಮನ (ಕ)	4 ಪ್ರದರ್ಶನಗಳು
ಲಿಡೋ	
ಅಜ್ಞಾತವಾಸಿ (ಕ) ಜಾಟ್ (ಹಿಂ)	2+2 ಪ್ರದರ್ಶನಗಳು
ತಿಬ್ಬಾದೇವಿ	
ಭಗೀರಥ (ಕ)	4 ಪ್ರದರ್ಶನಗಳು
ಪ್ರಭಾ	
ಭಗೀರಥ (ಕ)	4 ಪ್ರದರ್ಶನಗಳು

ಡಿಆರ್‌ಸಿ ಸಿನಿಮಾಸ್

ದೂ : 4240422/4241800

ಸ್ಕ್ರೀನ್ 1	ಗುಡ್ ಬ್ಯಾಡ್ ಅಗ್ಲಿ (ತ): ಬೆ.10.30ಕ್ಕೆ, ಮ.1.25ಕ್ಕೆ, ಸಂ.4.20ಕ್ಕೆ, ರಾ.7.15ಕ್ಕೆ, ರಾ.10.15ಕ್ಕೆ.
ಸ್ಕ್ರೀನ್ 2	ಅಲಪ್ಪುಳ ಜಿಮ್ಖಾನ (ಮ): ಬೆ.10.20ಕ್ಕೆ, ಜಾಕ್ (ತೆ): ಮ.1.20ಕ್ಕೆ, ಸಂ.4.15ಕ್ಕೆ, ಅಜ್ಞಾತವಾಸಿ (ಕ): ರಾ.7.15ಕ್ಕೆ, ಬಜೂಕ (ಮ): ರಾ.9.55ಕ್ಕೆ.
ಸ್ಕ್ರೀನ್ 3	ದಿ ಅಮಚೂರ್ (ಇಂ): ಬೆ.10.40ಕ್ಕೆ, ರಾ.7.15ಕ್ಕೆ, ಅಲಪ್ಪುಳ ಜಿಮ್ಖಾನ (ಮ): ಮ.1.20ಕ್ಕೆ, ರಾ.10ಕ್ಕೆ, ಜಾಟ್ (ಹಿಂ): ಸಂ.4.10ಕ್ಕೆ.
ಸ್ಕ್ರೀನ್ 4	ವಿದ್ಯಾಪತಿ (ಕ): ಬೆ.10.30ಕ್ಕೆ, ರಾ.7.05ಕ್ಕೆ, ವಾಮನ (ಕ): ಮ.1.20ಕ್ಕೆ, ಸಂ.4.15ಕ್ಕೆ, ಜಾಟ್ (ಹಿಂ): ರಾ.9.55ಕ್ಕೆ.

ಐನಾಕ್ಸ್ ಮೂವೀಸ್

INOX LIVE THE MOVIE

ದೂ : 2533444 / 2433456

ಸ್ಕ್ರೀನ್ 1	ಬ್ಯಾಡ್ ನ್ಯೂಸ್ (ಹಿಂ): ಬೆ.10ಕ್ಕೆ, ಮ.1ಕ್ಕೆ, ಸಂ.4ಕ್ಕೆ, ರಾ.7ಕ್ಕೆ, ರಾ.10ಕ್ಕೆ.
ಸ್ಕ್ರೀನ್ 2	ಕಲ್ಕಿ 2898 ಎಡಿ (ಕ): ಬೆ.11.40ಕ್ಕೆ, ಸಂ.6.05ಕ್ಕೆ, ಟ್ವಿಸ್ಟರ್ಸ್ (ಇಂ): ಮ.3.20ಕ್ಕೆ, ರಾ.9.45ಕ್ಕೆ.
ಸ್ಕ್ರೀನ್ 3	ಇಂಡಿಯನ್ 2 (ತ): ಬೆ.9.40ಕ್ಕೆ, ಸಂ.4.05ಕ್ಕೆ, ಟ್ವಿಸ್ಟರ್ಸ್ (ಇಂ): ಮ.1.20ಕ್ಕೆ, ರಾ.7.45ಕ್ಕೆ, ಡಾರ್ಲಿಂಗ್ ವೈ ದಿಸ್ ಕೊಲವರಿ (ತೆ): ರಾ.10.30ಕ್ಕೆ.
ಸ್ಕ್ರೀನ್ 4	ವಿದ್ಯಾರ್ಥಿ ವಿದ್ಯಾರ್ಥಿನಿಯರೇ (ಕ): ಬೆ.11.30ಕ್ಕೆ, ಕಲ್ಕಿ 2898 ಎಡಿ (3ಡಿ)(ತೆ): ಮ.2.50ಕ್ಕೆ, ಹಿರಣ್ಯ (ಕ): ಸಂ.6.30ಕ್ಕೆ, ಕಲ್ಕಿ 2898 ಎಡಿ (ಹಿಂ): ರಾ.9.30ಕ್ಕೆ.

ಮೈಸೂರು ವಿಷನ್ ಸಿನಿಮಾ

ದೂ : 0821–2973519

ಸ್ಕ್ರೀನ್ 1	ವಿದ್ಯಾಪತಿ (ಕ): ಬೆ.10.45ಕ್ಕೆ, ಸಂ.4.15ಕ್ಕೆ, ಸಂ.6.45ಕ್ಕೆ, ಮನದ ಕಡಲು (ಕ): ಮ.1.15ಕ್ಕೆ, ರಾ.9.15ಕ್ಕೆ.
ಸ್ಕ್ರೀನ್ 2	ಗುಡ್ ಬ್ಯಾಡ್ ಅಗ್ಲಿ (ತ): ಬೆ.10.30ಕ್ಕೆ, ಸಂ.4ಕ್ಕೆ, ವಾಮನ (ಕ): ಮ.1.15ಕ್ಕೆ, ಸಂ.6.50ಕ್ಕೆ, ರಾ.9.30ಕ್ಕೆ.
ಸ್ಕ್ರೀನ್ 3	ವಾಮನ (ಕ): ಬೆ.10.40ಕ್ಕೆ, ಸಂ.4.05ಕ್ಕೆ, ಗುಡ್ ಬ್ಯಾಡ್ ಅಗ್ಲಿ (ತ): ಮ.1.20ಕ್ಕೆ, ಸಂ.6.45ಕ್ಕೆ, ರಾ.9.30ಕ್ಕೆ.
ಸ್ಕ್ರೀನ್ 4	ಎಂಪುರನ್ 2 (ಕ): ಮ.12.30ಕ್ಕೆ, ಬಜೂಕ (ಮ): ಮ.3.50ಕ್ಕೆ, ಸಂ.6.40ಕ್ಕೆ, ರಾ.9.30ಕ್ಕೆ.

ಪಿವಿಆರ್ ಸಿನಿಮಾಸ್

ನೆಕ್ಸಸ್ ಸೆಂಟರ್‌ಸಿಟಿ ಮಾಲ್, 2ನೇ ಮಹಡಿ, ಮೊ.ನಂ: 8951357139

ಕಿಂಗ್‌ಡಮ್ ಆಫ್ ದಿ ಪ್ಲಾನೆಟ್ ಆಫ್ ದಿ ಎಪಿಸ್ (ಇಂ): ಬೆ.10ಕ್ಕೆ, ಮ.1.05ಕ್ಕೆ, ಸಂ.4.10ಕ್ಕೆ, ರಾ.7.20ಕ್ಕೆ, ರಾ.10.30ಕ್ಕೆ, ಶ್ರೀಕಾಂತ್ (ಹಿಂ): ಬೆ.10ಕ್ಕೆ, ಮ.1ಕ್ಕೆ, ಸಂ.4.25ಕ್ಕೆ, ರಾ.7ಕ್ಕೆ, ರಾ.10.15ಕ್ಕೆ, ಸ್ಟಾರ್ (ತ): ಬೆ.11.45ಕ್ಕೆ, ಮ.3.05ಕ್ಕೆ, ಸಂ.6.25ಕ್ಕೆ, ರಾ.9.45ಕ್ಕೆ, ಅರಮನೈ 4 (ತ): ಮ.12.30ಕ್ಕೆ, ಪ್ರತಿನಿಧಿ 2 (ತೆ): ಮ.12.55ಕ್ಕೆ, ರಾ.9.15ಕ್ಕೆ, ರಾಮನ ಅವತಾರ (ಕ): ಮ.3.40ಕ್ಕೆ, ಅಂಜನೀಪುತ್ರ (ಕ): ಸಂ.4ಕ್ಕೆ, ಗ್ರೇ ಗೇಮ್ಸ್ (ಕ): ಸಂ.6.35ಕ್ಕೆ, ಕೃಷ್ಣಮ್ಮ (ತೆ): ರಾ.7.25ಕ್ಕೆ, ಮಾರಿವಿಲ್ಲಿನ್ ಗೋಪುರಂಗಲ್ (ಮ): ರಾ.10ಕ್ಕೆ.

ಸೂಚನೆ : ಸಿನಿಮಾ ಮಾರ್ಗದರ್ಶಿಯಲ್ಲಿ ಮಾಹಿತಿಯನ್ನು ಪರಿಪೂರ್ಣಗೊಳಿಸಲು ನಾವು ಸಾಧ್ಯವಾದಷ್ಟೂ ಪ್ರಯತ್ನಿಸುತ್ತಿದ್ದೇವೆ. ಆದರೂ ಕೆಲವೊಮ್ಮೆ ಮಾಹಿತಿ ಅಲಭ್ಯತೆಯಿಂದ ಲೋಪಗಳು ಉಂಟಾಗುವ ಸಾಧ್ಯತೆಯಿದ್ದು, ಸಾರ್ವಜನಿಕರು ಸಹಕರಿಸಬೇಕಾಗಿ ಕಳಕಳಿ ಮನವಿ.

ನ್ಯಾಯಾಂಗ 'ಸೂಪರ್ ಪಾರ್ಲಿಮೆಂಟ್' ಅಲ್ಲ

ಸಾಂವಿಧಾನಿಕ ನಿರ್ಧಾರಗಳ ಹಿಂದೆ ರಾಷ್ಟ್ರೀಯ ಹಿತಾಸಕ್ತಿ ಇರುತ್ತದೆ: ಉಪರಾಷ್ಟ್ರಪತಿ ಧನ್‌ಕರ್

ನವದೆಹಲಿ, ಏ.22– ಉಪರಾಷ್ಟ್ರಪತಿ ಜಗದೀಪ್ ಧಂಕರ್, ಚುನಾಯಿತ ಪ್ರತಿನಿಧಿಯೊಬ್ಬರು ಮಾತನಾಡುವ ಪ್ರತಿಯೊಂದು ಪದದ ಹಿಂದೆಯೂ ಅತ್ಯುನ್ನತ ರಾಷ್ಟ್ರೀಯ ಹಿತಾಸಕ್ತಿ ಇರುತ್ತದೆ ಎಂದು ಪ್ರತಿಪಾದಿಸಿದರು. ಇತ್ತೀಚಿನ ಸುಪ್ರೀಂ ಕೋರ್ಟ್ ಆದೇಶದ ಕುರಿತು ಅವರ ಹೇಳಿಕೆಗಳನ್ನು ಪ್ರಶ್ನಿಸಿದ್ದಕ್ಕಾಗಿ ಅವರು ತಮ್ಮ ಟೀಕಾಕಾರರನ್ನು ತರಾಟೆಗೆ ತೆಗೆದುಕೊಂಡರು.



ರಾಷ್ಟ್ರಪತಿಗಳು ತಮ್ಮ ಅನುಮೋದನೆಗಾಗಿ ರಾಜ್ಯಪಾಲರು ಕಾಯ್ದಿರಿಸಿದ ಮಸೂದೆಗಳ ಕುರಿತು ನಿರ್ಧರಿಸಲು ಉನ್ನತ ನ್ಯಾಯಾಲಯದ ಪೀಠ ಇತ್ತೀಚೆಗೆ ಮೂರು ತಿಂಗಳ ಕಾಲಾವಕಾಶವನ್ನು ನಿಗದಿಪಡಿಸಿತ್ತು.

ಈ ನಿರ್ದೇಶನಕ್ಕೆ ಪ್ರತಿಕ್ರಿಯಿಸಿದ ಧಂಕರ್, ನ್ಯಾಯಾಂಗ 'ಸೂಪರ್ ಪಾರ್ಲಿಮೆಂಟ್' ಪಾತ್ರವನ್ನು ವಹಿಸಲು ಸಾಧ್ಯವಿಲ್ಲ ಮತ್ತು ಕಾರ್ಯಾಂಗದ ಕ್ಷೇತ್ರಕ್ಕೆ ಪ್ರವೇಶಿಸಲು ಸಾಧ್ಯವಿಲ್ಲ ಎಂದು ಹೇಳಿದ್ದರು.

ದೆಹಲಿ ವಿಶ್ವವಿದ್ಯಾಲಯದ ಕಾರ್ಯಕ್ರಮವೊಂದರಲ್ಲಿ ಮಾತನಾಡಿದ ಅವರು, ಚುನಾಯಿತ ಪ್ರತಿನಿಧಿಯೊಬ್ಬರು ಮಾತನಾಡುವ ಪ್ರತಿಯೊಂದು ಪದದ ಹಿಂದೆಯೂ ಅತ್ಯುನ್ನತ ರಾಷ್ಟ್ರೀಯ ಹಿತಾಸಕ್ತಿ ಇರುತ್ತದೆ ಎಂದು ಹೇಳಿದ್ದಾರೆ.

ಸಾಂವಿಧಾನಿಕ ಹುದ್ದೆಗಳು ವಿಧ್ಯುಕ್ತ, ಅಲಂಕಾರಿಕವಾಗಿರುಹುದು ಎಂದು ಕೆಲವು ಇತ್ತೀಚೆಗೆ ಪ್ರತಿಬಿಂಬಿಸಿದ್ದಾರೆ ಎಂಬುದು ನನಗೆ ಊಹೆಗೂ ಮೀರಿದ ಕುತೂಹಲಕಾರಿ ಅಂಶವಾಗಿದೆ. ಈ ದೇಶದಲ್ಲಿ ಪ್ರತಿಯೊಬ್ಬರ ಪಾತ್ರದ ಬಗ್ಗೆ – ಚುನಾಯಿತ ಪ್ರತಿನಿಧಿ ಅಥವಾ ನಾಗರಿಕ– ತಪ್ಪು ತಿಳುವಳಿಕೆಯಿಂದ ಏನನ್ನೂ ದೂರ ವಿಡಲು ಸಾಧ್ಯವಿಲ್ಲ, 'ಸಂಸತ್ತು ಸರ್ವೋಚ್ಚ' ಎಂದು ಅವರು ಪ್ರತಿಪಾದಿಸಿದರು.

ರಾಷ್ಟ್ರಪತಿಗಳು ಮಸೂದೆಗಳ ಕುರಿತು ನಿರ್ಧರಿಸಲು ಸಮಯ ನಿಗದಿಪಡಿಸುವ ಸುಪ್ರೀಂ ಕೋರ್ಟ್‌ನ ಇತ್ತೀಚಿನ ತೀರ್ಪಿನ ಬಗ್ಗೆ ಕಳವಳ ವ್ಯಕ್ತಪಡಿಸಿದ ಧನ್ಕರ್, ಭಾರತವು ನ್ಯಾಯಾಧೀಶರು ಶಾಸನ ರಚಿಸುವ, ಕಾರ್ಯಕಾರಿ ಕಾರ್ಯಗಳನ್ನು ನಿರ್ವಹಿಸುವ ಮತ್ತು 'ಸೂಪರ್ ಪಾರ್ಲಿಮೆಂಟ್' ಆಗಿ ಕಾರ್ಯನಿರ್ವಹಿಸುವ ಪ್ರಜಾಪ್ರಭುತ್ವಕ್ಕಾಗಿ ಚೌಕಾಸಿ ಮಾಡಿಲ್ಲ ಎಂದು ಕಳೆದ ಬಾರಿ ಹೇಳಿದ್ದರು.

ಈ ತಿಂಗಳ ಆರಂಭದಲ್ಲಿ, ಸುಪ್ರೀಂ ಕೋರ್ಟ್ ಮೊದಲ ಬಾರಿಗೆ ರಾಷ್ಟ್ರಪತಿಗಳು ರಾಜ್ಯಪಾಲರಿಂದ ಪರಿಗಣನೆಗೆ ಕಾಯ್ದಿರಿಸಲಾದ ಮಸೂದೆಗಳ ಬಗ್ಗೆ ಅಂತಹ ಉಲ್ಲೇಖವನ್ನು ಸ್ವೀಕರಿಸಿದ ದಿನಾಂಕದಿಂದ ಮೂರು ತಿಂಗಳೊಳಗೆ ನಿರ್ಧರಿಸಬೇಕು ಎಂದು ಸೂಚಿಸಿತ್ತು. ನಿರ್ಧಾರಗಳನ್ನು ತೆಗೆದು ಕೊಳ್ಳುವ ಸಮಯದ ಬಗ್ಗೆ ನ್ಯಾಯಾಂಗ ವನ್ನು ಪ್ರಶ್ನಿಸಿದ್ದಕ್ಕಾಗಿ ಉಪರಾಷ್ಟ್ರಪತಿಗಳು ಸಾಕಷ್ಟು ಟೀಕೆಗಳನ್ನು ಎದುರಿಸಿದ್ದರು.

ತಂಬಾಕು ತ್ಯಜಿಸುವ ಕಾರ್ಯಕ್ರಮ

ಮೈಸೂರು, ಏ. 22– ಮೈಸೂರಿನ ಸರಸ್ವತಿಪುರಂನಲ್ಲಿರುವ ಆರ್ಟ್ ಆಫ್ ಲಿವಿಂಗ್ ಧ್ಯಾನ ಕೇಂದ್ರದಲ್ಲಿ ಏ. 30 ರಿಂದ ಮೇ 5 ರವರೆಗೆ ತಂಬಾಕು ತ್ಯಜಿಸುವ ಕಾರ್ಯಕ್ರಮವನ್ನು ಆಯೋಜಿಸಲಾಗಿದೆ. ಹೆಚ್ಚಿನ ವಿವರಗಳಿಗೆ ಮೊ. 9620015151, 9620947215 ಸಂಪರ್ಕಿಸಬಹುದು.

ಮೈಸೂರು ಗ್ರಾಮಾಂತರ ಬಸ್ ನಿಲ್ದಾಣ ಬಳಿ ಸಂಚಾರ ವ್ಯವಸ್ಥೆ ಪರಿಶೀಲಿಸಿದ ಡಿಸಿಪಿ ಸುಂದರ ರಾಜ್

ರಾಜ್ಯ ಸಾರಿಗೆ ಸಂಸ್ಥೆ ಅಧಿಕಾರಿಗಳೊಂದಿಗೂ ಸಮಾಲೋಚನೆ

ಮೈಸೂರು, ಏ.22(ಎಂಟಿವೈ)– ಮೈಸೂರಿನ ಗ್ರಾಮಾಂತರ ಬಸ್ ನಿಲ್ದಾಣದ ಮುಂದೆ ವಾಹನ ದಟ್ಟಣೆ ನಿವಾರಣೆ ಹಾಗೂ ಸಾರಿಗೆ ಸಂಸ್ಥೆಗಳ ಬಸ್‌ಗಳು ಸಂಚಾರ ನಿಯಮ ಪಾಲನೆಗೆ ಸಂಬಂಧಿಸಿದಂತೆ ಡಿಸಿಪಿ ಸುಂದರ್‌ರಾಜ್, ಗ್ರಾಮಾಂತರ ವಿಭಾಗೀಯ ನಿಯಂತ್ರಣಾಧಿಕಾರಿ ಶ್ರೀನಿವಾಸ್ ಸೇರಿದಂತೆ ರಾಜ್ಯ ರಸ್ತೆ ಸಾರಿಗೆ ಸಂಸ್ಥೆಯ ಅಧಿಕಾರಿಗಳೊಂದಿಗೆ ಸಭೆ ನಡೆಸಿದರು.



ಬನ್ನಿಮಂಟಪದಲ್ಲಿರುವ ಗ್ರಾಮಾಂತರ ವಿಭಾಗೀಯ ನಿಯಂತ್ರಣಾಧಿಕಾರಿ ಶ್ರೀನಿವಾಸ್ ಅವರ ಕಚೇರಿಯಲ್ಲಿ ಸಾರಿಗೆ ಇಲಾಖೆಯ ಅಧಿಕಾರಿಗಳೊಂದಿಗೆ ಸಭೆ ನಡೆಸಿದರು.

ಬಸ್ ನಿಲ್ದಾಣಕ್ಕೆ ಸಾರಿಗೆ ಬಸ್‌ಗಳು ಒಳ ಪ್ರವೇಶಿಸುವಾಗ ಹಾಗೂ ನಿರ್ಗಮಿಸುವಾಗ ವಾಹನ ದಟ್ಟಣೆಯಿಂದ ತೊಂದರೆಯಾಗುತ್ತಿದೆ. ಆಟೋ ರಿಕ್ಷಾಗಳು ಮನ ಬಂದಂತೆ ರಸ್ತೆಯಲ್ಲಿ ನಿಲುಗಡೆ ಮಾಡುವುದರಿಂದ ಸುಗಮ ಸಂಚಾರಕ್ಕೆ ಅಡಚಣೆಯಾಗುತ್ತಿದೆ ಎಂದು ಸಾರಿಗೆ ಅಧಿಕಾರಿಗಳು ತಿಳಿಸಿದರು.

ಈ ವೇಳೆ ಡಿಸಿಪಿ ಸುಂದರ್ ರಾಜ್, ಬಸ್ ನಿಲ್ದಾಣದ ಮುಂದೆ ಸಾರಿಗೆ ಬಸ್‌ಗಳಿಗೆ ಅಡಚಣೆಯುಂಟಾಗದಂತೆ ಆಟೋರಿಕ್ಷಾಗಳ ನಿಲುಗಡೆಗೆ ಕಟ್ಟುನಿಟ್ಟಾಗಿ ಕ್ರಮ ಕೈಗೊಳ್ಳಬೇಕು. ನಿಯಮ ಉಲ್ಲಂಘಿಸುವ ಆಟೋ ರಿಕ್ಷಾಗಳ ಚಾಲಕರ ವಿರುದ್ಧ ಕ್ರಮ ಕೈಗೊಳ್ಳುವಂತೆ ಸೂಚಿಸಿದರು.

ಸಾರಿಗೆ ಬಸ್ ಚಾಲಕರು ಸಂಚಾರ ನಿಯಮವನ್ನು ಪಾಲಿಸಲು ಸೂಚನೆ ನೀಡಬೇಕು. ಕರ್ತವ್ಯ ವೇಳೆ ಸಮವಸ್ತ್ರ ಧರಿಸಬೇಕು, ನಿಲುಗಡೆ ಇರುವ ಸ್ಥಳದಲ್ಲಿಯೇ ಬಸ್ ನಿಲ್ಲಿಸಬೇಕು. ವಾಹನ ದಟ್ಟಣೆ ಇರುವ ರಸ್ತೆಯಲ್ಲಿ ಟಿಕೆಟ್ ವಿತರಿಸಲು ಬಸ್ ನಿಲ್ಲಿಸಬಾರದು. ರಾತ್ರಿ ವೇಳೆ ಸರ್ಕಾರಿ ಅತಿಥಿ ಗೃಹದ ಮುಂಭಾಗದ ರಸ್ತೆಯಲ್ಲಿ ಸಾರಿಗೆ ಸಂಸ್ಥೆಯ ಬಸ್‌ಗಳನ್ನು ಸಾಲಾಗಿ ನಿಲ್ಲಿಸಿರುತ್ತಾರೆ. ಪರ್ಯಾಯ ವ್ಯವಸ್ಥೆ ಬಗ್ಗೆ ಚಿಂತಿಸಬೇಕು ಎಂದು ಸಲಹೆ ನೀಡಿದರು.

ಈ ವೇಳೆ ಗ್ರಾಮಾಂತರ ವಿಭಾಗೀಯ ನಿಯಂತ್ರಣಾಧಿಕಾರಿ ಶ್ರೀನಿವಾಸ್ ಮಾತನಾಡಿ, ಈಗಾಗಲೇ ಸಾರಿಗೆ ಸಂಸ್ಥೆಯ ಬಸ್ ಚಾಲಕರು ಹಾಗೂ ನಿರ್ವಾಹಕರಿಗೆ ಸಂಚಾರ ನಿಯಮವನ್ನು ಕಟ್ಟುನಿಟ್ಟಾಗಿ ಪಾಲಿಸುವಂತೆ ಸೂಚನೆ ನೀಡಲಾಗಿದೆ. ನಿಲುಗಡೆ ಇರುವ ಸ್ಥಳದಲ್ಲಿಯೇ ಬಸ್ ನಿಲ್ಲಿಸುವಂತೆಯೂ, ವಾಹನ ಸಂಚಾರಕ್ಕೆ ಅಡಚಣೆಯಾಗದಂತೆ ಗಮನ ಹರಿಸುವಂತೆ ಎಲ್ಲರಿಗೂ ಮನವರಿಕೆ ಮಾಡಿಕೊಡಲಾಗಿದೆ. ಕಡ್ಡಾಯವಾಗಿ ಸಮವಸ್ತ್ರ ಧರಿಸುತ್ತಿದ್ದಾರೆ ಎಂದು ತಿಳಿಸಿದರು.

ದೆಹಲಿ ನಂತರ ರಾಜಸ್ಥಾನ, ಮಧ್ಯಪ್ರದೇಶಕ್ಕೂ 'ನಂದಿನಿ' ಪ್ರವೇಶಕ್ಕೆ ಸಜ್ಜು!

ಬೆಂಗಳೂರು, ಏ.22– ಕರ್ನಾಟಕದ ಜನಪ್ರಿಯ ಹಾಲಿನ ಬ್ರಾಂಡ್ ನಂದಿನಿ, ದಕ್ಷಿಣ ಭಾರತವನ್ನು ಮೀರಿ ಬೆಳೆಯುವ ಯೋಜನೆಯ ಭಾಗವಾಗಿ, ದೇಶದ ಎರಡನೇ ಅತಿದೊಡ್ಡ ಹಾಲು ಉತ್ಪಾದಿಸುವ ರಾಜ್ಯವಾದ ರಾಜಸ್ಥಾನಕ್ಕೆ ಪ್ರವೇಶಿಸಲು ಸಜ್ಜಾಗಿದೆ.

ದೆಹಲಿಯಲ್ಲಿ ತನ್ನ ಕೇಂದ್ರ ಸ್ಥಾಪಿಸಿದ ನಂತರ, ಕರ್ನಾಟಕ ಹಾಲು ಒಕ್ಕೂಟ (ಕೆಎಂಎಫ್) ಹಾಲು ಸಂಗ್ರಹಣೆಯನ್ನು ಪ್ರಾರಂಭಿಸಲು ಮತ್ತು ರಾಜಸ್ಥಾನದಲ್ಲಿ ಸಹ–ಪ್ಯಾಕೇಜಿಂಗ್ ಕೇಂದ್ರಗಳನ್ನು ಸ್ಥಾಪಿಸಲು ಯೋಜಿಸಿದೆ, ಉತ್ತರದ ಮಾರುಕಟ್ಟೆಗೆ ಪ್ರವೇಶಿಸಲು, ಮಧ್ಯಪ್ರದೇಶವನ್ನು ಸಹ ಅದರ ವಿಶಾಲ ರಾಷ್ಟ್ರೀಯ ವಿಸ್ತರಣಾ ಕಾರ್ಯತಂತ್ರದ ಭಾಗವಾಗಿ ಮಾಡಿಕೊಳ್ಳಲು ಯತ್ನಿಸುತ್ತಿದೆ.

ಉತ್ತರದ ಮಾರುಕಟ್ಟೆಗಳಿಗೆ ಹತ್ತಿರದಲ್ಲಿ ಸಹ–ಪ್ಯಾಕೇಜಿಂಗ್ ಘಟಕಗಳನ್ನು ಸ್ಥಾಪಿಸುವ ಮೂಲಕ, ಕೆಎಂಎಫ್ ಹಾಲು ಮತ್ತು ಹಾಲಿನ ಉತ್ಪನ್ನಗಳು ಪ್ರಯಾಣಿಸಬೇಕಾದ ದೂರ ಕಡಿಮೆ ಮಾಡುವ ಗುರಿ ಹೊಂದಿದೆ. ಈ ಕ್ರಮವು ಕೋಲ್ಡ್ ಚೈನ್‌ನ ಮೇಲಿನ ಹೊರೆ ಕಡಿಮೆ ಮಾಡುವ ನಿರೀಕ್ಷೆಯಿದೆ. ಇದರಿಂದ ಪೌಷ್ಟಿಕಾಂಶದ ಮೌಲ್ಯ ಸಂರಕ್ಷಿಸಲು ಮತ್ತು ಹಾಳಾಗುವ ಅಪಾಯ ಕಡಿಮೆ ಮಾಡಲು ಸಹಾಯ ಮಾಡುತ್ತದೆ ಎಂದು ಕೆಎಂಎಫ್ ಅಧಿಕಾರಿಯೊಬ್ಬರು ತಿಳಿಸಿದ್ದಾರೆ. ಪ್ರಾದೇಶಿಕ ಬೇಡಿಕೆಗೆ ಹೆಚ್ಚು ಪರಿಣಾಮಕಾರಿಯಾಗಿ ಪ್ರತಿಕ್ರಿಯಿಸಲು ಸಹಾಯ ಮಾಡುತ್ತದೆ, ತಾಜಾ ಉತ್ಪನ್ನಗಳು ಚಿಲ್ಲರೆ ಮಾರಾಟ ಮಳಿಗೆಗಳನ್ನು ವೇಗವಾಗಿ ತಲುಪುತ್ತವೆ ಎಂದು ಅಧಿಕಾರಿ ಹೇಳಿದರು.

ಪ್ರೋಟೀನ್–ಭರಿತ ಆಹಾರಗಳು ಜನಪ್ರಿಯತೆ ಗಳಿಸುತ್ತಿರುವುದರಿಂದ, ಕೆಎಂಎಫ್ ಈ ಮೇ ತಿಂಗಳಲ್ಲಿ ಹೊಸ ಶ್ರೇಣಿಯ ಹೈ–ಪ್ರೋಟೀನ್ ಡೈರಿ ಉತ್ಪನ್ನಗಳನ್ನು ಬಿಡುಗಡೆ ಮಾಡಲು ಸಜ್ಜಾಗಿದೆ. ಮುಂಬರುವ ಸಾಲಿನಲ್ಲಿ ಟೆಟ್ರಾ ಪ್ಯಾಕ್‌ಗಳಲ್ಲಿ ಪ್ರೋಟೀನ್–ಪ್ಯಾಕ್ಡ್ ಫ್ಲೇವರ್ಡ್ ಹಾಲು, ಜೊತೆಗೆ ಸಾದಾ ಮತ್ತು ಫ್ಲೇವರ್ಡ್ ಗ್ರೀಕ್ ಮೊಸರುಗಳಂತಹ ಹುದುಗಿಸಿದ ಸ್ಟಾಕ್ ಕೀಪಿಂಗ್ ಯೂನಿಟ್ (ಎಸ್‌ಕೆಯು) ಇರುತ್ತದೆ ಎಂದು ಕೆಎಂಎಫ್ ವ್ಯವಸ್ಥಾಪಕ ನಿರ್ದೇಶಕ ಬಿ ಶಿವಸ್ವಾಮಿ ಹೇಳಿದರು.

ಇಲ್ಲಿಯವರೆಗೆ ಯಾವುದೇ ಕಂಪನಿಯು ಪ್ರಾರಂಭಿಸದ ವಿಶಿಷ್ಟ ಉತ್ಪನ್ನಗಳನ್ನು ಪರಿಚಯಿಸಲು ನಾವು ಕೆಲಸ ಮಾಡುತ್ತಿದ್ದೇವೆ ಎಂದು ಶಿವಸ್ವಾಮಿ ಹೇಳಿದರು, ವಿಸ್ತರಿಸುತ್ತಿರುವ ಪ್ರೋಟೀನ್–ಕೇಂದ್ರಿತ ಮಾರುಕಟ್ಟೆಯಲ್ಲಿ ನಾವೀನ್ಯತೆ ಮತ್ತು ವಿಭಿನ್ನತೆಯ ಮೇಲೆ ಬ್ರ್ಯಾಂಡ್ ಗಮನ ಹರಿಸಿದೆ.

ಬೇಕರಿ ಮತ್ತು ಮಿಠಾಯಿ ವಿಭಾಗದ ಅಡಿಯಲ್ಲಿ ಕೇವಲ ಮೂರು ವಸ್ತುಗಳನ್ನು ಮಾತ್ರ ನೀಡುವ ಕೆಎಂಎಫ್ – ಸ್ಲೈಸ್ ಕೇಕ್‌ಗಳು, ಹಣ್ಣಿನ ಕೇಕ್‌ಗಳು, ಕಪ್‌ಕೇಕ್‌ಗಳು, ಮಫಿನ್‌ಗಳು ಮತ್ತು ಹೆಚ್ಚಿನವುಗಳಂತಹ ಹೊಸ ಉತ್ಪನ್ನಗಳನ್ನು ಸೇರಿಸಲು ವಿಸ್ತರಿಸುತ್ತಿದೆ, ಈ ಉತ್ಪನ್ನಗಳ ಅಡಿಯಲ್ಲಿ ಒಟ್ಟು 22 ರೂಪಾಂತರಗಳು ಮತ್ತು ಫ್ಲೇವರ್‌ಗಳೊಂದಿಗೆ ಹೊರ ತರಲಿದೆ.

ಕೆಎಂಎಫ್‌ನ ಪ್ರಸ್ತುತ ಬೇಕರಿ ಉತ್ಪನ್ನಗಳು ಕೇವಲ ಎಂಟು ದಿನಗಳ ಜೀವಿತಾವಧಿಯನ್ನು ಹೊಂದಿದ್ದರೆ, ಬ್ರ್ಯಾಂಡ್ ಈಗ ನಾಲ್ಕು ತಿಂಗಳವರೆಗೆ ಶೆಲ್ಫ್ ಜೀವಿತಾವಧಿಯನ್ನು ಹೊಂದಿರುವ ವಸ್ತುಗಳನ್ನು ರಚಿಸುವತ್ತ ಗಮನಹರಿಸುತ್ತಿದೆ ಎಂದು ಶಿವಸ್ವಾಮಿ ಹೇಳಿದರು. ಈ ಬದಲಾವಣೆಯು ಉತ್ಪನ್ನಗಳನ್ನು ಇ–ಕಾಮರ್ಸ್ ಮತ್ತು ತ್ವರಿತ–ವಿತರಣಾ ವೇದಿಕೆಗಳಿಗೆ ಹೆಚ್ಚು ಸೂಕ್ತವಾಗಿಸುತ್ತದೆ, ಇದರಿಂದಾಗಿ ಅವು ತಾಜಾವಾಗಿರುತ್ತವೆ ಮತ್ತು ದೀರ್ಘಕಾಲದವರೆಗೆ ಲಭ್ಯವಿರುತ್ತವೆ ಎಂದು ಅವರು ಹೇಳಿದರು.

ಹಣಕಾಸು ವಿಚಾರದಲ್ಲಿ ಗಲಾಟೆ

ಮೈಸೂರಿನ ಸಾತಗಳ್ಳಿಯಲ್ಲಿ ಭಾವನ ಕೊಂದ ಭಾಮೈದ

ಮೈಸೂರು, ಏ.22(ಬಿಎಲ್‌ಯು)– ಹಣಕಾಸು ವಿಚಾರಕ್ಕೆ ಭಾಮೈದನೇ ಭಾವನನ್ನು ಕೊಲೆ ಮಾಡಿರುವ ಘಟನೆ ಮೈಸೂರಿನ ಸಾತಗಳ್ಳಿಯಲ್ಲಿ ಸಂಭವಿಸಿದೆ.

ನಗರದ ಸಾತಗಳ್ಳಿಯ ಶ್ರೀನಗರ ಬಡಾವಣೆಯ ವಾಸಿ ಮೊಹಮ್ಮದ್ ಖಲಿಮುಲ್ಲಾ (53) ಮೃತ ವ್ಯಕ್ತಿಯಾಗಿದ್ದಾನೆ.

ಮೊಹಮ್ಮದ್ ಖಲಿಮುಲ್ಲಾ ಕಬ್ಬಿಣದ ಸ್ಕ್ರ್ಯಾಪ್‌ಗಳನ್ನು ಮಾರಾಟ ಮಾಡುವ ವೃತ್ತಿ ಮಾಡುತ್ತಿದ್ದರು. ಮೊಹಮ್ಮದ್ ಖಲಿಮುಲ್ಲಾ ಹಾಗೂ ಭಾಮೈದ ಸೈಯದ್ ಅಬುಜರ್ ನಡುವೆ ಹಣಕಾಸು ವ್ಯವಹಾರವಿತ್ತು.

ಈ ವಿಚಾರದಲ್ಲಿ ಮನೆಯ ಬಳಿ ಇಬ್ಬರಿಗೂ ಮಾತಿನ ಚಕಮಕಿ ನಡೆದು ಹೊಡೆದಾಡುವ ಹಂತ ತಲುಪಿತು. ಈ ಸಂದರ್ಭದಲ್ಲಿ ಸೈಯದ್ ಅಬುಜರ್ ಬಲವಾಗಿ ಮುಷ್ಟಿಯಿಂದ ಮೊಹಮ್ಮದ್ ಖಲಿಮುಲ್ಲಾ ಮುಖಕ್ಕೆ ಹೊಡೆದಿದ್ದಾನೆ.

ಮೂಗು ಹಾಗೂ ಕಿವಿಯಲ್ಲಿ ತೀವ್ರ ರಕ್ತ ಸ್ರಾವವಾಗುತ್ತಿದ್ದ ಮೊಹಮ್ಮದ್ ಖಲಿಮುಲ್ಲಾನನ್ನು ಬನ್ನೂರು ರಸ್ತೆಯ ಕಾವೇರಿ ಆಸ್ಪತ್ರೆಗೆ ದಾಖಲು ಮಾಡಲಾಗಿದೆ.

ಆದರೆ ಚಿಕಿತ್ಸೆ ಫಲಕಾರಿಯಾಗದೆ ಮೊಹಮ್ಮದ್ ಖಲಿಮುಲ್ಲಾ ಮೃತಪಟ್ಟಿದ್ದಾನೆ. ಈ ಬಗ್ಗೆ ಪ್ರಕರಣ ದಾಖಲಿಸಿಕೊಂಡಿರುವ ಉದಯಗಿರಿ ಪೊಲೀಸರು ಆರೋಪಿ ಸೈಯದ್ ಅಬುಜರ್‌ನನ್ನು ಬಂಧಿಸಿದ್ದಾರೆ.

ನೇಗಿಲಯೋಗಿ ಕುಟುಂಬಗಳ ಸಮ್ಮಿಲನ ಕಾರ್ಯಕ್ರಮ

ಮೈಸೂರು, ಏ. 22– ಮೈಸೂರಿನ ನೇಗಿಲಯೋಗಿ ಸಮಾಜ ಸೇವಾ ಟ್ರಸ್ಟ್ ವತಿಯಿಂದ ನೇಗಿಲಯೋಗಿ ಕುಟುಂಬಗಳ ಸಮ್ಮಿಲನ ಕಾರ್ಯಕ್ರಮ ನಡೆಯಿತು.



ಕಾರ್ಯಕ್ರಮದಲ್ಲಿ ನೇಗಿಲಯೋಗಿ ಸಂಸ್ಥೆಯ ವಿವಿಧ ಶಾಖೆಗಳು ಮತ್ತು ಮೈಸೂರಿನ ಮತ್ತು ವಿವಿಧ ಕ್ಷೇತ್ರದಲ್ಲಿ ಸಾಧನೆ ಮಾಡಿರುವ ಕುಟುಂಬವರ್ಗದವರು ಭಾಗವಹಿಸಿ ಪರಸ್ಪರ ಪರಿಚಯ ಮಾಡಿಕೊಂಡರು. ಜೊತೆಗೆ ಸಾಂಸ್ಕೃತಿಕ ಕಾರ್ಯಕ್ರಮ ಮತ್ತು ವಿವಿಧ ಸ್ಪರ್ಧೆಗಳಲ್ಲಿ ಭಾಗವಹಿಸುವುದರ ಜೊತೆಗೆ ವಿವಿಧ ಕ್ಷೇತ್ರದಲ್ಲಿ ಸಾಧನೆ ಮಾಡಿದವರನ್ನು ಅಭಿನಂದಿಸಲಾಯಿತು.

ಕಾರ್ಯಕ್ರಮವನ್ನು ವಿಧಾನಪರಿಷತ್ ಸದಸ್ಯ ಮಧು.ಜಿ.ಮಾದೇಗೌಡ ಉದ್ಘಾಟಿಸಿದರು. ಮುಖ್ಯ ಅತಿಥಿಗಳಾಗಿ ಮಾಜಿ ಮೇಯರ್‌ಗಳಾದ ಬಿ.ಕೆ.ಪ್ರಕಾಶ್, ಆರ್. ಲಿಂಗಪ್ಪ, ಶ್ರೀಮತಿ ಮೋದಮಣಿ, ಹಿರಿಯ ವಕೀಲ ಅಪ್ಪಾಜಿಗೌಡ, ಪತ್ರಕರ್ತ ರವಿಕುಮಾರ್, ಛಾರ್ಟೆಡ್ ಅಕೌಂಟೆಡ್‌ಗಳಾದ ಶ್ರೀಮತಿ ರೂಪಸ್ವಾಮಿ ಹಾಗೂ ಸ್ವಾಮಿ, ಕರ್ನಾಟಕ ಇಂಡಸ್ಟ್ರೀಸ್ ಮತ್ತು ಕಾಮರ್ಸ್‌ನ ಅಧ್ಯಕ್ಷಲಿಂಗರಾಜು, ಡಾ. ರಮೇಶ್, ಡಾ. ರಘು ಹಾಗೂ ಎಲ್ಲಾ ನೇಗಿಲಯೋಗಿ ತಾಲೂಕಿನ ಅಧ್ಯಕ್ಷರು ಭಾಗವಹಿಸಿದ್ದರು.

ಈ ವೇಳೆ ಮಧು ಜಿ ಮಾದೇಗೌಡ ಮಾತನಾಡಿ, ಸಮಾಜ ಕಟ್ಟುವ ಕೆಲಸವಾಗಬೇಕಾಗಿದೆ. ಪ್ರಸ್ತುತ ಜಾತಿಗಣತಿ ವರದಿಯು ಪ್ರಕಟವಾಗಿದೆ, ಇದಕ್ಕೆ ನಮ್ಮ ಸಮಾಜದ ವಿರೋಧವಿದೆ ಎಂದು ತಿಳಿಸಿದರು. ಎಲ್ಲಾ ಜಾತಿಗಳಲ್ಲಿಯೂ ಉಪಜಾತಿಗಳು ಇವೆ. ಆದರೆ ಕೆಲವು ಜಾತಿಗಳಲ್ಲಿರುವ ಉಪ ಪಂಗಡವನ್ನು ಬೇರ್ಪಡಿಸಿರುವುದು ಸರಿಯಲ್ಲ. ಈ ದಿಕ್ಕಿನಲ್ಲಿ ಒಕ್ಕಲಿಗ ಸಮಾಜದ ಸ್ವಾಮೀಜಿಯವರು ಸಮಾಜದವರಿಗೆ ಸೂಕ್ತ ನಿರ್ದೇಶನವನ್ನು ನೀಡಿ ಜನಗಣತಿ ಸಮಯದಲ್ಲಿ ಯಾವ ರೀತಿ ತಮ್ಮ ಜಾತಿಯನ್ನು ತಿಳಿಸಬೇಕೆನ್ನುವುದರ ಬಗ್ಗೆ ಸೂಕ್ತ ಮಾರ್ಗದರ್ಶನವನ್ನು ನೀಡಬೇಕು. ಉಪಜಾತಿಗಳನ್ನು ವಿಂಗಡಿಸಬಾರದು ಎಂದರು.

ಹಿರಿಯ ವಕೀಲ ಅಪ್ಪಾಜಿಗೌಡ ಮಾತನಾಡಿ, ಯಾವುದೇ ಜನಾಂಗದಲ್ಲಿ ನೊಂದ ಜನರ ಅಭಿವೃದ್ಧಿಗೆ ಶ್ರಮಿಸಬೇಕು ಎಂದರು. ಆಗ ಮಾತ್ರ ಸಮಾಜಗಳು ಅಭಿವೃದ್ಧಿ ಆಗಲಿದೆ ಎಂದರೆ, ಪತ್ರಕರ್ತ ರವಿಕುಮಾರ್ ಮಾತನಾಡಿ, ಯಾವುದೇ ಸಮಸ್ಯೆ ಬಂದಾಗ ಎಲ್ಲರೂ ಒಗ್ಗಟ್ಟಾಗಿ ಅದನ್ನು ಸರಿಪಡಿಸುವ ಕಾರ್ಯವಾಗಬೇಕು. ಎಲ್ಲಾ ಸಮಾಜದವರಿಗೂ ಸಮಾನ ಅವಕಾಶವಿರಬೇಕು ಎಂದರು.

ಮಾಜಿ ಮೇಯರ್ ಬಿ.ಕೆ.ಪ್ರಕಾಶ್ ಮಾತನಾಡಿ, ಸಮುದಾಯದ ಮಂತ್ರಿಗಳು, ಜನಪ್ರತಿನಿಧಿಗಳು ಪ್ರಮುಖ ವಿಷಯಗಳಲ್ಲಿ ದಿಟ್ಟ ನಿರ್ಧಾರ ತೆಗೆದುಕೊಳ್ಳಬೇಕು. ಅಧಿಕಾರಕ್ಕೆ ಅಂಟಿಕೊಳ್ಳಬಾರದು. ಒಗ್ಗಟ್ಟಿನಲ್ಲಿ ಬಲ ಇರುವುದರಿಂದ ಸಮಸ್ಯೆಗಳು ಬಂದಾಗ ನಿಜವಾದ ಒಗ್ಗಟ್ಟನ್ನು ಪ್ರದರ್ಶಿಸಬೇಕು. ಹೃದಯದಲ್ಲಿ ಮಾನವೀಯತೆಯನ್ನು ಮೈಗೂಡಿಸಿಕೊಳ್ಳಬೇಕು ಎಂದರು.

ಕಾರ್ಯಕ್ರಮದಲ್ಲಿ ಮಕ್ಕಳಿಗೆ, ಮಹಿಳೆಯರಿಗೆ, ಪುರುಷರಿಗೆ ಪ್ರತ್ಯೇಕ ಸ್ಪರ್ಧೆಯನ್ನು ಆಯೋಜಿಸಿ ವಿಶೇಷ ಬಹುಮಾನ ನೀಡಲಾಯಿತು. ಕಾರ್ಯಕ್ರಮದಲ್ಲಿ ಪಾಂಡವಪುರ, ಕನಕಪುರ, ರಾಮನಗರ, ಮಂಡ್ಯ ಇತರೆ ತಾಲೂಕಿನಿಂದ ಸದಸ್ಯರು ಭಾಗವಹಿಸಿದ್ದರು.

ಸುತ್ತೂರು ಶ್ರೀಕ್ಷೇತ್ರದಲ್ಲಿ ವಿದ್ಯಾರ್ಥಿಗಳ ಶಿಬಿರ

ಮೈಸೂರು, ಏ. 22– ಜಗದ್ಗುರು ಶ್ರೀ ವೀರಸಿಂಹಾಸನ ಮಹಾಸಂಸ್ಥಾನ ಮಠ, ಶ್ರೀ ಶಿವರಾತ್ರೀಶ್ವರ ಧಾರ್ಮಿಕ ದತ್ತಿ ಹಾಗೂ ಜೆಎಸ್‌ಎಸ್ ಮಹಾವಿದ್ಯಾಪೀಠದ ಸಂಯುಕ್ತಾಶ್ರಯದಲ್ಲಿ ಏ. 22ರಿಂದ 24ರವರೆಗೆ ಸುತ್ತೂರು ಶ್ರೀಕ್ಷೇತ್ರದಲ್ಲಿ ವಿದ್ಯಾರ್ಥಿಗಳ (ಎಸ್‌ಎಸ್‌ಎಲ್‌ಸಿ ಮತ್ತು ಪಿಯುಸಿ ವಿದ್ಯಾರ್ಥಿಗಳು) ಶಿಬಿರವನ್ನು ಶ್ರೀ ಶಿವರಾತ್ರಿ ದೇಶಿಕೇಂದ್ರ ಮಹಾಸ್ವಾಮೀಜಿಯವರ ದಿವ್ಯಾಶೀರ್ವಾದದೊಂದಿಗೆ ಆಯೋಜಿಸಲಾಗಿದೆ.

ಬೆಂಗಳೂರಿನ ಶಾಲಾ ಶಿಕ್ಷಣ ಇಲಾಖೆ (ಸಮಗ್ರ ಶಿಕ್ಷಣ–ಆಡಳಿತ) ನಿರ್ದೇಶಕ ಎಂ.ಪಿ. ಮಾದೇಗೌಡ ಶಿಬಿರದ ಅಧ್ಯಕ್ಷತೆ ವಹಿಸಲಿದ್ದು, ಚಾಮರಾಜನಗರ ವಿಶ್ವವಿದ್ಯಾನಿಲಯದ ಕುಲಸಚಿವ ಆರ್. ಲೋಕನಾಥ್ ಶಿಬಿರ ಉದ್ಘಾಟಿಸುವರು. ಕೊಪ್ಪಳದ ಯುನಿಸೆಫ್ ಮಕ್ಕಳ ಸಂರಕ್ಷಣಾ ಯೋಜನೆ ಪ್ರಾದೇಶಿಕ ಸಂಯೋಜಕ ಡಾ. ಕೆ. ರಾಘವೇಂದ್ರ ಭಟ್ ಮುಖ್ಯ ಅತಿಥಿಗಳಾಗಿ ಭಾಗವಹಿಸಲಿದ್ದಾರೆ.

ಹದಿಹರೆಯದ ಸವಾಲುಗಳು, ಮೊಬೈಲ್ ಬಿಡಿ; ಪುಸ್ತಕ ಹಿಡಿ, ಭಾರತೀಯ ಸಂಸ್ಕೃತಿ, ಯುವಶಕ್ತಿಯ ಸದ್ಬಳಕೆ, ಗುರಿ ಮತ್ತು ಮಾರ್ಗ, ಕನಸು – ನನಸು ಈ ವಿಷಯಗಳನ್ನು ಕುರಿತು ಅನುಕ್ರಮವಾಗಿ ಡಾ. ಜೆ. ಶಿವಾನಂದ ಮನೋಹರ್, ಡಾ. ಲ್ಯಾನ್ಸಿ ಡಿಸೋಜ, ಡಾ. ಎಂ. ಮಹಾದೇವಪ್ರಭು, ಚಟ್ನಳ್ಳಿ ಮಹೇಶ್, ಎಸ್.ಎಂ. ಸಿದ್ದರಾಜಪ್ಪ ಮತ್ತು ಅಶೋಕ್ ಹಂಚಲಿ ಅವರಿಂದ ಉಪನ್ಯಾಸ ಏರ್ಪಡಿಸಲಾಗಿದೆ. ಶಿಬಿರದಲ್ಲಿ ಪ್ರತಿದಿನ ಸಾಮೂಹಿಕ ಪ್ರಾರ್ಥನೆ, ಯೋಗ ಮತ್ತು ಧ್ಯಾನ, ದೇಸಿ ಆಟಗಳು ಹಾಗೂ ಸಾಂಸ್ಕೃತಿಕ ಕಾರ್ಯಕ್ರಮಗಳಿರುತ್ತವೆ.


ಉದ್ಬೂರು ಗ್ರಾಮಕ್ಕೆ ರಸ್ತೆ ಕಾಮಗಾರಿ ಗುದ್ದಲಿ ಪೂಜೆಗೆ ಆಗಮಿಸುತ್ತಿರುವ
ಸನ್ಮಾನ್ಯ ಶ್ರೀ ಸತೀಶ್ ಜಾರಕಿಹೊಳಿ ರವರು
ಲೋಕೋಪಯೋಗಿ ಸಚಿವರು ಕರ್ನಾಟಕ ಸರ್ಕಾರ
ಹೆಚ್.ಕೃಷ್ಣನಾಯಕ
ಕಾಂಗ್ರೆಸ್ ಮುಖಂಡರು
ಮಹೇಶ್.ಎ
ಉದ್ಯಮಿಗಳು
ಆರ್.ಕೆ ಪ್ರಾಪರ್ಟೀಸ್
ಸ್ವಾಗತ ಕೋರುವವರು: ಉದ್ಬೂರು ಗ್ರಾಮಸ್ಥರು
SmartSolutions
©99002 65667